ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಮೇ 27 ಸೋಮವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 41 | ಪುಟಗಳು: 10
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೆಕೆಆರ್ ಐಪಿಎಲ್ ಚಾಂಪಿಯನ್

● ದಶಕದ ಬಳಿಕ ಟ್ರೋಫಿ ಗೆದ್ದ ಕೋಲ್ಕತ್ತಾ ● ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟ ಸನ್‌ರೈಸರ್ಸ್ ಹೈದರಾಬಾದ್

ಆರೆಂಜ್ ಕ್ಯಾಪ್: ವಿರಾಟ್ ಕೊಹ್ಲಿ(741 ರನ್)
ಪರ್ಪಲ್ ಕ್ಯಾಪ್: ಹರ್ಷಲ್ ಪಟೇಲ್ (24 ವಿಕೆಟ್)
ಎಮರ್ಜಿಂಗ್ ಪ್ಲೇಯರ್: ನಿತೀಶ್ ಕುಮಾರ್ ರೆಡ್ಡಿ
ಫ್ಯಾಂಟಸಿ ಪ್ಲೇಯರ್, ಮೋಸ್ಟ್ ವ್ಯಾಲ್ಯೂಬಲ್ ಪ್ಲೇಯರ್: ಸುನೀಲ್ ನರೇನ್
ಸೂಪರ್ ಸಿಕ್ಸ್: ಅಭಿಷೇಕ್ ಶರ್ಮಾ
ಸೂಪರ್ ಫೋರ್ಸ್: ಟ್ರಾವಿಸ್ ಹೆಡ್
ಫೇರ್ ಪ್ಲೇ ಅವಾರ್ಡ್: ಸನ್‌ರೈಸರ್ಸ್ ಹೈದರಾಬಾದ್
ಕ್ಯಾಚ್ ಆಫ್ ದಿ ಸೀಸನ್: ರಮಣ್‌ದೀಪ್ ಸಿಂಗ್
ಪಿಚ್ ಆಫ್ ದಿ ಗ್ರೌಂಡ್ ಅವಾರ್ಡ್: ಹೈದರಾಬಾದ್ ಕ್ರಿಕೆಟ್ ಅಸೋಸಿಯೇಷನ್

ಚೆನ್ನೈ, ಮೇ 26– ಸಂಘಟಿತ ಬೌಲಿಂಗ್ ದಾಳಿ ಹಾಗೂ ಆಕ್ರಮಣಕಾರಿ ಬ್ಯಾಟಿಂಗ್ ನೆರವಿನಿಂದ ಶ್ರೇಯಸ್ ಅಯ್ಯರ್ ನಾಯಕತ್ವದ ಕೋಲ್ಕತ್ತಾ ನೈಟ್ ರೈಡರ್ಸ್ 17ನೇ ಆವೃತ್ತಿಯ ಐಪಿಎಲ್ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಆ ಮೂಲಕ ಲೀಗ್ ಹಂತದಲ್ಲಿ ಪ್ರಾಬಲ್ಯ ಮೆರೆದು ಅಂಕ ಪಟ್ಟಿಯಲ್ಲಿ ಅಗ್ರಸ್ಥಾನದೊಂದಿಗೆ ಟ್ರೋಫಿ ಗೆಲ್ಲುವ ನೆಚ್ಚಿನ ತಂಡವಾಗಿ ಫೈನಲ್ ಪ್ರವೇಶಿಸಿದ್ದ ಕೆಕೆಆರ್ 20 ಕೋಟಿ ರೂ. ಬಹುಮಾನದೊಂದಿಗೆ 3ನೇ ಬಾರಿಗೆ ಐಪಿಎಲ್ ಟ್ರೋಫಿಗೆ ಮುತ್ತಿಟ್ಟರೆ, ಮತ್ತೊಂದೆಡೆ ಪಂದ್ಯದಲ್ಲಿ ಬ್ಯಾಟಿಂಗ್ ವೈಫಲ್ಯಕ್ಕೆ ಬೆಲೆತೆತ್ತ ಸನ್‌ರೈಸರ್ಸ್ ಹೈದರಾಬಾದ್ 12.5 ಕೋಟಿ ರೂ. ನಗದು ಬಹುಮಾನ ಹಾಗೂ ಟ್ರೋಫಿಯೊಂದಿಗೆ 2ನೇ ಬಾರಿಗೆ ● 6ನೇ ಪುಟಕ್ಕೆ



ದೆಹಲಿ ಆಸ್ಪತ್ರೆಯಲ್ಲಿ ಅಗ್ನಿ ಅವಘಡ


7 ಶಿಶುಗಳ ದುರ್ಮರಣ

ನವದೆಹಲಿ, ಮೇ 26– ಪೂರ್ವ ದೆಹಲಿಯ ವಿವೇಕ್ ವಿಹಾರ್ ಪ್ರದೇಶದಲ್ಲಿರುವ 'ಬೇಬಿ ಕೇರ್ ನ್ಯೂಬಾರ್ನ್' ಆಸ್ಪತ್ರೆಯಲ್ಲಿ ಶನಿವಾರ ತಡರಾತ್ರಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಏಳು ನವಜಾತ ಶಿಶುಗಳು ಮೃತಪಟ್ಟಿವೆ. ಪ್ರಕರಣ ಸಂಬಂಧ ಆಸ್ಪತ್ರೆ ಮಾಲೀಕ ನವೀನ್ ಕಿಚಿ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೇಬಿ ಕೇರ್ ನ್ಯೂಬಾರ್ನ್ ಆಸ್ಪತ್ರೆಯಲ್ಲಿ ಶನಿವಾರ ರಾತ್ರಿ 11.30ರ ಸುಮಾರಿಗೆ ಕಾಣಿಸಿಕೊಂಡ ಬೆಂಕಿ ನಂತರ ಅಕ್ಕಪಕ್ಕದ ಕಟ್ಟಡಗಳಿಗೂ ವ್ಯಾಪಿಸಿತು. 16 ಅಗ್ನಿಶಾಮಕ ವಾಹನಗಳನ್ನು ಬಳಸಿ, ಬೆಂಕಿಯನ್ನು ನಂದಿಸಲಾಯಿತು ಎಂದು ದೆಹಲಿ ಅಗ್ನಿ ಸೇವೆಗಳ (ಡಿಎಫ್‌ಎಸ್) ವಿಭಾಗೀಯ ಅಧಿಕಾರಿ ರಾಜೇಂದ್ರ ಅತ್ವಾಲ್ ಹೇಳಿದ್ದಾರೆ.

ಘಟನೆ ನಡೆದ ಬೆನ್ನಲ್ಲೇ ಆಸ್ಪತ್ರೆ ಮಾಲೀಕ ನವೀನ್ ಕಿಚಿ ಪರಾರಿಯಾಗಿದ್ದರು. ನವೀನ್ ವಿರುದ್ಧ ಐಪಿಸಿ ಸೆಕ್ಷನ್ 336 ಮತ್ತು 304ಎ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಅವರನ್ನು ಪತ್ತೆಹಚ್ಚಲು ತಂಡಗಳನ್ನು ರಚಿಸಲಾಗಿತ್ತು ಎಂದು ಡಿಸಿಪಿ (ಶಾಹದರ) ಸುರೇಂದ್ರ ಚೌಧರಿ ಹೇಳಿದ್ದಾರೆ. ಬೆಂಕಿ ಹೊತ್ತಿಕೊಳ್ಳಲು ಕಾರಣ ಗೊತ್ತಾಗಿಲ್ಲ. ಆದರೆ, ಬೆಂಕಿ ಹೊತ್ತಿಕೊಂಡಿದ್ದ ವೇಳೆ, ಆಸ್ಪತ್ರೆಯಲ್ಲಿದ್ದ ಆಮ್ಲಜನಕ ಸಿಲಿಂಡರ್‌ಗಳು ಸ್ಫೋಟಗೊಂಡ ಪರಿಣಾಮ ಪಕ್ಕದ ಕಟ್ಟಡಗಳಿಗೆ ಹಾನಿಯಾಗಿದೆ ಎಂದು ತಿಳಿಸಿದ್ದಾರೆ.

ಆಸ್ಪತ್ರೆಯ ಮಾಲೀಕ ಬಂಧನ



ದೆಹಲಿಯ ಬೇಬಿ ಕೇರ್ ನ್ಯೂಬಾರ್ನ್ ಆಸ್ಪತ್ರೆ ಬೆಂಕಿಗಾಹುತಿಯಾಗಿರುವುದು.

ಆಸ್ಪತ್ರೆಯಲ್ಲಿದ್ದ 12 ನವಜಾತ ಶಿಶುಗಳನ್ನು ರಕ್ಷಿಸಲಾಗಿದ್ದು, ಏಳು ಶಿಶುಗಳು ಮೃತಪಟ್ಟವು. 5 ನವಜಾತ ಶಿಶುಗಳನ್ನು ಪೂರ್ವ ದೆಹಲಿಯ ಅಡ್ವಾನ್ಸ್ ಎನ್‌ಐಸಿಯು ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಮೃತ ಶಿಶುಗಳ ದೇಹಗಳನ್ನು ಜಿಟಿಬಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದ್ದು, ಮರಣೋತ್ತರ ಪರೀಕ್ಷೆ ನೆರವೇರಿಸಲಾಯಿತು ಎಂದು ಅವರು ಹೇಳಿದ್ದಾರೆ.

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಮಕ್ಕಳ ಆಸ್ಪತ್ರೆಯಲ್ಲಿ ಬೆಂಕಿ ಹತ್ತಿ ಉರಿದ ಘಟನೆ ಹೃದಯ ವಿದ್ರಾವಕವಾಗಿದೆ. ನಿರ್ಲಕ್ಷ್ಯಕ್ಕೆ ಕಾರಣರಾದವರನ್ನು ಬಿಡುವುದಿಲ್ಲ ಎಂದು ಎಚ್ಚರಿಸಿದ್ದಾರೆ.

ದುರ್ಘಟನೆಯಲ್ಲಿ ಮಕ್ಕಳನ್ನು ಕಳೆದುಕೊಂಡವರ ಜೊತೆ ಸರ್ಕಾರ ನಿಂತಿದೆ. ಗಾಯಾಳುಗಳಿಗೆ ಸರಿಯಾದ ಚಿಕಿತ್ಸೆಯನ್ನು ನೀಡಲಾಗುವುದು. ಬೆಂಕಿಯ ಹಿಂದಿನ ಕಾರಣಗಳನ್ನು ತನಿಖೆ ಮಾಡಲಾಗುತ್ತಿದ್ದು, ನಿರ್ಲಕ್ಷ್ಯ ತೋರಿದವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದರು. ● 8ನೇ ಪುಟಕ್ಕೆ

ರಾಜ್‌ಕೋಟ್ ಗೇಮಿಂಗ್ ಸೆಂಟರ್ ಅಗ್ನಿ ದುರಂತ

ಸಾವಿನ ಸಂಖ್ಯೆ 35ಕ್ಕೆ ಏರಿಕೆ

ಸುಮೋಟೋ ಪ್ರಕರಣ ದಾಖಲಿಸಿಕೊಂಡ ಗುಜರಾತ್ ಹೈಕೋರ್ಟ್



ಅಹ್ಮದಾಬಾದ್, ಮೇ 26– ಮಕ್ಕಳು ಸೇರಿದಂತೆ 35 ಜನರ ಸಾವಿಗೆ ಕಾರಣವಾದ ರಾಜ್‌ಕೋಟ್‌ನ ಗೇಮಿಂಗ್ ಸೆಂಟರ್ ದುರಂತಕ್ಕೆ ಸಂಬಂಧಿಸಿದಂತೆ ಗುಜರಾತ್ ಹೈಕೋರ್ಟ್ ಸುಮೊಟೋ (ಸ್ವಯಂಪ್ರೇರಿತ ಪ್ರಕರಣ) ದಾಖಲಿಸಿಕೊಂಡಿದ್ದು, ಇದೊಂದು ಮಾನವ ನಿರ್ಮಿತ ದುರಂತ ಎಂದು ಘೋಷಿಸಿದೆ.

ನ್ಯಾಯಾಧೀಶರಾದ ಬಿರೇನ್ ವೈಷ್ಣವ್ ಹಾಗೂ ದೇವನ್ ದೇಸಾಯಿ ಅವರಿದ್ದ ಗುಜರಾತ್ ಹೈಕೋರ್ಟ್‌ನ ವಿಶೇಷ ಬೆಂಚ್ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದು, ಪ್ರಾಥಮಿಕ ಹಂತದಲ್ಲಿ ಇದೊಂದು ಮಾನವ ನಿರ್ಮಿತ ದುರಂತ ಎಂದು ಕಂಡು ಬರುತ್ತಿದೆ ಎಂದು ಹೇಳಿದೆ. ಅಲ್ಲದೇ ಸಂಬಂಧಿಸಿದ ಇಲಾಖೆಗಳಿಂದ ಯಾವುದೇ ಅಗತ್ಯ ದಾಖಲೆಗಳನ್ನು ಪಡೆಯದೇ, ಅಗತ್ಯ ಸೌಲಭ್ಯಗಳನ್ನು ನಿರ್ಮಿಸದೇ ಈ ಗೇಮಿಂಗ್ ಝೋನ್ ಅನ್ನು ನಿರ್ಮಿಸಲಾಗಿದೆ ಎಂಬುದನ್ನು ಕೋರ್ಟ್ ಗಮನಿಸಿತ್ತು. ಹೈಕೋರ್ಟ್ ಪೀಠವು ಸೋಮವಾರಕ್ಕೆ ಪ್ರಕರಣದ ವಿಚಾರಣೆ ಮುಂದೂಡಿದ್ದು, ● 8ನೇ ಪುಟಕ್ಕೆ

ಇಬ್ಬರ ಬಂಧನ, ಆರು ಮಂದಿ ವಿರುದ್ಧ ಎಫ್‌ಐಆರ್

ರಾಜ್‌ಕೋಟ್, ಮೇ 26– ರಾಜ್‌ಕೋಟ್‌ನ ಮನರಂಜನಾ ಕೇಂದ್ರದಲ್ಲಿ (ಟಿಆರ್‌ಪಿ ಗೇಮ್ ಝೋನ್) ನಡೆದ ಅಗ್ನಿ ದುರಂತಕ್ಕೆ ಸಂಬಂಧಿಸಿ ಆರು ಮಂದಿ ಪಾಲುದಾರರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದ್ದು, ಈ ಪೈಕಿ ಇಬ್ಬರನ್ನು ನರಹತ್ಯೆಯ ಆರೋಪದಡಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

2023ರ ನವೆಂಬರ್‌ನಲ್ಲಿ ಸ್ಥಳೀಯ ಪೊಲೀಸರು ಮನರಂಜನಾ ಕೇಂದ್ರಕ್ಕೆ ಪರವಾನಗಿ ನೀಡಿದ್ದು, ಇದನ್ನು 2024ರ ಜನವರಿ 1ರಿಂದ ಡಿಸೆಂಬರ್ 31ರ ಅವಧಿಗೆ ನವೀಕರಿಸಲಾಗಿದೆ ಎಂದು ರಾಜ್‌ಕೋಟ್ ಪೊಲೀಸ್ ಕಮಿಷನರ್ ರಾಜು ಭಾರ್ಗವ ತಿಳಿಸಿದ್ದಾರೆ.

ಟಿಆರ್‌ಪಿ ಗೇಮ್ ಝೋನ್ ಮನರಂಜನಾ ಕೇಂದ್ರವು ರಸ್ತೆಗಳು ಮತ್ತು ಕಟ್ಟಡಗಳ ಇಲಾಖೆಯಿಂದ ಅನುಮತಿ ಪಡೆದಿದೆ. ಆದರೆ, ● 8ನೇ ಪುಟಕ್ಕೆ

ಅಪಘಾತದಲ್ಲಿ ಒಂದೇ ದಿನ 51 ಮಂದಿ ಸಾವು

ಬೆಂಗಳೂರು: ರಸ್ತೆ ಅಪಘಾತಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಕರ್ನಾಟಕದಲ್ಲಿ 24 ಗಂಟೆಗಳ ಅವಧಿಯಲ್ಲಿ ಪ್ರತ್ಯೇಕ ಪ್ರಕರಣಗಳಲ್ಲಿ 51 ಮಂದಿ ಸಾವನ್ನಪ್ಪಿದ್ದಾರೆ.

ಭಾನುವಾರ ಬೆಳಿಗ್ಗೆ ನಸುಕಿನ ಜಾವದಲ್ಲಿ ಹಾಸನದಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ 6 ಮಂದಿ ಸಾವನ್ನಪ್ಪಿದ್ದರು. ರಸ್ತೆ ಅಪಘಾತಗಳ ಕುರಿತು ಟ್ವೀಟ್ ಮಾಡಿರುವ ಟ್ರಾಫಿಕ್ ಹಾಗೂ ರಸ್ತೆ ಸುರಕ್ಷತಾ ವಿಭಾಗದ ಎಡಿಜಿಪಿ ಅಲೋಕ್ ಕುಮಾರ್, ಈ ಮಾಹಿತಿ ಹಂಚಿಕೊಂಡಿದ್ದಾರೆ.

24 ಗಂಟೆಗಳ ಅವಧಿಯಲ್ಲಿ ರಾಜ್ಯದಲ್ಲಿ ಒಟ್ಟು 51 ಮಂದಿ ರಸ್ತೆ ಅಪಘಾತದಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಪೈಕಿ ಹಲವು ಪ್ರಕರಣಗಳು ಅತಿ ವೇಗ ಹಾಗೂ ಅಜಾಗರೂಕ ಚಾಲನೆಯಿಂದ ಸಂಭವಿಸಿದೆ. ರಸ್ತೆ ಸುರಕ್ಷತೆಗೆ ಎಲ್ಲಾ ಪಾಲುದಾರರಿಂದ ಜವಾಬ್ದಾರಿಯುತ ನಡವಳಿಕೆಯ ಅಗತ್ಯವಿದೆ ಎಂದು ಅಲೋಕ್ ಕುಮಾರ್ ಹೇಳಿದ್ದಾರೆ.

ಕಾರು– ಕಂಟೇನರ್ ಭೀಕರ ಅಪಘಾತ: ಒಂದೇ ಕುಟುಂಬದ 6 ಮಂದಿ ದುರ್ಮರಣ



ಹಾಸನ ಬಳಿ ದುರಂತ

ಹಾಸನ, ಮೇ 26– ಶಿರಾಡಿ ಘಾಟ್‌ನಲ್ಲಿ ಇತ್ತೀಚೆಗೆ ನಡೆದ ಅಪಘಾತವೊಂದರಲ್ಲಿ ತಾಯಿ–ಮಗ ಮೃತಪಟ್ಟ ಘಟನೆ ಮರೆಯುವ ಮುನ್ನವೇ ಮಂಗಳೂರು– ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಮತ್ತೊಂದು ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಮಂಗಳೂರಿನಿಂದ ಬೆಂಗಳೂರು ಕಡೆಗೆ ತೆರಳುತ್ತಿದ್ದ ಇಟಿಯೋಸ್ ಕಾರು, ಎರಡು ಲಾರಿಗಳ ನಡುವೆ ಸಿಲುಕಿ ಸಂಭವಿಸಿದ ಭೀಕರ ಅಪಘಾತದಲ್ಲಿ ಬಾಲಕ, ಇಬ್ಬರು ಮಹಿಳೆಯರು ಸೇರಿ ಒಂದೇ ಕುಟುಂಬದ ಆರು ಮಂದಿ ಮೃತಪಟ್ಟ ದಾರುಣ ಘಟನೆ ಹಾಸನ ಸಮೀಪ ಭಾನುವಾರ ಬೆಳಗಿನ ಜಾವ ನಡೆದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲೂಕಿನ ಅಂದರಹಳ್ಳಿ–ದೇವನಹಳ್ಳಿ ● 8ನೇ ಪುಟಕ್ಕೆ



ಕಾವೇರಿ ನದಿಗೆ ಪಾಲಿಕೆಯ ಕಲುಷಿತ ನೀರು

ಮಂಡ್ಯ ಜಿಲ್ಲಾಧಿಕಾರಿಯಿಂದ ಮೈಸೂರು ಡಿಸಿಗೆ ಪತ್ರ



ಡಾ. ರಾಜೇಂದ್ರ



ಡಾ. ಕುಮಾರ

ಮಂಡ್ಯ,ಮೇ 26– ಮೈಸೂರು ನಗರದ ಕಲುಷಿತ ನೀರು ಕಾವೇರಿ ನದಿಯೊಡಲು ಸೇರುತ್ತಿರುವ ಕುರಿತು ಮೈಸೂರಿನ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಹಾಗೂ ಮಹಾನಗರ ಪಾಲಿಕೆಗೆ ಪತ್ರ ಬರೆಯಲಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದ್ದಾರೆ.

ಈ ಬಗ್ಗೆ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಅವರು, ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಲುಷಿತ ನೀರನ್ನು ಕಾವೇರಿ ನದಿ, ನಾಲೆಗೆ ಬಿಟ್ಟಿರುವ ಬಗ್ಗೆ ದೂರು ಬಂದಿದೆ. ಪಂಪ್‌ಹೌಸ್ ಮೂಲಕ ಶ್ರೀರಂಗಪಟ್ಟಣದ ಗಂಜಾಂನ ವಾರ್ಡ್‌ಗಳಿಗೆ ● 8ನೇ ಪುಟಕ್ಕೆ

ಶಿಕ್ಷಣ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ಕಂಟಕ ತಂದಿಟ್ಟಿದೆ

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆರೋಪ

ಮೈಸೂರು, ಮೇ 26(ಬಿಎಲ್‌ಯು)– ಕಳೆದ ಒಂದು ವರ್ಷದ ಅವಧಿಯಲ್ಲಿ ಕಾಂಗ್ರೆಸ್ ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಕಂಟಕ ತಂದಿಟ್ಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಇಂದು ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಒಂದು ವರ್ಷದ ಅವಧಿಯಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಒಂದಾದರೂ ಒಳ್ಳೆಯ ಕೆಲಸ ಮಾಡಿದೆಯೇ? ಎಂದು ಪ್ರಶ್ನಿಸಿದರು.

ಯುವಕರ ಉತ್ತಮ ಭವಿಷ್ಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸಿದರು. ಆದರೆ ಅದನ್ನು ಒಪ್ಪದ ಕಾಂಗ್ರೆಸ್ ಸರ್ಕಾರ ಮೊಸರಲ್ಲಿ ಕಲ್ಲು ಹುಡುಕಿದಂತೆ ಆಧಾರರಹಿತ ಆರೋಪ ಮಾಡಿ ಎನ್‌ಇಪಿ ಜಾರಿಗೊಳಿಸಲಿಲ್ಲ. ಬದಲಿಗೆ ಅವೈಜ್ಞಾನಿಕವಾದ ರಾಜ್ಯ ಶಿಕ್ಷಣ ನೀತಿ ಜಾರಿಗೊಳಿಸಿದೆ ಎಂದು ಆರೋಪಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗ್ರೇಸ್ ಮಾರ್ಕ್ ಗೊಂದಲ ಸೇರಿದಂತೆ ಶಿಕ್ಷಣ ಕ್ಷೇತ್ರಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಕಂಟಕ ತಂದಿಟ್ಟಿದೆ. ಇನ್ನು ನಮ್ಮ ಶಿಕ್ಷಣ ಸಚಿವರು ರಾಜ್ಯ ತಲೆ ತಗ್ಗಿಸುವಂತೆ ಮಾತನಾಡುತ್ತಾರೆ. ಶಿಕ್ಷಣ ಸಚಿವರಾಗಿ ಶಿಸ್ತಿನಿಂದ ಇರಬೇಕಾದ ಅವರೇ ಅಶಿಸ್ತಿನಿಂದ ಇರುತ್ತಾರೆ. ಶಿಕ್ಷಣ ಸಚಿವರಾದವರಿಗೆ ಕನ್ನಡ ಬರಬೇಕೆ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಶಿಕ್ಷಣ ಸಚಿವರ ಮಾತನ್ನು ಸಮರ್ಥನೆ ಮಾಡಿಕೊಳ್ಳುತ್ತಾರೆ ಎಂದು ವಿಜಯೇಂದ್ರ ಕಿಡಿಕಾರಿದರು.

ಲೋಕಸಭಾ ಚುನಾವಣೆಯಲ್ಲಿ ಮೈಸೂರಿನ ಮೈತ್ರಿ ಅಭ್ಯರ್ಥಿ ಯದುವೀರ್ ಪರ ಜೆಡಿಎಸ್ ಕಾರ್ಯಕರ್ತರು ಬಹಳ ಶ್ರಮವಹಿಸಿ ಪ್ರಚಾರ ಮಾಡಿದ್ದಾರೆ. ಅದೇ ರೀತಿ ಈಗ ವಿಧಾನಪರಿಷತ್ ಮೈತ್ರಿ ಅಭ್ಯರ್ಥಿ ಪರ ಬಿಜೆಪಿ ಕಾರ್ಯಕರ್ತರು ಶ್ರಮ ವಹಿಸಿ ಗೆಲ್ಲಿಸಬೇಕು ಎಂದು ಸಲಹೆ ನೀಡಿದರು.

ದುರಾಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಹಣ ಬಲದಿಂದ ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸುತ್ತೇವೆ ಎಂಬ ಭ್ರಮೆಯಲ್ಲಿದ್ದಾರೆ. ಆದರೆ ಕರ್ನಾಟಕದ ಜನರು ಕಾಂಗ್ರೆಸ್ ನಾಯಕರ ನಿರೀಕ್ಷೆಯನ್ನು ಹುಸಿಗೊಳಿಸಲಿದ್ದಾರೆ. ಯಾವುದೇ ಕಾರಣಕ್ಕೂ ಅವರು ಗೆಲ್ಲಲು ಸಾಧ್ಯವಿಲ್ಲ ಎಂದರು. ಕರ್ನಾಟಕದಲ್ಲಿ ನಡೆಯುತ್ತಿರುವ ಶಿಕ್ಷಕ ● 8ನೇ ಪುಟಕ್ಕೆ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಸಂಬಂಧ ನಡೆದ ಸಭೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಒಗ್ಗಟ್ಟು ಪ್ರದರ್ಶಿಸಿದರು.

ಎಂಎಲ್‌ಸಿ ಚುನಾವಣೆಯಲ್ಲಿ ಕೆಲಸ ಮಾಡದಿದ್ದರೆ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಟಿಕೆಟ್ ಕೇಳಬೇಡಿ

ಜೆಡಿಎಸ್ ಕಾರ್ಯಕರ್ತರಿಗೆ ಶಾಸಕ ಜಿ.ಟಿ.ದೇವೇಗೌಡರ ತಾಕೀತು

ಮೈಸೂರು, ಮೇ 26(ಬಿಎಲ್‌ಯು)– ವಿಧಾನಪರಿಷತ್ ಚುನಾವಣೆಯಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಅಭ್ಯರ್ಥಿ ವಿವೇಕಾನಂದ ಪರ ಕೆಲಸ ಮಾಡಬೇಕು. ಕೆಲಸ ಮಾಡದವರು ನಗರಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಟಿಕೆಟ್ ಕೇಳದೆ ಮನೆಯಲ್ಲಿ ಕೂರಿ ಎಂದು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡರು ಜೆಡಿಎಸ್ ಕಾರ್ಯಕರ್ತರಿಗೆ ತಾಕೀತು ಮಾಡಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಇಂದು ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದ ಅವರು, ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಮೈಸೂರು ಜಿಲ್ಲೆ ಒಂದರಲ್ಲೆ 9 ಸಾವಿರ ಮತದಾರರಿದ್ದಾರೆ. ನೀವು ಮತದಾರರನ್ನು ನೇರವಾಗಿ ಭೇಟಿ ಮಾಡಿ ನಮ್ಮ ಅಭ್ಯರ್ಥಿ ಗೆಲ್ಲಿಸುವಂತೆ ಪ್ರಚಾರ ಮಾಡಬೇಕು. ಅದು ಬಿಟ್ಟು ಮನೆಯಲ್ಲಿ ಕೂತರೆ ಏನು ಪ್ರಯೋಜನ ಎಂದು ಪ್ರಶ್ನಿಸಿದರು. ಏನೇ ಭಿನ್ನಾಭಿಪ್ರಾಯವಿದ್ದರೂ ಅದನ್ನೆಲ್ಲಾ ಮರೆತು ಒಗ್ಗಟ್ಟಾಗಿ ಕೆಲಸ ಮಾಡಬೇಕು ಎಂದು ಇದೇ ವೇಳೆ ಸಲಹೆ ನೀಡಿದರು.

ಮುಂದೆ ಮೈತ್ರಿ ಪಕ್ಷದ ಸರ್ಕಾರ ಅಧಿಕಾರಕ್ಕೆ ತರಲು ಈ ಚುನಾವಣೆ ಕೂಡ ಪ್ರಮುಖ ಪಾತ್ರ ವಹಿಸಿದೆ. ಈ ಚುನಾವಣೆ ಮುಂದಿನ ಸರ್ಕಾರ ರಚನೆಗೆ ದಿಕ್ಸೂಚಿ ಆಗುತ್ತದೆ. ಅಲ್ಲದೆ ಮುಂದಿನ ಚುನಾವಣೆಗೆ ವಿಧಾನಪರಿಷತ್ ಚುನಾವಣೆ ಶಕ್ತಿ ತುಂಬಲಿದೆ ಎಂದು ಹೇಳಿದರು. ನಾವು 135 ಶಾಸಕರಿದ್ದು, ಏನೇ ಮಾಡಿದರೂ ನಡೆಯುತ್ತದೆ ● 8ನೇ ಪುಟಕ್ಕೆ

ವಿಟಿಯು ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು 'ಸಂಶೋಧನೆ', ಆಡಳಿತಾತ್ಮಕ ಸುಧಾರಣೆ

● ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್ ಮಾಹಿತಿ ● ಸಾತಗಳ್ಳಿಯ ಪ್ರಾದೇಶಿಕ ಕಚೇರಿಯಲ್ಲಿ ಹಲವು ಹೊಸ ವಿಭಾಗಗಳಿಗೆ ಚಾಲನೆ ● ಇಂಜಿನಿಯರಿಂಗ್ ಕ್ಷೇತ್ರದ ಸುಧಾರಣೆಗೆ 10 ಪರಿಣತರ ತಂಡ ರಚನೆ

ಮೈಸೂರು, ಮೇ 26(ಎಸ್‌ಪಿಎನ್)– ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ವಿಟಿಯು) ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು 'ಸಂಶೋಧನೆ' ಮತ್ತು 'ಆಡಳಿತಾತ್ಮಕ' ಸುಧಾರಣೆಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ ಎಂದು ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್ ತಿಳಿಸಿದರು.

ಮೈಸೂರು ಸಾತಗಳ್ಳಿಯ ವಿಟಿಯು ಪ್ರಾದೇಶಿಕ ಕಚೇರಿಯಲ್ಲಿ ಕುವೆಂಪು ಮಲ್ಟಿ ಮಿಡಿಯಾ ಸೆಂಟರ್ ಹಾಗೂ ಭೌತಶಾಸ್ತ್ರ, ರಸಾಯನಶಾಸ್ತ್ರ, ಎಂಬಿಎ ವಿಭಾಗದ ಡಿಜಿಟಲ್ ಮಾರ್ಕೆಟಿಂಗ್ ಪ್ರಯೋಗಾಲಯ ಉದ್ಘಾಟಿಸಿ ಮಾತನಾಡಿದರು.

ವಿವಿ ಗುಣಾತ್ಮಕ ಶಿಕ್ಷಣ ನೀಡಲು ನಾಲ್ಕು ಸಂಶೋಧನಾ ಕ್ಲಸ್ಟರ್‌ಗಳನ್ನು ತಜ್ಞರ ಆಶಯದಂತೆ ಆರಂಭಿಸಲಿದೆ. ಕಂಪ್ಯೂಟರ್ ಸೈನ್ಸ್, ಮೆಕ್ಯಾನಿಕಲ್, ಸಿವಿಲ್, ಎಲೆಕ್ಟ್ರಾನಿಕ್ ವಿಭಾಗದಲ್ಲಿ ಮೈಸೂರು, ಬೆಂಗಳೂರು, ಕಲಬುರಗಿ ಹಾಗೂ ಬೆಳಗಾವಿ ಕ್ಲಸ್ಟರ್ ಆರಂಭಗೊಳ್ಳಲಿದ್ದು, ಇದಕ್ಕೆ ಜೂನ್ 15ರಂದು ಅನುಮತಿ ದೊರೆಯಲಿದೆ. ಈ ಕ್ಲಸ್ಟರ್ ಕೇಂದ್ರಗಳಿಗೆ ಮೂಲ ಸೌಕರ್ಯ ಒದಗಿಸಲು ತಲಾ 25 ಲಕ್ಷ ಅನುದಾನ ಒದಗಿಸಲಾಗುವುದು ಎಂದರು.

ಬೆಂಗಳೂರು ಪ್ರಾದೇಶಿಕ ಕಚೇರಿಯಲ್ಲಿ ಉನ್ನತ ಮಟ್ಟದ ಟೆಲಿಕಾಂ ಸೆಂಟರ್ ಆಫ್ ಎಕ್ಸಲೆನ್ಸ್ ಆರಂಭಗೊಳ್ಳಲಿದ್ದು, ದೇಶದಲ್ಲಿ ಮೊಟ್ಟ ಮೊದಲಿಗೆ ವಿಟಿಯು ಈ ಸೌಲಭ್ಯ ನೀಡುವ ಹೆಗ್ಗಳಿಕೆಗೆ ಪಾತ್ರವಾಗಲಿದೆ. ಎಲ್ಲವೂ ಅಂದುಕೊಂಡಂತೆ ನಡೆದರೆ ಜೂನ್ 24ರಂದು ಈ ಕ್ಲಸ್ಟರ್ ಕೇಂದ್ರಗಳು ಆರಂಭಗೊಳ್ಳಲಿವೆ ಎಂದರು.

ಈ ವರ್ಷ ಎಂಜಿನಿಯರಿಂಗ್ ವಿಭಾಗದಲ್ಲಿ 30ರೊಳಗೆ ರ್‍ಯಾಂಕಿಂಗ್ ತರುವ ಉದ್ದೇಶ ಹೊಂದಿದೆ. ಈ ಹಿಂದೆ ವಿಟಿಯು ಎಂಜಿನಿಯರಿಂಗ್ ಕಾಲೇಜುಗಳ ಪೈಕಿ 52ನೇ ಸ್ಥಾನ, ವಿವಿಗಳ ಪೈಕಿ 63, ಮ್ಯಾನೇಜ್ಮೆಂಟ್ ಅಧ್ಯಯನದಲ್ಲಿ 95, ಒಟ್ಟಾರೆ ವಿವಿ ರ್‍ಯಾಂಕಿಂಗ್‌ನಲ್ಲಿ 93ನೇ ಸ್ಥಾನ ಪಡೆದಿದೆ. ಈ ವರ್ಷ ಈ ರ್‍ಯಾಂಕಿಂಗ್ ಎಂಜಿನಿಯರಿಂಗ್ ವಿಭಾಗದಲ್ಲಿ 30ರೊಳಗೆ ತರಲು ಉದ್ದೇಶ ಹೊಂದಲಾಗಿದ್ದು, ಈ ನಿಟ್ಟಿನಲ್ಲಿ ವಿಟಿಯುನ ಎಲ್ಲ ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ ಎಂದರು.

ಎಂ.ಟೆಕ್‌ಗೆ ಐಐಎಸ್‌ಸಿ ಮಾದರಿ: ಎಂ.ಟೆಕ್ ಅಧ್ಯಯನಕ್ಕೆ ಐಐಎಸ್‌ಸಿ ಮಾದರಿಯನ್ನು ಅನುಸರಿಸಲು ವಿಟಿಯು ಸಿದ್ಧವಾಗಿದ್ದು, ಅದಕ್ಕಾಗಿ 10 ಅಂತರ ರಾಷ್ಟ್ರೀಯ ವಿಶ್ವವಿದ್ಯಾಲಯ, 10 ಎನ್‌ಐಟಿ, ಐಐಟಿಗಳ ಪಠ್ಯಕ್ರಮಗಳನ್ನು ಪರಿಶೀಲಿಸಲಾಗಿದೆ. ಎಂ.ಟೆಕ್ ಪದವಿಯಲ್ಲಿ ಮೆಕ್ಯಾನಿಕಲ್, ಸಿವಿಲ್, ಎಲೆಕ್ಟ್ರಾನಿಕ್ ಮತ್ತು ಕಂಪ್ಯೂಟರ್ ಸೈನ್ಸ್ ವಿಭಾಗಗಳ ಪ್ರವೇಶಾತಿ ಮಾತ್ರ ನೀಡಲಿದ್ದು, ಉಳಿದ ವಿಷಯಗಳನ್ನು ಅದರೊಳಗೆ ಕಲಿಸಲಾಗುತ್ತದೆ ಎಂದರು.

ಸ್ಟಾರ್ಟ್‌ಅಪ್‌ನಲ್ಲಿ ತೊಡಗಿಸಲು ಪ್ರೋತ್ಸಾಹ: ವಿವಿಧ ವಿಷಯಗಳಲ್ಲಿ ಸಂಶೋಧನೆ ಮುಗಿಸಿದ ವಿದ್ಯಾರ್ಥಿಗಳು ಸ್ಟಾರ್ಟ್‌ಅಪ್‌ನಲ್ಲಿ ತೊಡಗಿಸಿಕೊಳ್ಳಲು 40 ಕೈಗಾರಿಕೋದ್ಯಮಿಗಳ ಜೊತೆ ಈಗಾಗಲೇ ಮಾತುಕತೆ ನಡೆಸಿದೆ. ಮುಂಬರುವ ದಿನಗಳಲ್ಲಿ ವಿಟಿಯು ವಿದ್ಯಾರ್ಥಿಗಳು ಸ್ಟಾರ್ಟ್‌ಅಪ್‌ನಲ್ಲಿ ತೊಡಗಿಸಿಕೊಳ್ಳುವ ಕೌಶಲ್ಯ ಬೆಳೆಸಲು ತಯಾರಿ ನಡೆದಿದೆ ಎಂದು ಮಾಹಿತಿ ನೀಡಿದರು. ವೇದಿಕೆಯಲ್ಲಿ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ವಿಟಿಯು ಕುಲಸಚಿವ ಬಿ.ಇ.ರಂಗಸ್ವಾಮಿ, ಪರೀಕ್ಷಾಂಗ ಕುಲಸಚಿವ ಟಿ.ಎನ್.ಶ್ರೀನಿವಾಸ, ಹಣಕಾಸು ಅಧಿಕಾರಿ ಎಂ.ಎ.ಸಪ್ನಾ, ಪ್ರಾದೇಶಿಕ ಕಚೇರಿ ನಿರ್ದೇಶಕ ಟಿ.ಪಿ.ರೇಣುಕಾ ಮೂರ್ತಿ ಇದ್ದರು.



ಮೈಸೂರು ಸಾತಗಳ್ಳಿಯ ವಿಟಿಯು ಪ್ರಾದೇಶಿಕ ಕಚೇರಿಯಲ್ಲಿ ಕುವೆಂಪು ಮಲ್ಟಿ ಮೀಡಿಯಾ ಸೆಂಟರ್ ಹಾಗೂ ಭೌತಶಾಸ್ತ್ರ, ರಸಾಯನಶಾಸ್ತ್ರ, ಎಂಬಿಎ ವಿಭಾಗದ ಡಿಜಿಟಲ್ ಮಾರ್ಕೆಟಿಂಗ್ ಪ್ರಯೋಗಾಲಯವನ್ನು ವಿಟಿಯು ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಉದ್ಘಾಟಿಸಿದರು.

> "ಇಂಜಿನಿಯರ್ ಕ್ಷೇತ್ರದ ಸಂಶೋಧನಾ ಗುಣಮಟ್ಟ ಹೆಚ್ಚಿಸಲು ವಿವಿಧ ಕ್ಷೇತ್ರದ 10 ಪರಿಣತರ ತಂಡವನ್ನು ರಚಿಸಲಾಗಿದೆ. ನಾನು ಅಧಿಕಾರ ವಹಿಸಿಕೊಂಡ ಒಂದೂವರೆ ವರ್ಷದಲ್ಲಿ 2,500 ವಿದ್ಯಾರ್ಥಿಗಳಿಗೆ ಪಿಎಚ್.ಡಿ ಪದವಿ ನೀಡಲಾಗಿದೆ. ಈ ನಿಟ್ಟಿನಲ್ಲಿ ವಿವಿಯ ಆಡಳಿತಾತ್ಮಕ ವಿಚಾರದಲ್ಲಿಯೂ ಸುಧಾರಣೆಗೆ ಒತ್ತು ನೀಡಲಾಗಿದೆ. ಅಲ್ಲದೆ ವಿಟಿಯು ಪ್ರಾಯೋಗಿಕ ಪರೀಕ್ಷೆಗಳು ಮುಗಿದ ಎರಡು ಗಂಟೆಯಲ್ಲೇ ಫಲಿತಾಂಶವನ್ನು ಆಯಾಯ ವಿದ್ಯಾರ್ಥಿಗಳ ವಾಟ್ಸಾಪ್‌ಗೆ ಮಾಹಿತಿ ತಲುಪಿಸಲಾಗಿದೆ.
> –ಪ್ರೊ.ಎಸ್. ವಿದ್ಯಾಶಂಕರ್

> "ವಿಟಿಯು ತನ್ನ ವಿದ್ಯಾರ್ಥಿಗಳಿಗೆ ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಿದೆ. ಇದನ್ನು ಉಪಯೋಗಿಸಿಕೊಂಡು ಉತ್ತಮ ಶೈಕ್ಷಣಿಕ ಗುರಿ ಹೊಂದಲು ಯುವ ಜನತೆ ಮುಂದಾಗಬೇಕು. ವಿದ್ಯಾರ್ಥಿಗಳು ಕಷ್ಟಪಟ್ಟರೆ ಯಶಸ್ಸು ಖಂಡಿತ.
> –ಪ್ರೊ.ಎನ್.ಕೆ.ಲೋಕನಾಥ್, ಕುಲಪತಿ, ಮೈಸೂರು ವಿವಿ

ಖಾಸಗಿ ವಾಹನಗಳ ಮೇಲೆ ಸರ್ಕಾರಿ ಲಾಂಛನ, ಚಿಹ್ನೆ ಬಳಕೆ

ಏಳು ವಿಶೇಷ ತಂಡ ರಚನೆ; ಜೂ.1ರಿಂದ ಕಾರ್ಯಾಚರಣೆ

ಬೆಂಗಳೂರು, ಮೇ 26– ನಗರದಲ್ಲಿ ಸರ್ಕಾರದ ಅಧೀನದ ಸಂಸ್ಥೆಗಳು, ಖಾಸಗಿ ಸಂಸ್ಥೆಗಳು, ವ್ಯಕ್ತಿಗಳು ತಮ್ಮ ವಾಹನಗಳ ಮೇಲೆ ಅನಧಿಕೃತವಾಗಿ ಸರ್ಕಾರದ ಲಾಂಛನ, ಚಿಹ್ನೆಗಳನ್ನು ಅಳವಡಿಸಿರುವುದು ಕಂಡುಬರುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆ.

ಈಗಾಗಲೇ ಸಾರಿಗೆ ಇಲಾಖೆಯಲ್ಲಿ ಈ ಬಗ್ಗೆ ನೂರಾರು ಪ್ರಕರಣಗಳು ದಾಖಲಾಗಿದ್ದು, ಇಂತಹ ನೋಂದಣಿ ಫಲಕಗಳನ್ನು ತೆರವುಗೊಳಿಸಲು ರಾಜ್ಯ ಸಾರಿಗೆ ಇಲಾಖೆ ಏಳು ವಿಶೇಷ ತಂಡಗಳನ್ನು ರಚಿಸಿ, ಜೂ.1ರಿಂದ ಕಾರ್ಯಾಚರಣೆ ಆರಂಭಿಸಲು ಚಿಂತನೆ ನಡೆಸಿದೆ ಎಂದು ತಿಳಿದುಬಂದಿದೆ. ಮೊದಲಿಗೆ 500, 2ನೇ ಬಾರಿ 1 ಸಾವಿರ ರೂ. ಅದಾದ ನಂತರ ವಾಹನವನ್ನು ಸೀಜ್ ಮಾಡಲು ಇಲಾಖೆ ನಿರ್ಧರಿಸಿದೆ ಎಂದು ವರದಿಗಳು ತಿಳಿಸಿವೆ.

ಸಾರಿಗೆ ಇಲಾಖೆ ನಿಯಮದಂತೆ, ಕೇವಲ ಸರ್ಕಾರಿ ವಾಹನಗಳಿಗೆ ಅಂದರೇ ಜಿ ಸಿರೀಸ್ ಇರೋ ನಂಬರ್ ಪ್ಲೇಟ್ ಇರುವ ವಾಹನಗಳಲ್ಲಿ ಮಾತ್ರ ಕರ್ನಾಟಕ ಸರ್ಕಾರದ ಹೆಸರು, ಲಾಂಛನ ಇರಬೇಕು. ಅದನ್ನು ಹೊರತುಪಡಿಸಿ, ಸರ್ಕಾರದ ಅಧೀನದಲ್ಲಿ ಬರುವ ಸರ್ಕಾರಿ ನಿಗಮ, ಮಂಡಳಿ, ಸಂಸ್ಥೆ, ಲೋಕಲ್ ಬಾಡಿ, ಮುನ್ಸಿಪಲ್ ವಾಹನಗಳಲ್ಲಿಯೂ ಸರ್ಕಾರದ ಲಾಂಛನ ಬಳಕೆಗೆ ಅವಕಾಶವಿಲ್ಲ.

ಉದಾಹರಣೆಗೆ ಕೆಎಸ್‌ಆರ್‌ಟಿಸಿ ನಿಗಮವಾದರೂ ಅಧಿಕಾರಿಗಳು ಸರ್ಕಾರದ ಚಿಹ್ನೆ, ಹೆಸರು ಬಳಸುವಂತಿಲ್ಲ. ಅನಧಿಕೃತವಾದ ಲಾಂಛನ ಅಥವಾ ಚಿಹ್ನೆ ಹೊಂದಿರುವ ವಾಹನಗಳ ವಿರುದ್ಧ ಮೋಟಾರು ವಾಹನಗಳ ಕಾಯ್ದೆಯಡಿ ಕ್ರಮ ಕೈಗೊಂಡು, ಕೇಸ್ ದಾಖಲಿಸಲಿರುವ ಎಚ್ಚರಿಕೆ ರವಾನಿಸಿದೆ.

ಬಿಜೆಪಿ ಸರ್ಕಾರವಿದ್ದಾಗ ಸಾರಿಗೆ ಇಲಾಖೆಯಲ್ಲಿ 14 ಸಾವಿರ ನೌಕರರು ನಿವೃತ್ತಿಯಾಗಿದ್ದಾರೆ

ಒಂದೇ ಒಂದು ಬಸ್ ಖರೀದಿ ಮಾಡದಿದ್ದರೂ 5900 ಸಾವಿರ ಕೋಟಿ ಸಾಲ

ಬೆಂಗಳೂರು: ಕಳೆದ ನಾಲ್ಕು ವರ್ಷಗಳ ಕಾಲ ಆಡಳಿತ ಮಾಡಿದ್ದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸಾರಿಗೆ ಇಲಾಖೆಯಲ್ಲಿ ಬರೋಬ್ಬರಿ 14 ಸಾವಿರ ನೌಕರರು ನಿವೃತ್ತಿಯಾಗಿದ್ದಾರೆ. ಜೊತೆಗೆ, ಒಂದೇ ಒಂದು ಬಸ್ ಖರೀದಿ ಮಾಡದಿದ್ದರೂ ಬರೋಬ್ಬರಿ 5,900 ಕೋಟಿ ರೂ. ಸಾಲ ಮಾಡಿ ಹೋಗಿದ್ದರು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಆರೋಪಿಸಿದರು.

ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಲು ಆಗಮಿಸಿದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ತಮ್ಮ ಸರ್ಕಾರದ ಅವಧಿಯಲ್ಲಿ ಒಂದೇ ಒಂದು ಬಸ್ ಖರೀದಿ ಮಾಡದಿದ್ದರೂ ಬಸ್‌ಗಳ ಸ್ಥಿತಿಯ ಬಗ್ಗೆ ಟೀಕೆ ಮಾಡುತ್ತಾರೆ. ಕಳೆದ ನಾಲ್ಕು ವರ್ಷ

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಆರೋಪ



ಅಧಿಕಾರದಲ್ಲಿ ಇದ್ದಿದ್ದು ಅವರೇ ಅಲ್ವಾ? ಒಂದು ಹೊಸ ಬಸ್ಸನ್ನೂ ಅವರು ತೆಗೆದುಕೊಂಡಿಲ್ಲ. ಇಲಾಖೆಯಲ್ಲಿ 14 ಸಾವಿರ ಜನ ನಿವೃತ್ತಿ ಹೊಂದಿದ್ದರು. ಬರೋಬ್ಬರಿ 5,900 ಕೋಟಿ ಸಾರಿಗೆ ನಿಗಮಕ್ಕೆ ಸಾಲ ಇಟ್ಟು ಹೋಗಿದ್ದಾರೆ. ನಮ್ಮ ಸರ್ಕಾರ ಬಂದ ಮೇಲೆ 5 ಸಾವಿರಕ್ಕೂ ಅಧಿಕ ಬಸ್ ಬಂದಿವೆ. ಬಿಜೆಪಿ ಸಾಲವನ್ನು ನಾವು ತೀರಿಸಬೇಕಾಗಿದೆ ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಭೇಟಿಯ ಉದ್ದೇಶದ ಬಗ್ಗೆ ಮಾತನಾಡಿ, ವಿಧಾನಪರಿಷತ್ ಚುನಾವಣೆ ಸಂಬಂಧ ಚರ್ಚೆ ಮಾಡಿದ್ದೇವೆ. ಬೆಂಗಳೂರಿನ ಒಬ್ಬರಿಗೆ ಕೊಡಿ ಅಂತ ಕೇಳೋಕೆ ಬಂದಿದ್ದೆ. ಆದರೆ, ಬಾಂಬೆ ಕರ್ನಾಟಕ, ಹೈದರಾಬಾದ್ ಕರ್ನಾಟಕ ಎಲ್ಲರಿಗೂ ಕೊಡಬೇಕು ಅಲ್ವಾ? ಹೀಗಾಗಿ ಟಿಕೆಟ್ ಹಂಚಿಕೆ ನಿರ್ಧಾರಕ್ಕೆ ದೆಹಲಿಗೆ ಹೋಗ್ಬೇಕು ಎಂದಿದ್ದಾರೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ದೆಹಲಿಗೆ ಪಟ್ಟಿ ಕೊಡುವ ಬಗ್ಗೆ ಫೈನಲ್ ಮಾಡ್ತಾರೆ. ಎಲ್ಲಾ ಸಮುದಾಯಗಳನ್ನೂ ಗಮನದಲ್ಲಿಟ್ಟುಕೊಂಡು ಕೊಡ್ಬೇಕು ಎಂದರು.

ರಾಜ್ಯದಲ್ಲಿ ವಿಧಾನ ಪರಿಷತ್‌ಗೆ ಯಾರ ಹೆಸರನ್ನು ಶಿಫಾರಸು ಮಾಡಿದ್ದೇವೆ ಎಂದು ಹೇಳೋಕೆ ಆಗೊಲ್ಲ, ಬೇರೆಯವರಿಗೆ ಬೇಸರ ಆಗುತ್ತದೆ. ಆಕಾಂಕ್ಷಿಗಳು ಹೆಚ್ಚು ಇದ್ದೇ ಇರ್ತಾರೆ ಅಲ್ವಾ? ಬಿಜೆಪಿಯಲ್ಲಿ ಅಷ್ಟಿದ್ದಾರೆ ಅಂದರೆ ನಮಗೆ 7 ಸೀಟ್ ಬರುತ್ತದೆ ನಮ್ಮಲ್ಲಿ ಆಕಾಂಕ್ಷಿಗಳು ಜಾಸ್ತಿ ಇದ್ದಾರೆ ಎಂದರು.

ಕೆ.ಆರ್.ಕ್ಷೇತ್ರ ವ್ಯಾಪ್ತಿ ಮಣ್ಣು ಮಿಶ್ರಿತ ನೀರು ಪೂರೈಕೆ

ಪಾಲಿಕೆ ಆಯುಕ್ತರಿಗೆ ಶಾಸಕ ಶ್ರೀವತ್ಸ ಪತ್ರ ಮುಖೇನ ಮನವರಿಕೆ

ಮೈಸೂರು, ಮೇ 26(ಎಸ್‌ಪಿಎನ್)– ಕೆ.ಆರ್.ಕ್ಷೇತ್ರ ವ್ಯಾಪ್ತಿಯ ಕೆಲ ಬಡಾವಣೆಗಳಲ್ಲಿ ಮಣ್ಣು ಮಿಶ್ರಿತ ಕುಡಿಯುವ ನೀರು ಸರಬರಾಜು ಆಗುತ್ತಿದ್ದು, ಈ ಪ್ರದೇಶದಲ್ಲಿ ಅನಾಹುತ ಸಂಭವಿಸುವ ಮೊದಲೇ ಎಚ್ಚೆತ್ತುಕೊಳ್ಳುವಂತೆ ನಗರಪಾಲಿಕೆ ಆಯುಕ್ತರಿಗೆ ಶಾಸಕ ಟಿ.ಎಸ್. ಶ್ರೀವತ್ಸ ಪತ್ರ ಮುಖೇನ ತಿಳಿಸಿದ್ದಾರೆ.



ಟಿ.ಎಸ್.ಶ್ರೀವತ್ಸ

ಕೆ.ಆರ್.ಕ್ಷೇತ್ರ ವ್ಯಾಪ್ತಿಯಲ್ಲಿ ನಾನು ಪಾದಯಾತ್ರೆ ನಡೆಸಿದ ಸಂದರ್ಭದಲ್ಲಿ ಈ ವಿಷಯವನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದ್ದೆ. ಆದರೆ, ಇಲ್ಲಿಯವರೆಗೂ ಯಾವುದೇ ಪ್ರಯೋಜನವಾಗಿಲ್ಲ. ಜನಸಾಮಾನ್ಯರು ಕುಡಿಯಲು ನೀರನ್ನು ಶೇಖರಿಸಿಕೊಂಡಿದ್ದ ಸಮಯದಲ್ಲಿ ಪಾತ್ರೆಗಳ ತಳಭಾಗದಲ್ಲಿ ಮಣ್ಣು ಶೇಖರಣೆ ಆಗುತ್ತಿರುವುದು ಕಂಡು ಬರುತ್ತಿದೆ. ಹಾಗೆಯೇ ಸಾರ್ವಜನಿಕರೂ ಸಹ ಸಂಪ್‌ಗಳನ್ನು ಸ್ವಚ್ಛ ಮಾಡಿಕೊಳ್ಳುತ್ತಿದ್ದಾರೆ. ಮೇ 21ರಂದು ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಓರ್ವ ಸಾವನ್ನಪ್ಪಿ, ಹಲವರು ಅಸ್ವಸ್ಥಗೊಂಡ ಘಟನೆಯಿಂದಾಗಿ ಕೆ.ಆರ್.ಕ್ಷೇತ್ರ ವ್ಯಾಪ್ತಿಯ ನಿವಾಸಿಗಳು ಭಯಭೀತರಾಗಿದ್ದಾರೆ.

ಇದರ ನಡುವೆ ಶ್ರೀರಾಂಪುರ, ಚಿಕ್ಕಹರದನಹಳ್ಳಿ, ಶಿವಪುರ, ಎಸ್‌ಬಿಎಂ ಬಡಾವಣೆ, ಮಧುವನ ಬಡಾವಣೆ, ಬೆಮೆಲ್ ಬಡಾವಣೆ, ಅರವಿಂದನಗರ, ಕುವೆಂಪುನಗರ ಬಸ್ ಡಿಪೋ ಹಿಂಭಾಗ ಸೇರಿದಂತೆ ಕೆಲ ಪ್ರದೇಶಗಳಲ್ಲಿ ಮಣ್ಣು ಮಿಶ್ರಿತ ನೀರು ಪೂರೈಕೆ ಆಗುತ್ತಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಏನಾದರೂ ಅನಾಹುತ ಸಂಭವಿಸುವ ಮೊದಲೇ ಮಣ್ಣು ಮಿಶ್ರಿತ ನೀರನ್ನು ತಡೆಗಟ್ಟಿ ಶುದ್ಧ ಹಾಗೂ ಸ್ವಚ್ಛ ಕುಡಿಯುವ ನೀರನ್ನು ಸರಬರಾಜು ಮಾಡಲು ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಮಂತ್ರಾಲಯದಲ್ಲಿ ರಾಯರ ದರ್ಶನ ಪಡೆದ ಅಣ್ಣಾಮಲೈ

ಮೈಸೂರು,ಮೇ 26(ಪಿಎಂ)– ಮಂತ್ರಾಲಯದ ಶ್ರೀ ರಾಘವೇಂದ್ರಸ್ವಾಮಿ ಮಠಕ್ಕೆ ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಕೆ.ಅಣ್ಣಾಮಲೈ ಶನಿವಾರ ಕುಟುಂಬ ಸಮೇತ ಭೇಟಿ ನೀಡಿದ್ದರು. ಇಲ್ಲಿನ ರಾಯರ ಬೃಂದಾವನಕ್ಕೆ ವಿಶೇಷ ಪೂಜೆ ಸಹ ಸಲ್ಲಿಸಿದರು. ಇದೇ ವೇಳೆ ಶ್ರೀಮಠದ ಪೀಠಾಧಿಪತಿ ಡಾ.ಸುಬುಧೇಂದ್ರ ತೀರ್ಥರು ಅಣ್ಣಾಮಲೈ ದಂಪತಿಗೆ ಆಶೀರ್ವದಿಸಿದರು. ಈ ವೇಳೆ ಶ್ರೀಮಠದ ವ್ಯವಸ್ಥಾಪಕ ಎಸ್.ಕೆ.ಶ್ರೀನಿ ವಾಸರಾವ್, ಸಹಾಯಕ ವ್ಯವಸ್ಥಾಪಕ ಐ.ಪಿ.ನರಸಿಂಹಾಚಾರ್ ಮತ್ತಿತರರು ಹಾಜರಿದ್ದರು.



ವಿವಿಧೆಡೆ ಸಸಿ ನೆಟ್ಟ ಟೀಂ ಮೈಸೂರು ತಂಡ



ಮೈಸೂರು,ಮೇ 26(ಪಿಎಂ)– ಟೀಂ ಮೈಸೂರು ತಂಡದ ವತಿಯಿಂದ ಭಾನುವಾರ ನಗರದ ವಿವಿಧೆಡೆ ಸಸಿಗಳನ್ನು ನಡೆಯಲಾಯಿತು. ಮೈಸೂರಿನ ಕೆ.ಜಿ.ಕೊಪ್ಪಲು, ಕ್ರಾಫರ್ಡ್ ಹಾಲ್ ಎದುರು (ಓವೆಲ್ ಗ್ರೌಂಡ್ ಪಕ್ಕ) ಹಾಗೂ ರಾಮವಿಲಾಸ ರಸ್ತೆಯಲ್ಲಿ ವಿವಿಧ ಜಾತಿಯ 42 ಸಸಿಗಳನ್ನು ನೆಟ್ಟು ನೀರುಣಿಸಲಾಯಿತು. ದಶಕದಿಂದ ಪ್ರತಿ ಶನಿವಾರ, ಭಾನುವಾರ ಗಿಡಗಳಿಗೆ ನೀರುಣಿಸುವ ಹಾಗೂ ಗಿಡಗಳನ್ನು ನೆಟ್ಟು ಪೋಷಿಸುವ ಚಟುವಟಿಕೆಯನ್ನು ಟೀಂ ಮೈಸೂರು ತಂಡ ನಡೆಸಿಕೊಂಡು ಬರುತ್ತಿದೆ. ಅಂತೆಯೇ ಇದು ಈ ವರ್ಷದ 2ನೇ ಗಿಡ ನೆಡುವ ಕಾರ್ಯಕ್ರಮ.

ತಂಡದ ಗೋಕುಲ್ ಗೋವರ್ಧನ್, ಯಶ್ವಂತ್, ಹಿರಿಯಣ್ಣ, ಅನಿಲ್ ಜೈನ್, ಕಿರಣ್ ಜೈನ್, ರಾಮೇಗೌಡ, ಮುರಳಿ, ರಾಮಪ್ರಸಾದ್, ಮನೋಹರ, ಯತೀಶ್, ಅಮರ್, ಬಾಲಕೃಷ್ಣ, ಹರೀಶ್, ಬಸವರಾಜು, ಪ್ರಸನ್ನ, ರಾಘವೇಂದ್ರ, ಪರಮೇಶ್, ಮೋಹನ್, ಸಚಿನ್, ಕೃಷ್ಣ, ವೈಶಾಖ್, ಸಹನಾ, ಶಾಂತಾ, ಸುಕೃತಾ, ಕಲ್ಯಾಣಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು ಎಂದು ಪ್ರಕಟಣೆ ತಿಳಿಸಿದೆ.

ಇಂದಿನಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಮೇ 26– ಮೈಸೂರಿನ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಮೇ 27ರಿಂದ 31ರವರೆಗೆ ದೀರ್ಘಕಾಲದ ನೆಗಡಿ, ತಲೆನೋವು, ತಲೆಭಾರ, ಮೂಗು ಕಟ್ಟುವುದು, ಮೂಗು ಸೋರುವಿಕೆ, ಇತರೆ ಶೀತದ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ ಏರ್ಪಡಿಸಲಾಗಿದೆ. ಶಿಬಿರವು ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ ನಡೆಯಲಿದೆ. ಮಾಹಿತಿಗೆ ಮೊ. 7026787187, ದೂ. 0821–2548231 ಸಂಪರ್ಕಿಸಬಹುದು.

ಯುವತಿ ನಾಪತ್ತೆ



ಮೈಸೂರು, ಮೇ 26– ಯುವತಿ ಕಾಣೆಯಾಗಿರುವ ಬಗ್ಗೆ ಉದಯಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಎ.ಶರ್ಲಿನ್ (24) ಕಾಣೆಯಾದವರು. ಮೇ 2ರಂದು ರಾತ್ರಿ 7.30ರ ಸಮಯದಲ್ಲಿ ಅಂಗಡಿಗೆ ಹೋಗಿ ಬರುತ್ತೇನೆಂದು ಹೇಳಿ ಮನೆಯಿಂದ ಹೊರಗೆ ಹೋದವಳು ಇದುವರೆಗೂ ವಾಪಸ್ ಬಂದಿಲ್ಲ ಎಂದು ಆಕೆ ತಂದೆ ದೂರು ದಾಖಲಿಸಿದ್ದಾರೆ. ಈಕೆ ಬಗ್ಗೆ ಮಾಹಿತಿ ತಿಳಿದಲ್ಲಿ ಉದಯಗಿರಿ ಪೊಲೀಸ್ ಠಾಣೆಗೆ ತಿಳಿಸಲು ಮನವಿ ಮಾಡಲಾಗಿದೆ.

ಶಂಕರೇಗೌಡ ನಿಧನ



ಕೆ.ಆರ್.ಪೇಟೆ, ಮೇ 26– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಕುಂದೂರು ಗ್ರಾಮದ ಹಿರಿಯ ಮುಖಂಡ ಶಂಕರೇಗೌಡ(72) ಅವರು ಭಾನುವಾರ ರಾತ್ರಿ ನಿಧನರಾದರು. ಮೃತರು ಪತ್ನಿ ದೇವಮ್ಮ, ಮೊಟ್ಟೆ ಮಂಜು ಸೇರಿದಂತೆ ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮದಲ್ಲಿರುವ ಜಮೀನಿನಲ್ಲಿ ಸೋಮವಾರ ಬೆಳಗ್ಗೆ 11ಕ್ಕೆ ಅಂತಿಮ ಸಂಸ್ಕಾರ ನೆರವೇರಿಸಲಾಗುವುದು ಎಂದು ಮೃತರ ಕುಟುಂಬದ ಮೂಲಗಳು ತಿಳಿಸಿವೆ.

ಅಂತಿಮ ಯಾತ್ರೆ ವಾಹನ ಸೇವೆಗೆ ಸಮರ್ಪಣೆ



ಮೈಸೂರು, ಮೇ 26(ಎಸ್‌ಬಿಡಿ)– ಇಂಟರ್‌ನ್ಯಾಷನಲ್ ಲಿಂಗಾಯತ್ ಯೂತ್ ಫೋರಂ(ಐಎಲ್‌ವೈಎಫ್)ನ ಮೈಸೂರು ವಿಭಾಗ ಹಾಗೂ ಇಂಟರ್ ನ್ಯಾಷನಲ್ ಲಿಂಗಾಯತ್ ಯೂತ್ ಫೋರಂ ಚಾರಿಟಬಲ್ ಟ್ರಸ್ಟ್ ವತಿಯಿಂದ ದಾನಿಗಳ ದೇಣಿಗೆಯಿಂದ ಖರೀದಿಸಿರುವ 'ಅಂತಿಮ ಯಾತ್ರೆ ವಾಹನ'ವನ್ನು ಸಮುದಾಯಕ್ಕೆ ಶುಕ್ರವಾರ ಅರ್ಪಿಸಲಾಯಿತು. ಈ ಸಂದರ್ಭದಲ್ಲಿ ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಐಎಲ್‌ವೈಎಫ್ ಟ್ರಸ್ಟ್ ಚೇರ್ಮನ್ ಅವಿನಾಶ್ ಪಾಳೆಗಾರ್, ಐಎಲ್‌ವೈಎಫ್ ಮೈಸೂರು ವಿಭಾಗದ ಅಧ್ಯಕ್ಷ ಧರ್ಮಪ್ರಸಾದ್, ಮಾಜಿ ಅಧ್ಯಕ್ಷರಾದ ವೀರೇಶ್ ಹಾಗೂ ಬಿ.ಎಸ್.ಪ್ರಶಾಂತ್, ಸಂಸ್ಥಾಪಕ ಅಧ್ಯಕ್ಷ ಲೋಕೇಶ್, ಉದ್ಯಮಿಗಳಾದ ವೀರಭದ್ರಪ್ಪ, ಮಲ್ಲಿಕಾರ್ಜುನ್ ಮತ್ತಿತರರು ಉಪಸ್ಥಿತರಿದ್ದರು.

ನೇಮಕ



ಮೈಸೂರು: ಜಿಲ್ಲಾ ಕಾಂಗ್ರೆಸ್ ಸಮಿತಿ ಗ್ರಾಮಾಂತರ ಕಾರ್ಯದರ್ಶಿಯನ್ನಾಗಿ ದೇವರಸನಹಳ್ಳಿ ಡಿ.ಎನ್.ನವೀನ್‌ಕುಮಾರ್ ಅವರನ್ನು ನೇಮಕ ಮಾಡಲಾಗಿದೆ.

ಪ್ರೇಮ್‌ಕುಮಾರ್‌ಗೆ ಪಿಎಚ್.ಡಿ ಪದವಿ



ಮೈಸೂರು, ಮೇ 26– ಕುವೆಂಪು ವಿಶ್ವವಿದ್ಯಾಲಯದ ಇಂಗ್ಲಿಷ್ ವಿಭಾಗದ ಸಹ ಪ್ರಾಧ್ಯಾಪಕ ಡಾ.ಎಂ.ದತ್ತಾತ್ರೇಯ ಅವರ ಮಾರ್ಗದರ್ಶನದಲ್ಲಿ ಜಿ.ಪ್ರೇಮ್‌ಕುಮಾರ್ ಸಂಶೋಧಿಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕುವೆಂಪು ವಿಶ್ವವಿದ್ಯಾನಿಲಯ ಪಿ.ಹೆಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಇಂದು, ನಾಳೆ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ವಾರ್ಷಿಕೋತ್ಸವ ಸಮಾರಂಭ

ಮೈಸೂರು, ಮೇ 26– ಮೈಸೂರಿನ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಮೇ 27 ಮತ್ತು 28ರಂದು ವಾರ್ಷಿಕೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿದೆ.

ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿಯವರ ಸ್ಥಾಪನೆಯ 86ನೇ ವರ್ಷದ ವಾರ್ಷಿಕೋತ್ಸವ, ಶ್ರೀ ಪದ್ಮಾವತಿ ಅಮ್ಮನವರ ಅಂಡಾಳ್ ದೇವಿಯವರ ಸ್ಥಾಪನೆಯ 37ನೇ ವಾರ್ಷಿಕೋತ್ಸವ ಮತ್ತು ಶ್ರೀ ಅನ್ನಪೂರ್ಣೇಶ್ವರಿ ಅಮ್ಮನವರ ಸ್ಥಾಪನೆಯ 12ನೇ ವರ್ಷದ ವಾರ್ಷಿಕೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿದೆ.

ಮೇ 27ರಂದು ಸಂಜೆ 6 ಗಂಟೆಗೆ ಪುಣ್ಯಾಹ ವಾಚನ, ಮಹಾಸಂಕಲ್ಪ ಬ್ರಾಹ್ಮಣ ಪೂಜೆ, ಕಲಶ ಸ್ಥಾಪನೆ, ಶ್ರೀ ಸೂಕ್ತ ಪಾರಾಯಣ, ರಾಜೋಪಚಾರ ಪೂಜೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಸಂಜೆ 7.30 ಗಂಟೆಗೆ 108 ಕಳಸ ಸ್ಥಾಪನೆ, ಪೂಜೆ ನೆರವೇರಲಿದೆ.

ಮೇ 28ರಂದು ಬೆಳಗ್ಗೆ 6 ಗಂಟೆಗೆ ಅಮ್ಮನವರಿಗೆ ಪಂಚಾಮೃತ, ಕಳಸಾಭಿಷೇಕ, ಅಲಂಕಾರ, ಬೆಳಗ್ಗೆ 9ಕ್ಕೆ ಶ್ರೀ ಸೂಕ್ತ ಹೋಮ, ದುರ್ಗಾ ಹೋಮ, ಮಧ್ಯಾಹ್ನ 12 ಗಂಟೆಗೆ ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಮಧ್ಯಾಹ್ನ 1 ಗಂಟೆಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ 7 ಗಂಟೆಗೆ ಶ್ರೀನಿವಾಸ ಕಲ್ಯಾಣ ನೆರವೇರಲಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.05.2024 ಸೋಮವಾರ, ಮಳೆ ನಕ್ಷತ್ರ: ರೋಹಿಣಿ, 25.05.2024ರಿಂದ 07.06.2024 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ, ತಿಥಿ: ಚೌತಿ ನಕ್ಷತ್ರ: ಪೂರ್ವಾಷಾಢ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಶ್ರೀ ಶ್ರೀನಿವಾಸ ಸ್ವಾಮಿ ಕೈಂಕರ್ಯ ಸಭಾ:** ಶ್ರೀ ಶ್ರೀನಿವಾಸ ಸ್ವಾಮಿಯವರ ವಾರ್ಷಿಕ ಮಹೋತ್ಸವ, ಬೆಳಗ್ಗೆ 9 ಗಂಟೆಗೆ ಅಭಿಷೇಕ, ಸಂಜೆ 6ಕ್ಕೆ ರಕ್ಷಾ ಬಂಧನ, ಸ್ಥಳ: ದೇವಸ್ಥಾನದ ಆವರಣ, ತಿಲಕ್‌ನಗರ.

■ **ಆಲ್ ಇಂಡಿಯಾ ಇನ್ಸಿಟ್ಯೂಟ್ ಆಫ್ ಸ್ಪೀಚ್ ಅಂಡ್ ಹಿಯರಿಂಗ್, ಐಎಸ್‌ಎಲ್‌ಆರ್‌ಟಿಸಿ (ನವ ದೆಹಲಿ):** ಡೆಫ್ ಶಾಲೆಗಳಲ್ಲಿ ಕೆಲಸ ಮಾಡುವ ಶಿಕ್ಷಕರಿಗಾಗಿ ಐದು ದಿನಗಳ ಇಂಡಿಯನ್ ಸೈನ್ ಭಾಷಾ ತರಬೇತಿ ಕಾರ್ಯಕ್ರಮ, ಸ್ಥಳ: ಸೆಮಿನಾರ್ ಹಾಲ್, ಅಕಾಡೆಮಿಕ್ ಬ್ಲಾಕ್, ಎಐಐಎಸ್‌ಹೆಚ್, ಬೆಳಗ್ಗೆ 9.30ರಿಂದ.

■ **ಜೆಎಸ್‌ಎಸ್ ಮಹಾ ವಿದ್ಯಾಪೀಠ, ಜೆಎಸ್‌ಎಸ್ ಮಹಿಳಾ ಕಾಲೇಜು (ಸ್ವಾಯತ್ತ), ಸಂಸ್ಕೃತ ವಿಭಾಗ:** ಸಂಸ್ಕೃತ–ಕನ್ನಡ ಅನುವಾದ ಪರಂಪರೆ ಕುರಿತು ಒಂದು ದಿನದ ರಾಷ್ಟ್ರಮಟ್ಟದ ವಿಚಾರ ಸಂಕಿರಣ, ದಿವ್ಯ ಸಾನಿಧ್ಯ: ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಉದ್ಘಾಟನೆ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಮಲ್ಲೇದೇಪುರಂ ಜೆ.ವೆಂಕಟೇಶ್, ದಿಕ್ಸೂಚಿ ಭಾಷಣ: ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಪ್ರಧಾನ್ ಗುರುದತ್, ಅಧ್ಯಕ್ಷತೆ: ಕರ್ನಾಟಕ ಸಂಸ್ಕೃತ ವಿವಿ ಕುಲಪತಿ ಡಾ.ಎಸ್.ಅಹಲ್ಯಾ, ಗೋಷ್ಠಿಗಳು, ಸ್ಥಳ: ನವಜ್ಯೋತಿ ಸಭಾಂಗಣ, ಬೆಳಗ್ಗೆ 10 ಗಂಟೆಯಿಂದ

■ **ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಮಹಾರಾಣಿ ಮಹಿಳಾ ಕಾಲೇಜು (ಸ್ನಾತಕ ಮತ್ತು ಸ್ನಾತಕೋತ್ತರ ಕೇಂದ್ರ) :** ಸಾಂಸ್ಕೃತಿಕ ವೇದಿಕೆ 2023–24 ಸಮಾರೋಪ ಸಮಾರಂಭ, ಸಮಾರೋಪ ನುಡಿ: ಖ್ಯಾತ ಜಾನಪದ ಹಾಡುಗಾರರಾದ ಡಾ.ಎಂ.ಮಹದೇವಸ್ವಾಮಿ, ಮಳವಳ್ಳಿ, ಮುಖ್ಯ ಅತಿಥಿಗಳು: ರಂಗಭೂಮಿ ಕಲಾವಿದರಾದ ಧರ್ಮಣ್ಣ ಕಡೂರು, ಅಧ್ಯಕ್ಷತೆ: ಮಹಾರಾಣಿ ಮಹಿಳಾ ಕಲಾ ಕಾಲೇಜು ಪ್ರಾಚಾರ್ಯರಾದ ಡಾ.ಬಿ.ವಿ.ವಸಂತಕುಮಾರ್, ಸ್ಥಳ: ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ವೇದಿಕೆ, ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಕೆಎಂಪಿಕೆ ಚಾರಿಟಬಲ್ ಟ್ರಸ್ಟ್, ಮೈಸೂರು:** ಕೆಎಂಪಿಕೆ ಚಾರಿಟಬಲ್ ಟ್ರಸ್ಟ್‌ನ 18ನೇ ವಾರ್ಷಿಕೋತ್ಸವದ ಅಂಗವಾಗಿ ಚಾಣಕ್ಯ ಸೇವಾ ರತ್ನ ಪ್ರಶಸ್ತಿ 2023–24 ಪ್ರದಾನ ಸಮಾರಂಭ, ಉದ್ಘಾಟನೆ: ಮೈಸೂರು ನಗರ ಹಾಗೂ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಅಧ್ಯಕ್ಷತೆ: ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಮುಖ್ಯ ಅತಿಥಿಗಳು: ಶಾಸಕರಾದ ಟಿ.ಎಸ್.ಶ್ರೀವತ್ಸ, ಡಾ.ಡಿ.ತಿಮ್ಮಯ್ಯ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಬಿಜೆಪಿ ರಾಜ್ಯ ಹಿಂದುಳಿದ ವರ್ಗದ ಮೋರ್ಚಾ ಅಧ್ಯಕ್ಷ ಆರ್.ರಘು ಕೌಟಿಲ್ಯ, ಸ್ಥಳ: ಸಿಪಾಯಿ ಗ್ರಾಂಡ್ ಹೋಟೆಲ್, ಬೆಳಗ್ಗೆ 11.30ಕ್ಕೆ.

■ **ಕರ್ನಾಟಕ ಶಾಸ್ತ್ರೀಯ ಸಂಗೀತ ಒಕ್ಕೂಟ ಟ್ರಸ್ಟ್ :** ಮೈಸೂರು ವಾಸುದೇವಚಾರ್ಯ ಸಂಸ್ಮರಣ ಸಂಗೀತ ಉತ್ಸವ, ಸಂಜೆ 5.30ರಿಂದ ವಾಸುದೇವಚಾರ್ಯರ ಕೃತಿಗಳನ್ನಾಧರಿಸಿದ ಗೋಷ್ಠಿ ಗಾಯನ, ಸಂಜೆ 7.30ಕ್ಕೆ ಸನ್ಮಾನ ಮತ್ತು ಸಭಾ ಸಮಾರೋಪ, ಸಂಜೆ 6.30ರಿಂದ 7.30ರವರೆಗೆ, ವಿದುಷಿ ಮೈಸೂರು ರಾಜಲಕ್ಷ್ಮಿ ಅವರಿಂದ ವೀಣಾವಾದನ, ಸ್ಥಳ: ಶ್ರೀ ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ತುಳಸೀದಾಸ್ ಆಸ್ಪತ್ರೆ ಎದುರು.

■ **ಶ್ರೀ ವೆಂಕಟರಮಣಸ್ವಾಮಿ ದೇವಸ್ಥಾನ ಟ್ರಸ್ಟ್ :** ಶ್ರೀ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಪುಣ್ಯಾಹ ವಾಚನ, ಮಹಾ ಸಂಕಲ್ಪ ಬ್ರಾಹ್ಮಣ ಪೂಜೆ, ಕಲಶ ಸ್ಥಾಪನೆ, ಶ್ರೀ ಸೂಕ್ತ ಪಾರಾಯಣ, ರಾಜೋಪಚಾರ ಪೂಜೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ಎನ್.ಆರ್.ಮೊಹಲ್ಲಾ, ಸಂಜೆ 6 ಗಂಟೆಯಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ–ನಾಗವೇಣಿ ಮಂಚು, 6.15 ಗೀತಾ ರಾಧನ –6.35. / 6.10 "ವಿಶ್ವ ವಿಖ್ಯಾತ ವಿಜ್ಞಾನಿಗಳು " ಬಾನುಲಿ ಸರಣಿ, ಲೇಖನ: ಶ್ರೀನಿವಾಸ ಪ್ರಸಾದ್, ಪ್ರಸ್ತುತಿ–ಎಸ್.ಲಕ್ಷ್ಮೀನಾರಾಯಣ, 6.40–"ನಾನು ನ.ರತ್ನ" ಬಾನುಲಿ ಸರಣಿ, 6.50–ರೈತರಿಗೆ ಸಲಹೆ, 7.15–ಭಾವಗೀತೆಗಳು, ಶಿವಮೊಗ್ಗ ಸುಬ್ಬಣ್ಣ, 9.00 ನೆನಪಿನಂಗಳ (ಧ್ವನಿ ಭಂಡಾರದಿಂದ): ಸಾಹಿತ್ಯ ಕ್ಷೇತ್ರದ ಹಿರಿಯ ಬರಹಗಾರ ಪ್ರೊಫೆಸರ್ ಎಸ್.ವಿ.ರಂಗಣ್ಣ ಅವರೊಂದಿಗೆ ನಂಜನಗೂಡು ಬಾಲ ಸುಬ್ರಹ್ಮಣ್ಯ ಅವರು ನಡೆಸಿರುವ ಸಂವಾದ. 10.00–ಶಾಸ್ತ್ರೀಯ ಸಂಗೀತ: ಟಿ.ಹೆಚ್.ಸುಬ್ರಹ್ಮಣ್ಯ–ವಯೋಲಿನ್ ವಾದನ, 12.30–ದೇವರನಾಮ, 12.45–ನಮ್ಮ ಆರೋಗ್ಯ–'ಜೀವನ ಶೈಲಿಯ ವ್ಯತ್ಯಯದಿಂದಾಗುವ ಆರೋಗ್ಯ ಸಮಸ್ಯೆಗಳಿಗೆ ಆಯುರ್ವೇದದ ಪರಿಹಾರ' ಕುರಿತು ಮೈಸೂರಿನ ಕಾವೇರಿ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ರಾಮಚಂದ್ರ ನೇಸರ್ಗಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ, ಬೇದ್ರೆ ಮಂಜುನಾಥ್. 1.00–ಚಿತ್ರಗೀತೆಗಳು, 1.20–ಭಾವಗೀತೆಗಳು–ಆರ್.ಮಹೇಶ್, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಶಾಂತಿ ರಾವ್–ವೀಣಾವಾದನ, 4.00 –ಮಹಿಳಾರಂಗ "ಡಾಕ್ಟರ್ ಸಮಯ" ಹೊಟ್ಟೆನೋವು ಇದಕ್ಕೆ ಸಾಮಾನ್ಯ ಕಾರಣ ಹಾಗೂ ಚಿಕಿತ್ಸೆ. ಭಾಗವಹಿಸುವ ವೈದ್ಯರು–ಶಸ್ತ್ರಚಿಕಿತ್ಸಾ ತಜ್ಞೆ ಡಾ.ಪಂಕಜ, ಪ್ರಸ್ತುತಿ: ಕೆ.ಬಿ.ಮೀನಾ, 5.45 –ನಾನು ನ.ರತ್ನ ಬಾನುಲಿ ಸರಣಿ 6.55–ಕೃಷಿರಂಗ: ಹಣ್ಣು ಹೊನ್ನು, ತೋಟಗಾರಿಕಾ ಬೆಳೆಗಳ ಸಮಗ್ರ ಬೇಸಾಯ ವಿಧಾನ ಕುರಿತ ಬಾನುಲಿ ಸರಣಿ –ಅರಿಶಿನ ಉತ್ಪಾದನಾ ತಾಂತ್ರಿಕತೆಗಳನ್ನು ಕುರಿತು ಸಂವಾದ. ಭಾಗವಹಿಸುತ್ತಾರೆ: ಮೈಸೂರು ತಾಲ್ಲೂಕು ಎಲಚನಹಳ್ಳಿಯ ತೋಟಗಾರಿಕಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ಆರ್.ಸಿದ್ದಪ್ಪ ಹಾಗೂ ಚಾಮರಾಜನಗರ ಜಿಲ್ಲಾ ತೋಟಗಾರಿಕಾ ಉಪ ನಿರ್ದೇಶಕರಾದ ಬಿ.ಎಲ್.ಶಿವಪ್ರಸಾದ್, ಪ್ರಸ್ತುತಿ: ಎನ್.ಕೇಶವಮೂರ್ತಿ, 8.30–ಹಿಂದಿ ಚಿತ್ರಗೀತೆಗಳು, 10.00–ನಾಟಕ, 10.30–ಸವಿನೆನಪು

ಬೌದ್ಧಗೀತೆಗಳ ಧ್ವನಿಸುರುಳಿ ಬಿಡುಗಡೆ



ಮೈಸೂರು, ಮೇ 26(ಎಂಕೆ)– ಮೈಸೂರಿನ ಅಶೋಕ ವೃತ್ತದ ಬಳಿ ಇರುವ ಬುದ್ಧ ವಿಹಾರದಲ್ಲಿ ಭಾರತೀಯ ವಿದ್ಯಾರ್ಥಿ ಸಂಘದಿಂದ ಬುದ್ಧ ಪೂರ್ಣಿಮೆಯ ಅಂಗವಾಗಿ ಆಯೋಜಿಸಿದ್ದ 'ಬುದ್ಧಫೆಸ್ಟ್–2024' ಧ್ಯಾನ, ಗಾನ ಮತ್ತು ವಿಚಾರ ಮಂಥನ ಕಾರ್ಯಕ್ರಮದಲ್ಲಿ ಸೋಸಲೆ ಗಂಗಾಧರ್ ವಿರಚಿತ ಬೌದ್ಧಗೀತೆಗಳ ಧ್ವನಿಸುರುಳಿ ಬಿಡುಗಡೆ ಮಾಡಲಾಯಿತು.

ಅಂಬೇಡ್ಕರ್ ಸಂಶೋಧನಾ ಕೇಂದ್ರದ ಸಲಹೆಗಾರ ಬಸವರಾಜ ದೇವನೂರ ಭಗವಾನ್ ಬುದ್ಧರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ, ಬೌದ್ಧಗೀತೆಗಳ ಧ್ವನಿಸುರಳಿಯನ್ನು ಬಿಡುಗಡೆ ಮಾಡಿದರು. ಇದೇ ವೇಳೆ 'ಬುದ್ಧನ ಪಟಿಚ್ಚ ಸಮುಪ್ಪಾದ ತತ್ತ್ವ' ಕುರಿತು ಮಾತನಾಡಿದ ಬೌದ್ಧ ಸಾಹಿತ್ಯ ಮೀಮಾಂಸಕ ಪ್ರೊ.ಮಹದೇವಯ್ಯ ಕಲ್ಲಾರೆಪುರ, ಪಾಳಿ ಭಾಷೆಯಲ್ಲಿ 'ಪಟಿಚ್ಚ ಸಮುಪ್ಪಾದ' ಎಂಬುದನ್ನು ಕನ್ನಡದಲ್ಲಿ 'ಅವಲಂಬಿತ ಜನಕಗಳು' ಎಂದು ಕರೆಯಲಾಗುತ್ತದೆ. ಇದು 12 ಕೊಂಡಿಗಳಿಂದ ಆಗಿರುತ್ತದೆ. ಇದು ಹುಟ್ಟು–ಸಾವಿನ ದುಃಖ ಚಕ್ರವಾಗಿರುತ್ತದೆ. ಒಂದರ ಕಾರಣದಿಂದ ಮತ್ತೊಂದು ಉತ್ಪತ್ತಿಯಾಗುತ್ತದೆ. ಇದನ್ನು ನಾವು ಅರ್ಥ ಮಾಡಿಕೊಂಡು ಧ್ಯಾನದ ಮುಖಾಂತರ ದುಃಖದಿಂದ ಪಾರಾಗಬಹುದು ಎಂದು ವಿವರಿಸಿದರು.

ಇದಕ್ಕೂ ಮುನ್ನ ಜಾನಪದ ಸಂಗೀತದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರ್ತಿಸಿಕೊಂಡಿರುವ ಬಾಲು ಜಂಬೆ ಮತ್ತು ತಂಡದಿಂದ 'ಜಂಬೆ ಝಲಕ್' ಪ್ರದರ್ಶನ ಮನರಂಜನೆಯ ಮಹಾಪೂರವನ್ನೇ ನೀಡಿತು. ಇದರ ನಡುವೆ ಸೋಸಲೆ ಗಂಗಾಧರ್ ನೇತೃತ್ವದಲ್ಲಿ ಹಲವು ಗಾಯಕರು ಬುದ್ಧರ ಗೀತೆಗಳನ್ನು ಸುಶ್ರಾವ್ಯವಾಗಿ ಹಾಡುವ ಮೂಲಕ ಭಗವಾನ್ ಬುದ್ಧರ ಸ್ಮರಣೆ ಮಾಡಿದರು. ಜಿಪಂ ನಿವೃತ್ತ ಉಪ ಕಾರ್ಯದರ್ಶಿ ಡಾ.ಎಸ್.ಪ್ರೇಮ್‌ಕುಮಾರ್, ಮಾಜಿ ಮೇಯರ್ ಪುರುಷೋತ್ತಮ್, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಉಪ ವ್ಯವಸ್ಥಾಪಕಿ ಜೆ.ಪುಟ್ಟಮಣಿ, ಅಕ್ಕಾ ಐಎಎಸ್ ಅಕಾಡೆಮಿಯ ಡಾ.ಶಿವಕುಮಾರ್, ಸೋಸಲೆ ಸಿದ್ದರಾಜು ಮತ್ತಿತರರು ಉಪಸ್ಥಿತರಿದ್ದರು.

ಶ್ರೀ ಶಂಕರಾಚಾರ್ಯ ಸೇವಾರತ್ನ ಪ್ರಶಸ್ತಿ ಪ್ರದಾನ



ಮೈಸೂರಿನ ಅಗ್ರಹಾರದ ಶೃಂಗೇರಿ ಶಂಕರ ಮಠದ ಆವರಣದಲ್ಲಿ ಕರ್ನಾಟಕ ಸೇನಾ ಪಡೆ ವತಿಯಿಂದ ಭಾನುವಾರ ಶ್ರೀ ಶಂಕರಾಚಾರ್ಯರ ಜಯಂತಿ ಹಾಗೂ ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಶ್ರೀ ಶಂಕರಾಚಾರ್ಯ ಸೇವಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು,ಮೇ 26(ಎಂಟಿವೈ)– ಜೀವನದಲ್ಲಿ ಶಿಕ್ಷಣ ಮಹತ್ತರ ಪಾತ್ರ ವಹಿಸಲಿದ್ದು, ವಿದ್ಯಾರ್ಥಿಗಳು ಶ್ರಮ ವಹಿಸಿ ಛಲದಿಂದ ಗುರಿ ಇಟ್ಟುಕೊಂಡು ಸಾಧನೆ ಮಾಡುವುದರೊಂದಿಗೆ ಶಂಕರಾಚಾರ್ಯರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಸಲಹೆ ನೀಡಿದ್ದಾರೆ.

ಮೈಸೂರಿನ ಅಗ್ರಹಾರದ ಶೃಂಗೇರಿ ಶಂಕರ ಮಠದ ಆವರಣದಲ್ಲಿ ಕರ್ನಾಟಕ ಸೇನಾ ಪಡೆ ವತಿಯಿಂದ ಭಾನುವಾರ ನಡೆದ ಶ್ರೀ ಶಂಕರಜಯಂತಿ ಹಾಗೂ ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ 'ಶ್ರೀ ಶಂಕರಾಚಾರ್ಯ ಸೇವಾರತ್ನ' ಪ್ರಶಸ್ತಿ ಪ್ರದಾನ ಮಾಡಿ, ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಾತನಾಡಿದ ಅವರು, ನಾನು ವಿದ್ಯಾರ್ಥಿಯಾಗಿದ್ದಾಗ ಶಿಕ್ಷಣಕ್ಕೆ ಹೆಚ್ಚು ಪ್ರೋತ್ಸಾಹ ನೀಡುತ್ತಿರಲಿಲ್ಲ. ಇಂದು ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸಂಘ ಸಂಸ್ಥೆಗಳು ಪ್ರೋತ್ಸಾಹಿಸುತ್ತಿವೆ. ಜ್ಞಾನ ಯಾರ ಸ್ವತ್ತು ಅಲ್ಲ. ಪ್ರತಿಭೆ ಎಲ್ಲಾ ಮಕ್ಕಳಲ್ಲಿಯೂ ಇರುತ್ತದೆ. ಸ್ಪರ್ಧಾತ್ಮಕ ಯುಗದಲ್ಲಿ ಎಷ್ಟು ಓದಿದರೂ ಸಾಲದು. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ದೇಶ, ಭಾಷೆ, ನೆಲ, ಜಲದ ಬಗ್ಗೆ ಶಂಕರಾಚಾರ್ಯ, ಗಾಂಧೀಜಿ, ಡಾ.ಅಂಬೇಡ್ಕರ್, ಬಸವಣ್ಣರಂತಹ ಮಹನೀಯರ ಬಗ್ಗೆಯೂ ಓದಿ ತಿಳಿದುಕೊಳ್ಳಬೇಕು. ಸಮಾಜಕ್ಕೆ ಆದರ್ಶವಾಗುವ ಪೀಳಿಗೆಯಾಗಬೇಕು. ಪೋಷಕರನ್ನು ಗೌರವಿಸಿ, ಮನುಷ್ಯತ್ವಕ್ಕೆ ಬೆಲೆ ಕೊಡುವ ಪ್ರಜೆಯಾಗಬೇಕು. ಆ ಮೂಲಕ ತಾವು ಮಾಡಿದ ಸಾಧನೆ ಅಚ್ಚಳಿಯದೇ ಉಳಿಯುವಂತಾಗಬೇಕು. ಇಂದು ಹೆಣ್ಣುಮಕ್ಕಳು ಎಲ್ಲಾ ರಂಗದಲ್ಲಿಯೂ ಕೆಲಸ ಮಾಡುತ್ತಿದ್ದಾರೆ. ಹೆಣ್ಣುಮಕ್ಕಳು ಯಾರಿಗೂ ಕಡಿಮೆಯಿಲ್ಲದಿರುವುದರಿಂದ ಈ ಸಮಾಜಕ್ಕೆ ಶಕ್ತಿಯಾಗಬೇಕು ಎಂದು ತಿಳಿಸಿದರು.

ಇದೇ ವೇಳೆ ಕಾವೇರಿ ಕ್ರಿಯಾ ಸಮಿತಿಯ ಅಧ್ಯಕ್ಷ ಎಸ್.ಜಯಪ್ರಕಾಶ್, ಶಾಂತವೇರಿ ಗೋಪಾಲಗೌಡ ಆಸ್ಪತ್ರೆಯ ನರರೋಗ ತಜ್ಞ ಡಾ. ಶುಶೃತ್ ಗೌಡ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ, ಸಹಾಯಕ ಕಾರ್ಯಪಾಲಕ ಅಭಿಯಂತರ ಆರ್.ಆದರ್ಶ್, ದಿ.ಸಿಟಿ ಕೋಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಸ್ವರೂಪ್, ಪ್ರಸೂತಿ ಹಾಗೂ ಸ್ತ್ರೀ ಯೋಗ ತಜ್ಞೆ ಡಾ. ಕೆ.ವಿ.ಲಕ್ಷ್ಮೀದೇವಿ, ಮುಡಾ ಸಹಾಯಕ ಕಾರ್ಯನಿರ್ವಾಹಕ ವಲಯ ಅಧಿಕಾರಿ ಆರ್.ಸಿ.ಕೆಂಪರಾಜ್ ಅವರಿಗೆ ಶ್ರೀ ಶಂಕರಾಚಾರ್ಯ ತತ್ವಜ್ಞಾನಿ ಸೇವಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

2023 –24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಪಡೆದ 42 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ದಿನೇಶ್ ಕೋಚಿಂಗ್ ಸೆಂಟರ್ ಮುಖ್ಯಸ್ಥ ಎನ್.ವಿ.ದಿನೇಶ್ ವಿತರಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಶಂಕರಾಚಾರ್ಯರ ಕುರಿತು ಮಹಾರಾಜ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಉದಯಶಂಕರ್ ಹಾಗೂ ಸಂಸ್ಕೃತ ವಿದ್ವಾಂಸ ಡಾ. ಲೀಲಾ ಪ್ರಕಾಶ್ ಪ್ರಧಾನ ಭಾಷಣ ಮಾಡಿದರು. ಕರ್ನಾಟಕ ಸೇನಾ ಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಚಾ.ರಂ ಶ್ರೀನಿವಾಸ ಗೌಡ, ವಿಜಯವಿಠ್ಠಲ ಕಾಲೇಜು ಪ್ರಾಂಶುಪಾಲ ಸತ್ಯಪ್ರಸಾದ್, ಹೆಚ್.ಕೆಪಾಂಡು, ಸುರೇಶ್ ಗೋಲ್ಡ್, ಕರ್ನಾಟಕ ಸೇನಾ ಪಡೆಯ ಪ್ರಭು ಶಂಕರ್ ಎಂ.ಬಿ. ಕೃಷ್ಣಯ್ಯ, ಪ್ರಜೀಶ್, ಶಾಂತರಾಜೇ ಅರಸ್, ಅಂಬಾ ಅರಸ್, ಹನುಮಂತಯ್ಯ, ಕುಮಾರ್ ಗೌಡ, ನೇಹಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಈಗ ಬ್ರೇಕ್ ಇನ್‌ಸ್ಪೆಕ್ಟರ್‌ಗಳಿಂದಲೂ ಕುಡಿದು ವಾಹನ ಚಾಲನೆ ಮಾಡುವವರ ತಪಾಸಣೆ



ಸಾಂದರ್ಭಿಕ ಚಿತ್ರ

ಮೈಸೂರು, ಮೇ 26 (ಆರ್‌ಕೆ)– ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ರಸ್ತೆ ಅಪಘಾತಗಳನ್ನು ತಪ್ಪಿಸಲು ಇದೀಗ ಸಂಚಾರ ಪೊಲೀಸರ ಜೊತೆಗೆ ಸಾರಿಗೆ ಇಲಾಖೆಯ ಆರ್‌ಟಿಓ ಕಚೇರಿ ಬ್ರೇಕ್ ಇನ್‌ಸ್ಪೆಕ್ಟರ್‌ಗಳೂ ಸಹ ಡ್ರಿಂಕ್ ಅಂಡ್ ಡ್ರೈವ್ ತಪಾಸಣಾ ಕಾರ್ಯಾಚರಣೆ ನಡೆಸಲಿದ್ದಾರೆ.

ಹಗಲಲ್ಲಿ ಕೆಲಸದ ವೇಳೆ ಆರ್‌ಟಿಓ ಕಚೇರಿಯ ಕರ್ತವ್ಯ ಮುಗಿಸಿ ರಾತ್ರಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ತಪಾಸಣೆ ಮಾಡಿ ಪ್ರಕರಣ ದಾಖಲಿಸಬೇಕೆಂದು ಸಾರಿಗೆ ಇಲಾಖೆ ಆಯುಕ್ತರು ಆದೇಶ ಹೊರಡಿಸಿರುವುದರಿಂದ ಬ್ರೇಕ್ ಇನ್‌ಸ್ಪೆಕ್ಟರ್‌ಗಳು ಹೆಚ್ಚುವರಿ ಜವಾಬ್ದಾರಿ ನಿರ್ವಹಿಸಬೇಕಾಗಿದೆ.

ಇದುವರೆಗೆ ಸಿವಿಲ್ ಪೊಲೀಸರ ನೆರವಿನೊಂದಿಗೆ ಸಂಚಾರ ಠಾಣೆಗಳ ಎಎಸ್‌ಐ ಮೇಲ್ಪಟ್ಟ ಅಧಿಕಾರಿಗಳು ಮಾತ್ರ ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ–ಧಾರವಾಡ ಸೇರಿದಂತೆ ರಾಜ್ಯದಾದ್ಯಂತ ಡ್ರಿಂಕ್ ಅಂಡ್ ಡ್ರೈವ್ ಕಾರ್ಯಾಚರಣೆ ನಡೆಸಿ ಪ್ರಕರಣ ದಾಖಲಿಸುತ್ತಿದ್ದರು. ಆದರೆ ಇನ್ನು ಮುಂದೆ ಆರ್‌ಟಿಓ ಕಚೇರಿ ಬ್ರೇಕ್ ಇನ್‌ಸ್ಪೆಕ್ಟರ್‌ಗಳೂ ಸಹ ಈ ತಪಾಸಣೆಯಲ್ಲಿ ಭಾಗವಹಿಸಲಿದ್ದಾರೆ.

ಈ ಕುರಿತು ಮೈಸೂರಿನ ಪೂರ್ವ ಆರ್‌ಟಿಓ ಕಚೇರಿ ಅಧಿಕಾರಿಗಳು ಪ್ರತಿಕ್ರಿಯೆ ನೀಡಿದ್ದು, ಡ್ರಿಂಕ್ ಅಂಡ್ ಡ್ರೈವ್ ಕೇಸ್ ಹಾಕಲು ಬೆಂಗಳೂರಲ್ಲಿ ಈಗಾಗಲೇ ಆರ್‌ಟಿಓ ಕಚೇರಿಗಳಲ್ಲಿ ಸ್ಕ್ವಾಡ್‌ಗಳನ್ನು ರಚಿಸಿ ಬ್ರೇಕ್ ಇನ್‌ಸ್ಪೆಕ್ಟರ್‌ಗಳನ್ನು ಕಾರ್ಯಾಚರಣೆಗೆ ನಿಯೋಜಿಸಲಾಗಿದೆ ಎಂದರು.

ಮೈಸೂರಲ್ಲೂ ಡಿಡಿ ಕೇಸ್ ಮಾಡಲು ನಾವೂ ಸಹ ಸಂಚಾರ ಪೊಲೀಸರಿಗೆ ನೆರವಾಗಬೇಕು. ಆರ್‌ಟಿಓಗೆ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರನ್ನು ತಪಾಸಣೆ ಮಾಡಿ ಪ್ರಕರಣ ದಾಖಲಿಸುವ ಅಧಿಕಾರವಿದೆ ಆದರೆ, ದಿನನಿತ್ಯದ ಕಚೇರಿ ಕೆಲಸ ಮಾಡಲು ಸಿಬ್ಬಂದಿಗಳ ಕೊರತೆಯಿಂದಾಗಿ ಸಾಧ್ಯವಾಗುತ್ತಿರಲಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯಾದ್ಯಂತ ಹೊಸದಾಗಿ ನೇಮಕಗೊಂಡಿರುವ ಬ್ರೇಕ್ ಇನ್‌ಸ್ಪೆಕ್ಟರ್‌ಗಳು ತರಬೇತಿ ಮುಗಿಸಿಕೊಂಡು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುತ್ತಿದ್ದಂತೆಯೇ ಅವರನ್ನು ತಪಾಸಣಾ ಕಾರ್ಯಾಚರಣೆಗೆ ನಿಯೋಜಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಈವರೆಗೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಲೋಕಸಭಾ ಸಾರ್ವತ್ರಿಕ ಚುನಾವಣಾ ಕರ್ತವ್ಯದಲ್ಲಿ ಬ್ಯುಸಿಯಾಗಿದ್ದರು. ನೀತಿ ಸಂಹಿತೆ ಮುಕ್ತಾಯವಾದ ಬಳಿಕ ಆರ್‌ಟಿಓ ಕಚೇರಿ ಬ್ರೇಕ್ ಇನ್‌ಸ್ಪೆಕ್ಟರ್‌ಗಳು ಸಹ ಡ್ರಿಂಕ್ ಅಂಡ್ ಡ್ರೈವ್ ಕೇಸು ದಾಖಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ತಪಾಸಣಾ ವೇಳೆ ವಾಹನ ಚಾಲನೆ ಮಾಡುವವರು ಪೊಲೀಸರೊಂದಿಗೆ ವಾಗ್ವಾದಕ್ಕಿಳಿದು ಕಿರಿಕಿರಿ ಉಂಟು ಮಾಡುವುದರಿಂದ ನ್ಯೂಸೆನ್ಸ್ ತಡೆಯಲು ಸಿವಿಲ್ ಪೊಲೀಸರ ನೆರವು ಪಡೆದು ಸಲಕರಣೆಗಳನ್ನು ಬಳಸಿ ತಪಾಸಣಾ ಕಾರ್ಯಚರಣೆ ನಡೆಸುತ್ತಿದ್ದರು. ಅದೇ ರೀತಿ ಸಾರ್ವಜನಿಕರಿಂದ ಆರ್‌ಟಿಓ ಕಚೇರಿ ಬ್ರೇಕ್ ಇನ್‌ಸ್ಪೆಕ್ಟರ್‌ಗಳಿಗೂ ಕಹಿ ಅನುಭವವಾಗಬಹುದೆಂದು ಅವರಿಗೆ ಉಪಕರಣ ಕೊಡಿಸಲು ಸಾರಿಗೆ ಇಲಾಖೆ ಮುಂದಾಗಿದೆ.

ರಸ್ತೆ ಅಪಘಾತಗಳು: ಸಾರಿಗೆ ಇಲಾಖೆ ಅಂಕಿ–ಅಂಶಗಳ ಪ್ರಕಾರ, ಕರ್ನಾಟಕ ರಾಜ್ಯದಾದ್ಯಂತ 2022 ರಲ್ಲಿ 35550 ರಸ್ತೆ ಅಪಘಾತಗಳು ಸಂಭವಿಸಿದ್ದು, 10,723 ಸಾವುಗಳಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.13ರಷ್ಟು ಹೆಚ್ಚಿಗೆಯಾಗಿದೆ. ದೇಶಾದ್ಯಂತ 2022 ರಲ್ಲಿ 61,312 ರಸ್ತೆ ಅಪಘಾತಗಳು ಸಂಭವಿಸಿದ್ದು, 10,68,491 ಸಾವುಗಳಾಗಿದ್ದು, 4,43,366 ಮಂದಿ ಗಾಯಗೊಂಡಿದ್ದಾರೆಂದು ತಿಳಿದು ಬಂದಿದೆ.

ಬ್ರೇಕ್ ಇನ್‌ಸ್ಪೆಕ್ಟರ್‌ಗಳ ಅಳಲು: ಪ್ರತೀ ದಿನ ಆರ್‌ಟಿಓ ಕಚೇರಿ ಕೆಲಸಗಳ ಒತ್ತಡವೇ ಹೆಚ್ಚಾಗಿ ರಾತ್ರಿ ವೇಳೆಯೂ ಡ್ರಿಂಕ್ ಅಂಡ್ ಡ್ರೈವ್ ಕಾರ್ಯಾಚರಣೆ ನಡೆಸಿ ಎಂದರೆ ಹೇಗೆ ಎಂದು ಅಸಮಾಧಾನ ವ್ಯಕ್ತಪಡಿಸಿರುವ ಬ್ರೇಕ್ ಇನ್‌ಸ್ಪೆಕ್ಟರ್‌ಗಳು ನಮಗೆ ವಿಶ್ರಾಂತಿ, ನಿದ್ರೆ ಬೇಡವೇ ಎಂದು ಪ್ರಶ್ನಿಸುತ್ತಿದ್ದಾರೆ.



ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ 82ನೇ ಜನ್ಮದಿನೋತ್ಸವದ ಪ್ರಯುಕ್ತ ಹಮ್ಮಿಕೊಂಡಿದ್ದ ಶೋಭಾಯಾತ್ರೆಯಲ್ಲಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್ ಶ್ರೀವತ್ಸರವರು ಭಾಗವಹಿಸಿದ್ದರು. ಈ ವೇಳೆ ಗಣಪತಿ ಸಚ್ಚಿದಾನಂದ ಆಶ್ರಮದ ಕಿರಿಯ ಸ್ವಾಮೀಜಿ ಶ್ರೀ ದತ್ತ ವಿಜಯಾನಂದ ಸ್ವಾಮೀಜಿ, ನಗರಪಾಲಿಕೆ ಮಾಜಿ ಸದಸ್ಯ ಎಂ.ಡಿ ಪಾರ್ಥಸಾರಥಿ, ಬ್ರಾಹ್ಮಣ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಬಾಲಕೃಷ್ಣ, ಶ್ರೀ ರಾಮಚಂದ್ರಾಪುರ ಮಠದ ಮೈಸೂರು ವಲಯದ ಕಾರ್ಯದರ್ಶಿ ರಾಕೇಶ್ ಭಟ್, ರಾಮಾನುಜ ಸಹಕಾರ ಸಂಘದ ನಿರ್ದೇಶಕ ಟಿ.ಎಸ್.ಅರುಣ್, ಮುಖಂಡರಾದ ಟಿ.ಪಿ ಮಧುಸೂದನ್, ಕೆ.ಎಂ.ನಿಶಾಂತ್, ರಾಜ್ ಕುಮಾರ್, ಕಿಶೋರ್, ಮಂಜುನಾಥ್ ಇನ್ನಿತರರು ಉಪಸ್ಥಿತರಿದ್ದರು.

ವ್ಯಕ್ತಿ ನಾಪತ್ತೆ

ಮೈಸೂರು, ಮೇ 26(ಎಂಕೆ)– ಗಾರೆ ಕೆಲಸಕ್ಕೆ ತೆರಳಿದ್ದ ವ್ಯಕ್ತಿಯೊಬ್ಬರು ನಾಪತ್ತೆಯಾಗಿರುವ ಘಟನೆ ವಿದ್ಯಾರಣ್ಯಪುರಂ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.



ಮೈಸೂರಿನ ಜನತಾ ಕಾಲೋನಿ ನಿವಾಸಿ ಸ್ವಾಮಿ(56) ಕಾಣೆಯಾದವರಾಗಿದ್ದು, ಮೇ 23 ರಂದು ಎಂದಿನಂತೆ ಬೆಳಗ್ಗೆ 7.30ಕ್ಕೆ ಗಾರೆ ಕೆಲಸಕ್ಕೆ ಹೊರ ಹೋದವರು ಮತ್ತೆ ಮನೆಗೆ ವಾಪಸ್ಸಾಗಿಲ್ಲ. ಇವರ ಬಗ್ಗೆ ಮಾಹಿತಿ ಸಿಕ್ಕಲ್ಲಿ ದೂ.ಸಂ. 0821–2418322, ಮೊ.ನಂ. 9480802245, 9342112530, 8088348086 ಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ವಿದ್ಯಾರ್ಥಿಗಳು ಅಂಬೇಡ್ಕರ್ ಮಾರ್ಗದಲ್ಲಿ ಸಾಗುವ ಮೂಲಕ ಜ್ಞಾನಿಗಳಾಗಬೇಕು

ಪ್ರೊ. ಡಿ.ಆನಂದ್ ಸಲಹೆ



ಮೈಸೂರಿನ ವಿಜಯನಗರದ 3ನೇ ಹಂತದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಜ್ಞಾನೋತ್ಸವ–2024ರ ಕಾರ್ಯಕ್ರಮವನ್ನು ಬಿ.ಎನ್. ಬಹದ್ದೂರ್ ವಾಣಿಜ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ.ಡಿ. ಆನಂದ್ ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಉದ್ಘಾಟಿಸಿದರು

ಮೈಸೂರು, ಮೇ.26(ಎಂಟಿವೈ)– ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರು ಸಂಪಾದಿಸಿದ್ದ ಜ್ಞಾನವೇ ಶೋಷಿತರ ಪರ ಘರ್ಜಿಸಲು ಕಾರಣವಾಗಿದ್ದು, ವಿದ್ಯಾರ್ಥಿಗಳು ಅಂಬೇಡ್ಕರ್ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವ ಮೂಲಕ ಜ್ಞಾನಿಗಳಾಗಬೇಕು ಎಂದು ಬಿ.ಎನ್. ಬಹದ್ದೂರ್ ವಾಣಿಜ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ.ಡಿ. ಆನಂದ್ ಸಲಹೆ ನೀಡಿದ್ದಾರೆ.

ಮೈಸೂರಿನ ವಿಜಯನಗರದ 3ನೇ ಹಂತದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಜ್ಞಾನೋತ್ಸವ–2024ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾವು ಸಂಪಾದಿಸಿದ ಜ್ಞಾನದ ಸಂಪತ್ತಿನಿಂದಲೇ ಸಿಂಹದಂತೆ ಅಂಬೇಡ್ಕರ್ ಘರ್ಜಿಸುತ್ತಿದ್ದರು. ಅದಕ್ಕಾಗಿ ಅಂಬೇಡ್ಕರ್ ಹುಟ್ಟಿದ ದಿನವನ್ನು ಜ್ಞಾನದ ದಿನವಾಗಿ ವಿಶ್ವಸಂಸ್ಥೆ ಘೋಷಿಸಿದೆ. ಅಂಬೇಡ್ಕರ್ ವೈಜ್ಞಾನಿಕ ಚಿಂತನೆಯ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡರು. ಶೋಷಣೆಯ ಮೂಲ ದೌರ್ಬಲ್ಯವಾಗಿರುವುದರಿಂದ ನಿಮ್ಮ ನಿಮ್ಮ ದೌರ್ಬಲ್ಯಗಳನ್ನು ಗುರುತಿಸಿಕೊಳ್ಳುವಂತೆ ಸಲಹೆ ನೀಡಿದರು.

ಮೇಲ್ವರ್ಗದವರು ಜಾತಿ, ಧರ್ಮ, ಭಾಷೆಯ ಹೆಸರಿನಲ್ಲಿ ನಮ್ಮನ್ನು ಕಟ್ಟಿ ಹಾಕಿದ್ದರು. ಶಿಕ್ಷಣದಿಂದ ವಂಚಿತರನ್ನಾಗಿ ಮಾಡಿದ್ದರು. ಕೆಳವರ್ಗದವರಿಗೆ ಸಂಸ್ಕೃತ ಓದಲು ಬಿಡಲಿಲ್ಲ. ಶಾಲಾ ಕಾಲೇಜುಗಳಿಂದ ದೂರವಿಟ್ಟರು. ಇದನ್ನು ಅರಿತ ಅಂಬೇಡ್ಕರ್ ಸಮಾಜದಲ್ಲಿ ಬದಲಾವಣೆ ತರಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ ಎಂದು 35 ವರ್ಷ ಓದುವುದಕ್ಕೆ ಮೀಸಲಿಟ್ಟರು. ಆದ್ದರಿಂದ ವಿದ್ಯಾರ್ಥಿಗಳು ಚೆನ್ನಾಗಿ ಓದಬೇಕು. ಜ್ಞಾನಭಂಡಾರವನ್ನು ತುಂಬಿಸಿಕೊಳ್ಳಬೇಕು. ವಿಶಿಷ್ಟವಾದ ಗುಣಗಳನ್ನು ಬೆಳೆಸಿಕೊಳ್ಳಬೇಕು, ಚಿಂತನಾಶೀಲರಾಗಬೇಕು. ನಿಮ್ಮ ಉದ್ಧಾರ ನಿಮ್ಮಿಂದಲೇ ಆಗಬೇಕು. ಅಂಬೇಡ್ಕರ್ ವಿಚಾರಗಳನ್ನು ಹೆಚ್ಚಾಗಿ ಓದಿಕೊಳ್ಳಬೇಕು ಎಂದರು.

ಸಮಾರಂಭದಲ್ಲಿ ಡಾ. ಕೆ.ಎಲ್. ಚಂದ್ರಶೇಖರ್, ಐಜೂರು ಎಂ. ತಿಬ್ಬಯ್ಯ, ಸಹಾಯಕ ನಿರ್ದೇಶಕ ಕೆ. ಸಿದ್ದಲಿಂಗು ಮಾತನಾಡಿದರು. ನಿಲಯಪಾಲಕರಾದ ಕೆ.ಎ.ಎಸ್. ಪ್ರದೀಪ್, ಶಿವಮಲ್ಲಯ್ಯ, ಚಿಕ್ಕೀರಯ್ಯ, ರಾಜೇಶ್ವರಿ, ವಸಂತಕುಮಾರಿ, ಗಾಯತ್ರಿ, ಕಮಲಾಕ್ಷಿ, ಶಿವಪ್ಪ, ಮಹೇಶ್, ಕಾರ್ತಿಕ್, ಹುಯ್ಯಂಬಳ್ಳಿ ಚೇತನ್ ಹಾಜರಿದ್ದರು. ಈ ಸಂದರ್ಭದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಕರ್ನಾಟಕದಲ್ಲಿ ಬಿಹಾರ ಪರಿಸ್ಥಿತಿ ನಿರ್ಮಾಣವಾಗಿದೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ

ಮೈಸೂರು, ಮೇ26(ಬಿಎಲ್‌ಯು)– ಕರ್ನಾಟಕದಲ್ಲಿ ಪ್ರತಿದಿನ ಒಂದಲ್ಲ ಒಂದು ಅಪರಾಧ ಕೃತ್ಯ ನಡೆಯುತ್ತಿದ್ದು, ಕರ್ನಾಟಕ ಮತ್ತೊಂದು ಬಿಹಾರವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಪಾದಿಸಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಪ್ರತಿದಿನ ಕೊಲೆ, ಸುಲಿಗೆ, ಲವ್ ಜಿಹಾದ್ ನಂತಹ ಪ್ರಕರಣಗಳು ನಡೆಯುತ್ತಿರುವ ಕಾರಣ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಆಳ್ವಿಕೆ ನಡೆಸುತ್ತಿದ್ದಾರೆಯೇ ಎಂಬ ಅನುಮಾನ ಕಾಡಿದೆ ಎಂದರು.

ದಾವಣಗೆರೆಯ ಚೆನ್ನಗಿರಿಯಲ್ಲಿ ಪೊಲೀಸರ ಮೇಲೆ ಹಲ್ಲೆ ನಡೆಸಿ, ಪೊಲೀಸ್ ಠಾಣೆಯನ್ನೇ ಧ್ವಂಸ ಮಾಡಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆ ಯಾವ ರೀತಿ ಇದೆ ಎಂಬುವುದಕ್ಕೆ ಇದೇ ಸ್ಪಷ್ಟ ನಿದರ್ಶನ ಎಂದು ವಿಜಯೇಂದ್ರ ದೂರಿದರು.



ಅಪರಾಧ ಕೃತ್ಯ ನಡೆಯುತ್ತಿರುವ ಕಾರಣ ಕರ್ನಾಟಕದಲ್ಲಿ ಬಿಹಾರದ ಪರಿಸ್ಥಿತಿ ಬಂದಿದೆ ಇದು ಅಸಮರ್ಥ ಸರ್ಕಾರ ಎಂಬುವುದಕ್ಕೆ ಮತ್ತೇನು ಉದಾಹರಣೆ ಬೇಕು? ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ನಡೆಯುತ್ತಿರುವ ಶಿಕ್ಷಕ ಹಾಗೂ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಆರು ಕ್ಷೇತ್ರಗಳಲ್ಲಿ ಗೆಲ್ಲಲು ಎಲ್ಲಾ ತಯಾರಿ ಮಾಡಿಕೊಂಡಿದ್ದೇವೆ ಎಂದು ತಿಳಿಸಿದರು.

ತಕ್ಕ ಸಮಯದಲ್ಲಿ ತಕ್ಕ ಉತ್ತರ ನೀಡುತ್ತೇನೆ: ಸಂಸದ ಪ್ರತಾಪ್ ಸಿಂಹಗೆ ಟಿಕೆಟ್ ಕೈ ತಪ್ಪಲು ನಾನೇ ಕಾರಣ ಎಂಬ ಆರೋಪಕ್ಕೆ ತಕ್ಕ ಸಮಯದಲ್ಲಿ ಉತ್ತರ ನೀಡುತ್ತೇನೆ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು.

ಪ್ರತಾಪ್ ಸಿಂಹಗೆ ನಾನೇ ಟಿಕೆಟ್ ಕೈ ತಪ್ಪಿಸಿದೆ ಎಂದು ಆರೋಪಿಸುತ್ತಾರೆ. ಆದರೆ ಯಾರಿಗೆ, ಯಾವಾಗ, ಎಲ್ಲಿ, ಹೇಗೆ ಉತ್ತರ ಕೊಡ ಬೇಕೊ ಹಾಗೆ ಕೊಡುತ್ತೇನೆ ಎಂದರು.

ನಾನು ಬಿಜೆಪಿ ರಾಜ್ಯಾಧ್ಯಕ್ಷನಾದರೂ ಅಭ್ಯರ್ಥಿ ಆಯ್ಕೆ ವಿಚಾರ ಬಂದಾಗ ರಾಷ್ಟ್ರೀಯ ಅಧ್ಯಕ್ಷರು ಅಂತಿಮ ತೀರ್ಮಾನ ಕೈಗೊಳ್ಳುತ್ತಾರೆ. ಇದರಿಂದ ನನ್ನ ವಿರುದ್ಧ ಆರೋಪ ಎಷ್ಟು ಸರಿ ಎಂದು ವಿಜಯೇಂದ್ರ ಪ್ರಶ್ನಿಸಿದರು. ಆದರೆ ಪೆನ್ ಡ್ರೈವ್ ಪ್ರಕರಣ ಸಂಬಂಧ ಬೆಳವಣಿಗೆಗಳ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದರು.

ತರುವಾಯ ಮಾತನಾಡಿದ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ, ಪ್ರಜ್ವಲ್ ಪೆನ್ ಡ್ರೈವ್ ಪ್ರಕರಣದ ಬಗ್ಗೆ ಎಸ್‌ಐಟಿ ತನಿಖೆ ನಡೆಸುತ್ತಿದೆ. ಈ ಹಂತದಲ್ಲಿ ಯಾವುದೇ ಪ್ರತಿಕ್ರಿಯೆ ನೀಡವುದಿಲ್ಲ ಎಂದು ತಿಳಿಸಿದರು.

ಪ್ರಜ್ವಲ್‌ನನ್ನು ಹೆಚ್.ಡಿ.ದೇವೇಗೌಡರೆ ವಿದೇಶಕ್ಕೆ ಕಳುಹಿಸಿದ್ದಾರೆ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆಗೂ ಯಾವುದೇ ಪ್ರತಿಕ್ರಿಯೆ ನೀಡದ ಜಿ.ಟಿ.ದೇವೇಗೌಡರು, ತುಸಾ ಮದಿ ಬಂದ ನಂತರ ಈ ಬಗ್ಗೆಉತ್ತರ ನೀಡುತ್ತೇನೆ ಎಂದು ತಿಳಿಸಿದರು.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಭಾನುವಾರ	82.80 ಅಡಿ
ಒಳಹರಿವು	3405 ಕ್ಯೂಸೆಕ್
ಹೊರಹರಿವು	533 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಭಾನುವಾರ	2824.11 ಅಡಿ
ಒಳ ಹರಿವು	260 ಕ್ಯೂಸೆಕ್
ಹೊರ ಹರಿವು	200 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284.00 ಅಡಿ
ಭಾನುವಾರ	2260.46 ಅಡಿ
ಒಳ ಹರಿವು	1342 ಕ್ಯೂಸೆಕ್
ಹೊರ ಹರಿವು	300 ಕ್ಯೂಸೆಕ್

ಕಲುಷಿತ ನೀರು ಸೇವಿಸಿ ಯುವಕ ಸಾವು ಪ್ರಕರಣ

ಎಚ್ಚೆತ್ತ ಅಧಿಕಾರಿಗಳು; ಕುಡಿಯುವ ನೀರು ಪೂರೈಕೆ, ಸ್ವಚ್ಛತೆ ಬಗ್ಗೆ ಫುಲ್ ಅಲರ್ಟ್



ಮೈಸೂರು ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಅಧಿಕಾರಿಗಳೊಂದಿಗೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, ಕೊಳವೆ ಬಾವಿಗಳ ಸ್ಥಿತಿಗತಿ, ದುರಸ್ತಿ ಕಾಮಗಾರಿ ಪರಿಶೀಲಿಸಿದರು.

ಮೈಸೂರು, ಮೇ 26(ಎಸ್‌ಬಿಡಿ)– ಮೈಸೂರಿನಲ್ಲಿ ಕಲುಷಿತ ನೀರು ಸೇವಿಸಿ ಯುವಕ ಸಾವನ್ನಪ್ಪಿದ ವಿಚಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಖಡಕ್ ಎಚ್ಚರಿಕೆ ನೀಡಿದ್ದ ಹಿನ್ನೆಲೆಯಲ್ಲಿ ಅಧಿಕಾರಿಗಳು ಎಲ್ಲೆಡೆ ಸಂಚರಿಸಿ, ಕುಡಿಯುವ ನೀರು ಪೂರೈಕೆ ಬಗ್ಗೆ ತೀವ್ರ ನಿಗಾ ವಹಿಸಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯ್ತಿ ಸಿಇಓ ಕೆ.ಎಂ. ಗಾಯತ್ರಿ ಅವರು ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸ್ವಗ್ರಾಮ ಸಿದ್ದರಾಮನಹುಂಡಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಕೊಳವೆ ಬಾವಿಗಳ ಸ್ಥಿತಿಗತಿ, ನೈರ್ಮಲ್ಯ ನಿರ್ವಹಣೆ ಬಗ್ಗೆ ಮಾಹಿತಿ ಪಡೆದು, ನೀರು ಕಲುಷಿತಗೊಳ್ಳದಂತೆ ತುರ್ತು ಕ್ರಮ ವಹಿಸುವಂತೆ ಸೂಚನೆ ನೀಡಿದರು.

ತಿ.ನರಸೀಪುರ ತಾಲೂಕು ಗರ್ಗೇಶ್ವರಿ ಗ್ರಾಮದ ಕೊಳವೆ ಬಾವಿ(ಬೋರ್‌ವೆಲ್)ಗಳ ದುರಸ್ತಿ ಕಾಮಗಾರಿ ಪರಿಶೀಲಿಸಿದ ಸಿಇಓ, ಕೇಸಿಂಗ್ ಪೈಪ್ ಎತ್ತರಿಸಿ, ಕಾಂಕ್ರೀಟ್ ಪ್ಲೇಟ್ ಫಾರಂ ನಿರ್ಮಿಸಲು ಅಧಿಕಾರಿಗಳಿಗೆ ಸೂಚಿಸಿದರು. ಓವರ್‌ಹೆಡ್ ಟ್ಯಾಂಕ್ ಬಳಿ ಸ್ವಚ್ಛತೆ ಕಾಪಾಡಬೇಕು. ರೈಸಿಂಗ್ ಮೇನ್ ಪೈಪ್‌ಲೈನ್‌ನಲ್ಲಿ ಅಳವಡಿಸಿರುವ ಸಂಪರ್ಕಗಳನ್ನು ಕಡಿತಗೊಳಿಸಿ, ಬಹುಗ್ರಾಮ ಕುಡಿಯುವ ನೀರಿನ ಯೋಜನೆ ವಿನ್ಯಾಸದಂತೆ ನಿಗದಿತ ಒತ್ತಡದಲ್ಲಿ ನೀರು ಸರಬರಾಜು ಮಾಡಲು ಕ್ರಮ ವಹಿಸುವಂತೆ ತಿಳಿಸಿದರು.

ಕೀಳನಪುರ ಗ್ರಾಪಂ ವ್ಯಾಪ್ತಿಯ ಚಟ್ಟನಹಳ್ಳಿ ಹಾಗೂ ದುದ್ದಗೆರೆ ಗ್ರಾಮಗಳ ಬೋರ್‌ವೆಲ್ ದುರಸ್ತಿ ಕಾಮಗಾರಿ ಪರಿಶೀಲಿಸಿ, ಕೇಸಿಂಗ್ ಪೈಪ್ ಸುತ್ತ ಕಾಂಕ್ರೀಟ್ ಪ್ಲೇಟ್ ಫಾರಂ ನಿರ್ಮಿಸಿ, ಮಳೆ ನೀರು ಸರಾಗವಾಗಿ ಹರಿದು ಹೋಗಲು ಚರಂಡಿ ನಿರ್ಮಿಸಲು ಸೂಚಿಸಿದರು. ಯಡಕೊಳ ಗ್ರಾಪಂ ವ್ಯಾಪ್ತಿಯ ಸಿದ್ದರಾಮನಹುಂಡಿ, ವರುಣ ಗ್ರಾಮದ ಬೋರ್‌ವೆಲ್‌ಗಳ ದುರಸ್ತಿ ಕಾಮಗಾರಿ, ರಂಗನಾಥಪುರ ಗ್ರಾಮದ ಓವರ್‌ಹೆಡ್ ಟ್ಯಾಂಕ್ ಹಾಗೂ ಜಲ ಜೀವನ್ ಮಿಷನ್ ಕಾಮಗಾರಿ ಪರಿಶೀಲಿಸಿದರು. ನಂತರ ನಂಜನಗೂಡು ತಾಲೂಕು ಹೊಸಕೋಟೆ ಗ್ರಾಮದ ಕೊಳವೆ ಬಾವಿ ಹಾಗೂ ಚರಂಡಿ ಕಾಮಗಾರಿ ಪರಿಶೀಲಿಸಿ, ಶೀಘ್ರ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಈ ವೇಳೆ ಜಿಪಂ ಉಪ ಕಾರ್ಯದರ್ಶಿಗಳಾದ ನಾಗರಾಜ್, ರಂಜಿತ್‌ಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು, ತಾಲೂಕು ಆರೋಗ್ಯಾಧಿಕಾರಿಗಳು, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

ಸಭೆಯಲ್ಲಿ ಸಲಹೆ: ಜಿಪಂ ಸಿಇಓ ಗಾಯತ್ರಿ ಅವರು ವರುಣ ಗ್ರಾಪಂ ಕಚೇರಿಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಆರೋಗ್ಯ ಇಲಾಖೆ, ತಾಲೂಕು ಪಂಚಾಯ್ತಿ ಹಾಗೂ ಗ್ರಾಮ ಪಂಚಾಯ್ತಿ ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಸಭೆ ನಡೆಸಿ, ಸಾಂಕ್ರಾಮಿಕ ರೋಗ ಹರಡದಂತೆ ಮುನ್ನೆಚ್ಚರಿಕಾ ಕ್ರಮ ವಹಿಸುವಂತೆ ಸಲಹೆ ನೀಡಿದರು.

ಎಲ್ಲಾ ನೀರಿನ ಟ್ಯಾಂಕ್, ಬೋರ್‌ವೆಲ್‌ಗಳ ಸ್ವಚ್ಛತೆ ಹಾಗೂ ನೀರಿನ ಶುದ್ಧತೆ ಪರೀಕ್ಷೆ ನಿಯಮಿತವಾಗಿ ನಡೆಸಬೇಕು. ಪ್ರತಿಯೊಬ್ಬ ನೀರುಗಂಟಿಗಳಿಂದ ನೀರು ಸರಬರಾಜು ಮಾಡುವ ಅವಧಿ, ಸಂಪರ್ಕ ಪಡೆದಿರುವ ಮನೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿ, ನೀರಿನ ಶುದ್ಧತೆ ಪರೀಕ್ಷಿಸಿದ ನಂತರವೇ ಸರಬರಾಜು ಮಾಡಲು ಸೂಚಿಸಬೇಕು. ಆಶಾ ಕಾರ್ಯಕರ್ತೆಯರು ಪ್ರತಿದಿನ ಮನೆ ಮನೆಗೆ ಭೇಟಿ ನೀಡಿ, ಸಾಂಕ್ರಾಮಿಕ ರೋಗದ ಬಗ್ಗೆ ಅರಿವು ಮೂಡಿಸಿ, ಕುದಿಸಿ, ಆರಿಸಿದ ನೀರನ್ನೇ ಬಳಸುವಂತೆ ತಿಳುವಳಿಕೆ ನೀಡಬೇಕು. ತಾಲೂಕು ಮಟ್ಟದಲ್ಲಿ ಸಮಿತಿ ರಚಿಸಿ, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಕೃಷಿ ಸಖಿ, ಪಶು ಸಖಿ, ಆರೋಗ್ಯ ಇಲಾಖೆ ಹಾಗೂ ತಾಲೂಕು ಪಂಚಾಯ್ತಿ ಐಇಸಿ ಕಾರ್ಯಕರ್ತರು ಜಾಗೃತಿ ಕಾರ್ಯಕ್ರಮ ನಡೆಸಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಪ್ರದೀಪ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಮಹಮದ್ ಖಲೀಂ, ಪಿಡಿಓ ಕುಮಾರಾರಾಧ್ಯ ಮತ್ತಿತರರು ಭಾಗವಹಿಸಿದ್ದರು.

ನಕ್ಕರೆ ಅದೇ ಸ್ವರ್ಗ

ಮೇಷ್ಟ್ರು : 'ಯಾವ ಯಾವ ಕಾಲಕ್ಕೆ ಏನೆಲ್ಲಾ ಆಗ್ಬೇಕೋ, ಅದೆಲ್ಲಾ ಆಗ್ಲೇಬೇಕು' ಇದನ್ನು ಇಂಗ್ಲಿಷ್‌ನಲ್ಲಿ ಹೇಳು...

ಗುಂಡ : what what time what what happendo happende happendu...

ಮೈಸೂರು ಮಿತ್ರ
ಸೋಮವಾರ, 27 ಮೇ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ನರಕವೆಲ್ಲಾ ಖಾಲಿ ಇದೆ ಏಕೆಂದರೆ, ರಾಕ್ಷಸರೆಲ್ಲಾ ಭೂಮಿಯ ಮೇಲೇ ಇದ್ದಾರೆ...

ವೇದ ಸುಳ್ಳಾದರೂ { ಅನುಕೂಲ ಸಿಂಧು
ಗಾದೆ ಸುಳ್ಳಾಗದು { ಅಭಾವ ವೈರಾಗ್ಯ

ನಿಮ್ಮ ಪತ್ರಗಳು

ಈ ಜಾಗದಲ್ಲಿ ಆಸ್ಪತ್ರೆ ಇಲ್ಲವೆ ಉದ್ಯಾನವನ ನಿರ್ಮಿಸಲಿ




ಮಾನ್ಯರೆ,

ಮೈಸೂರು ತಾಲೂಕು, ಕಸಬಾ ಹೋಬಳಿ, ಬೋಗಾದಿ ಗ್ರಾಮದಲ್ಲಿರುವ ಸರ್ವೆ ನಂ.16/1ರಲ್ಲಿ 1 ಎಕರೆ 5 ಗುಂಟೆ ಜಮೀನು ಗ್ರಾಮಕ್ಕೆ ಸೇರಿದ ಸ್ವತ್ತಾಗಿದ್ದು, ಸದರಿ ಸ್ವತ್ತು ಗ್ರಾಮದ ಮಧ್ಯಭಾಗದಲ್ಲಿದೆ. ಸುತ್ತಲೂ ನೂರಾರು ಮನೆಗಳಿವೆ. ಈ ಮನೆಗಳಲ್ಲಿ ವಯಸ್ಸಾದ ವೃದ್ಧರು, ಅನಾರೋಗ್ಯ ಪೀಡಿತರು, ಮಕ್ಕಳು ವಾಸ ಮಾಡುತ್ತಿದ್ದು, ಈ ಜಾಗವನ್ನು ತಿಪ್ಪೆ ಗುಂಡಿ ಮಾಡಿಕೊಂಡು ಸುತ್ತಲಿನ ಬಡಾವಣೆಗಳ ನಿವಾಸಿಗಳು ಹಾಗೂ ಗ್ರಾಮಸ್ಥರು ಬಂದು ಕಸ ಇನ್ನಿತರ ಕೊಳೆತ ಪದಾರ್ಥಗಳನ್ನು ಎಸೆದು, ಈ ಜಾಗವು ಅನಾರೋಗ್ಯ ಉಂಟು ಮಾಡಲು ಕಾರಣವಾಗಿದೆ.

ಈ ವಿಚಾರವಾಗಿ ಹಲವಾರು ಬಾರಿ ಸಂಬಂಧಪಟ್ಟ ಪಟ್ಟಣ ಪಂಚಾಯಿತಿ ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳಿಗೆ ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಸುತ್ತಮುತ್ತಲ ಗ್ರಾಮಸ್ಥರು ನೆಮ್ಮದಿಯ ಮತ್ತು ಆರೋಗ್ಯಕರ ಜೀವನ ನಡೆಸುವುದು ಕಷ್ಟವಾಗಿದೆ. ಸದರಿ ಜಾಗಕ್ಕೆ ಕೆಲವು ಪಟ್ಟಭದ್ರ ಹಿತಾಸಕ್ತಿಯುಳ್ಳ ವ್ಯಕ್ತಿಗಳು ಕೆಲವು ಅಧಿಕಾರಿಗಳ ಜೊತೆ ಶಾಮೀಲಾಗಿ ಅಕ್ರಮವಾಗಿ ಖಾತೆ ಮಾಡಿಸಿ ಮಾರಾಟ ಮಾಡುವ ಹುನ್ನಾರ ನಡೆಸುತ್ತಿದ್ದಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈ ಜಾಗದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತಹ ಆಸ್ಪತ್ರೆ, ಉದ್ಯಾನವನ ನಿರ್ಮಿಸಬೇಕೆಂದು ಈ ಮೂಲಕ ಮನವಿ. – **ಬೋಗಾದಿ ಗ್ರಾಮಸ್ಥರು, ಮೈಸೂರು.**

ತುರ್ತಾಗಿ ಸಿಗ್ನಲ್ ದೀಪ ಅಳವಡಿಸಿ



ಮಾನ್ಯರೆ,

ಮೈಸೂರಿನ ರಿಂಗ್ ರೋಡಿನಲ್ಲಿ ಎಸ್.ವಿ. ರೀಜೆನ್ಸಿ ಅಪಾರ್ಟ್‌ಮೆಂಟ್ ಜಂಕ್ಷನ್‌ನಲ್ಲಿ ಬೆಳಗ್ಗೆ ಮತ್ತು ಸಂಜೆ ವಿಪರೀತ ವಾಹನ ದಟ್ಟಣೆಯಿಂದ ಕೂಡಿರುತ್ತದೆ. ಇದು 8 ರಸ್ತೆಗಳು ಕೂಡುವ ಕೇಂದ್ರವಾಗಿದ್ದು, ಸಾರ್ವಜನಿಕರು, ವೃದ್ಧಾಪ್ಯರು, ಶಾಲಾ ಕಾಲೇಜು ವಿದ್ಯಾರ್ಥಿಗಳು ರಸ್ತೆ ದಾಟಲು ಪರದಾಡುವ ಸ್ಥಿತಿ ಉಂಟಾಗಿದೆ. ಇಲ್ಲಿ ಸಿಗ್ನಲ್ ದೀಪದ ವ್ಯವಸ್ಥೆಯು ಅತೀ ಅತ್ಯಾವಶ್ಯಕವಾಗಿದೆ. ವಾಹನ ದಟ್ಟಣೆಯನ್ನು ಸಂದರ್ಭಯೋಚಿತ ಲಗತ್ತಿಸಿರುವ ಛಾಯಾಚಿತ್ರಗಳಲ್ಲಿ ಗಮನಿಸಬಹುದು. ಆದುದರಿಂದ ಸಂಬಂಧಿಸಿದ ಪ್ರಾಧಿಕಾರವು ತುರ್ತಾಗಿ ಈ ಜಂಕ್ಷನ್‌ನಲ್ಲಿ ಸಿಗ್ನಲ್ ದೀಪವನ್ನು ಅಳವಡಿಸಬೇಕಾಗಿ ಈ ಮೂಲಕ ಮನವಿ.

–ಎಸ್.ವಿ.ರೀಜೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಮೈಸೂರು.

ರೇವ್ ಪಾರ್ಟಿಗಳಿಗೆ ಬೀಳಬೇಕಿದೆ ಬೀಗ!

ಮಾನ್ಯರೆ,

ಉದ್ಯಾನನಗರಿ, ಸಿಲಿಕಾನ್ ಸಿಟಿ ಅಂತೆಲ್ಲ ಕರೆಸಿಕೊಂಡಿರುವ ಬೆಂಗಳೂರು ವಿಶ್ವದ ಪ್ರಮುಖ ನಗರಗಳಲ್ಲಿ ಒಂದು. ಅದರಲ್ಲೂ ಯುವ ಜನರ, ಉದ್ಯಮಿಗಳ ನೆಚ್ಚಿನ ತಾಣ ಬೆಂಗಳೂರು ಎಂದರೆ ತಪ್ಪಾಗಲಾರದು. ಬಹುತೇಕ ಬೇರೆ ರಾಜ್ಯಗಳು ವಿದೇಶಗಳಿಂದ ಬಂದ ಜನರ ಹಾಟ್‌ಸ್ಪಾಟ್ ಆಗಿರೋ ಬೆಂಗಳೂರಲ್ಲಿ ಆಧುನಿಕ ಜೀವನ ಶೈಲಿ ಬಲವಾಗಿ ಬೇರೂರುತ್ತಿದೆ.

ಆಧುನಿಕತೆಯ ಹೆಸರಲ್ಲಿ ರೇವ್ ಪಾರ್ಟಿಯಂಥ ಕಾನೂನುಬಾಹಿರ ಚಟುವಟಿಕೆಗಳು ಯಥೇಚ್ಛವಾಗಿ ನಡೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಕೆಲ ಸ್ಟಾರ್ ಹೋಟೆಲ್‌ಗಳಲ್ಲಿ, ಫಾರ್ಮ್ ಹೌಸ್‌ಗಳಲ್ಲಿ ವಾರಾಂತ್ಯದಲ್ಲಷ್ಟೇ ಅಲ್ಲ, ವಾರದ ದಿನಗಳಲ್ಲೂ ಡ್ರಗ್ಸ್ ಪಾರ್ಟಿಗಳು, ರೇವ್ ಪಾರ್ಟಿಗಳು ನಡೆಯುತ್ತವೆ ಎನ್ನುವುದೇನು ಗುಟ್ಟಾಗಿಲ್ಲ. ಪಾರ್ಟಿ ಹೆಸರಿನಲ್ಲಿ ಮೋಜು ಮಸ್ತಿ ಹಾಗೂ ಅನೈತಿಕ ಚಟುವಟಿಕೆಗಳು ಎಗ್ಗಿಲ್ಲದೆ ನಡೆಯುತ್ತಿರುವುದು ದುರದೃಷ್ಟಕರ.

ಇತ್ತೀಚಿನ ದಿನಗಳಲ್ಲಿ ನಮ್ಮ ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲಿ "ಪಾರ್ಟಿ ಸಂಸ್ಕೃತಿ" ಅಗಾಧವಾಗಿ ಬೆಳೆಯುತ್ತಿದೆ. ಸಂದರ್ಭ ಏನೇ ಇರಲಿ, ಯುವಜನತೆ ಅದನ್ನು ವಿಜೃಂಭಣೆಯಿಂದ ಆಚರಿಸಲು ಆಸಕ್ತಿ ತೋರಿಸುತ್ತಿದ್ದಾರೆ. ಆದರಲ್ಲೂ ಕೆಲ ಸಿರಿವಂತರು ಪಾರ್ಟಿಗಳಿಗೆ ದಾಸರಾಗುತ್ತಿದ್ದಾರೆ ಎಂದರೆ ಅತಿಶಯೋಕ್ತಿಯಾಗಲಾರದು. ರೇವ್ ಪಾರ್ಟಿಗಳು ಸಾಮಾನ್ಯವಾಗಿ ಡ್ರಗ್ಸ್, ಆಲ್ಕೋಹಾಲ್, ಲೈಂಗಿಕತೆ, ನೃತ್ಯ ಮತ್ತು ಸಂಗೀತವನ್ನು ಒಳಗೊಂಡಿರುವ ಭೂಗತ ಪಾರ್ಟಿಯೇ ಆಗಿದ್ದು, ಇದರಿಂದ ನಮ್ಮ ಯುವಜನತೆ ಹಾದಿ ತಪ್ಪುತ್ತಿದ್ದಾರೆ. ಕ್ಷಣಿಕ ಸುಖ ಹಾಗೂ ಮತ್ತಿನಾಸೆಗೆ ಜೋತುಬಿದ್ದಿರುವ ಕೆಲ ಯುವಸಮೂಹ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿರುವುದು ತರವಲ್ಲ. ಕಾನೂನುಬಾಹಿರ ಚಟುವಟಿಕೆಯಾದ ಈ ರೀತಿಯ ಪಾರ್ಟಿ ಸಂಸ್ಕೃತಿಯಿಂದ ಯುವ ಜನರು ಹಾಗೂ ಕೆಲ ಸೆಲೆಬ್ರಿಟಿಗಳು ಇದಕ್ಕೆ ದಾಸರಾಗದೆ ಇದರಿಂದ ಹೊರಬರಬೇಕಿದೆ. ಸರ್ಕಾರ ಕೂಡ ಇನ್ಮುಂದೆ ಈ ರೀತಿಯ ಅಸಹ್ಯಕರ ಪಾರ್ಟಿಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಿ, ಸೂಕ್ತ ಬಿಗಿ ಕಾನೂನು ಕ್ರಮಗಳನ್ನು ಜಾರಿಗೆ ತರಬೇಕಿದೆ.

– ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.



ಜಿ. ಎಲ್. ತ್ರಿಪುರಾಂತಕ
ಮೊ: 96866–77284

ಬೆರಗು

ಗಾಳಿ ಒಳ್ಳೆಯದು; ಗಾಳಿ ಮಾತಲ್ಲ!

ಮನುಷ್ಯನಿಗೆ ಮಾತೆಂಬುದು ವರವೂ ಹೌದು, ಶಾಪವೂ ಹೌದು. 'ಮಾತೆಂಬುದು ಜ್ಯೋತಿರ್ಲಿಂಗ' ಎಂದು ಪ್ರಸಿದ್ಧ ವಚನಕಾರರಾದ ಅಲ್ಲಮ ಪ್ರಭು ಹೇಳಿದರೆ, 'ನುಡಿದರೆ ಮುತ್ತಿನ ಹಾರದಂತಿರಬೇಕು' ಎಂದು ವಚನಕಾರರಾದ ಬಸವೇಶ್ವರರು ಹೇಳಿದ್ದಾರೆ. ಮನುಷ್ಯ ಹುಟ್ಟಿದ ಐದೇ ವರ್ಷಗಳಲ್ಲಿ ಮಾತನಾಡುವುದನ್ನು ಕಲಿತರೂ, ಏನು ಮಾತನಾಡಬೇಕು, ಹೇಗೆ ಮಾತನಾಡಬೇಕು ಎಂಬುದನ್ನು ಸಾಯುವವರೆವಿಗೂ ಕಲಿಯುವುದಿಲ್ಲ ಎಂದು ಮಹನೀಯರೊಬ್ಬರು ಹೇಳಿದ್ದಾರೆ. ಮನುಷ್ಯನ ಮಾತಿನಿಂದ ಒಳಿತು ಎಷ್ಟಾಗುತ್ತದೆಯೋ ಅಷ್ಟೇ ಕೆಡಕು ಆಗುತ್ತಿದೆ. ನೇರವಾಗಿ ಆಡಿದ ಮಾತಿನಿಂದ ಆಗುವ ಅನಾಹುತಕ್ಕಿಂತ ಗಾಳಿ ಮಾತಿನಿಂದ ಆದ ಅನಾಹುತಗಳೇ ಹೆಚ್ಚು. ಗಾಳಿ ಮಾತು ಎಂಬುದು ಜನರ ಬದುಕಿನಲ್ಲಿ ತಂಗಾಳಿಯನ್ನು ಬೀಸಿದ್ದಕ್ಕಿಂತ ಬಿರುಗಾಳಿಯನ್ನು ಎಬ್ಬಿಸಿದ್ದೇ ಹೆಚ್ಚು. ಕೆಲವರಿಗೆ ಗಾಳಿ ಕೊರತೆಯಾದರೂ ಬದುಕಿಯಾರು, ಆದರೆ ಗಾಳಿಸುದ್ದಿ ಇಲ್ಲದೆ ಬದುಕಲು ಆಗದಷ್ಟು ದುಷ್ಟ ಬುದ್ಧಿಯನ್ನು ಬೆಳೆಸಿಕೊಂಡಿರುತ್ತಾರೆ.

ಗಾಳಿ ಮಾತನ್ನು ಹರಡುವ ಚಾಳಿ ಕೆಲವರಿಗೆ ಇದ್ದರೆ, ಅದನ್ನೇ ಕೇಳಿ ಕೆರಳುವ ದೌರ್ಬಲ್ಯ ಮತ್ತೆ ಕೆಲವರಿಗೆ ಇರುತ್ತದೆ. ಬಾಯಿಂದ ಬಾಯಿಗೆ ಮಾತು ಹರಡುತ್ತಾ, ತನ್ನ ಮೂಲ ಸ್ವರೂಪ ಹಾಗೂ ಅರ್ಥವನ್ನು ಕಳೆದುಕೊಂಡು, ಬೇರೆಯದೇ ರೂಪ ಪಡೆದು, ಕೇಳಿದವರು ಅರ್ಥ ಮಾಡಿಕೊಳ್ಳುವುದಕ್ಕಿಂತ ಅಪಾರ್ಥ ಮಾಡಿಕೊಂಡಿದ್ದೇ ಹೆಚ್ಚು. ಅನೇಕ ಸಣ್ಣ ಮನಸ್ಸಿನ ಜನ ತಮ್ಮ ಸ್ವಾರ್ಥ ಸಾಧನೆಗೆ ಇಬ್ಬರು ಒಳ್ಳೆಯ ಮಿತ್ರರ ನಡುವೆ ಸಣ್ಣದೊಂದು ಸಲ್ಲದ ಮಾತನ್ನು ಹರಿಯಬಿಟ್ಟು ಆಜನ್ಮ ವೈರಿಗಳಂತೆ ಆಗಬಿಡಲು ಕಾರಣವಾಗಿ ಬಿಡುತ್ತಾರೆ. ಗಾಳಿ ಮಾತನ್ನು ಕೇಳಿದ ಜನ ಅದನ್ನು ಖಾತ್ರಿಪಡಿಸಿಕೊಳ್ಳಲು ಮುಂದಾಗದೇ ದ್ವೇಷ ಸಾಧಿಸಲು ಮುಂದಾಗುವುದು ಮೂರ್ಖತನವಾಗುತ್ತದೆ.

ಒಬ್ಬರ ಅನುಪಸ್ಥಿತಿಯಲ್ಲಿ ಅವರ ಬಗ್ಗೆ ಇರುವ ಪ್ರೀತಿಯನ್ನಾಗಲಿ, ಆಕ್ರೋಶವನ್ನಾಗಲಿ ವ್ಯಕ್ತಪಡಿಸುವುದು ಮನುಷ್ಯ ಸಹಜಗುಣ. ಅದನ್ನು ಸೂಕ್ಷ್ಮವಾಗಿ ಗಮನಿಸುವ ವಿಕೃತಿಯ ಜನ ಅಥವಾ ಪೂರ್ವಗ್ರಹಪೀಡಿತ ಜನ ಅದಕ್ಕೆ ಉಪ್ಪು ಖಾರ ಸೇರಿಸಿ, ಅಥವಾ ಬೇಕಾದ ಭಾಗವನ್ನು ವೀಡಿಯೋ ಅಥವಾ ಆಡಿಯೋ ರೆಕಾರ್ಡ್ ಮಾಡಿ ಸಂಬಂಧಪಟ್ಟವರಿಗೆ ಅದನ್ನು ರವಾನಿಸಿ ಒಂದು ರೀತಿಯ ವಿಕೃತಾನಂದವನ್ನು ಅನುಭವಿಸುತ್ತಾರೆ. ಉತ್ತಮ ಬಾಂಧವ್ಯ ಇರುವ ಇಬ್ಬರ ಗೆಳೆತನವನ್ನು ಸಹಿಸದ ಜನ ಈ ರೀತಿಯ ಇಬ್ಬರ ನಡುವೆ ತಂದಿಡುವ ಕೆಲಸವನ್ನು ಮಾಡುತ್ತಾರೆ.

ತನ್ನ ಪರಿಸ್ಥಿತಿ ಚೆನ್ನಾಗಿಲ್ಲದಿದ್ದಾಗ, ಇತರರ ಪರಿಸ್ಥಿತಿ ಚೆನ್ನಾಗಿ ಇದ್ದಾಗ ಸಹಿಸುವ ಸಹಿಷ್ಣುತೆ ಅನೇಕರಿಗೆ ಇರುವುದಿಲ್ಲ. ತಮ್ಮ ಹಾಗೆ ಕೆಟ್ಟ ಪರಿಸ್ಥಿತಿಯನ್ನು ಅನ್ಯರೂ ಅನುಭವಿಸಲಿ ಎಂದು ಆಶಿಸುತ್ತಾರೆ. ಆ ಕಾರಣಕ್ಕೆ ಸದಾ ಒಂದಿಲ್ಲೊಂದು ಕುಯುಕ್ತಿ ಮಾಡುತ್ತಲೇ ಇರುತ್ತಾರೆ. ಇವರು ವಿಘ್ನ ಸಂತೋಷಿಗಳಾಗಿ, ವಿಕೃತಾನಂದಿಗಳಾಗಿ ಬದಲಾಗಿಬಿಡುತ್ತಾರೆ. ಅವರಿಗೆ ಅದರಿಂದ ಏನೂ ಲಾಭವಿಲ್ಲದಿದ್ದರೂ ತೊಂದರೆ ಕೊಡುವದನ್ನು ಮಾತ್ರ ನಿಲ್ಲಿಸುವುದಿಲ್ಲ. ಅವರ ಹತ್ತಿರದವರು ಅವರಿಗೆ ಏನೂ ತ್ರಾಸು ಮಾಡದಿದ್ದರೂ, ಅವರು ಚೆನ್ನಾಗಿ ಇರುವುದನ್ನು ಸಹಿಸದೆ ಏನಾದರೂ ಹುಟ್ಟಿಹಾಕಿ ಗಾಳಿಸುದ್ದಿ ಹರಡಿ ಅದರಿಂದ ಆಗುವ ದುಷ್ಪರಿಣಾಮಗಳನ್ನು ಕಂಡು ಸಂತೋಷಪಡುತ್ತಿರುತ್ತಾರೆ.

ಕೆಲವರಿಗೆ ಆಹಾರದಲ್ಲಿ ಮದ್ದು ಹಾಕುವ ಚಾಳಿ ಇರುತ್ತದೆ. ಮದ್ದು ಎಂದರೆ ಇಲ್ಲಿ ಔಷಧವಲ್ಲ, ಅದೊಂದು ರೀತಿಯ ನಿಧಾನ ವಿಷ. ಗ್ರಾಮೀಣ ಭಾಗದಲ್ಲಿ ಈ ಅನಿಷ್ಟ ಪದ್ಧತಿ ಇಂದಿಗೂ ರೂಢಿಯಲ್ಲಿದೆ. ತಮಗೆ ಆತ್ಮೀಯರಾದ ಕುಟುಂಬದ ಸದಸ್ಯರಿಗೆ, ಮಕ್ಕಳಿಗೂ ಮದ್ದು ಹಾಕುತ್ತಾರೆ. ಕೆಲವರು ತಿನ್ನುವ ಅನ್ನಕ್ಕೆ ಮದ್ದು ಹಾಕಿದರೆ, ಅದನ್ನು ದೇಹದಿಂದ ತೆಗೆಯಿಸಬಹುದು. ಮತ್ತೆ ಕೆಲವರು ಆಡುವ ಮಾತಿನಲ್ಲಿ ಮದ್ದು ಹಾಕಿ ಸುಮ್ಮನಾಗಿಬಿಡುತ್ತಾರೆ, ಅದನ್ನು ತೆಗೆಯಿಸಲು ಆಗದು. ಅದರಿಂದ ಆಗುವ ಅನಾಹುತದ ಊಹೆಯನ್ನು ಸಹ ಮಾಡಿರುವುದಿಲ್ಲ. 'ಮಾತೆ ಮುತ್ತು, ಮಾತೆ ಮೃತ್ಯು' ಎಂಬ ಮಾತಿನಂತೆ ಅನೇಕ ಮಾನವಂತರು ಅನ್ಯರಿಗೆ ಯಾವುದೇ ಕೇಡು ಬಯಸದಿದ್ದರೂ, ಕಿಡಿಗೇಡಿಗಳು ಅಂತಹ ದೊಡ್ಡವರಿಗೆ ಅಪಚಾರವಾಗುವಂತಹ ಕೀಳುಮಟ್ಟದ ಗಾಳಿಸುದ್ದಿ ಹಬ್ಬಿಸಿ ಅವರ ಜಂಘಾಬಲವೇ ಹುದುಗಿ ಹೋಗಿವಂತೆ ಮಾಡಿ ಬಿಡುತ್ತಾರೆ. ಕೆಲವರಂತೂ ಸಾಮಾಜಿಕ ಜಾಲತಾಣಗಳು ಇರುವುದು ಗಾಳಿಸುದ್ದಿ ಹರಡಲು ಎಂದು ಭಾವಿಸಿದಂತಿದೆ.

ಇಂದಿನ ಮಾಹಿತಿ ತಂತ್ರಜ್ಞಾನ ಯುಗದಲ್ಲಿ ಬಹುತೇಕರಿಗೆ ಕೀಳುಮಟ್ಟದ ಸುದ್ದಿಗಳನ್ನು ಕೇಳಿ ಆನಂದಿಸುವ ಚಾಳಿ ಇರುತ್ತದೆ. ತಮ್ಮದೇ ರಸ್ತೆಯ ಪರಿಚಿತರ ಮನೆಯೊಂದರ ಹುಡುಗಿ ಕಾಲೇಜಿನಲ್ಲಿ ರ್‍ಯಾಂಕ್ ತೆಗೆದುಕೊಂಡಿರುತ್ತಾಳೆ, ಅದು ದಿನಪತ್ರಿಕೆಗಳಲ್ಲಿ ಪ್ರಕಟವಾಗಿರುತ್ತದೆ. ಅದರ ಬಗ್ಗೆ ಯಾರೂ ಚರ್ಚಿಸುವುದಿಲ್ಲ. ಆ ವಿಚಾರವನ್ನು ನಾಲ್ಕು ಜನರಿಗೆ ತಿಳಿಸುವ ಹೃದಯವಂತಿಕೆಯನ್ನು ಹೊಂದಿರುವುದಿಲ್ಲ. ಹಾಗೆಯೇ ಆಕೆಗೆ ಅಭಿನಂದನೆಯನ್ನು ಸಲ್ಲಿಸುವುದು ಊಹೆಯ ಮಾತು. ಆದರೆ ತಮ್ಮ ಮನೆಯಿಂದ ನಾಲ್ಕು ರಸ್ತೆಯ ಆಚೆ ತಮಗೆ ಪರಿಚಯವಿಲ್ಲದವರ ಹುಡುಗಿ ಒಬ್ಬಳು ಯಾರೋ ಹುಡುಗನೊಂದಿಗೆ ಓಡಿಹೋದಳು ಎಂಬ ಸುದ್ದಿಯು ಅವಳು ಓಡಿ ಹೋದ ವೇಗಕ್ಕಿಂತಲೂ ಬೇಗ ಇಡೀ ಬಡಾವಣೆಗೆ ಹಬ್ಬಿರುತ್ತದೆ. ಯಾವ ಸುದ್ದಿ ಚಾನೆಲ್‌ಗೂ ಕಡಿಮೆ ಇಲ್ಲದಂತೆ ಒಂದು ನೆಟ್‌ವರ್ಕ್ ಕೆಲಸ ಮಾಡುತ್ತಿರುತ್ತದೆ. ಗಾಳಿ ಸುದ್ದಿಯು ಗಾಳಿಗಿಂತಲೂ ವೇಗವಾಗಿ ದಶ ದಿಕ್ಕುಗಳಿಗೂ ಹರಡುತ್ತದೆ ಎಂದರೆ ಅತಿಶಯೋಕ್ತಿಯಲ್ಲ.

'ಸತ್ಯವ ನುಡಿವುದೆ ದೇವಲೋಕ, ಮಿಥ್ಯವ ನುಡಿವುದೆ ಮರ್ತ್ಯಲೋಕ, ಆಚಾರವೇ ಸ್ವರ್ಗ, ಅನಾಚಾರವೇ ನರಕ' ಎಂದು ಬಸವೇಶ್ವರರು ವಚನವೊಂದರಲ್ಲಿ ಹೇಳಿದ್ದಾರೆ. ಈ ಭೂಲೋಕದಲ್ಲಿ ಕೆಲವರಿಗೆ ಸುಳ್ಳು ಮಾತುಗಳನ್ನು ಹೇಳುವುದು, ಕೇಳವುದೇ ಪ್ರಿಯ, ಸತ್ಯ ಅಪ್ರಿಯ. ಏಕೆಂದರೆ ಸತ್ಯ ಕಹಿಯಾಗಿರುತ್ತದೆ. ಅನೇಕರಿಗೆ ಸತ್ಯವನ್ನು ಅರಿಗಿಸಿಕೊಳ್ಳಲು ಸಾಧ್ಯವೇ ಆಗುವುದಿಲ್ಲ. ಆದರೆ ಸುಳ್ಳನ್ನು ಸರಾಗವಾಗಿ ನಂಬುತ್ತಾರೆ. ಹಾಗೆಯೇ ಹಬ್ಬಿಸುತ್ತಾರೆ ಕೂಡ. ಅನೇಕರು ಗಾಳಿಸುದ್ದಿಗೆ ಪ್ರತಿಕ್ರಿಯಿಸುವಷ್ಟು ಬೇಗ ಸತ್ಯ ಶುದ್ಧ ಸುದ್ದಿಗೆ ಪ್ರತಿಕ್ರಿಯಿಸುವುದಿಲ್ಲ. ಒಬ್ಬರು ಒಂದೊಳ್ಳೆ ವಿಚಾರವನ್ನು ಹೇಳಿದಾಗ ಅದನ್ನು ನಂಬದೇ ಅನೇಕ ಮರುಪ್ರಶ್ನೆ ಮಾಡುತ್ತಾರೆ. ಆದರೆ ಗಾಳಿಸುದ್ದಿಯನ್ನು ಯಾವುದೇ ಪುರಾವೆ ಇಲ್ಲದೆ ನಂಬಿ, ಅಷ್ಟೇ ಅಲ್ಲದೆ ಅದಕ್ಕೆ ಮತ್ತಷ್ಟು ರೆಕ್ಕೆಪುಕ್ಕ ಕಟ್ಟಿ ತಮ್ಮ ಹಿತೈಷಿಗಳಿಗೆ ಹರಿಯಬಿಡುತ್ತಾರೆ. ಅವರು ಮತ್ತಷ್ಟು ಸೇರಿಸಿ ಸಣ್ಣ ಗುಡ್ಡವನ್ನು ದೊಡ್ಡ ಬೆಟ್ಟ ಮಾಡಿಬಿಡುತ್ತಾರೆ.

ಈ ಗಾಳಿ ಸುದ್ದಿ ಹರಡುವವರು ಅವಿದ್ಯಾವಂತರು, ಅವಿವೇಕಿಗಳು ಎಂದು ತಿಳಿಯಬೇಕಿಲ್ಲ. ಅನೇಕ ವಿದ್ಯಾವಂತ ಜನರೇ ಈ ಸಮೂಹ ಸನ್ನಿಗೆ ಒಳಗಾಗಿಬಿಟ್ಟಿರುತ್ತಾರೆ. ವಿವೇಚನೆ ಇಲ್ಲದೆ, ಯಾವುದೇ ಸಾಕ್ಷ್ಯಾಧಾರವಿಲ್ಲದೆ 'ಎತ್ತು ಈಯಿತು ಎಂದರೆ ಕೊಟ್ಟಿಗೆಗೆ ಕಟ್ಟು' ಎಂಬ ಗಾದೆ ಮಾತಿನಂತೆ ಗಾಳಿಸುದ್ದಿಯನ್ನು ಕುರುಡುಕುರುಡಾಗಿ ನಂಬಿ, ತಾವು ಕೆಡುವುದಲ್ಲದೆ ಮತ್ತಷ್ಟು ಜನರಿಗೆ ಅದನ್ನು ಹಬ್ಬಿಸಿ ತಮ್ಮ ನಾಲಿಗೆಯನ್ನೇ ಮೈಲಿಗೆ ಮಾಡಿಕೊಂಡುಬಿಡುತ್ತಾರೆ. ಅಸಹಾಯಕರ ಕೊನೆಯ ಅಸ್ತ್ರವೇ ಗಾಳಿ ಸುದ್ದಿಯನ್ನು ಹಬ್ಬಿಸುವುದಾಗಿರುತ್ತದೆ. ಕೆಲವರಿಗೆ ತಮ್ಮ ಮನೆಯ ವಿಚಾರಕ್ಕಿಂತ ಅನ್ಯರ ಮನೆಯ ವಿಚಾರ ಎಂದರೆ ಊಟದಲ್ಲಿ ಉಪ್ಪಿನಕಾಯಿ ಸವಿಯುವಂತೆ ಸವಿದು ಚಪ್ಪರಿಸುತ್ತಾರೆ. ಕೆಲವರು ಕಂಡದ್ದನ್ನು ಕಂಡ ಹಾಗೆ ಗ್ರಹಿಸಿದೆ ಊಹೆಗಳಿಂದ ಕಥೆ ಕಟ್ಟುವಕಲೆಯನ್ನು ರಕ್ತಗತ ಮಾಡಿಕೊಂಡಿರುತ್ತಾರೆ. ಯಾವುದೇ ನಾಚಿಕೆ, ಹೇಸಿಗೆ ಇಲ್ಲದೆ, ತಮ್ಮ ಸ್ಥಾನಮಾನದ ಘನತೆಯನ್ನೂ ಅರಿಯದೆ, ಅನ್ಯರ ಮಾನ ಹರಾಜು ಹಾಕಲು ಹಾತೊರೆಯುತ್ತಿರುತ್ತಾರೆ. ಕೆಲವರ ಬಾಯಿಯಲ್ಲಿ ಬರುವ ಗಾಳಿಸುದ್ದಿ ಮಾತುಗಳನ್ನು ಕೇಳಿದರೆ ಇವರೆಲ್ಲಾ ಶಿಕ್ಷಿತರಾ? ಇವರೆಲ್ಲಾ ವಿದ್ಯಾವಂತರಾ? ಪ್ರಜ್ಞಾವಂತರಾ? ಎಂಬ ಪ್ರಶ್ನೆ ಮೂಡುತ್ತದೆ.


ಅನೇಕರು ತಾವು ಗಾಜಿನ ಮನೆಯಲ್ಲಿ ವಾಸಿಸುತ್ತಾ, ಎದುರು ಮನೆಯ ಗಾಜಿನ ಮನೆಗೆ ಹಿಂದೆ ಮುಂದೆ ನೋಡದೆ ಕಲ್ಲು ಎಸೆಯುವ ಕಾಯಕವನ್ನು ಶ್ರದ್ಧೆಯಿಂದ ಮಾಡುತ್ತಿರುತ್ತಾರೆ. ಎದುರು ಮನೆ ಯವರ ಏಳಿಗೆಯನ್ನು ಸಹಿಸದೆ, ಹೊಟ್ಟೆಕಿಚ್ಚಿನಿಂದ ಇಲ್ಲಸಲ್ಲದ ಸುದ್ದಿಗಳನ್ನು ಹುಟ್ಟುಹಾಕಿ ಅನ್ಯರ ತೇಜೋ ವಧೆ ಮಾಡುವ ಕ್ಷುಲ್ಲಕ ಕೆಲವ ಮಾಡುತ್ತಿರುತ್ತಾರೆ. ಎಷ್ಟೋ ಬಾರಿ ಮನುಷ್ಯನಿಗೆ ಇರುವ ಈರ್ಷೆಯ ಪ್ರಮಾಣ ನೋಡಿದರೆ ಯಾವ ಪ್ರಾಣಿಯೂ ಮನುಷ್ಯನಷ್ಟು ಕೀಳಾಗಿ ಯೋಚಿಸದು ಎಂದೆನಿಸುತ್ತದೆ. 'ಪ್ರಾಣಿಗಳೇ ಗುಣದಲಿ ಮೇಲು, ಮಾನವನ ಕಿಂತ ಕೀಳು, ಉಪಕಾರವ ಮಾಡಲಾರ, ಬದುಕಿದರೆ ಸಹಿಸಲಾರ' ಎಂಬ ಡಾ.ರಾಜ್‌ಕುಮಾರ್ ಅವರು ಹಾಡಿರುವ, ಚಿ.ಉದಯ ಶಂಕರ್ ಅವರು ರಚಿಸಿರುವ ಹಾಡು ನೆನಪಿಗೆ ಬರುತ್ತದೆ.

ಗಾಳಿ ಸುದ್ದಿ ಹೇಳುವವರ ಚಾಳಿ ತಪ್ಪು ಎನ್ನುವುದಾದರೆ ಗಾಳಿ ಸುದ್ದಿ ಕೇಳುವ ಚಾಳಿಯೂ ತಪ್ಪೆ. ಗಾಳಿ ಸುದ್ದಿವಾಹಕರನ್ನು ಒಂದೆರಡು ಬಾರಿ ಕಡೆಗಣಿಸಿದರೆ ಅವರು ಮತ್ತೆ ಬಂದು ಹೇಳುವುದನ್ನು ನಿಲ್ಲಿಸುತ್ತಾರೆ. ಕೇಳಿಸಿಕೊಳ್ಳುವ ಕಿವಿ ಹಿತ್ತಾಳೆ ಎಂದು ತಿಳಿದರೆ ಇಲ್ಲಸಲ್ಲದ ಸಂಗತಿಗಳನ್ನು ಹೇಳಿ ಅವರ ಕಿವಿಗೆ ಹಿತವಾಗುವಂತೆ ಮಾಡಿಬಿಡುತ್ತಾರೆ.

'ಪ್ರತ್ಯಕ್ಷವಾಗಿಕಂಡರೂ ಪ್ರಮಾಣಿಸಿ ನೋಡು' ಎಂದು ಮಹಾತ್ಮರು ಹೇಳಿರುವ ಹಾಗೆ ನಡೆದುಕೊಂಡು, ಯಾರೋ ಹೇಳಿದ ಹೇಳಿಕೆ ಮಾತಿಗೆ ಮನ್ನಣೆ ನೀಡದೆ ನಿರ್ಲಕ್ಷ್ಯ ಮಾಡುವುದು ಒಳಿತು. ಉತ್ತಮವಾದ ಗಾಳಿ ಸೇವನೆ ದೇಹಕ್ಕೆ ಒಳ್ಳೆಯದು, ವಿಷಗಾಳಿ ಸೇವನೆ ದೇಹಕ್ಕೆ ಮಾರಕ. ಅದೇ ರೀತಿ ಮಾನಸಿಕ ಆರೋಗ್ಯಕ್ಕೆ ಒಳ್ಳೆಯ ಮಾತುಗಳನ್ನು ಆಲಿಸುವುದು ಅಗತ್ಯ. ಗಾಳಿ ಸುದ್ದಿ ಯಾವಾಗಲೂ ಅಶುದ್ಧಿಯೇ ಆಗಿರುವುದರಿಂದ ಅದು ಮಾನಸಿಕ ಸ್ವಾಸ್ಥ್ಯಕ್ಕೆ ಮಾರಕ. ಅಶುದ್ಧವಾದ ಗಾಳಿಯನ್ನು ಬೇಕಾದರೆ ಶುದ್ಧಿ ಮಾಡಬಹುದು. ಆದರೆ ಒಮ್ಮೆ ಗಾಳಿ ಸುದ್ದಿಯನ್ನು ಕೇಳಿದರೆ ಶುದ್ಧಿಯಾಗುವುದು ಕಷ್ಟ. ಅನೇಕ ಸ್ನೇಹ ಸಂಬಂಧಗಳು ಅಷ್ಟೇ ಅಲ್ಲದೆ ಮದುವೆ ಸಂಬಂಧಗಳು ಗಾಳಿ ಸುದ್ದಿಯಿಂದ ಮುರಿದು ಬಿದ್ದ ಉದಾಹರಣೆಗಳಿವೆ. ಹೊಟ್ಟೆಕಿಚ್ಚಿನಿಂದ ವರನ ಅಥವಾ ವಧುವಿನ ಬಗ್ಗೆ ಇಲ್ಲಸಲ್ಲದ ಸುದ್ದಿ ಸೃಷ್ಟಿಸಿ ಸಂಬಂಧಪಟ್ಟವರಿಗೆ ತಲುಪುವಂತೆ ಮಾಡಿ, ಅದರಿಂದ ಮದುವೆ ಏರ್ಪಾಡಾಗುವುದು ಮುರಿದು ಬಿದ್ದರೆ ಹಾಲು ಕುಡಿದಷ್ಟು ಸಂತೋಷ ಪಡುವಕೆಲವು ವಿಕೃತ ವಿದ್ಯಾವಂತ ಜನರು ಸಹ ಸಮಾಜದಲ್ಲಿ ಇದ್ದಾರೆ.

ಕೇಳಿದ ಎಷ್ಟೋ ಸುದ್ದಿಗಳು ಸತ್ಯವಾಗಿದ್ದರೂ, ಅದರಿಂದ ಕೆಲವರಿಗೆ ಕೆಡಕಾಗುತ್ತದೆ ಎಂದರೆ ಅದನ್ನು ರಹಸ್ಯವಾಗಿ ಇಟ್ಟುಕೊಳ್ಳುವುದು ದೊಡ್ಡತನ. ಮನುಷ್ಯ ಎಂದ ಮೇಲೆ ಕೆಲವೊಮ್ಮೆ ಅರಿವಿಲ್ಲದೆ ತಪ್ಪಾಗಿ ಬಿಡಬಹುದು, ಅನೇಕ ಸನ್ನಿವೇಶಗಳಲ್ಲಿ ಮಕ್ಕಳು ಮಾಡಿದ ತಪ್ಪಿಗೆ ಹೆತ್ತವರು ಶಿಕ್ಷೆ ಅನುಭವಿಸುತ್ತಿರುತ್ತಾರೆ. ವಿದ್ಯಾವಂತರಾಗಿ ಗಾಳಿಸುದ್ದಿ ಹಬ್ಬಿಸಿ ಅವಲಕ್ಷಣ ಎನಿಸಿಕೊಳ್ಳುವ ಬದಲು ಸೂಕ್ಷ್ಮಗಳನ್ನು ಅರಿತು ನಡೆಯುವುದು ವಿವೇಕವಂತರು ಎನಿಸಿಕೊಳ್ಳುವುದು ಮೇಲು.

ಪದತಾಂಬೂಲ: ಗಾಳಿ ಒಂದು ದಿಕ್ಕಿನಲ್ಲಿ ಸಂಚರಿಸಿದರೆ, ಗಾಳಿ ಮಾತು ನಾಲ್ಕು ದಿಕ್ಕಿಗೂ ವೇಗವಾಗಿ ಸಂಚರಿಸುತ್ತದೆ.



> **'ಪ್ರತ್ಯಕ್ಷವಾಗಿ ಕಂಡರೂ ಪ್ರಮಾಣಿಸಿ ನೋಡು' ಎಂದು ಮಹಾತ್ಮರು ಹೇಳಿರುವ ಹಾಗೆ ನಡೆದುಕೊಂಡು, ಯಾರೋ ಹೇಳಿದ ಹೇಳಿಕೆ ಮಾತಿಗೆ ಮನ್ನಣೆ ನೀಡದೆ ನಿರ್ಲಕ್ಷ್ಯ ಮಾಡುವುದು ಒಳಿತು. ಉತ್ತಮವಾದ ಗಾಳಿ ಸೇವನೆ ದೇಹಕ್ಕೆ ಒಳ್ಳೆಯದು, ವಿಷಗಾಳಿ ಸೇವನೆ ದೇಹಕ್ಕೆ ಮಾರಕ. ಅದೇ ರೀತಿ ಮಾನಸಿಕ ಆರೋಗ್ಯಕ್ಕೆ ಒಳ್ಳೆಯ ಮಾತುಗಳನ್ನು ಆಲಿಸುವುದು ಅಗತ್ಯ, ಗಾಳಿ ಸುದ್ದಿ ಯಾವಾಗಲೂ ಅಶುದ್ಧಿಯೇ ಆಗಿರುವುದರಿಂದ ಅದು ಮಾನಸಿಕ ಸ್ವಾಸ್ಥ್ಯಕ್ಕೆ ಮಾರಕ. ಅಶುದ್ಧವಾದ ಗಾಳಿಯನ್ನು ಬೇಕಾದರೆ ಶುದ್ಧಿ ಮಾಡಬಹುದು, ಆದರೆ ಒಮ್ಮೆ ಗಾಳಿ ಸುದ್ದಿಯನ್ನು ಕೇಳಿದರೆ ಶುದ್ಧಿ ಮಾಡುವುದು ಕಷ್ಟ. ಅನೇಕ ಸ್ನೇಹ ಸಂಬಂಧಗಳು ಅಷ್ಟೇ ಅಲ್ಲದೆ ಮದುವೆ ಸಂಬಂಧಗಳು ಗಾಳಿ ಸುದ್ದಿಯಿಂದ ಮುರಿದು ಬಿದ್ದ ಉದಾಹರಣೆಗಳಿವೆ. ಹೊಟ್ಟೆಕಿಚ್ಚಿನಿಂದ ವರನ ಅಥವಾ ವಧುವಿನ ಬಗ್ಗೆ ಇಲ್ಲಸಲ್ಲದ ಸುದ್ದಿ ಸೃಷ್ಟಿಸಿ ಸಂಬಂಧಪಟ್ಟವರಿಗೆ ತಲುಪುವಂತೆ ಮಾಡಿ, ಅದರಿಂದ ಮದುವೆ ಏರ್ಪಾಡಾಗುವುದು ಮುರಿದು ಬಿದ್ದರೆ ಹಾಲು ಕುಡಿದಷ್ಟು ಸಂತೋಷ ಪಡುವ ಕೆಲವು ವಿಕೃತ ವಿದ್ಯಾವಂತ ಜನರು ಸಹ ಸಮಾಜದಲ್ಲಿದ್ದಾರೆ.**

ಮಣಿಪಾಲ್ ಆಸ್ಪತ್ರೆಯಲ್ಲಿ ಹಿರಿಯ ನಾಗರಿಕರಿಗೆ 'ಸ್ಪೆಲ್ ಬೀ' ವಿಶೇಷ ಸ್ಪರ್ಧೆ

ಮೈಸೂರು, ಮೇ 26(ಎಸ್‌ಬಿಡಿ)– ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಭಾನುವಾರ ಹಿರಿಯ ನಾಗರಿಕರಿಗೆ 'ಸ್ಪೆಲ್ ಬೀ' ವಿಶೇಷ ಸ್ಪರ್ಧೆ ಏರ್ಪಡಿಸಲಾಗಿತ್ತು.

ಇತ್ತೀಚಿನ ವರ್ಷಗಳಲ್ಲಿ 60 ವರ್ಷ ಮೇಲ್ಪಟ್ಟ ಶೇ.7.4 ರಷ್ಟು ಹಿರಿಯರು ಗಂಭೀರ ಲಕ್ಷಣಗಳುಳ್ಳ ಡಿಮೆನ್ಷಿಯಾ (Dementia)ನಂತಹ ಮೆದುಳಿಗೆ ಸಂಬಂಧಿಸಿದ ಕಾಯಿಲೆಯಿಂದ ಬಳಲುತ್ತಿದ್ದು, ಅದನ್ನು ತಡೆಗಟ್ಟಲು ಅಥವಾ ಅದರ ಪ್ರಭಾವವನ್ನು ತಗ್ಗಿಸಲು ಮಾನಸಿಕ ವ್ಯಾಯಾಮ ಅದರಲ್ಲೂ ವಿಶೇಷವಾಗಿ ಶಬ್ಧಕೋಶ ಮತ್ತು ಪದಬಂಧ ಆಟಗಳಂತಹ ಚಟುವಟಿಕೆಗಳು ಬಹಳ ಮುಖ್ಯ ಎಂದು ಹಲವು ವೈಜ್ಞಾನಿಕ ಸಂಶೋಧನೆಗಳಿಂದ ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಮಣಿಪಾಲ್ ಆಸ್ಪತ್ರೆಯಲ್ಲಿ ಆಯೋಜಿಸಿದ್ದ 'ಸ್ಪೆಲ್ ಬೀ' ಸ್ಪರ್ಧೆಯಲ್ಲಿ ಸುಮಾರು 150 ಹಿರಿಯ ನಾಗರಿಕರು ಭಾಗವಹಿಸಿ, ಮಾನಸಿಕ ಉತ್ತೇಜನದ ಅನುಭವ ಪಡೆದರು.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಟ್ರೋಫಿ, ಪ್ರಮಾಣಪತ್ರ ಸೇರಿದಂತೆ ಆಕರ್ಷಕ ಬಹುಮಾನ ನೀಡಲಾಯಿತು. ಎಲ್ಲಾ ಸ್ಪರ್ಧಿಗಳಿಗೂ ಪ್ರಮಾಣ ಪತ್ರ ನೀಡಿ, ಪ್ರಶಂಸಿಸಲಾಯಿತು. ಮೈಸೂರು ವಿಶ್ವವಿದ್ಯಾನಿಲಯದ ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕ ಡಾ.ಕೃಷ್ಣ ಕೆ.ಮನವಳ್ಳಿ ಸ್ಪರ್ಧೆಯ ತೀರ್ಪುಗಾರರಾಗಿದ್ದರು.

ಈ ವೇಳೆ ನ್ಯೂರಾಲಜಿ ಸೀನಿಯರ್ ಕನ್ಸಲ್ಟೆಂಟ್ ಸೀನಿಯರ್ ಡಾ.ಕೆ.ಎಸ್. ವೇಣುಗೋಪಾಲ ಕೃಷ್ಣ ಮಾತನಾಡಿ, ಡಿಮೆನ್ಷಿಯಾ ಸಮಸ್ಯೆ ದೈನಂದಿನ ಚಟುವಟಿಕೆಗಳನ್ನು ಕಷ್ಟಕರವಾಗಿಸುತ್ತದೆ. ವಯಸ್ಸಾದಂತೆಲ್ಲಾ ಸಮಸ್ಯೆ ಹೆಚ್ಚಾಗಬಹುದು. ಭಾರತದಲ್ಲಿ 60 ವರ್ಷಕ್ಕಿಂತ ಮೇಲ್ಪಟ್ಟ ಶೇ.8ರಷ್ಟು ಜನ ಡಿಮೆನ್ಷಿಯಾದಿಂದ ಬಳಲುತ್ತಿದ್ದಾರೆ ಎಂದರು.

ಅನೇಕ ರೋಗಗಳು ಬುದ್ಧಿಮಾಂದ್ಯತೆಯನ್ನು ಉಂಟುಮಾಡಬಹುದು. ಇದಕ್ಕೆ ಆಲ್ಝೈಮರ್(Alzheimers) ಅತ್ಯಂತ ಸಾಮಾನ್ಯ ಕಾರಣವಾಗಿದೆ. ನೀವು ಜ್ಞಾಪಕ ಶಕ್ತಿ ಸಮಸ್ಯೆಗಳು ಅಥವಾ ಡಿಮೆನ್ಷಿಯಾದ ಇತರ ಲಕ್ಷಣಗಳನ್ನು ಹೊಂದಿದ್ದರೆ ಕೂಡಲೇ ವೈದ್ಯರನ್ನು ಭೇಟಿ ಮಾಡು ವುದು ಒಳಿತು. ಸಮಸ್ಯೆಗೆ ಕಾರಣಗಳನ್ನು ಪತ್ತೆಹಚ್ಚಿ, ಡಿಮೆನ್ಷಿಯಾ ರೋಗಲಕ್ಷಣ ಗಳನ್ನು ಉಂಟುಮಾಡುವ ಸಮಸ್ಯೆಗಳಿಗೆ ಚಿಕಿತ್ಸೆ ನೀಡಿ, ಗುಣಪಡಿಸಬಹುದು ಎಂದು ಸಲಹೆ ನೀಡಿದರು.

ನ್ಯೂರೋಸರ್ಜರಿ ಸೀನಿಯರ್ ಕನ್ಸಲ್ಟೆಂಟ್ ಡಾ.ಎ.ಆರ್.ಮಕ್ಸೂದ್ ಅಹಮದ್ ಮಾತನಾಡಿ, ವಯಸ್ಸಾದಂತೆ ಮೆದುಳಿನ ಆರೋಗ್ಯದ ಕಾಳಜಿ ನಿಮ್ಮ ಹೃದಯದ ಆರೋಗ್ಯದಷ್ಟೇ ಮುಖ್ಯವಾಗುತ್ತದೆ. ನಿಮ್ಮ ಮೆದುಳನ್ನು ಆರೋಗ್ಯವಾಗಿಟ್ಟುಕೊಂಡು ಸ್ವತಂತ್ರವಾಗಿ ಜೀವನ ನಡೆಸಲು ಆರೋಗ್ಯಕರ ಆಹಾರವನ್ನು ಸೇವಿಸಬೇಕು. ರಸ್ತೆ ಬದಿಯ ತಿನಿಸು, ಎಣ್ಣೆಯುಕ್ತ ಆಹಾರಗಳ ಸೇವನೆ ತಪ್ಪಿಸಬೇಕು. ನಿಯಮಿತ ವ್ಯಾಯಾಮ ರೂಢಿಸಿಕೊಳ್ಳಬೇಕು. ಧೂಮಪಾನ ಮತ್ತು ಅತಿಯಾದ ಮದ್ಯಪಾನದಿಂದ ದೂರವಿರುವುದು ಮುಖ್ಯ ಎಂದರು.

ಇದೇ ವೇಳೆ ಪಾರ್ಶ್ವವಾಯು ಸಮಸ್ಯೆಗೆ ತುರ್ತು ವೈದ್ಯಕೀಯ ನೆರವಿನ ಅಗತ್ಯವಿರುವ ಆರಂಭಿಕ ಲಕ್ಷಣಗಳು, ಮುಖ ಇಳಿ ಬೀಳುವುದು, ತೋಳಿನ ದೌರ್ಬಲ್ಯ, ಮಾತಿನಲ್ಲಿ ಉಂಟಾಗುವ ತೊಂದರೆ, ತುರ್ತು ಸೇವೆಗಳಿಗೆ ಕರೆ ಮಾಡುವ ಸೂಕ್ತ ಸಮಯ ಇನ್ನಿತರ ವಿಚಾರಗಳ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸಿ, ಮನಸ್ಸು ಉತ್ತೇಜನಗೊಳಿಸುವ ಚಟುವಟಿಕೆಗಳಲ್ಲಿ ತೊಡಗುವುದು, ಧೂಮಪಾನ ಅಥವಾ ಹೆಚ್ಚು ಮದ್ಯಪಾನ ಮಾಡದಿರುವುದು, ಪೌಷ್ಠಿಕ ಆಹಾರ ಸೇವನೆ, ಚೆನ್ನಾಗಿ ನಿದ್ದೆ ಮಾಡುವುದು, ಅಧಿಕ ರಕ್ತದೊತ್ತಡ, ಮಧುಮೇಹ ಖಿನ್ನತೆಯಂತಹ ಆರೋಗ್ಯ ಸಮಸ್ಯೆಗಳನ್ನು ನಿರ್ವಹಿಸುವ ಮೂಲಕ ಉತ್ತಮ ಜೀವನ ನಡೆಸಬಹುದು ಎಂದು ತಿಳಿಸಿದರು.

ಆಸ್ಪತ್ರೆ ನಿರ್ದೇಶಕ ಪ್ರಮೋದ್ ಕುಂದರ್ ಮಾತನಾಡಿ, ಹಿರಿಯ ನಾಗರಿಕರ ಆರೋಗ್ಯ ಕಾಳಜಿಯಿಂದ ಈ ಕಾರ್ಯಕ್ರಮ ಆಯೋಜಿಸಿರುವುದಾಗಿ ತಿಳಿಸಿದರು. ವೈದ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಭಾನುವಾರ ಹಿರಿಯ ನಾಗರಿಕರಿಗೆ 'ಸ್ಪೆಲ್ ಬೀ' ವಿಶೇಷ ಸ್ಪರ್ಧೆ ಏರ್ಪಡಿಸಲಾಗಿತ್ತು. ಆಸ್ಪತ್ರೆ ಅಧಿಕಾರಿಗಳು, ವೈದ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾರ್ಗದರ್ಶನ ನೀಡಿದರು.

> **ಮಣಿಪಾಲ್ ಆಸ್ಪತ್ರೆಯು ಸಮಗ್ರ ಆರೋಗ್ಯ ರಕ್ಷಣೆ ಸೇವೆ ನೀಡಲು ಬದ್ಧವಾಗಿದೆ. ಮನರಂಜನೆ ಚಟುವಟಿಕೆಗಳೊಂದಿಗೆ ವೈದ್ಯಕೀಯ ಜ್ಞಾನವನ್ನು ಸಂಯೋಜಿಸುವ ಮೂಲಕ ಸಮುದಾಯದ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಸುಧಾರಣೆಗೆ ಪೂರಕ ವಾತಾವರಣ ಸೃಷ್ಟಿಸಬಹುದು. ಈ ನಿಟ್ಟಿನಲ್ಲಿ 'ಸ್ಪೆಲ್ ಬೀ' ಸ್ಪರ್ಧೆ ಪರಿಣಾಮಕಾರಿಯಾಗಿದೆ.**
> **-ಡಾ.ಉಪೇಂದ್ರ ಶೆಣೈ,**
> **ವೈದ್ಯಕೀಯ ಸೇವೆಗಳ ಮುಖ್ಯಸ್ಥರು ಮಣಿಪಾಲ್ ಆಸ್ಪತ್ರೆ, ಮೈಸೂರು**

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ದೂರ ಸಂಪರ್ಕ ವ್ಯವಸ್ಥೆಯಿಂದ ಸಮಾಜದಲ್ಲಿ ಬದಲಾವಣೆ

ಎಲೆಕ್ಟ್ರಾನಿಕ್ ಇಂಜಿನಿಯರ್ ಎಂ.ಜೆ.ಸಂಪತ್ ಕುಮಾರ್ ಅಭಿಮತ



ವಿಚಾರ ಸಂಕಿರಣದಲ್ಲಿ ಎಲೆಕ್ಟ್ರಾನಿಕ್ ಇಂಜಿನಿಯರ್ ಎಂ.ಜೆ.ಸಂಪತ್ ಕುಮಾರ್ ಮಾತನಾಡಿದರು.

ಮೈಸೂರು,ಮೇ 26(ಎಸ್‌ಪಿಎನ್)– ದೂರ ಸಂಪರ್ಕ ವ್ಯವಸ್ಥೆ ಮತ್ತು ಸಮಾಜದ ನಡುವೆ ಅವಿನಾಭಾವ ಸಂಬಂಧವಿದೆ. ಈ ವ್ಯವಸ್ಥೆ ಸಮಾಜದಲ್ಲಿ ಸಾಕಷ್ಟು ಬದಲಾವಣೆಗೆ ನಾಂದಿಯಾಗಿದೆ ಎಂದು ಎಲೆಕ್ಟ್ರಾನಿಕ್ ಇಂಜಿನಿಯರ್ ಎಂ.ಜೆ.ಸಂಪತ್ ಕುಮಾರ್ ಅಭಿಪ್ರಾಯಪಟ್ಟರು.

ಮೈಸೂರು ಜೆಎಲ್‌ಬಿ ರಸ್ತೆಯಲ್ಲಿ ಎಂಜಿನಿಯರ್‌ಗಳ ಸಂಸ್ಥೆ ಸಭಾಂಗಣದಲ್ಲಿ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ (ಇಂಡಿಯಾ) ಮೈಸೂರು ಘಟಕದ ವತಿಯಿಂದ ಏರ್ಪಡಿಸಿದ್ದ ವಿಶ್ವ ದೂರ ಸಂಪರ್ಕ ಮತ್ತು ವಿಶ್ವ ಮಾಹಿತಿ ಸಮಾಜ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಸಮರ್ಥನೀಯ ಮತ್ತು ಮಾಹಿತಿಗಾಗಿ ಡಿಜಿಟಲ್ ನಾವೀನ್ಯತೆ' ವಿಷಯ ಕುರಿತು ಮಾತನಾಡಿದರು.

ಅಂತರ್ಜಾಲ ಮತ್ತು ಸಂವಹನ ತಂತ್ರಜ್ಞಾನಗಳ ಸದ್ಬಳಕೆಯ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು. ದೂರದಲ್ಲಿರುವ ನಮ್ಮವರನ್ನು ಸಂಪರ್ಕಿಸಲು ದೂರ ಸಂಪರ್ಕ ನೆರವಾದರೆ, ವಿಶ್ವದಲ್ಲಿ ನಡೆಯುವ ಪ್ರತಿಯೊಂದು ವಿಷಯವನ್ನು ತಲುಪಿಸಲು ತಂತ್ರಜ್ಞಾನ ಸಹಕಾರಿ ಹಾಗೂ ಇಂದಿನ ಜೀವನ ಶೈಲಿಗೆ ಅನಿವಾರ್ಯ ಎಂದರು.

ಮಾಹಿತಿ ತಂತ್ರಜ್ಞಾನ ಕ್ಷೇತ್ರದ ಒಂದಂಶವಾಗಿರುವ ದೂರಸಂಪರ್ಕ ವ್ಯವಸ್ಥೆಯ ಸದುಪಯೋಗವಾಗಬೇಕು. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ 1969ರಿಂದ ಪ್ರತಿ ವರ್ಷ ಮೇ ತಿಂಗಳಲ್ಲಿ 'ವಿಶ್ವ ದೂರ ಸಂಪರ್ಕ' ದಿನ ಹಾಗೂ 2006ರ ಮೇ ತಿಂಗಳಲ್ಲಿ 'ವಿಶ್ವ ಮಾಹಿತಿ ಸಮಾಜ' ದಿನವನ್ನು ಆಚರಿಸಲಾಗುತ್ತದೆ. ಅಂತರ್ಜಾಲ, ಸಾಮಾಜಿಕ ಮಾಧ್ಯಮಗಳು ಅಭಿವೃದ್ಧಿ ಹೊಂದುತ್ತಿರುವ ಈ ಕಾಲದಲ್ಲಿ ಸಮಾಜವು ಮಾಹಿತಿ ಮತ್ತು ತಂತ್ರಜ್ಞಾನಗಳ ಬಗ್ಗೆ ಅರಿವಿರಬೇಕು ಎಂಬುದೇ ಈ ದಿನದ ಆಚರಣೆಯ ಮುಖ್ಯ ಉದ್ದೇಶ ಎಂದರು.

ವೇದಿಕೆಯಲ್ಲಿ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್(ಇಂಡಿಯಾ) ಮೈಸೂರು ಘಟಕದ ಅಧ್ಯಕ್ಷ ಡಾ.ಆರ್.ದೀಪು, ಕಾರ್ಯದರ್ಶಿ ಡಾ. ಎಸ್.ಎ.ಮೋಹನ ಕೃಷ್ಣ, ಬಿ.ಎಸ್.ಪ್ರಭಾಕರ್ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ಮೈಸೂರು, ಮೇ 26– ಶ್ರೀ ಅಂಕಾಳ ಪರಮೇಶ್ವರಿ ನೌಕರರ ಸಂಘದ ವತಿಯಿಂದ ಮೈಸೂರಿನ ಸರಸ್ವತಿಪುರಂನಲ್ಲಿರುವ ಕರ್ನಾಟಕ ರಾಜ್ಯ 24 ಮನೆ ತೆಲುಗು ಶೆಟ್ಟರ ಜನಾಂಗದ ವಿದ್ಯಾರ್ಥಿ ನಿಲಯದಲ್ಲಿ ಈ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ 24 ಮನೆ ತೆಲುಗು ಶೆಟ್ಟರ ಜನಾಂಗದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ನೌಕರರ ಸಂಘದ ಅಧ್ಯಕ್ಷ ರಂಗಸ್ವಾಮಿ ಶೆಟ್ಟಿ, ಜಿಪಂ ಮಾಜಿ ಸದಸ್ಯ ಎನ್.ಮಹದೇವ್, ಜನಾಂಗದ ಮುಖಂಡರಾದ ಇಂದ್ರಶೆಟ್ಟಿ, ಸುಂದರ ಶೆಟ್ಟಿ, ಎನ್.ನಾಗಶೆಟ್ಟಿ, ಮಂಜುಶೆಟ್ಟಿ, ಅಪ್ಪಾಜಿಶೆಟ್ಟಿ, ಕೆ.ರಾಮಶೆಟ್ಟಿ, ಸಾಗರೆ ಎಸ್.ವಿ.ವಸಂತ್‌ಕುಮಾರ್, ಸಿದ್ದಪಾಜಿ ಶೆಟ್ಟಿ, ಗೋಪಾಲ ಶೆಟ್ಟಿ,ಶಿವನಾಗಶೆಟ್ಟಿ ಬಂಗಾರಶೆಟ್ಟಿ ಮಣಿಶೆಟ್ಟಿ, ಯೋಗೇಂದ್ರ ಶೆಟ್ಟಿ, ಶ್ಯಾಮ್ ಶೆಟ್ಟಿ,ಗೋವಿಂದರಾಜ್ ಬಾಬು, ಮಂಜುನಾಥ್ ಪ್ರಸಾದ್, ಮಹದೇವಶೆಟ್ಟಿ ಸುಲೋಚನಾ ಸೇರಿದಂತೆ ನೌಕರರ ಸಂಘದ ಸದಸ್ಯರು ಹಾಗೂ ಜನಾಂಗದವರು ಉಪಸ್ಥಿತರಿದ್ದರು.



ಮೈಸೂರಿಗೆ ಭೇಟಿ ನೀಡಿದ್ದ ಸಹಕಾರ ಸಚಿವರೂ ಆದ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ ಅವರನ್ನು ಇಂದಿರಾಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ಹೂಗುಚ್ಛ ನೀಡಿ, ಅಭಿನಂದಿಸಿದರು. ಈ ವೇಳೆ ಮೈಸೂರು ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಎಸ್.ಆರ್.ರವಿಕುಮಾರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಸವರಾಜ್, ಕೇಬಲ್ ನಾಗರಾಜ ಮತ್ತಿತರರಿದ್ದರು.

ಮೈಸೂರು ಮಿತ್ರ 45
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ

ಎನ್‌ಡಿಎ ಅಭ್ಯರ್ಥಿ ವಿವೇಕಾನಂದರನ್ನು ಗೆಲ್ಲಿಸಿ ಪಕ್ಷದ್ರೋಹಿ ಮರಿತಿಬ್ಬೇಗೌಡರಿಗೆ ತಕ್ಕ ಪಾಠ ಕಲಿಸಿ

ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಮನವಿ

ಕೆ.ಆರ್.ಪೇಟೆ, ಮೇ 26– ಶಿಕ್ಷಕರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಿರುವ ಜೆಡಿಎಸ್–ಬಿಜೆಪಿ ಮೈತ್ರಿ ಪಕ್ಷಗಳು ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿ ಕೆಲಸ ಮಾಡಿರುವುದನ್ನು ಮನಗಂಡು ದಕ್ಷಿಣ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ವಿವೇಕಾನಂದ ಅವರಿಗೆ ಮೊದಲ ಪ್ರಾಶಸ್ತ್ಯದ ಮತಗಳನ್ನು ನೀಡುವ ಮೂಲಕ ಗೆಲ್ಲಿಸುವಂತೆ ಮನವಿ ಮಾಡಿದ ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡರು, ಜೆಡಿಎಸ್‌ನಿಂದ ಗೆದ್ದು ಯಾವುದೇ ಕೆಲಸ ಮಾಡದೆ ಕಾಂಗ್ರೆಸ್‌ಗೆ ಸೇರಿ ಸ್ಪರ್ಧಿಸುವ ಪಕ್ಷದ್ರೋಹಿ ಮರಿತಿಬ್ಬೇಗೌಡರಿಗೆ ತಕ್ಕ ಪಾಠ ಕಲಿಸಿ ಎಂದರು.

ಪಟ್ಟಣದಲ್ಲಿರುವ ತಾಲೂಕು ಜೆಡಿಎಸ್ ಕಚೇರಿಯಲ್ಲಿ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಅಂಗವಾಗಿ ನಡೆದ ಚುನಾವಣಾ ಸಭೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು, ಕಳೆದ ಒಂದು ವರ್ಷಗಳಿಂದ ರಾಜ್ಯ ಅಭಿವೃದ್ಧಿಯಲ್ಲಿ ತೀವ್ರ ಹಿನ್ನಡೆಯಾಗಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಮ್ಮ ಪಕ್ಷದಿಂದ ಎರಡು ಬಾರಿ ವಿಧಾನಪರಿಷತ್ ಸದಸ್ಯರಾಗಿ ಅಧಿಕಾರ ಅನುಭವಿಸಿ ಪಕ್ಷಕ್ಕೆ ದ್ರೋಹ ಬಗೆದು ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣದಲ್ಲಿರುವ ಮರಿತಿಬ್ಬೇಗೌಡ ಅವರಿಗೆ ತಕ್ಕ ಪಾಠ ಕಲಿಸಬೇಕು. ನಾನೆಂದೂ ಪಕ್ಷಕ್ಕೆ ದ್ರೋಹವನ್ನು ಮಾಡುವುದಿಲ್ಲ.



ಚುನಾವಣಾ ಸಭೆಯಲ್ಲಿ ಮಾತನಾಡುತ್ತಿರುವ ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ.

ನಮ್ಮ ಪಕ್ಷದ ಪರಮೋಚ್ಚ ನಾಯಕ ಮಾಜಿ ಪ್ರಧಾನಿ ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಕುಮಾರಣ್ಣ ಯಡಿಯೂರಪ್ಪ ಅವರ ಬಗ್ಗೆ ಅಪಾರವಾದ ಗೌರವವನ್ನು ಇಟ್ಟುಕೊಂಡಿದ್ದೇನೆ. ಈ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ವಿವೇಕಾನಂದ ಅವರು ಗೆದ್ದರೆ ನಾನು ಗೆದ್ದಂತೆ. ಆದ್ದರಿಂದ ವಿವೇಕಾನಂದ ಅವರನ್ನು ಆಶೀರ್ವದಿಸುವಂತೆ ಶ್ರೀಕಂಠೇಗೌಡ ಮನವಿ ಮಾಡಿದರು.

ಶಾಸಕ ಹೆಚ್.ಟಿ.ಮಂಜು ಮಾತನಾಡಿ, ನಮ್ಮ ಎರಡು ಪಕ್ಷಗಳಾದ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ ವಿವೇಕಾನಂದ ಅವರು ಮಾಜಿ ವಿಧಾನಪರಿಷತ್ ಸದಸ್ಯರಾದ ಕೆ.ಟಿ.ಶ್ರೀಕಂಠೇಗೌಡರ ಆಶೀರ್ವಾದದಿಂದ ವಿಧಾನಪರಿಷತ್ ಚುನಾವಣೆಯಲ್ಲಿ ಸ್ಪರ್ಧಿಸಿದ್ದಾರೆ. ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸಲು ವಿವೇಕಾನಂದ ಅವರನ್ನು ಗೆಲ್ಲಿಸಬೇಕು. ಸೌಮ್ಯ ಸ್ವಭಾವದ ವ್ಯಕ್ತಿಯಾದ ವಿವೇಕಾನಂದ ಅವರನ್ನು ಎರಡು ಪಕ್ಷಗಳ ನಾಯಕರು ಸೇರಿ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಿದರೆ ಯಾವುದೇ ಪ್ರಯೋಜನವಿಲ್ಲ. ಈ ಬಾರಿ ದಕ್ಷಿಣ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ವಿವೇಕಾನಂದ ಅವರಿಗೆ ಆಶೀರ್ವಾದ ಮಾಡುವಂತೆ ಪೂರ್ವಭಾವಿ ಸಭೆಯಲ್ಲಿ ಶಾಸಕರು ಮನವಿ ಮಾಡಿದರು.

ದಕ್ಷಿಣ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ವಿವೇಕಾನಂದ ಮಾತನಾಡಿ, ಶಿಕ್ಷಕರ ಹಲವಾರು ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸುವುದು ನನ್ನ ಜವಾಬ್ದಾರಿಯಾಗಿದೆ. ನನ್ನನ್ನು ಚುನಾವಣೆಯಲ್ಲಿ ಆಯ್ಕೆ ಮಾಡಿದರೆ ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡರ ಮಾರ್ಗದರ್ಶನ ಪಡೆದು ನಿಮ್ಮ ಜೊತೆಗೆ ನಿರಂತರವಾಗಿ ತಮ್ಮ ಸೇವೆಯನ್ನು ಸಲ್ಲಿಸುತ್ತೇನೆ ಎಂದು ಭರವಸೆ ನೀಡಿದರು. ನಮ್ಮ ಪಕ್ಷದ ಎದುರಾಳಿ ಮರಿತಿಬ್ಬೇಗೌಡ ಅವರನ್ನು ಈಗಾಗಲೇ ವಿಧಾನಪರಿಷತ್ ಸದಸ್ಯರಾಗಿ ಆಯ್ಕೆ ಮಾಡಿದ್ದೀರಿ. ಒಂದು ಬಾರಿ ನನಗೆ ನಿಮ್ಮ ಸೇವೆ ಮಾಡಲು ಅವಕಾಶವನ್ನು ಮಾಡಿಕೊಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಘಟಕದ ತಾಲೂಕು ಅಧ್ಯಕ್ಷ ಜಾನಕೀರಾಂ, ಹಿರಿಯ ಮುಖಂಡ ರಾಜೇನಹಳ್ಳಿ ಕುಮಾರಸ್ವಾಮಿ, ವಿಶ್ರಾಂತ ಪ್ರಾಂಶುಪಾಲ ಮಂಚೇಗೌಡ, ಪದವಿಪೂರ್ವ ಕಾಲೇಜು ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಸತ್ಯ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜು, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಶಿವರಾಮೇಗೌಡ, ರವಿ ಸೇರಿದಂತೆ ಶಿಕ್ಷಣ ಕ್ಷೇತ್ರದ ಇತರೆ ವಿಭಾಗದ ಪದಾಧಿಕಾರಿಗಳು ಹಾಜರಿದ್ದರು.

ಮಂಡ್ಯ ಜಿಲ್ಲೆಯಲ್ಲಿ ಜೂ. 2 ರಿಂದ ನಿಷೇಧಾಜ್ಞೆ

ಮಂಡ್ಯ, ಮೇ 26– ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ–2024 ರ ಸಂಬಂಧ ಕಾನೂನು ಸುವ್ಯವಸ್ಥೆ ಕಾಪಾಡುವ ಹಾಗೂ ಮುಕ್ತ ಮತ್ತು ನ್ಯಾಯೋಚಿತ ಹಾಗೂ ನಿಷ್ಪಕ್ಷಪಾತವಾಗಿ ಚುನಾವಣೆಯನ್ನು ನಡೆಸುವ ಸಲುವಾಗಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಜೂ.2ರ ಮಧ್ಯರಾತ್ರಿ 12 ಗಂಟೆಯಿಂದ ಜೂ.3ರ ಮಧ್ಯರಾತ್ರಿ 12 ಗಂಟೆಯವರೆಗೆ ಕೆಲವು ಷರತ್ತುಗಳನ್ನು ವಿಧಿಸಿ ನಿಷೇಧಾಜ್ಞೆಯನ್ನು ಹೊರಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ನಿರ್ಬಂಧಿತ ಪ್ರದೇಶದಲ್ಲಿ 5ಕ್ಕಿಂತ ಹೆಚ್ಚು ಮಂದಿ ಸೇರುವಂತಿಲ್ಲ. ಆದರೆ ಈ ನಿರ್ಬಂಧವು ಮನೆ–ಮನೆಗೆ ತೆರಳಿ ಪ್ರಚಾರ ಮಾಡುವುದಕ್ಕೆ ಅನ್ವಯಿಸುವುದಿಲ್ಲ. ಅಭ್ಯರ್ಥಿ ಅಥವಾ ಕಾರ್ಯಕರ್ತರು ಮತದಾರರನ್ನು ಮತಗಟ್ಟೆಗೆ ವಾಹನದಲ್ಲಿ ಕರೆತರುವುದು ಹಾಗೂ ಅಲ್ಲಿಂದ ಕರೆದುಕೊಂಡು ಹೋಗುವುದನ್ನು ನಿಷೇಧಿಸಿದೆ.

ರಾಜಕೀಯ ಸಭೆ–ಸಮಾರಂಭಗಳನ್ನು ಹಮ್ಮಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಯಾವುದೇ ಧ್ವನಿವರ್ಧಕವನ್ನು ಬಳಸಿ ಪ್ರಚಾರ ಮಾಡುವುದನ್ನು ನಿರ್ಬಂಧಿಸಿದೆ ನಿಷೇಧಾಜ್ಞೆ ಇರುವ ಯಾವ ಪ್ರದೇಶದಲ್ಲೂ ಜನರು ಮಾರಾಕಾಸ್ತ್ರಗಳನ್ನು ಹಿಡಿದು ತಿರುಗಾಡುವಂತಿಲ್ಲ ಹಾಗೂ ಮೆರವಣಿಗೆ, ಇನ್ನಿತರ ಉತ್ಸವ ಸಭೆ ಸಮಾರಂಭ ಮಾಡುವಂತಿಲ್ಲ.

ನಿಷೇಧಾಜ್ಞೆ ಇರುವ ಯಾವ ಪ್ರದೇಶದಲ್ಲೂ ಪಟಾಕಿ, ಸಿಡಿಮದ್ದು ಹಾಗೂ ಇತರೆ ಸ್ಫೋಟಕಗಳನ್ನು ಉಪಯೋಗಿಸುವಂತಿಲ್ಲ. ಮನುಷ್ಯ ಶವಗಳ ಅಥವಾ ಪ್ರತಿಕೃತಿ ಅಣಕು ಪ್ರದರ್ಶನ ಮಾಡುವುದನ್ನು ಪ್ರತಿಬಂಧಿಸಲಾಗಿದ್ದು, ಬಹಿರಂಗವಾಗಿ ಘೋಷಣೆ ಕೂಗುವುದು, ಪ್ರಚೋದನಾತ್ಮಕ ಮತ್ತು ಉದ್ರೇಕಕಾರಿ, ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

ಮತಗಟ್ಟೆಯ 100 ಮೀಟರ್‌ಗಳ ಅಂತರದೊಳಗಿರುವ ಪ್ರದೇಶದಲ್ಲಿ ಸಾರ್ವಜನಿಕ ಅಥವಾ ಖಾಸಗಿ ಸ್ಥಳದಲ್ಲಿ ಪ್ರಚಾರ ನಡೆಸದಂತೆ, ಯಾವುದೇ ಉಮೇದುವಾರರಿಗೆ/ಅಭ್ಯರ್ಥಿಗೆ ಮತ ನೀಡುವಂತೆ ಕೇಳುವುದು, ಯಾವುದೇ ಉಮೇದುವಾರರಿಗೆ/ಅಭ್ಯರ್ಥಿಗೆ ಮತ ಹಾಕದಂತೆ ಪ್ರೇರೆಪಿಸುವುದು, ಚುನಾವಣೆಗೆ ಮತ ಚಲಾಯಿಸದಂತೆ ಪ್ರೇರೇಪಿಸುವುದು ಹಾಗೂ ಯಾವುದೇ ಪಕ್ಷದ ಚಿಹ್ನೆಯನ್ನು ಪ್ರದರ್ಶಿಸುವುದು ಇತ್ಯಾದಿಗಳನ್ನು ನಿರ್ಬಂಧಿಸಿದೆ.

ಈ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ರ ಪ್ರಕಾರ ಕ್ರಮ ಜರುಗಿಸಲಾಗುವುದು ಹಾಗೂ ನಿಷೇಧಾಜ್ಞೆಯು ಶಾಂತಿ ಸುವ್ಯವಸ್ಥೆ ಕಾಪಾಡುವ ಮತ್ತು ಚುನಾವಣಾ ಕಾರ್ಯಕ್ಕೆ ನೇಮಿಸಲ್ಪಟ್ಟಿರುವ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಮತ್ತು ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವ ಮತದಾರರಿಗೆ ಅನ್ವಯಿಸುವುದಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

ನಾಗಮಂಗಲ ಕೆಪಿಟಿಸಿಎಲ್ ನೌಕರರ ಸಂಘದ ಚುನಾವಣೆ

ಕೆ.ಎಲ್.ನಾಗರಾಜು ತಂಡಕ್ಕೆ ಗೆಲುವು



ನಾಗಮಂಗಲ: ಕರ್ನಾಟಕ ವಿದ್ಯುತ್ ಪ್ರಸರಣಾ ನಿಗಮ (ಕೆಪಿಟಿಸಿಎಲ್) ನೌಕರರ ಸಂಘದ ತ್ರೈ ವಾರ್ಷಿಕ ಮಹಾಧಿವೇಶನದ ಪ್ರಾಥಮಿಕ ಪ್ರತಿನಿಧಿಗಳ ಆಯ್ಕೆಗೆ ನಡೆದ ಚುನಾವಣೆಯಲ್ಲಿ ಕೆ.ಎಲ್.ನಾಗರಾಜು ತಂಡವು ಭರ್ಜರಿ ಗೆಲುವು ಸಾಧಿಸಿದೆ. ನಾಗಮಂಗಲದ ಶ್ರೀನಿವಾಸ್, ಅಶೋಕ ಹಾಗೂ ಬೆಳ್ಳೂರು ಕಿರಣ್ ಕುಮಾರ್ ತಂಡ ಸೋಲು ಅನುಭವಿಸಿದೆ. ಕೆ.ಎಲ್.ನಾಗರಾಜು 61 ಮತಗಳು, ರವಿಕುಮಾರ್ 63 ಮತಗಳು, ಬೆಳ್ಳೂರಿನ ದಿನೇಶ್ 45 ಮತಗಳು ಪಡೆದು ವಿಜಯಶಾಲಿಗಳಾಗಿದ್ದಾರೆ. ಉಳಿದ ಮೂರು ಸ್ಪರ್ಧಿಗಳಾದ ಶ್ರೀನಿವಾಸ್ ತಂಡದಿಂದ ಶ್ರೀನಿವಾಸ್ 40 ಮತಗಳು, ಅಶೋಕ್ 30 ಮತಗಳು, ಕಿರಣ್ ಕುಮಾರ್ 19 ಮತಗಳನ್ನು ಪಡೆದು ಸೋಲು ಕಂಡಿದ್ದಾರೆ.

ಚುನಾವಣಾಧಿಕಾರಿಯಾಗಿ ಸಹಾಯಕ ಇಂಜಿನಿಯರ್ ಹರೀಶ್ ಕಾರ್ಯನಿರ್ವಹಿಸಿದ್ದರು ಹಾಗೂ ಬೆಳ್ಳೂರು ಚುನಾವಣಾಧಿಕಾರಿಯಾಗಿ ಮಂಜುನಾಥ್ ಕಾರ್ಯ ನಿರ್ವಹಿಸಿದ್ದರು. ನೂತನವಾಗಿ ಆಯ್ಕೆಯಾದ ಎಲ್ಲಾ ಮೂರು ಮಂದಿ ಪ್ರತಿನಿಧಿಗಳನ್ನು ಕೆಪಿಟಿಸಿಎಲ್ ಸಮಿತಿ ವತಿಯಿಂದ ಸನ್ಮಾನಿಸಲಾಯಿತು. ವಿಜೇತರು ಮಾತನಾಡಿ ಗೆಲುವಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದ ಅರ್ಪಿಸುತ್ತೇವೆ ಎಂದರು.

ನಾಳೆ ಕೆಲವೆಡೆ ವಿದ್ಯುತ್ ವ್ಯತ್ಯಯ

ಮಂಡ್ಯ,ಮೇ26–ಚಿಕ್ಕಮಂಡ್ಯ ಮತ್ತು ಹಂಪಾಪುರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ಕಾರ್ಯ ಹಮ್ಮಿಕೊಂಡಿರುವುದರಿಂದ ಶಂಕರಪುರ, ಜೈನ ಸ್ಟ್ರೀಟ್, ಬೀಡಿ ಕಾಲೋನಿ, ಜಬ್ಬರ್ ಸರ್ಕಲ್, ವಿನಾಯಕನಂದ ಬಡಾವಣೆ, ಗೋಪಾಲಪುರ,



ಚಿಕ್ಕಮಂಡ್ಯ, ಸಾತನೂರು, ಕೊಮ್ಮೇರಹಳ್ಳಿ, ಹುಲಿವಾನ, ಕೆ.ಗೌಡಗೆರೆ. ಹೆಚ್.ಮಲ್ಲಿಗೆರೆ, ಎಸ್.ಐ. ಕೋಡಿಹಳ್ಳಿ, ಹೆಚ್.ಕೋಡಿಹಳ್ಳಿ, ಸಂಪಹಳ್ಳಿ, ಗೊರವಾಲೆ, ಬಿ.ಹೊಸಹಳ್ಳಿ, ಬೀರಗೌಡನಹಳ್ಳಿ ಹಾಗೂ ಕೆರಗೋಡು, ದೊಡ್ಡಗರುಡನಹಳ್ಳಿ, ಬಿಳಿ ದೇಗಲು, ಮುದಗಂದೂರು, ಮಾರಗೌಡನಹಳ್ಳಿ, ಬಿ.ಹೊಸೂರು, ಹಂಪಾಪುರ, ಕಲ್ಮಂಟಿದೊಡ್ಡಿ, ಸೌದೇನಹಳ್ಳಿ, ಬೆಟ್ಟಹಳ್ಳಿ, ಬೀಚನಹಳ್ಳಿ, ಪುರದಕೊಪ್ಪಲು, ಎಂ.ಹೊನ್ನೇನಹಳ್ಳಿ, ಬಿದರಕಟ್ಟೆ, ಬೆನ್ನಹಟ್ಟಿ, ಮುನುಗನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮೇ 28ರಂದು ಬೆಳಗ್ಗೆ 9ರಿಂದ ಸಂಜೆ 5ರವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಪ್ರಕಟಣೆ ತಿಳಿಸಿದ್ದಾರೆ.

ಪ್ರಯೋಗಾಲಯ ಉದ್ಘಾಟನೆ

ಭಾರತೀನಗರ, ಮೇ 26– ಭಾರತಿ ಕಾಲೇಜು (ಸ್ವಾಯತ್ತ) ಸ್ನಾತಕೋತ್ತರ ಮತ್ತು ಸಂಶೋಧನಾ ಕೇಂದ್ರದಲ್ಲಿ ನೂತನ ಜೀವ ವಿಜ್ಞಾನ ಪ್ರಯೋಗಾಲವನ್ನು ಬಿಇಟಿ ಅಧ್ಯಕ್ಷ ಹಾಗೂ ಶಾಸಕ ಮಧು ಜಿ ಮಾದೇಗೌಡ ಉದ್ಘಾಟಿಸಿದರು.

ನುತರ ಮಾತನಾಡಿದ ಅವರು, ಜೀವ ವಿಜ್ಞಾನ ಪ್ರಯೋಗಾಲಯದಲ್ಲಿ ಜೀವ ರಸಾಯನಶಾಸ್ತ್ರ, ಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ಪ್ರಯೋಗಗಳು ಒಳಗೊಂಡಿದೆ. ವಿಜ್ಞಾನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಿಶಾಲವಾದ ಪ್ರಯೋಗಾಲಯ ನಿರ್ಮಿಸಲಾಗಿದೆ ಎಂದರು.

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಅಭಿವೃದ್ದಿಗಾಗಿ ನಮ್ಮ ತಂದೆ ಕಟ್ಟಿದಂತಹ ವಿದ್ಯಾಸಂಸ್ಥೆಯ ಜವಾಬ್ದಾರಿಯನ್ನು ನನ್ನ ಹೆಗಲಿಗೆ ಹೊರಿಸಲಾಗಿದೆ. ಹಾಗಾಗಿ ವಿದ್ಯಾರ್ಥಿಗಳ ಶ್ರೇಯೋಭಿವೃದ್ದಿಗಾಗಿ ಶ್ರಮಿಸುತ್ತಿದ್ದೇನೆ

ಬಿಇಟಿ ಕಾರ್ಯದರ್ಶಿ ಬಿ.ಎಂ.ನಂಜೇಗೌಡ, ಸ್ನಾತಕೋತ್ತರ ಮತ್ತು ಸಂಶೋಧನೆ ಕೇಂದ್ರದ ನಿರ್ದೇಶಕ ಪ್ರೊ.ಎಸ್.ನಾಗರಾಜ್, ಭಾರತಿ ಕಾಲೇಜಿನ ಪ್ರಾಂಶುಪಾಲ ಪಿ.ನಾಗೇಂದ್ರ ಜಿಎಂಐಟಿ ಪ್ರಾಂಶುಪಾಲ ಚಂದನ್, ಪ್ರಾಧ್ಯಾಪಕರು, ಅಧ್ಯಾಪಕೇತರು ಇದ್ದರು.



ಪ್ರಯೋಗಾಲಯವನ್ನು ಶಾಸಕ ಮಧು ಜಿ ಮಾದೇಗೌಡ ಉದ್ಘಾಟಿಸಿದರು

ಮಳೆಯಿಂದ ನಿರಾಶ್ರಿತರಾದವರಿಗೆ ನೆರವು




ಕಿಕ್ಕೇರಿ: ಬೇಸಿಗೆಯಲ್ಲಿ ಹೈರಾಣವಾಗಿದ್ದ ರೈತನಿಗೆ ಮುಂಗಾರು ಮಳೆ ಸಂತಸವನ್ನು ತಂದಿತ್ತಾದರೂ ಭಾರಿ ಮಳೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು ವಿಚಲಿತರಾಗಬಾರದು ಎಂದು ಸಮಾಜಸೇವಕ ಆರ್‌ಟಿಒ ಮಲ್ಲಿಕಾರ್ಜುನ ತಿಳಿಸಿದರು.

ಸಮೀಪದ ಹೆಗ್ಗಡಹಳ್ಳಿ ಗ್ರಾಮದಲ್ಲಿ ಶುಕ್ರವಾರ ಸುರಿದ ಬಿರುಗಾಳಿ ಮಳೆಗೆ ಮನೆ ಕಳೆದುಕೊಂಡು ನಿರಾಶ್ರಿತರಾದವರಿಗೆ ಆರ್ಥಿಕ ನೆರವು ನೀಡಿ ಮಾತನಾಡಿ, ಸಂಕಷ್ಟದಲ್ಲಿರುವ ನಿರಾಶ್ರಿತರಿಗೆ ನೆರವು ತ್ವರಿತವಾಗಿ ಸಿಗಬೇಕಿದೆ. ಆಗ ಬದುಕಿನಲ್ಲಿ ಹೊಸ ಚೈತನ್ಯ ಸಿಗಲಿದೆ. ಸಂಕಷ್ಟದಲ್ಲಿರುವಾಗ ಮಾಡುವ ನೆರವು ಆತ್ಮಸ್ಥೈರ್ಯ ತುಂಬಲಿದೆ. ಸಮಸ್ಯೆಯಲ್ಲಿ ಸಿಲುಕಿದಾಗ ಧೈರ್ಯದಿಂದ ಎದುರಿಸುವುದನ್ನು ರೂಢಿಸಿಕೊಳ್ಳಬೇಕು. ರೈತ ದೇಶದ ಬೆನ್ನೆಲುಬು ಎಂಬುದನ್ನು ಮರೆಯಬಾರದು ಎಂದು ಆತ್ಮಸ್ಥೈರ್ಯ ತುಂಬಿದರು. ನಿರಾಶ್ರಿತರಾದ ನೇತ್ರಾವತಿ ಆನಂದ್, ಚಂದ್ರು ರೇಖಾ, ಪುಟ್ಟಲಕ್ಷ್ಮಮ್ಮ ರಂಗಸ್ವಾಮಿ, ರಾಣಿ ಮಹೇಶ್, ಜಯಮ್ಮ ಮಂಜೇಗೌಡರಿಗೆ ಸೂಕ್ತ ಆರ್ಥಿಕ ನೆರವು ನೀಡಿದರು. ಲೋಕೇಶ್, ಅಶೋಕ್, ಮಧು, ಚಂದ್ರು ಶಿವಕುಮಾರ್ ಉಪಸ್ಥಿತರಿದ್ದರು.

ಪಂಡಿತ್ ಕೆ.ಎಸ್.ಹಡಪದ ಪ್ರಶಸ್ತಿಗೆ ತಬಲಾ ಕಲಾವಿದ ಪಂಡಿತ್ ವೇಣುಗೋಪಾಲ ರಾಜು ಆಯ್ಕೆ

ಮೈಸೂರು, ಮೇ 26–ಮೈಸೂರಿನ ಶ್ರೀ ಗುರುರಾಜ ಸಂಗೀತ ಸಭಾ ವತಿಯಿಂದ ನೀಡುವ 2024ನೇ ಸಾಲಿನ ಪಂಡಿತ್ ಕೆ.ಎಸ್.ಹಡಪದ ಪ್ರಶಸ್ತಿಗೆ ಬೆಂಗಳೂರಿನ



ಹಿರಿಯ ತಬಲಾ ಕಲಾವಿದರಾದ ಪಂಡಿತ್ ಬಿ.ಎಸ್.ವೇಣು ಗೋಪಾಲ ರಾಜು (ತಬಲಾ ವೇಣು) ಅವರನ್ನು ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು 10 ಸಾವಿರ ರೂ. ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿದೆ. ಸಭಾದ ಗೌರವಾಧ್ಯಕ್ಷ ಮಾ.ವಿ.ರಾಮಪ್ರಸಾದ್ ಅಧ್ಯಕ್ಷತೆಯಲ್ಲಿ, ಮಲ್ಲಿಕಾರ್ಜುನ ಚಿಕ್ಕಮಠ, ಶಂಕರ ಹಲಗತ್ತಿ, ಪ್ರಕಾಶ ಬಾಳಿಕಾಯ, ಡಾ. ಎ.ಎಲ್. ದೇಸಾಯಿ, ಸುರೇಶ ಎಸ್. ಮಂಗಳೂರು, ಕಾರ್ಯದರ್ಶಿ ಶ್ರೀಮತಿ ಸಂಗೀತ ಬಿದನೂರ ಒಳಗೊಂಡ ಸಮಿತಿ ಆಯ್ಕೆ ಮಾಡಿದೆ. ಜೂ.2ರಂದು ಆದಿಚುಂಚನಗಿರಿ ರಸ್ತೆಯಲ್ಲಿರುವ ಗಾನಭಾರತಿ (ರಮಾ ಗೋವಿಂದ ಕಲಾವೇದಿಕೆ) ಸಭಾಂಗಣದಲ್ಲಿ ನಡೆಯುವ ಪಂಡಿತ್ ಕೆ.ಎಸ್. ಹಡಪದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಒಂದನೇ ಪುಟದಿಂದ

ಕೆಕೆಆರ್ ಐಪಿಎಲ್ ಚಾಂಪಿಯನ್

ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತ್ತು. ಇನ್ನು 2012 ಮತ್ತು 2014ರಲ್ಲಿ ಗೌತಮ್ ಗಂಭೀರ್ ನಾಯಕತ್ವದಲ್ಲಿ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡಿದ್ದ ಕೋಲ್ಕತ್ತಾ ನೈಟ್‌ರೈಡರ್ಸ್ 10 ವರ್ಷಗಳ ಬಳಿಕ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಅಲ್ಲದೇ ಹಿಂದೆ ತಂಡದ ನಾಯಕನಾಗಿ ಟ್ರೋಫಿ ಗೆದ್ದುಕೊಟ್ಟಿದ್ದ ಗೌತಮ್ ಗಂಭೀರ್ ಈ ಬಾರಿ ತಂಡದ ಕೋಚ್ ಆಗಿ ಟ್ರೋಫಿ ತಂದುಕೊಟ್ಟಿರುವುದು ವಿಶೇಷ.

ಚೆನ್ನೈನ ಚೆಪಾಕ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ್ದ ಸನ್ ರೈಸರ್ಸ್ ಹೈದರಾಬಾದ್ 8.3 ಓವರ್‌ಗಳಲ್ಲಿ 113 ರನ್‌ಗಳಿಗೆ ಸರ್ವ ಪತನ ಕಂಡಿತ್ತು. ಸಾಧಾರಣ ಗುರಿ ಬೆನ್ನತ್ತಿದ ಕೆಕೆಆರ್ ಕೇವಲ 10.3 ಓವರ್‌ಗಳಲ್ಲಿ 57 ಎಸೆತಗಳು ಬಾಕಿ ಇರುವಂತೆಯೇ 2 ವಿಕೆಟ್ ನಷ್ಟಕ್ಕೆ 114 ರನ್ ಗಳಿಸುವ ಮೂಲಕ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು.

ಚೇಸಿಂಗ್ ಆರಂಭಿಸಿದ ಕೆಕೆಆರ್ ಆರಂಭದಿಂದಲೇ ಸ್ಫೋಟಕ ಆಟಕ್ಕೆ ಮುಂದಾಯಿತು. ಆದರೆ ತಂಡದ ಮೊತ್ತ 11 ರನ್ ಆಗಿದ್ದ ವೇಳೆ 6 ರನ್ ಗಳಿಸಿದ್ದ ಸುನೀಲ್ ನರೇನ್ ವಿಕೆಟ್ ಕಳೆದುಕೊಂಡಿತು. ಈ ವೇಳೆ 2ನೇ ವಿಕೆಟ್‌ಗೆ ಜೊತೆಯಾದ ರೆಹಮನುಲ್ಲಾ ಗುರ್ಬಾಜ್ ಹಾಗೂ ವೆಂಕಟೇಶ್ ಅಯ್ಯರ್ ಹೈದರಾಬಾದ್ ಬೌಲರ್‌ಗಳನ್ನು ಹಿಗ್ಗಮುಗ್ಗಾ ದಂಡಿಸಿದರು. ಆ ಮೂಲಕ 45 ಎಸೆತಗಳಲ್ಲಿ 91 ರನ್‌ಗಳ ಜತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಈ ವೇಳೆ 32 ಎಸೆತಗಳಲ್ಲಿ 2 ಸಿಕ್ಸರ್, 5 ಬೌಂಡರಿ ಒಳಗೊಂಡ 39 ರನ್ ಗಳಿಸಿ ಗುರ್ಬಾಜ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಮಿಂಚಿನ ಬ್ಯಾಟಿಂಗ್ ನಡೆಸಿದ ವೆಂಕಟೇಶ್ ಅಯ್ಯರ್ 26 ಎಸೆತಗಳಲ್ಲಿ 3 ಸಿಕ್ಸರ್, 4 ಬೌಂಡರಿ ಒಳಗೊಂಡ 52 ರನ್‌ಗಳಿಸಿ ಅಜೇಯರಾಗಿ ಉಳಿಯುವ ಮೂಲಕ ಗೆಲುವಿನ ರುವಾರಿ ಎನಿಸಿದರು. ಉಳಿದಂತೆ ಶ್ರೇಯಸ್ ಅಯ್ಯರ್ 6 ರನ್ ಗಳಿಸಿ ಅಜೇಯರಾಗಿ ಉಳಿದರು. ಹೈದರಾಬಾದ್ ಪರ ಪ್ಯಾಟ್ ಕಮ್ಮಿನ್ಸ್, ಶೆಹಬಾಸ್ ಅಹಮ್ಮದ್ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್ ಮೊದಲ ಓವರ್‌ನಿಂದಲೇ ವಿಕೆಟ್‌ಗಳನ್ನು ಕಳೆದುಕೊಳ್ಳುತ್ತಾ ಸಾಗಿತು. ಅಲ್ಲದೇ ಹಾಲಿ ವರ್ಷದ ಐಪಿಎಲ್‌ನಲ್ಲಿ ಸರಾಗವಾಗಿ ರನ್‌ಗಳ ಮಳೆಗರೆಯುತ್ತಿದ್ದ ಸನ್‌ರೈಸರ್ಸ್ ಹೈದರಾಬಾದ್ ತಂಡದ ಬ್ಯಾಟಿಂಗ್ ಐಪಿಎಲ್ ಫೈನಲ್‌ನಂತಹ ಅತ್ಯಂತ ಪ್ರಮುಖ ಪಂದ್ಯದಲ್ಲಿಯೇ ಕೈಕೊಟ್ಟಿತ್ತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಸ್ಫೋಟಕ ಬ್ಯಾಟ್ಸ್‌ಮನ್ ಅಭಿಷೇಕ್ ಶರ್ಮಾ 2 ರನ್‌ಗೆ ಔಟಾದರೆ, ಟ್ರಾವಿಸ್ ಹೆಡ್ ತಾವು ಎದುರಿಸಿದ ಮೊದಲ ಎಸೆತದಲ್ಲೇ ವಿಕೆಟ್ ಒಪ್ಪಿಸಿ ಪೆವಿಲಿಯನ್‌ಗೆ ಮರಳಿದರು. ನಂತರ ಬಂದ ರಾಹುಲ್ ತ್ರಿಪಾಠಿ 9, ಮಾರ್ಕ್ರಮ್ 20, ನಿತೀಶ್ ಕುಮಾರ್ ರೆಡ್ಡಿ 13, ಹೆನ್ರಿಚ್ ಕ್ಲಾಸೆನ್ 16, ಪ್ಯಾಟ್ ಕಮ್ಮಿನ್ಸ್ 19 ಎಸೆತಗಳಲ್ಲಿ 24 ರನ್‌ಗಳಿಸಿ ಔಟಾದರು. ಉಳಿದಂತೆ ಶಹಬಾಜ್ ಅಹ್ಮದ್ 8, ಅಬ್ದುಲ್ ಸಮದ್, ಜಯದೇವ್ ಉನದ್ಕಟ್ ತಲಾ 4 ರನ್ ಗಳಿಸುವ ಮೂಲಕ ಪೆವಿಲಿಯನ್ ಪರೇಡ್ ನಡೆಸಿದರು. ಕೆಕೆಆರ್ ಪರ ಮಾರಕ ಬೌಲಿಂಗ್ ದಾಳಿ ನಡೆಸಿದ ಆಂಡ್ರೆ ರಸೆಲ್ 3, ಮಿಚೆಲ್ ಸ್ಟಾರ್ಕ್, ಹರ್ಷಿತ್ ರಾಣಾ ತಲಾ 2, ವರುಣ್ ಚಕ್ರವರ್ತಿ, ವೈಭವ್ ಅರೋರಾ, ಸುನೀಲ್ ನರೇನ್ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.

17 ಆವೃತ್ತಿ ಐಪಿಎಲ್‌ಗೆ ತೆರೆ: ಕಳೆದ 2 ತಿಂಗಳಿಂದ ಕ್ರೀಡಾಭಿಮಾನಿಗಳನ್ನು ರಂಜಿಸಿದ 17ನೇ ಆವೃತ್ತಿಯ ಐಪಿಎಲ್ ಪಂದ್ಯಾವಳಿಗೆ ಚೆನ್ನೈನ ಚೆಪಾಕ್ ಕ್ರೀಡಾಂಗಣದಲ್ಲಿ ತೆರೆ ಬಿದ್ದಿತ್ತು

ಕದಳಿ ರಜತೋತ್ಸವ ಉದ್ಘಾಟನೆ

ಸ್ತ್ರೀ ಸ್ವಾತಂತ್ರ್ಯದ ಸಂಕೇತವಾದ ಅಕ್ಕಮಹಾದೇವಿ ಇಂದಿಗೂ ಪ್ರಸ್ತುತ

ಸಂಸ್ಕೃತ ವಿವಿಯ ವಿಶ್ರಾಂತ ಕುಲಪತಿ ಪ್ರೊ.ಪದ್ಮಾಶೇಖರ್ ಬಣ್ಣನೆ

ಮೈಸೂರು,ಮೇ 26(ಪಿಎಂ)– 12ನೇ ಶತಮಾನದ ಅಕ್ಕಮಹಾದೇವಿ ಇಂದಿಗೂ ಪ್ರಸ್ತುತ. ಸ್ತ್ರೀ ಸ್ವಾತಂತ್ರ್ಯದ ಸಂಕೇತವಾದ ಅಕ್ಕ ಆಧುನಿಕ ಯುಗದ ಸ್ತ್ರೀ ಕುಲದ ಪ್ರತಿನಿಧಿ. ವೈಚಾರಿಕತೆಯ ಜಾಗೃತ ಪ್ರಜ್ಞೆ ಆಕೆ ಎಂದು ಸಂಸ್ಕೃತ ವಿವಿಯ ವಿಶ್ರಾಂತ ಕುಲಪತಿ ಪ್ರೊ.ಪದ್ಮಾಶೇಖರ್ ಬಣ್ಣಿಸಿದರು.

ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಮೈಸೂರು ಜಿಲ್ಲಾ ಮತ್ತು ನಗರ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಮೈಸೂರು ಜಂಟಿ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಅಕ್ಕಮಹಾದೇವಿ ಜಯಂತಿ ಮತ್ತು ಕದಳಿ ರಜತೋತ್ಸವ ಉದ್ಘಾಟನೆಯಲ್ಲಿ ಜಯಂತಿ ಉದ್ಘಾಟಿಸಿ ಅವರು ಮಾತನಾಡಿದರು.

ಇಡೀ ಶರಣ ಚಳುವಳಿಯಲ್ಲಿ ಅಲ್ಲಮ ನನ್ನು ಬಿಟ್ಟರೆ ಆ ಎತ್ತರದಲ್ಲಿ ಇರುವ ಹೆಣ್ಣು ಮಗಳು ಅಕ್ಕ. ಸೋತು ಗೆದ್ದು ನಮ್ಮೆಲ್ಲರ ಬದುಕಿಗೆ ಅಕ್ಕ ಮಾದರಿಯಾಗಿದ್ದಾಳೆ ಎಂದು ಸ್ಮರಿಸಿದರು.

12ನೇ ಶತಮಾನವು ಕರ್ನಾಟಕದ ಆಧ್ಯಾತ್ಮಿಕ ಕ್ಷೇತ್ರಕ್ಕೆ ಹೊಸ ಆಯಮದ ಪರ್ವಕಾಲ. ಶರಣ ಚಳುವಳಿ ಮೂಲತಃ ಭಕ್ತಿ ಚಳುವಳಿ. ಧರ್ಮ ಪ್ರಚಾರವೂ ಅದರ ಮುಖ್ಯ ಉದ್ದೇಶವೇ ಆಗಿತ್ತು. ಆದರೆ ಆರ್ಥಿಕ ಮತ್ತು ಸಾಮಾಜಿಕ ಸುಧಾರಣೆಗೆ ಅವಕಾಶ, ಜನಹಿತ ಸಾಧನೆಗೆ ಭಕ್ತಿಯನ್ನು ಜನಪರವಾಗಿಸಿದ್ದು ಇದರ ಹೆಚ್ಚುಗಾರಿಕೆ ಎಂದರು.

ಜನಸಾಮಾನ್ಯರಿಗೆ ನಿಲುಕದ ಧಾರ್ಮಿಕ ಪರಿಭಾಷೆಯನ್ನು ಆಡುಭಾಷೆಯಲ್ಲಿ ಅಭಿವ್ಯಕ್ತಗೊಳಿಸಿದರು. ಜಾತಿರಹಿತ ಸಮಾಜದ ಪರಿಕಲ್ಪನೆ ತಂದರು. ಜಾತಿ, ವೃತ್ತಿ ಲಿಂಗಬೇಧವಿಲ್ಲದೆ ಎಲ್ಲರನ್ನು ಸಮಾನರಾಗಿ ಪರಿಗಣಿಸಿದರು. ಎಲ್ಲಾ ವೃತ್ತಿಗಳಿಗೂ ಗೌರವ ತಂದು ಕೊಟ್ಟರು. ಇದು ತಳ ಸಮುದಾಯದ ಬಹುಸಂಖ್ಯಾತರಲ್ಲಿ ಹೊಸ ಬೆಳಕು ಚಿಮ್ಮಿಸಿತು. ಶರಣರು ಮಹಿಳೆಯರಲ್ಲಿ ಪ್ರತ್ಯೇಕವಾದ ಅಸ್ತಿತ್ವ ಗುರುತಿಸಿ, ತಾತ್ವಿಕ ಸಮಾನತೆ ಕೊಟ್ಟರು. ಕುಟುಂಬದ ಸ್ವರೂಪವನ್ನು ಹೊಸ ರೀತಿಯಲ್ಲಿ ಸಜ್ಜುಗೊಳಿಸಿ, ಸ್ತ್ರೀ ವರ್ಗದಲ್ಲಿ ಆತ್ಮವಿಶ್ವಾಸ ಮೂಡಿಸಿದರು. ಕೆಳಸ್ತರದ ವರ್ಗಗಳು ನೆಮ್ಮದಿಯ ಬದುಕು ಮಾಡುವಂತೆ ಮಾಡಿದರು ಎಂದು ಹೇಳಿದರು.

ಅಕ್ಕನ ಕೊಡುಗೆ ಉನ್ನತವಾದುದು: 'ಅಕ್ಕನ ಆಧ್ಯಾತ್ಮಿಕ ಮತ್ತು ಅನುಭಾವದ ದರ್ಶನ' ಕುರಿತು ಮಾತನಾಡಿದ ಶಿಕ್ಷಣ ತಜ್ಞ ಡಾ.ಗುರುರಾಜ ಕರ್ಜಗಿ, ಶರಣರು ಮಾಡಿದ ಕ್ರಾಂತಿ ಅಸಾಮಾನ್ಯವಾದುದು. ಪ್ರಪಂಚದ ಬೇರೆ ಬೇರೆ ಭಾಗಗಳಲ್ಲಿ ಬೇರೆ ಬೇರೆ ರೀತಿಯ ಕ್ರಾಂತಿಗಳು ನಡೆದಿವೆ. ಒಂದೆಡೆ ಶೈಕ್ಷಣಿಕ ಕ್ರಾಂತಿಯಾದರೆ, ಮತ್ತೊಂದೆಡೆ ಸಾಮಾಜಿಕ ಕ್ರಾಂತಿಯಾಗಿದೆ. ಆದರೆ ಎಲ್ಲಾ ರೀತಿಯ ಕ್ರಾಂತಿಗಳನ್ನು ಸಮಗ್ರವಾಗಿ ಮಾಡಿದ್ದು ಶರಣರ ಚಳುವಳಿ. ಪ್ರಪಂಚದ ಇತಿಹಾಸದಲ್ಲಿ ಈ ರೀತಿಯ ಕ್ರಾಂತಿಯಾಗಿದ್ದು ಅದೇ ಮೊದಲು. ಇಂದಿಗೂ ಸಮಾನತೆ ಪರಿಪೂರ್ಣವಾಗಿ ತರಲು ಸಾಧ್ಯವಾಗುತ್ತಿಲ್ಲ. ಆದರೆ 900 ವರ್ಷಗಳ ಹಿಂದೆಯೇ ಅವರು ಸಮಾನತೆ ಸಾಧಿಸಿದ್ದರು. ಅಂತೆಯೇ ಅಕ್ಕಮಹಾದೇವಿ ಕೊಡುಗೆ ಇಡೀ ಪ್ರಪಂಚಕ್ಕೆ ಉನ್ನತವಾದುದು ಎಂದು ಸ್ಮರಿಸಿದರು.

ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಕದಳಿ ಮಹಿಳಾ ವೇದಿಕೆ ರಾಜ್ಯ ಸಂಚಾಲಕಿ ಸುಶೀಲಾ ಸೋಮಶೇಖರ್ ರಜತೋತ್ಸವ ಉದ್ಘಾಟಿಸಿದರು. ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಸಿ.ಸೋಮಶೇಖರ, ಜಿಲ್ಲಾಧ್ಯಕ್ಷ ಡಾ.ಹೆಳವರಹುಂಡಿ ಸಿದ್ದಪ್ಪ ಕದಳಿ ಮಹಿಳಾ ವೇದಿಕೆ ಮೈಸೂರು ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ ಮತ್ತಿತರರು ಹಾಜರಿದ್ದರು.



ಮೈಸೂರಿನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಅಕ್ಕಮಹಾದೇವಿ ಜಯಂತಿಯಲ್ಲಿ ಕದಳಿ ರಜತೋತ್ಸವ ಉದ್ಘಾಟಿಸಲಾಯಿತು.

ಅಕ್ಕನ ಕುರಿತು ಚಿತ್ರಸಹಿತ ಕೃತಿ ಪ್ರಕಟಣೆ

2000ರ ಮೇ 7ರಂದು ಮೈಸೂರಿನ ಕದಳಿ ವೇದಿಕೆ ಪ್ರಾರಂಭವಾಯಿತು. 24 ವರ್ಷಗಳನ್ನು ಪೂರೈಸಿ ಈಗ 25 ವರ್ಷಕ್ಕೆ ಮುನ್ನಡೆದಿದೆ. ಈ ರಜತೋತ್ಸವ ಪ್ರಯುಕ್ತ ಜೂ.12ರಿಂದ ಜು.6ರವರೆಗೆ ಮನೆ ಮನೆಗೆ ಶರಣೆಯರ ಆಗಮನವೆಂಬ ವಿನೂತನ ಕಾರ್ಯಕ್ರಮ ಆಯೋಜಿಸಿದ್ದೇವೆ. ವರ್ಷವಿಡಿ ವಿವಿಧ ಕಾರ್ಯಕ್ರಮಗಳ ಜೊತೆಗೆ ಮುಖ್ಯವಾಗಿ ಅಕ್ಕಮಹಾದೇವಿ ಕುರಿತು ಕೃತಿ ಪ್ರಕಟಿಸಲಾಗುವುದು. ಚಿತ್ರಸಹಿತ ಅಕ್ಕನ ಬದುಕು ಈ ಕೃತಿಯಲ್ಲಿ ಅನಾವರಣಗೊಳ್ಳಲಿದೆ.

–ಶಾರದಾ ಶಿವಲಿಂಗಸ್ವಾಮಿ, ಅಧ್ಯಕ್ಷರು, ಕದಳಿ ಮಹಿಳಾ ವೇದಿಕೆ, ಮೈಸೂರು.

ಬೆಂಗಳೂರಲ್ಲಿ ಡಯಾಬಿಟೀಸ್ ಕುರಿತು ಶೃಂಗಸಭೆ



ಆರ್‌ಎಸ್‌ಎಸ್‌ಡಿಐ ಮಾಜಿ ಅಧ್ಯಕ್ಷ ಡಾ.ಬ್ರಿಜ್ ಮೋಹನ್ ಮಕ್ಕರ್ ಅವರನ್ನು ಡಾ.ಜೆ.ಅರವಿಂದ ಸನ್ಮಾನಿಸಿದರು.



ಅಮೇರಿಕನ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನ ಗವರ್ನರ್ ಪ್ರೊ.(ಡಾ) ಅನುಜ್ ಮಹೇಶ್ವರಿ ಅವರನ್ನು ಡಾ.ಜೆ.ಅರವಿಂದ ಸನ್ಮಾನಿಸಿದರು.

ಮೈಸೂರು,ಮೇ 26(ಪಿಎಂ)– ಬೆಂಗಳೂರಿನ ಬಸವೇಶ್ವರನಗರದ ಡಾ.ಅರವಿಂದ್ಸ್ ಡಯಾಬಿಟೀಸ್ ಸೆಂಟರ್ ವತಿಯಿಂದ ಶನಿವಾರ ಮತ್ತು ಭಾನುವಾರ ಬೆಂಗಳೂರಿನ ಹೋಟೆಲ್ ಲಲಿತ್ ಅಶೋಕ್‌ನಲ್ಲಿ ಎಡಿಸಿ ಶೃಂಗಸಭೆ ಆಯೋಜಿಸಲಾಗಿತ್ತು.

ಡಾ.ಜೆ.ಅರವಿಂದ ಅವರ ನೇತೃತ್ವದಲ್ಲಿ ನಡೆದ ಈ ಶೃಂಗಸಭೆಯಲ್ಲಿ 540 ವೈದ್ಯರು ಹಾಗೂ 130 ರಾಷ್ಟ್ರ ಮಟ್ಟದ ತಜ್ಞರು ಪಾಲ್ಗೊಂಡು ಮಹತ್ವದ ವಿಚಾರಗಳನ್ನು ಮಂಡಿಸಿದರು. ಇದೇ ವೇಳೆ ಮಧುಮೇಹ ನಿರ್ವಹಣೆಗೆ ಸಂಬಂಧಿಸಿದಂತೆ ಮಹತ್ವದ ಕೊಡುಗೆ ನೀಡಿರುವ ಇಬ್ಬರು ಖ್ಯಾತ ವೈದ್ಯರನ್ನು ಸನ್ಮಾನಿಸಲಾಯಿತು. ಅಮೇರಿಕನ್ ಕಾಲೇಜ್ ಆಫ್ ಫಿಸಿಶಿಯನ್ಸ್‌ನ ಗವರ್ನರ್ ಪ್ರೊ.(ಡಾ) ಅನುಜ್ ಮಹೇಶ್ವರಿ ಹಾಗೂ ರಿಸರ್ಚ್ ಸೊಸೈಟಿ ಫಾರ್ ದಿ ಸ್ಟಡಿ ಆಫ್ ಡಯಾಬಿಟೀಸ್ ಇನ್ ಇಂಡಿಯಾದ (ಆರ್‌ಎಸ್‌ಎಸ್‌ಡಿಐ) ಮಾಜಿ ಅಧ್ಯಕ್ಷ ಡಾ.ಬ್ರಿಜ್ ಮೋಹನ್ ಮಕ್ಕರ್ ಅವರೇ ಸನ್ಮಾನಕ್ಕೆ ಭಾಜನರಾದ ವೈದ್ಯರು.

ಪಂಡಿತ್ ರಾಜೀವ್ ತಾರಾನಾಥ್ ಆರೋಗ್ಯ ವಿಚಾರಿಸಿದ ಹೆಚ್‌ಸಿಎಂ



ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರು ಅನಾರೋಗ್ಯದಿಂದ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ ಹಿರಿಯ ಸಂಗೀತ ವಿದ್ವಾನ್ ಪಂಡಿತ್ ರಾಜೀವ್ ತಾರಾನಾಥ್ ಅವರ ಆರೋಗ್ಯ ವಿಚಾರಿಸಿದರು.

ಇಲ್ಲಿ ಸೆಲ್ಫಿ ಕ್ಲಿಕ್ಕಿಸಲು ಹೋದರೆ ಅಪಾಯ ಕಟ್ಟಿಟ್ಟ ಬುತ್ತಿ

● ತಡೆಗೋಡೆ ತುತ್ತ ತುದಿಯಲ್ಲಿ ಸೆಲ್ಫಿ, ರೀಲ್ಸ್ ● ಪ್ರವಾಸಿಗರ ಹುಚ್ಚು ಸಾಹಸ



ಜನರು ಚಿಕ್ಕಮಕ್ಕಳೊಂದಿಗೆ ತಡೆಗೋಡೆ ತುತ್ತ ತುದಿಯಲ್ಲಿ ನಿಂತು ಫೋಟೋಗಳಿಗೆ ಫೋಸು ನೀಡುತ್ತಿರುವುದು.

ಮಡಿಕೇರಿ, ಮೇ 26– ನಗರದ ಜನರಲ್ ತಿಮ್ಮಯ್ಯ ವೃತ್ತದ ಮೂಲಕ ಮಂಗಳೂರು ರಸ್ತೆ ಕಡೆಗೆ ತೆರಳುವ ಮಾರ್ಗದಲ್ಲಿ ನಿರ್ಮಿಸಿರುವ ತಡೆಗೋಡೆ ಪ್ರದೇಶ ಇದೀಗ ಪ್ರವಾಸಿಗರ ಹುಚ್ಚು ಸಾಹಸದ ಸೆಲ್ಫಿ ಸ್ಥಳವಾಗಿ ಬದಲಾಗಿದೆ.

ರಾಜಾಸೀಟು ಬೆಟ್ಟದ ಕೆಳಗಿರುವ ಈ ತಡೆಗೋಡೆಯ ಅಸುರಕ್ಷಿತ ಪ್ರದೇಶ ಸಾವಿರ ಅಡಿಗೂ ಹೆಚ್ಚು ಪ್ರಪಾತವನ್ನು ಹೊಂದಿದ್ದು, ಇದರ ಅರಿವೇ ಇಲ್ಲದ ಪ್ರವಾಸಿಗರು ಇಲ್ಲಿ ನಿಂತು ತಮ್ಮ ಮೊಬೈಲ್‌ಗಳ ಕ್ಯಾಮರಾ ಮೂಲಕ ಪರಿಸರದ ಸೊಬಗನ್ನು ಸೆರೆ ಹಿಡಿಯುವ ಹಾಗೂ ಸೆಲ್ಫಿ ಕ್ಲಿಕ್ಕಿಸುವ ಜೊತೆಯಲ್ಲಿ ಅಪಾಯವನ್ನೂ ಮೈ ಮೇಲೆ ಎಳೆದುಕೊಳ್ಳುತ್ತಿದ್ದಾರೆ.

ಕೆಲವರು ತಡೆಗೋಡೆ ತುತ್ತ ತುದಿಯಲ್ಲಿ ನಿಂತು ಸೆಲ್ಫಿ ಕ್ಲಿಕ್ಕಿಸಿದರೆ ಮತ್ತೆ ಕೆಲವರು ರೀಲ್ಸ್ ಮಾಡೋ ನೆಪದಲ್ಲಿ ಬಂಡು ಧೈರ್ಯ ತೋರುತ್ತಿದ್ದಾರೆ. ಯುವಕ-ಯುವತಿಯರು ಸಹಿತ ದಂಪತಿಗಳು ಕೂಡ ಚಿಕ್ಕಮಕ್ಕಳನ್ನು ಎತ್ತಿಕೊಂಡು ಫೋಟೋಗಳಿಗೆ ಫೋಸು ನೀಡುವ ನೆಪದಲ್ಲಿ ಮೋಜು ಮಸ್ತಿಯ ಎಲ್ಲೆ ಮೀರುತ್ತಿದ್ದಾರೆ. ಈ ಸ್ಥಳದಿಂದ ನಿಂತು ನೋಡಿದರೆ ಕಣ್ಣು ಹಾಯಿಸಿದಷ್ಟು ದೂರದವರೆಗೆ ಹಚ್ಚ ಹಸಿರ ಪರಿಸರ, ಭತ್ತದ ಗದ್ದೆ ಬಯಲುಗಳ ಸಹಿತ ಮಂಜು ಮುಸುಕಿದ ವಾತಾವರಣ ಕಂಡು ಬರುತ್ತದೆ. ಈ ದೃಶ್ಯ ನೋಡಲು ಎಷ್ಟು ಸುಂದರವಾಗಿದೆಯೋ ಅದಕ್ಕಿಂತ ದುಪ್ಪಟ್ಟು ಅಪಾಯವೂ ಇಲ್ಲಿದೆ.

ಈ ಪ್ರದೇಶ ಕಣಿವೆ ಮಾದರಿಯಲ್ಲಿದ್ದು, ಮಳೆಗಾಲವಾದ ಕಾರಣ ಬಲವಾದ ಗಾಳಿಯೂ ಬೀಸುತ್ತದೆ. ಮಾತ್ರವಲ್ಲದೇ, ತಡೆಗೋಡೆಯ ಮೇಲೆ ಯಾವುದೇ ರೀತಿ ಸುರಕ್ಷಾ ಬೇಲಿಗಳಿಲ್ಲದ ಕಾರಣ ಸ್ವಲ್ಪ ಎಡವಿದರೂ ಬದುಕುಳಿಯುವ ಯಾವುದೇ ಸಾಧ್ಯತೆಯೂ ಇಲ್ಲ. ಇಂತಹ ಕಡೆಗಳಲ್ಲಿ ಮೋಜಿನ ಹೆಸರಲ್ಲಿ ಪ್ರವಾಸಿಗರು ತಮ್ಮ ಜೀವದ ಜೊತೆಯೇ ಚೆಲ್ಲಾಟ ಆಡುತ್ತಿರುವುದು ಕಂಡು ಬರುತ್ತಿದೆ.

2018ರಲ್ಲಿ ಭಾರಿ ಭೂ ಕುಸಿದ ಸಂಭವಿಸಿದ ಪರಿಣಾಮ ಮಡಿಕೇರಿ–ಮಂಗಳೂರು ರಾಷ್ಟ್ರೀಯ ಹೆದ್ದಾರಿಯೇ ತುಂಡಾಗುವ ಅಪಾಯ ಎದುರಾಗಿತ್ತು. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕೋಟ್ಯಾಂತರ ರೂ. ವೆಚ್ಚದಲ್ಲಿ ಸದೃಢವಾದ ತಡೆಗೋಡೆ ನಿರ್ಮಿಸಿದೆ. ತಡೆಗೋಡೆ ಕಾಮಗಾರಿ ಮುಕ್ತಾಯವಾದ ಬಳಿಕ ಅತ್ತ ಕಡೆ ಯಾರೂ ತೆರಳದಂತೆ ಹಿಂದೆ ಹೆದ್ದಾರಿ ಪ್ರಾಧಿಕಾರ ಬದಿಗಿನ ಬೇಲಿ ಹಾಕಿತ್ತು. ಕ್ರಮೇಣ ಗಾಳಿ ಮಳೆಗೆ ಈ ಬೇಲಿ ನಾಶವಾಗಿದ್ದು, ಇದೀಗ ಯಾವುದೇ ತಡೆ ಇಲ್ಲದಾಗಿದೆ. ಇನ್ನು ಇದೇ ಸ್ಥಳದಲ್ಲಿ ಮದ್ಯ ಹಾಗೂ ಬಿಯರ್ ಬಾಟಲ್‌ಗಳು ಕೂಡ ಪತ್ತೆಯಾಗಿದ್ದು, ಹದ್ದು ಮೀರಿದ ವರ್ತನೆಯನ್ನು ಪುಷ್ಟಿಕರಿಸುತ್ತಿದೆ.

ಪೊಲೀಸರಿಂದ ಬ್ರೇಕ್



ಅಪಾಯಕಾರಿ ತಡೆಗೋಡೆ ಪ್ರದೇಶದ ಕಡೆ ತೆರಳಿ ಪ್ರವಾಸಿಗರು ಹುಚ್ಚು ಸಾಹಸ ತೋರುತ್ತಿರುವುದರಿಂದ ಸಾರ್ವಜನಿಕರು ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಭಾನುವಾರ ಸ್ಥಳಕ್ಕಾಗಮಿಸಿದ ಮಡಿಕೇರಿ ನಗರ ಠಾಣೆ ಮತ್ತು ಸಂಚಾರಿ ಠಾಣೆ ಪೊಲೀಸರು ಸ್ಥಳದಲ್ಲಿದ್ದ ಪ್ರವಾಸಿಗರಿಗೆ ಬುದ್ಧಿ ಹೇಳಿ ಹಿಂದಕ್ಕೆ ಕಳುಹಿಸಿದರು. ಕೆಲವರು ಹೆದ್ದಾರಿ ಬದಿಯಲ್ಲೇ ವಾಹನಗಳನ್ನು ನಿಲ್ಲಿಸಿಕೊಂಡು ಇತರ ವಾಹನ ಸಂಚಾರಕ್ಕೆ ಅಡ್ಡಿ ಮಾಡುತ್ತಿದ್ದ ಹಿನ್ನೆಲೆಯಲ್ಲಿ ಎಲ್ಲಾ ವಾಹನಗಳನ್ನು ಸ್ಥಳದಿಂದ ತೆರವುಗೊಳಿಸಿ, ಬಳಿಕ ಅಪಾಯಕಾರಿ ಪ್ರದೇಶಕ್ಕೆ ಯಾರೂ ಸುಳಿಯದಂತೆ ಎಚ್ಚರಿಕೆಯ ಟೇಪ್ ಅಳವಡಿಸಿದರು.

ಅರಣ್ಯ ಇಲಾಖೆಯಿಂದ ರೈತ ವಿರೋಧಿ ಕ್ರಮ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಭೂ ಮಾಲೀಕರು ಮತ್ತು ಮರ ವ್ಯಾಪಾರಿಗಳ ಸಂಘದ ಅಧ್ಯಕ್ಷ ಅರವಿಂದ್ ಕುಟ್ಟಪ್ಪ ಮಾತನಾಡಿದರು.

ಮಡಿಕೇರಿ, ಮೇ 26– ಖಾಸಗಿ ಹಿಡುವಳಿ ಜಾಗದಲ್ಲಿ ಮೇ 10ರ ಸೆ.30ರವರೆಗೆ ಮರಕಡಿತಲೆಗೆ ಅನುಮತಿ ನೀಡುವುದನ್ನು ತಡೆ ಹಿಡಿದಿರುವ ಅರಣ್ಯ ಇಲಾಖೆ ಕ್ರಮ ರೈತ ವಿರೋಧಿಯಾಗಿದೆ ಎಂದು ಕೊಡಗು ಜಿಲ್ಲಾ ಭೂ ಮಾಲೀಕರು ಮತ್ತು ಮರ ವ್ಯಾಪಾರಿಗಳ ಸಂಘ ಆರೋಪಿಸಿದೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಅರವಿಂದ ಕುಟ್ಟಪ್ಪ ಮತ್ತು ಪದಾಧಿಕಾರಿಗಳು, ಅರಣ್ಯ ಇಲಾಖೆ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿವರ್ಷ ಮಳೆಗಾಲದ ಸಂದರ್ಭ ಜೂ.10ರಿಂದ ಸೆ.30ರವರೆಗೆ ಮರ ಕಡಿತಲೆಗೆ ಅನುಮತಿ ನಿರಾಕರಿಸಲಾಗುತ್ತಿತ್ತು. ಆದರೆ, ಈ ಬಾರಿ ಒಂದು ತಿಂಗಳು ಮೊದಲೇ ಅನುಮತಿ ಸ್ಥಗಿತಗೊಳಿಸಲಾಗಿದೆ. ಕಾಫಿ ತೋಟದಲ್ಲಿ ಅತಿ ಹೆಚ್ಚು ನೆರಳು ನೀಡುವ ಮರಗಳನ್ನು ಕಾಫಿ ಹಣ್ಣು ಬಲಿತ ಸಮಯವನ್ನು ಹೊರತುಪಡಿಸಿ ಅರಣ್ಯ ಇಲಾಖೆಯ ಅನುಮತಿ ಪಡೆದು ಕಡಿಯಲು ಕೇವಲ 2–3 ತಿಂಗಳು ಮಾತ್ರ ಅವಕಾಶವಿರುತ್ತದೆ. ಇದೀಗ ಒಂದು ತಿಂಗಳು ಮೊದಲೇ ಅನುಮತಿ ಸ್ಥಗಿತಗೊಳಿಸಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ವಿದ್ಯುತ್ ಲೈನ್ ಹಾದು ಹೋಗುವ ಸ್ಥಳದಲ್ಲಿರುವ ಕಾಡುಬೇವು, ಅಕೇಶಿಯಾ, ವಿಲಯಾಪ್ಸಿಸ್, ಮ್ಯಾಂಜಿಯಂ ಮತ್ತು ಸಿಲ್ವರ್ ಓಕ್ ಮರಗಳನ್ನು ವರ್ಷದ ಎಲ್ಲಾ ಸಮಯದಲ್ಲಿ ಕಡಿದು ಸಾಗಿಸುವುದಕ್ಕೆ ಯಾವುದೇ ನಿರ್ಬಂಧವಿಲ್ಲ. ಇದರಿಂದ ಪರಿಸರಕ್ಕೆ ಹಾನಿಯಾಗುವುದಿಲ್ಲವೇ ಎಂದು ಪ್ರಶ್ನಿಸಿದರು.

ಸ್ವಂತ ಉಪಯೋಗಕ್ಕೆ ಮರ ಕಡಿಯಲು ಅನುಮತಿ ಕೋರಿ ಸಲ್ಲಿಕೆಯಾದ ಅರ್ಜಿಗಳು ವಿಲೇವಾರಿಯಾಗಲು ವಿಳಂಬವಾಗುತ್ತಿವೆ. 6 ತಿಂಗಳು ಕಳೆದರೂ ಅನುಮತಿ ಸಿಗುತ್ತಿಲ್ಲ. ಈ ಅವ್ಯವಸ್ಥೆಯನ್ನು ತಕ್ಷಣ ಸರಿಪಡಿಸಬೇಕು. ಮರಗಳ ಹರಾಜು ಪ್ರಕ್ರಿಯೆಯನ್ನು ವಿಳಂಬವಿಲ್ಲದೆ ನಿಯಮ ಬದ್ಧವಾಗಿ ಮಾಡಬೇಕು. ದಕ್ಷಿಣ ಕೊಡಗಿನ ಕೆಲ ಭಾಗಗಳಲ್ಲಿ ನಡೆದಿರುವ ಮರಗಳ ಹನನದ ವಿರುದ್ಧ ಸೂಕ್ತ ತನಿಖೆ ಕೈಗೊಳ್ಳಬೇಕು. ಹಲವು ವರ್ಷಗಳಿಂದ ಕೊಡಗು ಜಿಲ್ಲೆಯಲ್ಲೇ ಕಾರ್ಯನಿರ್ವಹಿಸುತ್ತಿರುವ ಅರಣ್ಯಾಧಿಕಾರಿಗಳನ್ನು ವರ್ಗಾವಣೆ ಮಾಡಬೇಕು. ಖಾಸಗಿ ತೋಟಗಳ ಮರಗಳನ್ನು ಸರ್ವೆ ಮಾಡುತ್ತಿರುವ ಅರಣ್ಯ ಇಲಾಖೆಯ ಕ್ರಮವನ್ನು ವಿರೋಧಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಎ.ಮನೋರಂಜನ್, ಉಪಾಧ್ಯಕ್ಷ ಕೆ.ಎ.ಆದಂ, ಕಾನೂನು ಸಲಹೆಗಾರ ಸಿ.ಬಿ.ಪೂವಣ್ಣ ಹಾಗೂ ನಿರ್ದೇಶಕ ಎಂ.ರಾಜೀವ್ ಉಪಸ್ಥಿತರಿದ್ದರು.

ಜೂ.4ರಿಂದ ಕನ್ನಂಬಾಡಿಯಮ್ಮ ವಾರ್ಷಿಕೋತ್ಸವ

ಗೋಣಿಕೊಪ್ಪ, ಮೇ 26–ಕೃಷ್ಣ ನಗರದ ಗ್ರಾಮದೇವತೆ ಕನ್ನಂಬಾಡಿಯಮ್ಮ ವಾರ್ಷಿಕೋತ್ಸವ ಜೂ.4 ರಿಂದ 11ರವರೆಗೆ ನಡೆಯಲಿದೆ.

ಜೂ.4ರಂದು ಹರಕೆ ಕಟ್ಟುವ ಆಚರಣೆ, 7ರಂದು ಬೆಳಗ್ಗೆ 7 ಗಂಟೆಗೆ ಗಣಪತಿ ಹೋಮ, 11ರಂದು ಕಳಸ ಕಾರ್ಯ ನೆರವೇರಲಿದೆ. ಬೆಳಗ್ಗೆ 7 ಗಂಟೆಗೆ ರಾಮಮಂದಿರ ಸಮೀಪದ ಬಾವಿಯಿಂದ ಪವಿತ್ರ ಗಂಗಾಜಲ ಕಳಸ ಹೊರಡಲಿದೆ, ಬೆಳಗ್ಗೆ 10.30ಕ್ಕೆ ಹರಕೆ ಒಪ್ಪಿಸುವ ಆಚರಣೆ, ಬೆಳಗ್ಗೆ 11 ಗಂಟೆಗೆ ಅಮ್ಮನಿಗೆ ವಿವಿಧ ಅಭಿಷೇಕ ಅರ್ಪಣೆ, ಮಧ್ಯಾಹ್ನ 12 ಗಂಟೆಗೆ ಮಹಾಪೂಜೆ, ಮಹಾಮಂಗಳಾರತಿ ಹಾಗೂ 1 ಗಂಟೆಗೆ ಅನ್ನಸಂತರ್ಪಣೆ ನಡೆಯಲಿದೆ ಎಂದು ದೇವಸ್ಥಾನ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.



ಗೋಣಿಕೊಪ್ಪಲಿನ ಕೋಟೂರು ಗ್ರಾಮದ ಕಾಟಿಮಾಡ ಕುಟುಂಬದ ಕಾರಣ್ಣೆ ಸ್ಥಾನಕ್ಕೆ ಭೂಮಿಪೂಜೆ ನೆರವೇರಿಸಲಾಯಿತು. ಹಿರಿಯರಾದ ಕಾಟಿಮಾಡ ಜಿಮ್ಮಿ ಅಣ್ಣಯ್ಯ, ಬೋಪಯ್ಯ, ಕುಟ್ಟಪ್ಪ, ಕುಟುಂಬ ಸಮಿತಿ ಅಧ್ಯಕ್ಷ ರಂಜು ಬೋಪಯ್ಯ ಇದ್ದರು.

ಮಾಯಮುಡಿ ಕಮಟೆ ಸುತ್ತಮುತ್ತ ಕಾಡಾನೆ ಉಪಟಳ

ಗೋಣಿಕೊಪ್ಪ, ಮೇ 26– ಮಾಯಮುಡಿ ಗ್ರಾಮದ ಕಮಟೆ ಸುತ್ತಮುತ್ತ ಕಾಡಾನೆಗಳ ಎರಡು ಗುಂಪು ನಿರಂತರವಾಗಿ ಸುತ್ತಾಡುತ್ತಿದ್ದು, ಇದರಿಂದ ಸ್ಥಳೀಯರು ಭಯಗೊಂಡಿದ್ದಾರೆ.

ಒಂದು ವಾರದಿಂದ ಕಾಫಿ ತೋಟಗಳಿಗೆ ಲಗ್ಗೆ ಇಟ್ಟಿವೆ. ಕಾಫಿ, ಅಡಕೆ, ಬಾಳೆ ಗಿಡ ಹಾಗೂ ಕರಿಮೆಣಸು ಬಳ್ಳಿಗಳನ್ನು ನಾಶಪಡಿಸಿವೆ. ಈ ಭಾಗದಲ್ಲಿ ಕಾಡಾನೆಗಳ ಹಾವಳಿಯಿಂದ ರೈತರು 2 ವರ್ಷದಿಂದ ಭತ್ತ ಬೆಳೆಯುವುದನ್ನು ಬಿಟ್ಟಿದ್ದಾರೆ. ಅರಣ್ಯ ಇಲಾಖೆಯವರು ಆನೆಗಳನ್ನು ಕಾಫಿ ತೋಟದಿಂದ ಓಡಿಸುವ ಬದಲು ಬೇರೆ ಕಾರಣಗಳನ್ನು ನೀಡುತಿದ್ದಾರೆ ಎಂದು ದೂರಿದ ಸ್ಥಳೀಯರು, ತೋಟದಲ್ಲಿ ಕೆಲಸ ಮಾಡಲು ಕಾರ್ಮಿಕರು ಹಿಂದೇಟು ಹಾಕುತ್ತಿದ್ದಾರೆ. ಅಲ್ಲದೆ, ಜನರು ಓಡಾಡಲು ಹೇದರುತ್ತಿದ್ದಾರೆ.

ಈ ಭಾಗದಲ್ಲಿ ಆನೆಗಳು ಸಂಜೆ 6 ಗಂಟೆಯಿಂದ ಬೆಳಗ್ಗೆ 8 ಗಂಟೆವರೆಗೆ ಸುತ್ತಾಡುತ್ತವೆ. ಇದರಿಂದ ಶಾಲಾ–ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಜನರು ತಿರುಗಾಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಜಿಲ್ಲಾಧಿಕಾರಿಗಳು ಇತ್ತ ಗಮನ ಹರಿಸಿ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಕನ್ನಡ ಭಾಷೆ ಕಡ್ಡಾಯ ಗಡುವು ವಿಸ್ತರಣೆಗೆ ಮನವಿ

ಮಡಿಕೇರಿ, ಮೇ 26–ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆಯನ್ನು ಮೇ 30ರೊಳಗೆ ಕಡ್ಡಾಯವಾಗಿ ಪ್ರದರ್ಶಿಸಬೇಕೆಂದು ನೀಡಿರುವ ಗಡುವನ್ನು ಡಿ.31ರವರೆಗೆ ವಿಸ್ತರಿಸಬೇಕೆಂದು ಕೊಡಗು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಜಿಲ್ಲಾಡಳಿತಕ್ಕೆ ಮನವಿ ಮಾಡಿದೆ.



ನಾಗೇಂದ್ರ ಪ್ರಸಾದ್

ಜಿಲ್ಲಾಧಿಕಾರಿ ವೆಂಕಟ್‌ರಾಜಾ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಬಿ.ಆರ್.ನಾಗೇಂದ್ರ ಪ್ರಸಾದ್, ಕೊಡಗು ಜಿಲ್ಲೆಯಲ್ಲಿ ಈಗಾಗಲೇ ಮಳೆ ಪ್ರಾರಂಭವಾಗಿದ್ದು, ನಾಮಫಲಕವನ್ನು ಬದಲಾಯಿಸಲು ಅಡಚಣೆಯಾಗಿದೆ. ಅಲ್ಲದೆ ಆರ್ಥಿಕ ಪರಿಸ್ಥಿತಿಯೂ ಹಿನ್ನಡೆಯನ್ನುಂಟು ಮಾಡುತ್ತಿದೆ ಎಂದು ತಿಳಿಸಿದರು.

ಕೊಡಗು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಮಹಾಸಭೆಗೆ ಆಗಮಿಸಿದ್ದ ನಗರಸಭೆಯ ಅಧಿಕಾರಿಗಳು ಮಾಹಿತಿ ಮತ್ತು ಅಧಿಸೂಚನೆಯ ಪ್ರತಿಯನ್ನು ನೀಡಿ ಮೇ 30ರೊಳಗೆ ಶೇ.60ರಷ್ಟು ಕನ್ನಡ ಭಾಷೆಯ ನಾಮಫಲಕ ಅಳವಡಿಸುವಂತೆ ಸೂಚಿಸಿದ್ದಾರೆ. ಆದರೆ, ಕೊಡಗಿನ ವಾತಾವರಣ ಮತ್ತು ವ್ಯಾಪಾರಿಗಳ ಆರ್ಥಿಕ ಪರಿಸ್ಥಿತಿ ಇದಕ್ಕೆ ಪೂರಕವಾಗಿಲ್ಲ. ಕೆಲವು ವಾಣಿಜ್ಯೋದ್ಯಮಿಗಳು ಇತ್ತೀಚೆಗಷ್ಟೇ ಸಾವಿರಾರು ರೂ. ಖರ್ಚು ಮಾಡಿ ನಾಮಫಲಕಗಳನ್ನು ಅಳವಡಿಸಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ಮತ್ತೆ ನಾಮಫಲಕದ ಬದಲಾವಣೆ ಕಷ್ಟವಾಗಲಿದೆ ಎಂದರು.

ವರ್ತಕರು ಹಾಗೂ ವಾಣಿಜ್ಯೋದ್ಯಮಿಗಳ ಹಿತದೃಷ್ಟಿಯಿಂದ ಡಿ.31ರವರೆಗೆ ಗಡುವು ವಿಸ್ತರಿಸಿ ಸಹಕರಿಸಬೇಕು. ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆ ಬಳಸುವುದಕ್ಕೆ ನಮ್ಮ ಒಪ್ಪಿಗೆ ಇದೆ ಎಂದು ಸ್ಪಷ್ಟಪಡಿಸಿದರು.

ಅರಮಣಮಾಡ ಕುಟುಂಬದಿಂದ ಮೈದಾನ ಸ್ವಚ್ಛತೆ

ಗೋಣಿಕೊಪ್ಪ: ಇಲ್ಲಿನ ವಿಜಯಲಕ್ಷ್ಮಿ ಕಾಲೇಜು ಮತ್ತು ಸರ್ಕಾರಿ ಪ್ರಾಥಮಿಕ ಶಾಲಾ ಮೈದಾನವನ್ನು ಅರಮಣಮಾಡ ಕುಟುಂಬದ ಸದಸ್ಯರು ಸ್ವಚ್ಛತೆಗೊಳಿಸಿದರು.

ಮೈದಾನದಲ್ಲಿ ಅರಮಣಮಾಡ ಕುಟುಂಬದ ವತಿಯಿಂದ ಆಯೋಜಿಸಿದ್ದ ಕ್ರಿಕೆಟ್ ಪಂದ್ಯಾವಳಿ ಹಿನ್ನೆಯಲ್ಲಿ ಆವರಣದಲ್ಲಿ ಕಸ, ಪ್ಲಾಸ್ಟಿಕ್ ಸೇರಿದಂತೆ ತ್ಯಾಜ್ಯ ಹರಡಿತ್ತು. ಎಲ್ಲಾ ಕಸವನ್ನು ಕುಟುಂಬದ ಸದಸ್ಯರು ತೆರವುಗೊಳಿಸಿ ಸ್ವಚ್ಛತೆಗೊಳಿಸಿದರು.



ಅರಮಣಮಾಡ ಕುಟುಂಬದವರು ಮೈದಾನ ಸ್ವಚ್ಛಗೊಳಿಸಿದರು.

ಸುವರ್ಣಾವತಿ, ಚಿಕ್ಕಹೊಳೆಗೆ ಜೀವಕಳೆ

ಜಲಾನಯನ ಪ್ರದೇಶಗಳಲ್ಲಿ ಮಳೆ ಹಿನ್ನೆಲೆಯಲ್ಲಿ ಒಳ ಹರಿವು ಹೆಚ್ಚಳ

ಚಾಮರಾಜನಗರ, ಮೇ 26–ಜಿಲ್ಲೆಯ ಅವಳಿ ಜಲಾಶಯಗಳೆಂದೇ ಹೆಸರುವಾಸಿಯಾಗಿರುವ ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾನಯನ ಪ್ರದೇಶಗಳಲ್ಲಿ ಆಗುತ್ತಿರುವ ಮಳೆಯಿಂದ ಜಲಾಶಯಗಳಿಗೆ ಜೀವಕಳೆ ಬಂದಿದೆ.

ತಮಿಳುನಾಡಿನ ದಿಂಬಂ, ಬೇಡಗುಳಿ, ತಾಳವಾಡಿ, ಸೇರಿದಂತೆ ಬಿಆರ್‌ಟಿ ಅರಣ್ಯ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದೆ. ಇದರಿಂದ ಕಳೆದ ಎರಡು ದಿನಗಳಿಂದ ಜಲಾಶಯದ ಒಳ ಹರಿವು ಹೆಚ್ಚಳವಾಗಿದೆ. ಸುವರ್ಣಾವತಿ ಜಲಾಶಯದ ಗರಿಷ್ಠ ಮಟ್ಟ 2455 ಅಡಿ ಹಾಗೂ ಚಿಕ್ಕಹೊಳೆ ಜಲಾಶಯ ಗರಿಷ್ಠ ಮಟ್ಟ 2474 ಅಡಿ ಇದೆ. ಈಗಾಗಲೇ ಸುವರ್ಣಾವತಿ ಜಲಾಶಯಕ್ಕೆ 1 ಅಡಿಯಷ್ಟು ಹಾಗೂ ಚಿಕ್ಕಹೊಳೆ ಜಲಾಶಯಕ್ಕೆ 1.5 ಅಡಿಯಷ್ಟು ನೀರು ಬಂದಿದೆ. ಬಿಆರ್‌ಟಿ ಅರಣ್ಯ ಪ್ರದೇಶ ಹಾಗೂ ತಾಳವಾಡಿ ಭಾಗದಲ್ಲಿ ಇದೇ ರೀತಿ ನಿರಂತರವಾಗಿ ಮಳೆಯಾದರೆ ಮುಂದಿನ ದಿನಗಳಲ್ಲಿ ಎರಡು ಜಲಾಶಯಗಳಿಗೂ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುವ ಸಾಧ್ಯತೆ ಇದೆ.



ಚಾಮರಾಜನಗರ ಜಿಲ್ಲೆಯ ಸುವರ್ಣಾವತಿ ಜಲಾಶಯ.

ಸುವರ್ಣಾವತಿ ಮತ್ತು ಚಿಕ್ಕಹೊಳೆ ಜಲಾಶಯಗಳು ಸಾಮಾನ್ಯವಾಗಿ ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ಮತ್ತು ನವೆಂಬರ್‌ನಲ್ಲಿ ಭರ್ತಿಯಾಗುತ್ತವೆ. ಆದರೆ, 2022ರಲ್ಲಿ ಇದೇ ರೀತಿ ಸತತವಾಗಿ ಮಳೆಯಾಗಿದ್ದ ಪರಿಣಾಮವಾಗಿ ಮೇ ತಿಂಗಳಲ್ಲೇ ಎರಡು ಜಲಾಶಯಗಳು ಭರ್ತಿಯಾಗಿದವು. 1000 ಕ್ಕಿಂತಲೂ ಹೆಚ್ಚು ಕ್ಯೂಸೆಕ್ ನೀರನ್ನು ಏಕಕಾಲದಲ್ಲಿ ಎರಡು ಜಲಾಶಯಗಳಿಂದ ನದಿ ಹಾಗೂ ಕಾಲುವೆಗೆ ಹರಿಬಿಡಲಾಗಿತ್ತು. ಪೂರ್ವ ಮುಂಗಾರಿನಲ್ಲಿ ಉತ್ತಮ ಮಳೆಯಾಗಿರುವುದು ಮತ್ತು ಈ ಬಾರಿ ಕೇರಳಕ್ಕೆ ಬೇಗನೆ ಮುಂಗಾರು ಆಗಮನವಾಗುತ್ತಿರುವುದರಿಂದ ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಅಂತೆಯೇ ಚಾಮರಾಜನಗರ, ಯಳಂದೂರು ತಾಲೂಕಿನ ರೈತರ ಜೀವನಾಡಿ ಆಗಿರುವ ಅವಳಿ ಜಲಾಶಯಗಳು ಭರ್ತಿಯಾಗುವ ನಿರೀಕ್ಷೆ ಇದೆ.

13 ಕೆರೆಗಳಿಗೆ ಆಧಾರ: ಸುವರ್ಣಾವತಿ ಮತ್ತು ಚಿಕ್ಕಹೊಳೆ ಜಲಾಶಯಗಳು ಚಾಮರಾಜನಗರ ಮತ್ತು ಯಳಂದೂರು ತಾಲೂಕಿನ ಸುಮಾರು 13 ಬೃಹತ್ ಕೆರೆಗಳಿಗೂ ಆಧಾರವಾಗಿದೆ. ಈ ಕೆರೆಗಳು ಭರ್ತಿಯಾದರೆ ಈ ಭಾಗದ ಅಂತರ್ಜಲ ಮಟ್ಟವೂ ಹೆಚ್ಚಾಗಲಿದ್ದು, ಕೃಷಿ ಮತ್ತು ಕುಡಿಯುವ ನೀರಿನ ಪಂಪ್‌ಸೆಟ್‌ಗಳಿಗೂ ಬಲಬಂದಂತಾಗುತ್ತದೆ. ಈ ನಿಟ್ಟಿನಲ್ಲಿ ಅವಳಿ ಜಲಾಶಯಗಳು ಆದಷ್ಟು ಬೇಗ ಭರ್ತಿಯಾಗಲಿ ಎಂಬ ಆಶಯವನ್ನು ಈ ಭಾಗದ ರೈತಾಪಿ ವರ್ಗ ವ್ಯಕ್ತಪಡಿಸುತ್ತಿದೆ.

ರೈತರಲ್ಲಿ ಆಶಾಭಾವನೆ

ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾಶಯಗಳು ಜಿಲ್ಲೆಯ ಮೂರು ತಾಲೂಕುಗಳನ್ನು ಹಾದು ಸುಮಾರು 11 ರಿಂದ 12 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ನೀರಊಣಿಸುವಂತ ಯೋಜನೆಯಾಗಿದ್ದು, ಈ ಜಲಾಶಯಗಳು ಭರ್ತಿಯತ್ತ ಮುಖ ಮಾಡಿರುವುದು ಸಹಜವಾಗೇ ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಮಂದಹಾಸ ಮೂಡಿಸಿದೆ.

2022ರ ಮೇ ತಿಂಗಳಿನಲ್ಲಿ ಈ ಎರಡು ಜಲಾಶಯಗಳು ಸಂಪೂರ್ಣ ಭರ್ತಿಯಾಗಿದವು. ಆದರೆ, ಕಳೆದ ವರ್ಷ ಮಳೆ ಅಭಾವದಿಂದ ನೀರಿನ ಪ್ರಮಾಣ ಕಡಿಮೆಯಾಗಿತ್ತು. ಪ್ರಸ್ತುತ ಜಲಾಶಯಗಳು ಪೂರ್ಣ ಭರ್ತಿಯಾಗುವ ಲಕ್ಷಣ ಕಂಡು ಬರುತ್ತಿದೆ. ಜಿಲ್ಲೆಯಲ್ಲಿ ಮಳೆಯಾದ ಕ್ಷಣ ಈ ಜಲಾಶಯಗಳು ಭರ್ತಿಯಾಗಲ್ಲ. ಈ ಜಲಾಶಯಗಳು ಭರ್ತಿಯಾಗಲು ಜಿಲ್ಲೆಯ ಗಡಿ ಭಾಗದ ಹೊನ್ನಮೇಟಿ, ಅತ್ತಿಖಾನೆಯಂತಹ ಗುಡ್ಡಗಾಡು ಹಾಗೂ ತಮಿಳುನಾಡಿನ ಭವಾನಿ ಸಾಗರ, ಸತ್ಯಮಂಗಲ ಅರಣ್ಯದಲ್ಲಿ ಹೆಚ್ಚು ಮಳೆಯಾಗಬೇಕು. ಸದ್ಯ ಆ ಪ್ರದೇಶದಲ್ಲಿ ಹೆಚ್ಚು ಮಳೆ ಬೀಳುತ್ತಿರುವುದರಿಂದ ಈ ಅವಳಿ ಜಲಾಶಯಗಳತ್ತ ನೀರು ಹರಿದು ಬರುತ್ತಿದೆ.

ಕಲುಷಿತ ನೀರು ಪೂರೈಕೆ ಪ್ರಕರಣ ಹಿನ್ನೆಲೆ

ಮಧುವನಹಳ್ಳಿಗೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ



ಮಧುವನಹಳ್ಳಿಗೆ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪನಾಗ್, ಮಾಜಿ ಶಾಸಕ ಆರ್.ನರೇಂದ್ರ ಭೇಟಿ ನೀಡಿ, ಪರಿಶೀಲಿಸಿದರು.

ಕೊಳ್ಳೇಗಾಲ, ಮೇ 26– ತಾಲೂಕಿನ ಮಧುವನಹಳ್ಳಿಯಲ್ಲಿ ಕಲುಷಿತ ನೀರು ಸೇವಿಸಿ ಗ್ರಾಮಸ್ಥರಲ್ಲಿ ವಾಂತಿ ಭೇದಿ ಕಾಣಿಸಿಕೊಂಡು 15ಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿದ್ದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪನಾಗ್ ಹಾಗೂ ಮಾಜಿ ಶಾಸಕ ಆರ್.ನರೇಂದ್ರ ಭಾನುವಾರ ಗ್ರಾಮಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಅಸ್ವಸ್ಥರಾದವರ ಪೈಕಿ ಹಲವರು ಈಗಾಗಲೇ ಚೇತರಿಸಿಕೊಂಡಿದ್ದಾರೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ. ಹಾಗೆಯೇ ಕಾವೇರಿ ನೀರು ಸರಬರಾಜಿನಲ್ಲಿ ಕೆಶಿಪ್ ರಸ್ತೆ ಅಭಿವೃದ್ಧಿಯಿಂದ ತೊಡಕಾಗಿದ್ದು, ಒಂದು ವಾರ ಜಿಲ್ಲಾಡಳಿತದ ವತಿಯಿಂದ ಟ್ಯಾಂಕರ್ ಮೂಲಕ ನೀರನ್ನು ಕಲ್ಪಿಸಲಾಗುವುದು. ಆ ನೀರನ್ನು ಕುಡಿಯಲು ಬಳಸಬೇಕು ಎಂದು ಸೂಚಿಸಿದರು.

ಕಾವೇರಿ ನೀರು ಪೂರೈಸಿ: ಮಧುವನಹಳ್ಳಿ ಗ್ರಾಮಕ್ಕೂ ಕಾವೇರಿ ನೀರು ಪೂರೈಸಬೇಕು ಎಂದು ಮಾಜಿ ಶಾಸಕ ಆರ್.ನರೇಂದ್ರ ಹೇಳಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲುಷಿತ ನೀರು ಸೇವನೆಯಿಂದ ಗ್ರಾಮದ ಕೆಲವರು ಅಸ್ವಸ್ಥರಾಗಿರುವ ಹಿನ್ನೆಲೆಯಲ್ಲಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಲಾಗಿದೆ ಕಲುಷಿತ ನೀರಿನ ಬೋರ್‌ವೆಲ್ ಅನ್ನು ಸ್ಥಗಿತಗೊಳಿಸಲು ಅಧಿಕಾರಿಗಳು ಕ್ರಮಕೈಗೊಂಡಿದ್ದಾರೆ. ಶೀಘ್ರದಲ್ಲೇ ಇಲ್ಲಿಗೆ ಕಾವೇರಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳುವ ಭರವಸೆಯನ್ನು ಜಿಲ್ಲಾಧಿಕಾರಿ ನೀಡಿದ್ದಾರೆ ಎಂದರು. ಇದೇ ವೇಳೆ ಚಾಮುಲ್ ನಿರ್ದೇಶಕ ನಂಜುಂಡಸ್ವಾಮಿ, ಉಪ್ಪಾರ ನಿಗಮದ ಮಾಜಿ ಅಧ್ಯಕ್ಷ ಮಧುವನಹಳ್ಳಿ ಶಿವಕುಮಾರ್, ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಉಪವಿಭಾಗಾಧಿಕಾರಿ ಶಿವಮೂರ್ತಿ, ತಹಶೀಲ್ದಾರ್ ಮಂಜುಳಾ, ತಾಲೂಕು ವೈದ್ಯಾಧಿಕಾರಿ ಡಾ.ಗೋಪಾಲ್, ಮಧುವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಡಾ.ಅರುಣ್ ರಾಟೆ, ಗ್ರಾಮೀಣ ಮತ್ತು ಕುಡಿಯುವ ನೀರು ನೈರ್ಮಲ್ಯ ಇಲಾಖೆಯ ಹರೀಶ್, ಪಿಡಿಓ ಶೋಭಾ ರಾಣಿ, ಗ್ರಾಪಂ ಅಧ್ಯಕ್ಷ ಸಿದ್ದಪ್ಪ ಇನ್ನಿತರಿದ್ದರು.

ಭಾರತದ ಯುವಕರು ವಿಶ್ವಕ್ಕೆ ಮಾದರಿ

ಚಾಮರಾಜನಗರ, ಮೇ 26–ಭಾರತದ ಯುವಕರು ಜ್ಞಾನಶಕ್ತಿ ಹಾಗೂ ಸೇವಾ ಧರ್ಮದ ಗುಣದ ಮೂಲಕ ವಿಶ್ವಕ್ಕೆ ಮಾದರಿಯಾಗಿದ್ದಾರೆ ಎಂದು ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್‌ಋಗ್ವೇದಿ ಹೇಳಿದರು.

ಯೂತ್ ಫಾರ್ ಸೇವಾ ಸಂಸ್ಥೆ ವತಿಯಿಂದ ಸೇವಾ ಭಾರತಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸೇವಾ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಡೀ ಜಗತ್ತಿನಲ್ಲಿ ಅತಿ ಹೆಚ್ಚು ಯುವಶಕ್ತಿಯನ್ನು ಹೊಂದಿರುವ ಭಾರತಕ್ಕೆ ಭವಿಷ್ಯದಲ್ಲಿ ಮಹತ್ವದ ಸ್ಥಾನ ದೊರೆಯಲಿದೆ. ಯುವಶಕ್ತಿ ಕಲೆ, ಸಾಹಿತ್ಯ, ವಿಜ್ಞಾನ, ಶಿಕ್ಷಣ, ತಂತ್ರಜ್ಞಾನ ಹಾಗೂ ಸೇವಾ ಕ್ಷೇತ್ರಗಳಲ್ಲಿ ಅಪಾರ ಸೇವೆ ಸಲ್ಲಿಸುತ್ತಿದೆ. ಯುವಶಕ್ತಿ ವ್ಯಾಸಂಗದ ಜೊತೆಗೆ ಸೇವಾ ಗುಣವನ್ನು ಬೆಳೆಸಿಕೊಳ್ಳುವ ಮೂಲಕ ಸಮಾಜದ ಪರಿವರ್ತನೆ ಹಾಗೂ ಮಾನಸಿಕ ನೆಮ್ಮದಿ, ಸಮಯದ ಸದ್ಬಳಕ್ಕೆ ಮಾಡಿಕೊಳ್ಳಬೇಕು ಎಂದರು.



ಚಾಮರಾಜನಗರದ ಸೇವಾ ಭಾರತಿ ಕಾಲೇಜು ಸಭಾಂಗಣದಲ್ಲಿ ಆಯೋಜಿಸಿದ್ದ ಸೇವಾ ಸಂಭ್ರಮ ಕಾರ್ಯಕ್ರಮದಲ್ಲಿ ಗಣ್ಯರು ಭಾಗವಹಿಸಿದ್ದರು.

ಯುವಕರಿಗೆ ಸನ್ಮಾರ್ಗದ ಜೊತೆಗೆ ಸಂಸ್ಕಾರ, ಸಂಸ್ಕೃತಿ, ಸಂಘಟನೆಯ ಮಾರ್ಗದರ್ಶನವನ್ನು ನೀಡುತ್ತಿರುವ ಯೂತ್ ಫಾರ್ ಸೇವಾ ಸಂಸ್ಥೆ ಸದಸ್ಯರಾಗುವುದೇ ಒಂದು ಪುಣ್ಯ. ಶಿಕ್ಷಣದ ಜೊತೆಗೆ ಸೇವಾ ಗುಣವನ್ನು ಬೆಳೆಸಿ ಸೇವೆಯೇ ಪರಮಧರ್ಮ ಎಂಬ ದಿವ್ಯ ಸ್ಫೂರ್ತಿಯನ್ನು ತುಂಬುತ್ತಿರುವ ಸಂಸ್ಥೆ ತನ್ನ ಚಿಗುರು ಪರಿಕಲ್ಪನೆಯ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಗಡಿ ಭಾಗದ ಸಾವಿರಾರು ವಿದ್ಯಾರ್ಥಿಗಳಿಗೆ ವೇದಿಕೆಯಾಗುತ್ತಿದೆ ಎಂದು ತಿಳಿಸಿದರು.

ಇನ್ನರ್ ವ್ಹೀಲ್ ಸಂಸ್ಥೆಯ ಅಧ್ಯಕ್ಷೆ ಪೂಜಾ ಸುಭಾಷ್ ಮಾತನಾಡಿ, ಯುವಕರು ಸದಾ ಕಾಲ ಕ್ರಿಯಾಶೀಲರಾಗಿದ್ದು ಸಮಾಜ ಸೇವಾ ಗುಣವನ್ನು ಬೆಳೆಸಿಕೊಳ್ಳುವ ಮೂಲಕ ಉತ್ತಮ ಸಮಾಜವನ್ನು ನಿರ್ಮಿಸಲು ಯೂಥ್ ಫಾರ್ ಸೇವಾ ಸಂಸ್ಥೆ ಕಾರ್ಯಕ್ರಮವಾಗಿರುವುದು ಬಹಳ ಸಂತೋಷವಾದುದು. ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಯಲಿ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಸಿಲ್ಕ್ ಸಿಟಿಯ ಅಧ್ಯಕ್ಷ ಅಜಯ್ ಕುಮಾರ್, ಸಂಜೀವಿನಿ ಟ್ರಸ್ಟ್ ಕಾರ್ಯದರ್ಶಿ ಸತೀಶ್ ಕುಮಾರ್, ಯೂಥ್ ಫಾರ್ ಸೇವಾ ಸಂಸ್ಥೆಯ ವಿಷ್ಣು ಪಿ, ತೇಜ ನಾಯಕ್, ಮನೋಜ್ ಹಾಗೂ ನೂರಾರು ಯುವಕರು ಉಪಸ್ಥಿತರಿದ್ದರು.

ಜಾಲಹಳ್ಳಿಹುಂಡಿಯಲ್ಲಿ ಶ್ರೀ ಮಹರ್ಷಿ ಭಗೀರಥ ಜಯಂತಿ ಆಚರಣೆ




ಚಾಮರಾಜನಗರದ ಜಾಲಹಳ್ಳಿಹುಂಡಿಯಲ್ಲಿ ಮಹರ್ಷಿ ಭಗೀರಥ ಜಯಂತಿ ಆಚರಿಸಲಾಯಿತು.

ಚಾಮರಾಜನಗರ, ಮೇ 26–ನಗರದ 24ನೇ ವಾರ್ಡ್‌ನ ಜಾಲಹಳ್ಳಿಹುಂಡಿಯಲ್ಲಿ ಶ್ರೀ ಮಹರ್ಷಿ ಭಗೀರಥ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವಾರ್ಡ್‌ನ ಸದಸ್ಯೆ ಭಾಗ್ಯಮ್ಮ ಮಾತನಾಡಿ, ಶಿಕ್ಷಣವೇ ಆಸ್ತಿಯಾಗಿರುವುದರಿಂದ ಉಪ್ಪಾರ ಸಮುದಾಯದವರು ವಿಶೇಷವಾಗಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಬೇಕು. ಭಗೀರಥರ ಪ್ರಯತ್ನದಲ್ಲಿ ಬಾಲ್ಯ ವಿವಾಹ ತ್ಯಜಿಸಿ, ಮೌಢ್ಯದಿಂದ ದೂರ ಇರಬೇಕು ಎಂದರು.

ಉಪ್ಪಾರ ಸಮಾಜ ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ಹಿಂದುಳಿದಿದ್ದು, ಸಮುದಾಯದವರು ಶ್ರಮಪಟ್ಟು ದುಡಿಯುತ್ತಿದ್ದಾರೆ. ಸಂಪಾದಿಸಿದ ಹಣವನ್ನು ಕುಡಿತ, ಅನಾವಶ್ಯಕ ದುಂದುವೆಚ್ಚ ಮಾಡದೇ ಮಕ್ಕಳ ಭವಿಷ್ಯಕ್ಕೆ ಹಣ ಉಳಿತಾಯ ಮಾಡಬೇಕು. ಮಹರ್ಷಿ ಭಗೀರಥರ ತತ್ವ, ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಯಜಮಾನರಾದ ಗುರುಸಿದ್ದ ಶೆಟ್ಟಿ, ತಮ್ಮಯ್ಯ, ಜಿಪಂ ಕಿರಿಯ ಲೆಕ್ಕಾಧಿಕಾರಿ ರವಿ, ಮುಖಂಡರಾದ ತೆಂಗಿನಕಾಯಿ ಸಿದ್ದಶೆಟ್ಟಿ, ಮಹದೇವ, ಶಿವಣ್ಣ, ಜೆ.ಜಿ.ಮಹೇಶ್, ಮಹೇಶ್, ಶಂಕರ್ ಹಾಜರಿದ್ದರು.



ಚಾಮರಾಜನಗರದ ಶಂಕರಪುರ ಬಡಾವಣೆಯ ಶ್ರೀರಾಮಮಂದಿರದಲ್ಲಿ ಬ್ರಾಹ್ಮೀ ಮಹಿಳಾ ಸಂಘದ ವತಿಯಿಂದ ಆಯೋಜಿಸಿದ್ದ ಮಾತೃ ದಿನಾಚರಣೆಯಲ್ಲಿ ಹಿರಿಯ ತಾಯಿಯಂದಿರಾದ ರಾಜಮ್ಮ ನಿಲಕಂಠ ಹಾಗೂ ರಾಧಮ್ಮ ಅವರನ್ನು ಸನ್ಮಾನಿಸಲಾಯಿತು. ಸಂಘದ ಗೌರವಾಧ್ಯಕ್ಷೆ ವತ್ಸಲಾ ರಾಜಗೋಪಾಲ್, ಉಪಾಧ್ಯಕ್ಷೆ ಭಾನುಮತಿ, ಕಾರ್ಯದರ್ಶಿ ಲಕ್ಷ್ಮಿ ವಾಸುದೇವರಾವ್, ರಾಧಾಶೇಷಾಚಲ, ರಮ್ಯ ಶ್ರೀಧರ್, ಉಮಾ ಹೆಗ್ಡೆ, ಪಾರ್ವತಿ ಸುದರ್ಶನ್, ರೇಖಾ, ಲಲಿತಾಂಬ, ವಿಜಯಾ, ಸರೋಜಮ್ಮ, ನಾಗರತ್ನ, ನಂದಿನಿ, ಸವಿತಾ, ಶೋಭಸತ್ಯ, ರಾಯರ ಮಠದ ಪವನಚಾರ್ ಇದ್ದರು.

ಒಂದನೇ ಪುಟದಿಂದ

ಸರ್ಕಾರ ಕಂಟಕ ತಂದಿಟ್ಟಿದೆ

ಹಾಗೂ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕೂಡ ಬಿಜೆಪಿ ಹಾಗೂ ಜೆಡಿಎಸ್ ಅಭ್ಯರ್ಥಿಗಳು ಗೆಲವು ಸಾಧಿಸಲಿದ್ದು, 6 ಸ್ಥಾನಗಳಲ್ಲೂ ಜಯಭೇರಿ ಬಾರಿಸಲಿದ್ದೇವೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು. ಶಾಸಕರಾದ ಜಿ.ಟಿ.ದೇವೇಗೌಡ, ಟಿ.ಎಸ್.ಶ್ರೀವತ್ಸ, ಸಿ.ಎನ್.ಮಂಜೇಗೌಡ, ಮಾಜಿ ಶಾಸಕರಾದ ಸಾ.ರಾ.ಮಹೇಶ್, ಅಶ್ವಿನ್ ಕುಮಾರ್, ವಿಜಯಶಂಕರ್, ನಿರಂಜನ್ ಕುಮಾರ್, ತೋಂಟದಾರ್ಯ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ, ನಗರ ಬಿಜೆಪಿ ಅಧ್ಯಕ್ಷ ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಚುನಾವಣೆಯಲ್ಲಿ ಟಿಕೆಟ್ ಕೇಳಬೇಡಿ

ಎಂದು ಕಾಂಗ್ರೆಸ್‌ನವರು ವರ್ತಿಸುತ್ತಿದ್ದಾರೆ. ಈಗ ಸಿಎಂ ಹಾಗೂ ಡಿಸಿಎಂ ತೀರ್ಮಾನವೇ ಫೈನಲ್ ಆಗಿದೆ. ಇಂತಹ ಪರಿಸ್ಥಿತಿಯಲ್ಲಿ ರಾಜಕಾರಣ ಮಾಡುವುದು ಬಹಳ ಕಷ್ಟವಾಗಿದೆ. ಇದರಿಂದ ನಾವು ಈಗ ಕಷ್ಟ ಕಾಲದಲ್ಲಿ ಇದ್ದೇವೆ ಎಂಬುವುದನ್ನು ಅರಿತು, ಪಕ್ಷಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಲೋಕಸಭಾ ಹಾಗೂ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ಗೆಲುವು ಸಾಧಿಸಿದರೆ, ಮುಂದೆ ಇವರ ಸರ್ಕಾರ ಬರುತ್ತದೆ ಎಂದು ಅಧಿಕಾರಿಗಳು ಗೌರವ ನೀಡುತ್ತಾರೆ. ಜೊತೆ ನಮಗೆ ಮಹತ್ವ ಕೂಡ ನೀಡುತ್ತಾರೆ ಎಂದು ಕಾರ್ಯಕರ್ತರಿಗೆ ಜಿ.ಟಿ.ದೇವೇಗೌಡರು ಮನದಟ್ಟು ಮಾಡಿದರು. ಈ ಎಲ್ಲಾ ಕಾರಣದಿಂದ ನಮಗೆ ಈ ಚುನಾವಣೆ ಪ್ರತಿಷ್ಠೆಯ ಕಣವಾಗಿದೆ. ಈ ಕಾರಣದಿಂದಲೇ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಬಿ.ವೈ. ವಿಜಯೇಂದ್ರ ಬಿರುಸಿನ ಪ್ರಚಾರ ಮಾಡುತ್ತಿದ್ದಾರೆ. ಇದೇ ರೀತಿ ನೀವು ಕೂಡ ಈ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ ನಮ್ಮ ಅಭ್ಯರ್ಥಿ ವಿವೇಕಾನಂದ ಅವರನ್ನು ಗೆಲ್ಲಿಸಬೇಕು ಎಂದು ಜಿ.ಟಿ.ದೇವೇಗೌಡರು ಮನವಿ ಮಾಡಿದರು.

7 ಶಿಶುಗಳ ದುರ್ಮರಣ

ನಿರ್ಲಕ್ಷ್ಯ ತೋರಿದವರಿಗೆ ಅಥವಾ ಯಾವುದೇ ತಪ್ಪು ಮಾಡಿದವರಿಗೆ ಕಠಿಣ ಶಿಕ್ಷೆ ನೀಡಲಾಗುವುದು ಎಂದು ಆರೋಗ್ಯ ಸಚಿವ ಸೌರಭ್ ಭಾರದ್ವಾಜ್ ಹೇಳಿದ್ದಾರೆ. ದೆಹಲಿಯ ಮಕ್ಕಳ ಆಸ್ಪತ್ರೆಯೊಂದರಲ್ಲಿ ಸಂಭವಿಸಿದ ಅಗ್ನಿ ದುರಂತ ಹೃದಯ ವಿದ್ರಾವಕವಾಗಿದೆ. ಪುಟ್ಟ ಕಂದಮ್ಮಗಳನ್ನು ಕಳೆದುಕೊಂಡ ಕುಟುಂಬಸ್ಥರಿಗೆ ನನ್ನ ಸಂತಾಪಗಳು. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಪ್ರಧಾನಿ ನರೇಂದ್ರ ಮೋದಿ ಟ್ವೀಟ್ ಮಾಡಿದ್ದಾರೆ ಎಂದು ಮೋದಿ ಹೇಳಿದರು.

ಸಾವಿನ ಸಂಖ್ಯೆ 35ಕ್ಕೆ ಏರಿಕೆ

ಅಹ್ಮದಾಬಾದ್, ವಡೋದರಾ, ಸೂರತ್, ರಾಜ್‌ಕೋಟ್‌ನ ಮುನ್ಸಿಪಲ್ ಕಾರ್ಪೋರೇಷನ್ ಪರ ವಕೀಲರನ್ನು ಉಪಸ್ಥಿತರಿರುವಂತೆ ಹೇಳಿದೆ. ಜೊತೆಗೆ ತಮ್ಮ ವ್ಯಾಪ್ತಿಯಲ್ಲಿ ಇಂತಹ ಗೇಮಿಂಗ್ ಸಂಸ್ಥೆಗಳನ್ನು ಯಾವ ಕಾನೂನು ನಿಯಮಗಳ ಅಡಿಯಲ್ಲಿ ಸ್ಥಾಪಿಸಲಾಗಿದೆ ಅಥವಾ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿಯೂ ಇಂತಹ ಸಂಸ್ಥೆಗಳು ಕಾರ್ಯನಿರ್ವಹಿಸಲು ಅನುಮತಿಸಲಾಗಿದೆಯೇ ಎಂಬ ಮಾಹಿತಿಯನ್ನು ಒದಗಿಸಲು ಅವರಿಗೆ ಸೂಚಿಸಲಾಗಿದೆ.

ಈ ಮಧ್ಯೆ ದುರಂತ ನಡೆದ ಬಳಿಕ ತನಿಖೆಗಿಳಿದ ಪೊಲೀಸರಿಗೆ ಈ ಗೇಮಿಂಗ್ ಸೆಂಟರ್ ನಡೆಸುವುದಕ್ಕೆ ಮಾಲೀಕ ಅಗ್ನಿ ಶಾಮಕದಳ ಸೇರಿದಂತೆ ನಗರಾಡಳಿತದಿಂದ ಯಾವುದೇ ಅನುಮತಿ ಹಾಗೂ ಎನ್‌ಓಸಿ ಸರ್ಟಿಫಿಕೇಟ್‌ಗಳನ್ನು ಪಡೆದಿಲ್ಲ ಎಂದು ವರದಿ ಆಗಿದೆ. ಇದರ ಜೊತೆಗೆ ಒಳಗೆ ಹೋದವರು ವಾಪಸ್ ಹೊರಗೆ ಬರುವುದಕ್ಕೆ ಒಂದೇ ಒಂದು ಎಕ್ಸಿಟ್ ಡೋರ್ ಇದ್ದಿದ್ದರಿಂದ ಸಾವಿನ ಸಂಖ್ಯೆ ಹೆಚ್ಚಾಗುವುದಕ್ಕೆ ಕಾರಣವಾಯ್ತು ಎಂದು ತಿಳಿದು ಬಂದಿದೆ.

ನಿನ್ನೆ ಸಂಜೆ ರಾಜ್‌ಕೋಟ್‌ನಲ್ಲಿರುವ ಮಕ್ಕಳು ಆಟವಾಡುವ ಗೇಮಿಂಗ್ ಸೆಂಟರ್‌ನಲ್ಲಿ ಅಗ್ನಿ ಅನಾಹುತ ಸಂಭವಿಸಿತ್ತು. ಗೇಮಿಂಗ್ ಸೆಂಟರ್‌ಗೆ ಪ್ರವೇಶಿಸುವ ಶುಲ್ಕವನ್ನು ಕೇವಲ 99 ರೂಪಾಯಿ ಆಫರ್ ಪ್ರೈಸ್ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಜನರು ತಮ್ಮ ಮಕ್ಕಳನ್ನು ಕರೆದುಕೊಂಡು ಈ ಗೇಮಿಂಗ್ ಸೆಂಟರ್‌ನಲ್ಲಿ ಕಿಕ್ಕಿರಿದು ತುಂಬಿದ್ದರು. ಈ ಗೇಮಿಂಗ್ ಸೆಂಟರ್‌ನಲ್ಲಿ ಗೋ ಕಾರ್ಟ್ ಗೇಮ್ ವ್ಯವಸ್ಥೆ ಸಹ ಮಾಡಲಾಗಿತ್ತು. ಹೀಗಾಗಿ ಗೇಮಿಂಗ್‌ಗಾಗಿ 1200 ರಿಂದ 1500 ಲೀಟರ್ ಡಿಸೇಲ್ 1000 ಲೀಟರ್ ಪೆಟ್ರೋಲ್‌ನ್ನು ಶೇಖರಿಸಿಡಲಾಗಿತ್ತು. ದುರಾದೃಷ್ಟವಶಾತ್ ಶಾರ್ಟ್ ಸರ್ಕ್ಯೂಟ್‌ನಿಂದ ಸಂಭವಿಸಿದ ಬೆಂಕಿ ಡಿಸೇಲ್ ಮತ್ತು ಪೆಟ್ರೋಲ್ ಸಂಗ್ರಹಿಸಿದ ಸ್ಥಳಕ್ಕೂ ವ್ಯಾಪಿಸಿದ್ದು, ದೊಡ್ಡ ಮಟ್ಟದಲ್ಲಿ ಬೆಂಕಿ ಅನಾಹುತಕ್ಕೆ ಕಾರಣವಾಯ್ತು.

ಆರು ಮಂದಿ ವಿರುದ್ಧ ಎಫ್‌ಐಆರ್

ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ (ಎನ್‌ಓಸಿ) ಪಡೆದಿಲ್ಲ. ಇದು ಪ್ರಕ್ರಿಯೆ ಹಂತದಲ್ಲಿದೆಯೇ ಹೊರತು ಇನ್ನೂ ಪೂರ್ಣಗೊಂಡಿಲ್ಲ ಎಂದು ರಾಜು ಭಾರ್ಗವ ಹೇಳಿದ್ದಾರೆ. 50 ಮೀಟರ್ ಅಗಲ ಮತ್ತು 60 ಮೀಟರ್ ಉದ್ದದ ಸುಮಾರು ಎರಡು– ಮೂರು ಅಂತಸ್ತಿನ ಕಟ್ಟಡವನ್ನು ಲೋಹದ ಹಾಳೆಗಳನ್ನು ಬಳಸಿಕೊಂಡು ಆರೋಪಿಗಳು ಮನರಂಜನಾ ಕೇಂದ್ರವನ್ನು ನಿರ್ಮಿಸಿದ್ದರು ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಮನರಂಜನಾ ಕೇಂದ್ರದಲ್ಲಿ ಬೆಂಕಿ ನಂದಿಸಲು ಬೇಕಾದ ಸೂಕ್ತ ರೀತಿಯ ಉಪಕರಣಗಳು ಇರಲಿಲ್ಲ. ಜತೆಗೆ ಸ್ಥಳೀಯ ಅಗ್ನಿಶಾಮಕ ಕೇಂದ್ರ ನಿರಾಕ್ಷೇಪಣಾ ಪತ್ರವನ್ನೂ (ಎನ್‌ಓಸಿ) ಪಡೆದಿಲ್ಲ. ಇದುವೇ ದುರಂತಕ್ಕೆ ಮುಖ್ಯ ಕಾರಣ ಎಂದು ಎಫ್‌ಐಆರ್‌ನಲ್ಲಿ ಹೇಳಲಾಗಿದೆ.

ಕುಟುಂಬದ 6 ಮಂದಿ ದುರ್ಮರಣ

ಬಳಿಯ ಕಾರಹಳ್ಳಿ ನಿವಾಸಿಗಳಾದ ನಾರಾಯಣಪ್ಪ, ಸುನಂದಾ, ರವಿಕುಮಾರ್, ನೇತ್ರಾ, ಬಾಲಕ ಚೇತನ್, ಕಾರು ಚಲಾಯಿಸುತ್ತಿದ್ದ ರಾಕೇಶ್ ಮೃತಪಟ್ಟ ದುರ್ದೈವಿಗಳು.

ಮಂಗಳೂರಿನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಸಂಬಂಧಿಕರನ್ನು ನೋಡಲು ಕೆಎ 53 ಸಿ 1419 ನಂಬರ್‌ನ ಇಟಿಯೋಸ್ ಕಾರಿನಲ್ಲಿ ತೆರಳಿದ್ದ ಕುಟುಂಬ ಸದಸ್ಯರು ಹಿಂದಿರುಗುತ್ತಿದ್ದಾಗ ಹಾಸನ ಸಮೀಪದ ಕಂದಲಿ ಎಂಬಲ್ಲಿ ಈ ಅಪಘಾತ ಸಂಭವಿಸಿದೆ. ಬೆಳಗಿನ ಜಾವ ನಿದ್ದೆ ಮಂಪರಿನಲ್ಲಿ ವಾಹನ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಕ್ಕದ ಲೇನ್‌ಗೆ ಹಾರಿ ಕಂಟೇನರ್‌ಗೆ ಗುದ್ದಿದೆ. ಅಪಘಾತದಲ್ಲಿ ಕಾರು ನುಜ್ಜುಗುಜ್ಜಾಗಿದ್ದು ಒಳಗೆ ಸಿಲುಕಿರುವ ಮೃತದೇಹಗಳನ್ನು ಪೊಲೀಸರು ಹರಸಾಹಸ ಮಾಡಿ ತೆಗೆದಿದ್ದಾರೆ.

ಸ್ಥಳಕ್ಕೆ ಹಾಸನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಮದ್ ಸುಜೇತಾ ಭೇಟಿ ನೀಡಿದ್ದಾರೆ. ಹಾಸನ ಪೊಲೀಸರು ಕೇಸು ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.

ಮೇ 21ರಂದು ಬೆಳಗ್ಗಿನ ಜಾವ ಮಂಗಳೂರು– ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಶಿರಾಡಿ ನಡೆದ ಭೀಕರ ಅಪಘಾತದಲ್ಲಿ ತಾಯಿ ಮತ್ತು ಮಗ ದಾರುಣವಾಗಿ ಮೃತಪಟ್ಟಿದ್ದರು. ಘಾಟ್ ವಲಯದ ಕೆಂಪುಹೊಳೆ ಸಮೀಪ ಇನ್ನೋವಾ ಕಾರು ಹಾಗೂ ಕಂಟೈನರ್ ನಡುವೆ ಡಿಕ್ಕಿ ಸಂಭವಿಸಿ ಇನ್ನೋವಾದಲ್ಲಿದ್ದ ತಾಯಿ, ಮಗ ಮೃತಪಟ್ಟು ನಾಲ್ಕೈದು ಮಂದಿ ಗಂಭೀರವಾಗಿ ಗಾಯಗೊಂಡಿದ್ದರು. ಮೃತಪಟ್ಟವರನ್ನು ತಾಯಿ ಸಫೀಯಾ, ಮಗ ಸಫೀಕ್ ಎಂದು ಗುರುತಿಸಲಾಗಿತ್ತು. ಮದುವೆ ಕಾರ್ಯಕ್ರಮಕ್ಕೆ ಬೆಂಗಳೂರಿಗೆ ತೆರಳಿದ್ದ ಬಂಟ್ವಾಳ ತಾಲೂಕಿನ ಬೊಂಡಾಲ ಕುಟುಂಬ ಬೆಂಗಳೂರಿನಿಂದ ಹಿಂತಿರುಗಿ ಬರುತ್ತಿದ್ದ ವೇಳೆ ಈ ದುರ್ಘಟನೆ ನಡೆದಿತ್ತು. ಕಾರು ಶಿರಾಡಿ ಘಾಟ್‌ನ ಕೆಂಪು ಹೊಳೆ ಸಮೀಪಿಸುತ್ತಿದ್ದಂತೆ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಕಂಟೈನರ್ ಲಾರಿ ನಡುವೆ ಡಿಕ್ಕಿ ಸಂಭವಿಸಿದೆ. ಅಪಘಾತದಲ್ಲಿ ಗಾಯಗೊಂಡವರಿಗೆ ನೆಲ್ಯಾಡಿ ಅಶ್ವಿನಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಮಂಗಳೂರಿಗೆ ಕರೆದೊಯ್ಯಲಾಗಿದೆ. ಈ ಪೈಕಿ ಗಂಭೀರ ಗಾಯಗೊಂಡಿದ್ದ ತಾಯಿ, ಮಗ ದಾರಿ ಮಧ್ಯೆ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ.

ಮೈಸೂರು ಡಿಸಿಗೆ ಪತ್ರ

ಕುಡಿಯುವ ನೀರು ಪೂರೈಕೆ ಮಾಡಲಾಗಿದೆ. ಸಾರ್ವಜನಿಕರ ದೂರಿನನ್ವಯ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಲಾಗಿದೆ. ಮೈಸೂರಿನ ತ್ಯಾಜ್ಯ ನೀರು ಕಾವೇರಿ ನದಿಗೆ ಬರುತ್ತಿದೆ. ಈಗಾಗಲೇ ನಮ್ಮ ಅಧಿಕಾರಿಗಳು ಮೈಸೂರು ಮಹಾನಗರ ಪಾಲಿಕೆಗೆ ಪತ್ರ ಬರೆದಿದ್ದಾರೆ. ತ್ಯಾಜ್ಯ ನೀರು ಕಾವೇರಿ ನದಿಗೆ ಬಿಡಬಾರದು ಎಂದು ಸೂಚನೆ ನೀಡಲಾಗಿದೆ. ತ್ಯಾಜ್ಯ ನೀರು ಬಿಟ್ಟ ಬಳಿಕ ನಮ್ಮ ನೀರನ್ನು ಲಿಫ್ಟ್ ಮಾಡುತ್ತಿದ್ದಾರೆ ಎಂಬ ಮಾಹಿತಿ ಇದೆ. ತ್ಯಾಜ್ಯ ಬಿಡುವ ಸಂದರ್ಭದಲ್ಲಿ ಜಾಕ್ವೆಲ್ ಬಳಿ ನೀರನ್ನು ಲಿಫ್ಟ್ ಮಾಡುತ್ತಿಲ್ಲ ಇದು ಸೂಕ್ತ ಅಲ್ಲ ಎಂದು ತಿಳಿಸಿದರು.

ಎರಡೂ ಸ್ಟ್ರೀಮ್‌ನಲ್ಲಿ ತ್ಯಾಜ್ಯ ನೀರು ಕಾವೇರಿ ನದಿಗೆ ಬರುತ್ತಿದೆ. ತಡೆಗೋಡೆ ನಿರ್ಮಿಸಲು ನಗರ ನೀರು ಸರಬರಾಜು, ಒಳಚರಂಡಿ ಮಂಡಳಿ ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದೇನೆ. ಕಾವೇರಿ ನದಿಗೆ ನೀರು ಬರದಂತೆ ತಡೆಯಲು ಸೂಚಿಸಲಾಗಿದೆ. ಒಂದೋ ಸ್ಥಳಾಂತರ ಮಾಡಬೇಕು, ಇಲ್ಲವೇ ತ್ಯಾಜ್ಯ ನೀರಿನ್ನು ಸಂಸ್ಕರಿಸಿ ಮೈಸೂರಿನವರು ಬಿಡಬೇಕು. ಎರಡರಲ್ಲಿ ಒಂದನ್ನು ಮಾಡಿದರೆ ಮಾತ್ರ ಇದಕ್ಕೆ ಶಾಶ್ವತ ಪರಿಹಾರ ವಿದೆ ಎಂದು ಮೈಸೂರು ಡಿಸಿಗೆ ಪತ್ರ ಕೊಟ್ಟಿದ್ದೇನೆ ಎಂದು ಅವರು ಹೇಳಿದರು.

ತಾತ್ಕಾಲಿಕವಾಗಿ ತಡೆಗೋಡೆ ನಿರ್ಮಿಸಲು 8.5 ಲಕ್ಷ ರೂ ಬರಿಸಿದ್ದೇವೆ. ಇದರಿಂದ ತಾತ್ಕಾಲಿಕವಾಗಿ ಕಲುಷಿತ ನೀರು ನದಿಗೆ ಸೇರುವುದನ್ನು ತಡೆಗಟ್ಟಬಹುದು. ಆದರೆ ದೊಡ್ಡ ಪ್ರಮಾಣದಲ್ಲಿ ನೀರು ಬಂದರೆ ತಡೆಗೋಡೆ ತಡೆಯಲ್ಲ. ಅಲ್ಲಿರುವ ಇನ್ಟೆಕ್‌ವೆಲ್ ಅನ್ನು ಸ್ಥಳಾಂತರ ಮಾಡಿದರೆ ಮಾತ್ರ ಇದಕ್ಕೆ ಪರಿಹಾರ ಸಿಗುತ್ತದೆ. ಗಂಜಾಂಗೆ ನೀರು ಪರೀಕ್ಷಿಸಿ ಬಿಡಲು ಸೂಚನೆ ಕೊಟ್ಟಿದ್ದೇನೆ. ತ್ಯಾಜ್ಯ ನೀರು ಬಿಟ್ಟ ಸಂದರ್ಭದಲ್ಲಿ ಇನ್ಟೆಕ್‌ವೆಲ್ ನಿಲ್ಲಿಸಬೇಕು. ಬಳಿಕ ಸ್ಟಾರ್ಟ್ ಮಾಡಲು ಸೂಚನೆ ನೀಡಲಾಗಿದೆ ಎಂದು ಡಿಸಿ ತಿಳಿಸಿದರು.

ಕಾವೇರಿ ವಿವಾದ ಒಂದು ಐತಿಹಾಸಿಕ ಹಿನ್ನೋಟ ಪುಸ್ತಕ ಬಿಡುಗಡೆ

ತ.ನಾಡು–ಕರ್ನಾಟಕ ರೈತರ ಕಾವೇರಿ ಕುಟುಂಬ ಮಾತುಕತೆ ಮೂಲಕ ನದಿ ನೀರು ಹಂಚಿಕೆ ಬಗೆಹರಿಸಿಕೊಳ್ಳುವುದು ಸೂಕ್ತ

ಮದ್ರಾಸ್ ಅಭಿವೃದ್ಧಿ ಅಧ್ಯಯನ ಸಂಸ್ಥೆ ಮಾಜಿ ನಿರ್ದೇಶಕ ಪ್ರೊ. ವಿ.ಕೆ.ನಟರಾಜ್ ಅಭಿಪ್ರಾಯ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಅಭಿರುಚಿ ಪ್ರಕಾಶನದ ವತಿಯಿಂದ ಭಾನುವಾರ ಆಯೋಜಿಸಿದ್ದ ನಿವೃತ್ತ ಐಎಎಸ್ ಅಧಿಕಾರಿ ಸಿ.ಚಂದ್ರಶೇಖರ್ ಅವರ 'ಕಾವೇರಿ ವಿವಾದ ಒಂದು ಐತಿಹಾಸಿಕ ಹಿನ್ನೋಟ ಪುಸ್ತಕ'ವನ್ನು ಮದರಾಸ್ ಅಭಿವೃದ್ಧಿ ಅಧ್ಯಯನ ಸಂಸ್ಥೆ ಮಾಜಿ ನಿರ್ದೇಶಕ ಪ್ರೊ.ವಿ.ಕೆ. ನಟರಾಜ್ ಬಿಡುಗಡೆ ಮಾಡಿದರು.

ಮೈಸೂರು, ಮೇ 26(ಎಂಟಿವೈ)– ಕಾವೇರಿ ನದಿ ನೀರು ಹಂಚಿಕೆ ವಿವಾದವನ್ನು ನ್ಯಾಯಾಲಯದಲ್ಲಿ ಬಗೆಹರಿಸಲು ಸಾಧ್ಯವಿಲ್ಲದ ಕಾರಣ, ಈ ಹಿಂದೆ ನಡೆದಿರುವ ಐತಿಹಾಸಿಕ ಪ್ರಮಾದ ಸರಿ ಮಾಡುವ ವ್ಯರ್ಥ ಪ್ರಯತ್ನ ಮಾಡದೇ ಎರಡೂ ರಾಜ್ಯಗಳ ರೈತರನ್ನೊಳಗೊಂಡ ಕಾವೇರಿ ಕುಟುಂಬ ಮಾತುಕತೆ ಮೂಲಕ ಬಗೆಹರಿಸಿಕೊಳ್ಳುವುದು ಸೂಕ್ತ ಎಂದು ಮದ್ರಾಸ್ ಅಭಿವೃದ್ಧಿ ಅಧ್ಯಯನ ಸಂಸ್ಥೆ ಮಾಜಿ ನಿರ್ದೇಶಕ ಪ್ರೊ.ವಿ.ಕೆ. ನಟರಾಜ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಅಭಿರುಚಿ ಪ್ರಕಾಶನದ ವತಿಯಿಂದ ಭಾನುವಾರ ಆಯೋಜಿಸಿದ್ದ ನಿವೃತ್ತ ಐಎಎಸ್ ಅಧಿಕಾರಿ ಸಿ.ಚಂದ್ರಶೇಖರ್ ಅವರ 'ಕಾವೇರಿ ವಿವಾದ ಒಂದು ಐತಿಹಾಸಿಕ ಹಿನ್ನೋಟ ಪುಸ್ತಕ' ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾವೇರಿ ನದಿ ನೀರು ಹಂಚಿಕೆ ವಿವಾದ ಕುರಿತಂತೆ ಈ ಹಿಂದೆ ಆಗಿರುವ ಐತಿಹಾಸಿಕ ಪ್ರಮಾದಗಳನ್ನು ಈಗ ಸರಿಪಡಿಸಲು ಸಾಧ್ಯವಿಲ್ಲ. ಎರಡೂ ರಾಜ್ಯಗಳ ಜನರು ಕಾವೇರಿ ನದಿ ನೀರು ವ್ಯರ್ಥವಾಗುವುದನ್ನು ತಪ್ಪಿಸಿ, ಪ್ರತಿ ಹನಿ ನೀರು ಬಳಕೆಗೆ ಗಮನ ಕೊಡುವುದು ಅನಿವಾರ್ಯ. ಬಿ.ಚಂದ್ರಶೇಖರ್ ತಮ್ಮ ಕೃತಿಯಲ್ಲಿ ಕಾವೇರಿ ವಿವಾದವನ್ನು ಅಧಿಕೃತ ದಾಖಲೆಗಳಿಂದ ರಚಿಸಿದ್ದಾರೆ. ಆದರೆ, ಇತಿಹಾಸದ ತಪ್ಪುಗಳನ್ನು ಮಾಡಿದವರು ಯಾರು? ಆ ತಪ್ಪುಗಳನ್ನು ತಿದ್ದುವವರು ಯಾರು? ತಪ್ಪಿಗೆ ಯಾರು ಕ್ಷಮೆ ಕೇಳಬೇಕು? ಮುಂದೆ ಏನು ಪ್ರಶ್ನೆ ಬರುತ್ತದೆ. ಆ ಬಗ್ಗೆ ಆಲೋಚಿಸುವುದು ಮುಖ್ಯವಾಗುತ್ತದೆ ಎಂದರು.

ಮೈಸೂರು– ಮದ್ರಾಸ್ ವಿವಾದ ಅನೇಕ ಪದರಗಳಲ್ಲಿದೆ. ತಾಂತ್ರಿಕವಾಗಿ ರಾಜಕೀಯವಾಗಿ ಸಾಮಾಜಿಕವಾಗಿ ಸಮಸ್ಯೆಗಳಿವೆ. ಲೇಖಕರೂ ರಾಜಕೀಯ ನೆಲೆಯಿಂದಲೂ ನೋಡಬಹುದಾಗಿತ್ತು. ಕಾವೇರಿ ಕುಟುಂಬದ ಬಗ್ಗೆ ಇನ್ನು ಸ್ವಲ್ಪ ಚರ್ಚೆ ಮಾಡಬಹುದಿತ್ತು. ಕಾವೇರಿ ವಿವಾದದ ಸಮಸ್ಯೆಯನ್ನು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಾಧೀಶರು ಸರಿಪಡಿಸಲಾಗದು. ನಾವು ಈಗ ಎಲ್ಲದಕ್ಕೂ ನ್ಯಾಯಾಲಯದ ಮೊರೆ ಹೋಗುತ್ತಿದ್ದೇವೆ. ಕ್ರಿಕೆಟ್ ಮ್ಯಾಚ್ ಆಡಬೇಕಾದರೂ ನ್ಯಾಯಾಲಯಕ್ಕೆ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಾವೇರಿ ವಿವಾದಲ್ಲಿ ಸಾಮಾಜಿಕ, ತಾಂತ್ರಿಕ, ರಾಜಕೀಯ ಸಮಸ್ಯೆಗಳಿವೆ. ಅವುಗಳನ್ನು ನ್ಯಾಯಾಲಯ ಬಗೆಹರಿಸಲು ಸಾಧ್ಯವಿಲ್ಲ. ಎರಡು ರಾಜ್ಯಗಳ ರೈತರು ಕುಳಿತು ಚರ್ಚಿಸುವುದು ಅಗತ್ಯ. ಕಾವೇರಿ ನೀರು ವ್ಯರ್ಥವಾಗದಂತೆ ಬಳಕೆ ಪರಿಸರ ಸಂರಕ್ಷಣೆಗೆ ಆದ್ಯತೆ ಕೊಡುವುದು ಜರೂರು ಎಂದು ತಿಳಿಸಿದರು.

ಹಾಸ್ಯ ಸಾಹಿತಿ ಪ್ರೊ.ಎಂ. ಕೃಷ್ಣೇಗೌಡ ಮಾತನಾಡಿ, ಸಂಸ್ಕೃತದಲ್ಲಿ ನೀರೆಂದರೆ ಜೀವ. ಬಹುಪಾಲು ಉತ್ತರ ಭಾರತದ ನದಿಗಳು ಹಿಮಾಲಯದಲ್ಲಿ ಹುಟ್ಟಿ ವರ್ಷಪೂರ್ತಿ ಹರಿಯುತ್ತವೆ. ಮಳೆಯಾಶ್ರಿತ ದಕ್ಷಿಣ ಭಾರತದ ನದಿಗಳು ಪಶ್ಚಿಮಘಟ್ಟ ಶ್ರೇಣಿಯಲ್ಲಿ ಹುಟ್ಟುತ್ತವೆ. ಕೊಡಗಿನಲ್ಲಿ ಹುಟ್ಟಿ ಮೈಸೂರಿಂದ ತಮಿಳುನಾಡಿಗೆ ಹರಿಯುವ ಕಾವೇರಿ ನದಿಯನ್ನು ದೈವವಾಗಿ ಮಾಡಿಕೊಂಡ ವಿಶ್ವದ ಏಕೈಕ ಸಮುದಾಯ ಕೊಡವ ಎಂದು ಹೇಳಿದರು.

ಕಾವೇರಿ ಎರಡು ರಾಜ್ಯಗಳಲ್ಲಿ ಹರಿಯದೇ ಕರ್ನಾಟಕದಲ್ಲಿಯೇ ಹರಿದಿದ್ದರೆ ಜಿಲ್ಲೆಗಳ ನಡುವೆ ಕಿತ್ತಾಟ ಇರುತ್ತಿತ್ತು. ಪ್ರಕೃತಿಗೆ ಗಡಿರೇಖೆಗಳಿಲ್ಲ. ಮನುಷ್ಯ ಅಹಂಕಾರಕ್ಕೆ ಗಡಿರೇಖೆ ಇರುತ್ತೆ. ವಿವಾದಗಳು ನಮ್ಮ ಅನುಕೂಲಕ್ಕಾಗಿ ಮತ್ತು ಅಹಂಕಾರಕ್ಕಾಗಿ ಸೃಷ್ಟಿಯಾದವು. ಸರಿಯಾಗಿ ನೀರು ಹಂಚಿಕೊಳ್ಳದ ವಿವಾದ ಮಾಡಿಕೊಂಡಿದ್ದೇವೆ. ನದಿ ನೀರು ಹಂಚಿಕೆಯಲ್ಲಿ ಹಿಂದಿನಿಂದಲೂ ಕರ್ನಾಟಕಕ್ಕೆ ಅನ್ಯಾಯವಾಗಿದೆ. ಕೇಂದ್ರದ ನಾಯಕತ್ವ ತಮಿಳುನಾಡು ಕೆರಳುವುದನ್ನು ತಡೆಯಲು ಮತ್ತು ಕರ್ನಾಟಕವನ್ನು ಹ್ಯಾಂಡಲ್ ಮಾಡಬಹುದು ಎಂಬ ಮನಸ್ಥಿತಿಯಿಂದ ಅನ್ಯಾಯವಾಗುತ್ತಲೇ ಇದೆ. ಬ್ರಿಟಿಷರು ಮತ್ತು ಭಾರತದ ಆಡಳಿತಗಾರರ ಸಾಮ್ರಾಜ್ಯಶಾಹಿ ಮನಸ್ಥಿತಿ ಕರ್ನಾಟಕದ ಮೇಲೆ ದಬ್ಬಾಳಿಕೆ ಮಾಡುತ್ತ ಬಂದಿದೆ ಎಂದು ತಿಳಿಸಿದರು.

ಮುಂಬರುವ ದಿನಗಳಲ್ಲಿ ಹೋರಾಟಗಳು ಕಷ್ಟ, ಏಕೆಂದರೆ ಈಗ ಬಹುತೇಕ ಸಾರ್ವಜನಿಕರು ಪಕ್ಷದ ಕಾರ್ಯಕರ್ತರಾಗಿದ್ದಾರೆ. ಸಾರ್ವಜನಿಕ ಹಿತಾಸಕ್ತಿಯ ಹೋರಾಟಗಳಿಗೆ ಜನ ಸಿಗದಿರುವ ದಿನ ಬರಬಹುದು. ಒಂದು ಪಕ್ಷದ ಕಾರ್ಯಕರ್ತರಾದವರು ಹೈಕಮಾಂಡ್ ಆದೇಶವನ್ನು ಮಾತ್ರ ಚರ್ಚಿಸುತ್ತಾರೆ ಎಂದರು.

ಕಾವೇರಿ ವಿವಾದ ಜೀವಂತವಾಗಿಟ್ಟರೆ ತಮಿಳುನಾಡು ಸರ್ಕಾರಕ್ಕೆ ಬಲ. ಆದರೆ, ನೀರು ನಮ್ಮ ಬದುಕಿನ ಪ್ರಶ್ನೆ. ಒಂದು ದೇಶದ ಜನರಾದ ತಮಿಳುನಾಡು ಮತ್ತು ಕರ್ನಾಟಕದ ಜನತೆ ಒಟ್ಟಾಗಿ ಕೂತು ಚರ್ಚೆ ಮಾಡಬೇಕು ಎಂದು ಸಲಹೆ ನೀಡಿದ ಅವರು, ಕಾವೇರಿ ಕುರಿತು ಅಧ್ಯಯನ ಮಾಡುವವರಿಗೆ ಚಂದ್ರಶೇಖರ್ ಅವರ ಕಾವೇರಿ ವಿವಾದ ಕೃತಿಯೂ ಪರಾಮರ್ಶನ ಗ್ರಂಥ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾವೇರಿ ನದಿ ನೀರು ಹಂಚಿಕೆ ಕುರಿತಾಗಿ ಟ್ರಿಬ್ಯುನಲ್ ಲೆಕ್ಕಾಚಾರಗಳು ಉಳಿಯುವುದಿಲ್ಲ. ಈಗ ನೀರನ್ನು ವಿವೇಕದಿಂದ ಬಳಸುವ ಹೊಸ ಪದ್ಧತಿ ಆರಂಭವಾಗಬೇಕಿದೆ. ಶಕ್ತಿ ತೋರಿಸಿ ನೀರು ಕಿತ್ತುಕೊಂಡೆ ಎಂಬ ಅಹಂಕಾರವನ್ನು ಬಿಟ್ಟು ತೀರ್ಮಾನಕ್ಕೆ ಬರಬೇಕಿದೆ ಎಂದು ತಿಳಿಸಿದರು.

ಇತಿಹಾಸ ತಜ್ಞ ಪ್ರೊ.ಪಿ.ವಿ.ನಂಜರಾಜ ಅರಸ್ ಮಾತನಾಡಿ, ಕಾವೇರಿ ವಿವಾದದ ಬಗ್ಗೆ ಸಮಗ್ರ ಮಾಹಿತಿಯನ್ನು ದಾಖಲು ಮಾಡಿರುವ ಚಂದ್ರಶೇಖರ್ ಅವರು, ಕಾವೇರಿ ನದಿ ಬಿಡುವಂತೆ ಆದೇಶಿಸಿದ ಕೋರ್ಟ್ ತೀರ್ಪನ್ನು ಧಿಕ್ಕರಿಸಿದ ಏಕೈಕ ಮುಖ್ಯಮಂತ್ರಿ ಎಸ್.ಬಂಗಾರಪ್ಪ. ಮಂಡ್ಯದಿಂದ ಕೆ.ಶಂಕರೇಗೌಡ ಮತ್ತು ಎಸ್.ಎಂ. ಕೃಷ್ಣ ಅವರ ನೇತೃತ್ವದಲ್ಲಿ ನಡೆದ ಚಡ್ಡಿ ಮೆರವಣಿಗೆ ಬಗ್ಗೆ ಕೃತಿಯಲ್ಲಿ ದಾಖಲಿಸಬೇಕಿತ್ತು ಎಂದರು. ಕಾರ್ಯಕ್ರಮದಲ್ಲಿ ಲೇಖಕ ಸಿ.ಚಂದ್ರಶೇಖರ್, ಜಿ.ಬಿ. ರಂಗಸ್ವಾಮಿ ಇದ್ದರು. ಪ್ರಕಾಶಕ ಅಭಿರುಚಿ ಗಣೇಶ್ ನಿರೂಪಿಸಿದರು.

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ ಜಾತಿ ಭೇದವಿಲ್ಲದ ಜನಮುಖಿ ಕೇಂದ್ರ

ಡಿ.ಟಿ.ಪ್ರಕಾಶ್ ಪ್ರಶಂಸೆ



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಡಿ.ಟಿ.ಪ್ರಕಾಶ್ ಗಣಪತಿ ಶ್ರೀಗಳ ಆಶೀರ್ವಾದ ಪಡೆದರು.

ಮೈಸೂರು, ಮೇ26(ಬಿಎಲ್‌ಯು)– ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ ಯಾವುದೇ ಜಾತಿ ಭೇದವಿಲ್ಲದೆ ಜನಮುಖಿ ಕೇಂದ್ರವಾಗಿದೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಡಿ.ಟಿ.ಪ್ರಕಾಶ್ ಅಭಿಪ್ರಾಯಪಟ್ಟರು.

ಮೈಸೂರಿನ ಊಟಿ ರಸ್ತೆಯ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಇಂದು ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ 82 ನೇ ಜನ್ಮದಿನೋತ್ಸವದಲ್ಲಿ ಇಂದು ಶ್ರೀಗಳಿಂದ ಆಶೀರ್ವಾದ ಪಡೆದ ನಂತರ ಮಾತನಾಡಿದ ಅವರು, ಗಣಪತಿ ಶ್ರೀಗಳು ಸಂಗೀತದ ಮೂಲಕ ಜನರ ಅನಾರೋಗ್ಯ ಗುಣಪಡಿಸುವ ವಿಶೇಷತೆ ಹೊಂದಿದ್ದಾರೆ ಎಂದರು.

ಸಚ್ಚಿದಾನಂದ ಆಶ್ರಮ ಆಧ್ಯಾತ್ಮಿಕ ಹಾಗೂ ಧಾರ್ಮಿಕ ಕೇಂದ್ರದೊಂದಿಗೆ ಪರಿಸರ ಪೋಷಣೆ, ಮನಃಶಾಂತಿ ದೊರೆಯುವ ತಾಣವಾಗಿದೆ. ಅಷ್ಟೇ ಅಲ್ಲದೆ ಪ್ರವಾಸೋದ್ಯಮದಲ್ಲಿ ದೇಶ, ವಿದೇಶದ ಭಕ್ತ ವೃಂದವನ್ನು ಆಕರ್ಷಿಸುತ್ತಿದೆ ಎಂದರು.

ಈ ಮೂಲಕ ಗಣಪತಿ ಆಶ್ರಮ ಯಾವುದೇ ಜಾತಿ, ಭೇದವಿಲ್ಲದೆ ಜನಮುಖಿ ಕೇಂದ್ರವಾಗಿದೆ. ಕೋವಿಡ್ ಸಂದರ್ಭದಲ್ಲಿ ಕೂಡ ಲಕ್ಷಾಂತರ ಜನರಿಗೆ ಪ್ರತಿನಿತ್ಯ ಅನ್ನದಾನ ಮಾಡಿ ವೈದ್ಯಕೀಯ ನೆರವು ನೀಡಿ ಮಾನವೀಯತೆ ಮೆರೆದಿದೆ ಎಂದು ಡಿ.ಟಿ.ಪ್ರಕಾಶ್ ಪ್ರಶಂಸೆ ವ್ಯಕ್ತಪಡಿಸಿದರು.

ನಮ್ಮ ಧಾರ್ಮಿಕ ಪರಂಪರೆ ಮುಂದುವರೆಸಿಕೊಂಡು ಹೋಗುವ ಮೂಲಕ ಗಣಪತಿ ಆಶ್ರಮ ಸಮಾಜಕ್ಕೆ ಅಪಾರ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು.

ದೈವ ಸ್ವರೂಪಿಗಳಾದ ಶ್ರೀಗಳು ನಮ್ಮೆಲ್ಲರನ್ನು ಹಾರೈಸಿ, ಇನ್ನೂ ನೂರು ಕಾಲ ನಮ್ಮೊಡನೆ ಇರಬೇಕು. ಈ ಮೂಲಕ ಅವರ ಸೇವಾ ಕಾರ್ಯಗಳು ಭಕ್ತಾದಿಕಾರಿಗಳಿಗೆ ಸ್ಫೂರ್ತಿ ನೀಡಲಿ ಎಂದು ಡಿ.ಟಿ.ಪ್ರಕಾಶ್ ಹೇಳಿದರು.

ಹೊಯ್ಸಳ ಕರ್ನಾಟಕದ ಅಧ್ಯಕ್ಷ ಕೆ.ಆರ್.ಸತ್ಯನಾರಾಯಣ್, ಕೆ.ಆರ್. ಉದಯ ಕುಮಾರ್, ನಿರ್ದೇಶಕರಾದ ರಂಗನಾಥ್, ಯುವ ಮುಖಂಡರಾದ ಕಡಕೊಳ ಜಗದೀಶ್, ಸಚಿಂದ್ರ ಮುಳ್ಳೂರು ಸುರೇಶ್, ವಿಜಯಕುಮಾರ್, ಪ್ರಶಾಂತ್, ಲತಾ, ಬಾಲಕೃಷ್ಣ ಸೇರಿದಂತೆ ವಿಪ್ರ ಮುಖಂಡರು ಈ ಸಂದರ್ಭದಲ್ಲಿ ಹಾಜರಿದ್ದರು.

ಇಂದಿನಿಂದ ಪ್ರಾಸ್ಟೇಟ್ ಗ್ರಂಥಿ ತಪಾಸಣಾ ಶಿಬಿರ

ಮೈಸೂರು, ಮೇ 26–ಸುಯೋಗ್ ಆಸ್ಪತ್ರೆ ವತಿಯಿಂದ ಮೇ 27ರಿಂದ ಜೂ.1ರವರೆಗೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಪ್ರಾಸ್ಟೇಟ್ ಗ್ರಂಥಿಯ ಉಚಿತ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಸಕ್ಕರೆ ಕಾಯಿಲೆ ತಜ್ಞ ಡಾ.ಅಭಿಜಿತ್ ನೇತೃತ್ವದಲ್ಲಿ ನಡೆಯಲಿರುವ ಶಿಬಿರದಲ್ಲಿ ಮೂತ್ರ ವಿಸರ್ಜನೆ ತೊಂದರೆಗಳು, ಮೂತ್ರ ಹಿಡಿದಂತಾಗುವುದು, ಮೂತ್ರ ಕಟ್ಟಿಕೊಳ್ಳುವುದು, ಮೂತ್ರದಲ್ಲಿ ರಕ್ತ ವಿಸರ್ಜನೆ ಮುಂತಾದ ಸಮಸ್ಯೆಗಳಿರುವ ರೋಗಿಗಳು ಶಿಬಿರದ ಉಪಯೋಗ ಪಡೆಯಬಹುದು. ವೈದ್ಯರು ಸೂಚಿಸುವ ಪರೀಕ್ಷೆಗಳಿಗೆ ಶೇ.30 ರಿಯಾಯಿತಿ ನೀಡಲಾಗುವುದು. ಆಸಕ್ತರು 0821-2566966, 9986399862 ಸಂಪರ್ಕಿಸಿ.


ಮಳೆ ನಿಂತ ಮೇಲೆ ರಸ್ತೆ ಗುಂಡಿ ಮುಚ್ಚಲು ಮುಂದಾದ ಪಾಲಿಕೆ

ಅಂದಾಜು ಪಟ್ಟಿ ಸಲ್ಲಿಸಲು ಎಲ್ಲಾ ವಲಯಗಳ ಅಧಿಕಾರಿಗಳಿಗೆ ಸೂಚನೆ

ಮೈಸೂರು, ಮೇ 26 (ಆರ್‌ಕೆ): ಮಳೆನಿಂತ ಮೇಲೆ ಮೈಸೂರು ನಗರದಾದ್ಯಂತ ರಸ್ತೆ ಗುಂಡಿ ಮುಚ್ಚಲು ನಗರಪಾಲಿಕೆಯು ಮುಂದಾಗಿದೆ.

ನಿರಂತರ ಮಳೆಯಿಂದಾಗಿ ನಗರದಾದ್ಯಂತ ರಸ್ತೆಗಳಲ್ಲಿ ಗುಂಡಿಗಳಾಗಿದ್ದು, ಅಲ್ಲಲ್ಲಿ ಒಳಚರಂಡಿ, ಕುಡಿಯುವ ನೀರಿನ ಕೊಳವೆ ಅಳವಡಿಸಲು ತೆಗೆದಿರುವ ಗುಂಡಿಗಳು ವಾಹನ ಸಂಚಾರಕ್ಕೆ ಅಡ್ಡಿಯುಂಟು ಮಾಡುತ್ತಿವೆ. ಅಲ್ಲದೆ, ರಸ್ತೆ ಅಡ್ಡಲಾಗಿ ಅಗೆದು ವಸತಿ ಮನೆಗಳಿಗೆ ನೀರಿನ ಸಂಪರ್ಕ ಪಡೆದ ಬಳಿಕ ಮುಚ್ಚಿದಿರುವುದರಿಂದ ಬಹುತೇಕ ರಸ್ತೆಗಳಲ್ಲಿ ದ್ವಿಚಕ್ರ ವಾಹನ ಸವಾರರಿಗೆ ತೀವ್ರ ತೊಂದರೆಯಾಗುತ್ತಿರುವುದನ್ನು ಮನಗಂಡು ಪಾಲಿಕೆ ಸೂಪರಿಂಟೆಂಡಿಂಗ್ ಇಂಜಿನಿಯರ್ ಸಿಂಧೂ ಅವರು ರಸ್ತೆ ಗುಂಡಿ ಮುಚ್ಚುವುದು, ಫುಟ್‌ಪಾತ್ ರಿಪೇರಿ ಸೇರಿದಂತೆ ಅಗತ್ಯ ತುರ್ತು ಕಾಮಗಾರಿ ಕೈಗೊಳ್ಳಲು ಅಂದಾಜು ಪಟ್ಟಿ (ಎಸ್ಟಿಮೇಟ್) ತಯಾರಿಸಿ ವರದಿ ನೀಡುವಂತೆ ಎಲ್ಲಾ 9 ವಲಯಗಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಾಳೆ(ಮೇ27) ಇಂಜಿನಿಯರ್‌ಗಳೊಂದಿಗೆ ಸಭೆ ನಡೆಸುವ ಅವರು, ಗುಂಡಿ ಮುಚ್ಚುವ ಸಂಬಂಧ ಸಮಾಲೋಚನೆ ನಡೆಸಿ ಅಗತ್ಯ ಮಾಹಿತಿ ಕಲೆ ಹಾಕಲಿದ್ದಾರೆ. ಅಂದಾಜು ಪಟ್ಟಿಗೆ ಕಮೀಷ್ನರ್‌ರಿಂದ ಆಡಳಿತಾತ್ಮಕ ಅನುಮೋದನೆ ಪಡೆದು ಟೆಂಡರ್ ಕರೆದು ಪ್ರಕ್ರಿಯೆ ಪೂರ್ಣಗೊಳಿಸಿ ಕಾರ್ಯಾದೇಶ ನೀಡಲಿದ್ದು, ಮಳೆ ನಿಂತ ಮೇಲೆ ಗುಂಡಿ ಮುಚ್ಚುವ ಕಾಮಗಾರಿ ಆರಂಭಿಸಲು ಸಿದ್ಧತೆ ಮಾಡಲಾಗುತ್ತಿದೆ.



ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲಾ ಕೆಎಸ್‌ಆರ್‌ಟಿಸಿ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಎಂ.ಪಿ.ನಾಗಪ್ರಸಾದ್, ಉಪಾಧ್ಯಕ್ಷರಾಗಿ ಎಸ್.ರಘು ಆಯ್ಕೆಯಾಗಿದ್ದಾರೆ.

ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಜನ್ಮದಿನ

ದತ್ತ ಪೀಠದಿಂದ ಸಾಧಕರಿಗೆ ಬಿರುದು ಪ್ರದಾನ

ಮೈಸೂರು, ಮೇ 26(ಎಂಟಿವೈ)– ಮೈಸೂರಿನ ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ 82ನೇ ಜನ್ಮದಿನದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ 9 ಮಂದಿಗೆ ದತ್ತಪೀಠದ ವಿವಿಧ ಬಿರುದು ಪ್ರದಾನ ಮಾಡಲಾಯಿತು.

ಗಣಪತಿ ಆಶ್ರಮದ ನಾದಮಂಟಪದಲ್ಲಿ ಭಾನುವಾರ ಬೆಳಗ್ಗೆ ನಡೆದ ಕಾರ್ಯಕ್ರಮದಲ್ಲಿ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಬಿರುದು ಪ್ರದಾನ ಮಾಡಿ ಆಶೀರ್ವದಿಸಿದರು.

ಇದಕ್ಕೂ ಮುನ್ನ ಭಕ್ತರಿಗೆ ಆಶೀರ್ವಚನ ನೀಡಿದ ಸ್ವಾಮೀಜಿ, ನಾನು ಎಂಬುದನ್ನು ಬಿಟ್ಟು ದೇವರ ಸ್ಮರಣೆ ಮಾಡಿದರೆ ಒಳ್ಳೆಯದಾಗುತ್ತದೆ. ಮನದಲ್ಲಿರುವ ಎಲ್ಲಾ ಯೋಚನೆಗಳನ್ನು ಬಿಟ್ಟು ದೇವರಲ್ಲಿ ಮನಸಾರೆ ಪ್ರಾರ್ಥನೆ ಮಾಡಿದಾಗ ದೇವ ಕೃಪೆಗೆ ಪಾತ್ರರಾಗಬಹುದು. ಶ್ರೀ ದತ್ತ ವೆಂಕಟರಮಣ ಸ್ವಾಮಿ ಸನ್ನಿಧಿಗೆ ಬಂದು ಗೋವಿಂದನ ಸ್ಮರಣೆ ಮಾಡಿದರೆ, ದೇವರನ್ನು ನೆನೆದರೆ ಕಷ್ಟ ಕೋಟಲೆಗಳಿಂದ ಹೊರ ಬರಬಹುದು. ಶಾಂತಿ, ನೆಮ್ಮದಿ ಸಿಗಲಿದೆ ಎಂದು ತಿಳಿಸಿದರು.

ವಿಶೇಷ ಪೂಜಾ ಕಾರ್ಯ: ಇದೇ ವೇಳೆ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರಿಗೆ ನಾದಮಂಟಪದಲ್ಲಿ ಪ್ರತ್ಯಕ್ಷ ಪಾದಪೂಜೆಯನ್ನು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರು ನೆರವೇರಿಸಿದರು. ಇದಕ್ಕೂ ಮುನ್ನ ಶ್ರೀಚಕ್ರ ಪೂಜೆ, ಆಯುಷ್ಯ ಹೋಮ ಹಾಗೂ ಇನ್ನಿತರ ಪೂಜಾ ಕಾರ್ಯ ಜರುಗಿದವು.



ಮೈಸೂರಿನ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಜನ್ಮದಿನದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹತ್ತು ಮಂದಿಗೆ ವಿವಿಧ ಬಿರುದನ್ನು ಶ್ರೀಗಳು ಪ್ರದಾನ ಮಾಡಿದರು.

ಬಿರುದು ಪ್ರದಾನ: ಶ್ರೀಗಳ ಜನ್ಮದಿನದ ಅಂಗವಾಗಿ ವೇದ ನಿಧಿ ಬಿರುದನ್ನು ಕಪಿಲವಾಯಿ ರಾಮ ಸೋಮಯಾಜುಲು (ವೈದಿಕ ಕೈಂಕರ್ಯಗಳು – ಕಾಂಡತ್ರಯ ಪ್ರೌತ ಪ್ರಯೋಗ), ಶಾಸ್ತ್ರ ನಿಧಿ ಬಿರುದನ್ನು ಶ್ರೀ ಬ್ರಜ್ ಭೂಷಣ್ ಓಝಾ (ವಾರಾಣಸಿ, ವ್ಯಾಕರಣ), ನಾದ ನಿಧಿ ಬಿರುದನ್ನು ಚೆನ್ನೈನ ನಾಗೈ ಕೆ.ಮುರಳೀಧರನ್ (ಕರ್ನಾಟಕ ಸಂಗೀತ), ದತ್ತ ಪೀಠ ಆಸ್ಥಾನ ವಿದ್ವಾನ್ ಎಂದು ರಾಜಮಂಡ್ರಿಯ ಪ್ರಭಲ ಸುಬ್ರಹ್ಮಣ್ಯ ಶರ್ಮಾ(ವಾಸ್ತು ಶಾಸ್ತ್ರ) ದತ್ತ ಪೀಠ ಆಸ್ಥಾನ ವಿದ್ವಾನ್ ಎಂದು ತೆನಾಲಿ ಮಾಮಿಳ್ಳಪಲ್ಲಿ ಮೃತ್ಯುಂಜಯ ಪ್ರಸಾದ್ (ಶೈವಾಗಮ), ದತ್ತ ಪೀಠ ಆಸ್ಥಾನ ವಿದ್ವಾನ್ ಬಿರುದನ್ನು ತ್ರಿಚೂರ್ ಸಹೋದರರಾದ ಶ್ರೀಕೃಷ್ಣ ಮೋಹನ್, ರಾಮ್ ಕುಮಾರ್ ಮೋಹನ್ (ಕರ್ನಾಟಕ ಸಂಗೀತ), ಸಸ್ಯ ಬಂಧು ಬಿರುದ್ದನ್ನು ಮಾಯಾ ಸೀತಾರಾಮ್ (ಬೋನ್ಸಾಯ್), ಜಯಲಕ್ಷ್ಮಿ ಪುರಸ್ಕಾರವನ್ನು ವಿಜಯವಾಡದ ಕರುಮೂರಿ ಲಲಿತಮ್ಮ(ಸಮುದಾಯ ಸೇವೆ) ಹಾಗೂ ದತ್ತ ಪೀಠ ಬಂಧು ಎಂದು ಹೈದರಾಬಾದ್‌ನ ಸಂಪರ ನಾಗ ಸಾಯಿ ರಾಮಚಂದ್ರ ಶೇಖರ್(ಸಮುದಾಯ ಸೇವೆ) ಅವರಿಗೆ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಬಿರುದು ಪ್ರಮಾಣ ಪತ್ರ ವಿತರಿಸಿದರು.

ಮೆರವಣಿಗೆಯಲ್ಲಿ ಬಂದ ಸ್ವಾಮೀಜಿ: ಆಶ್ರಮದ ಆವರಣದಿಂದ ನಾದಮಂಟಪದವರೆಗೆ ಭಕ್ತರು ನೃತ್ಯ, ಕೋಲಾಟದೊಂದಿಗೆ ಮೆರವಣಿಗೆಯಲ್ಲಿ ಕರೆತಂದರು. ಬಳಿಕ ಕಾಶಿ ವಿಶ್ವನಾಥ ದೇವಾಲಯ, ಶ್ರೀ ದತ್ತ ವೆಂಕಟರಮಣ ಸ್ವಾಮಿ, ಶನೈಶ್ಚರ ಸ್ವಾಮಿ, ರಾಮದೇವರ ದೇವಸ್ಥಾನ ಬೆಟ್ಟದಪುರದ ಶಿವ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಿಂದ ತರಲಾದ ತೀರ್ಥ ಪ್ರಸಾದವನ್ನು ಶ್ರೀ ಸ್ವಾಮೀಜಿಯವರಿಗೆ ನೀಡಲಾಯಿತು.

ಕಾಶ್ಮೀರದ ನಿವಾಸಿ ಮಹಮ್ಮದ್ ಎಂಬವರು ನೇಯ್ದಿರುವ ರಾಧಾ, ಕೃಷ್ಣ ಉದ್ಯಾನದಲ್ಲಿ ವಿಹರಿಸುತ್ತಿರುವ ಚಿತ್ರವುಳ್ಳ ಸುಂದರವಾದ ಕಾಶ್ಮೀರಿ ಶಾಲನ್ನು ಕಮಲ್ ಕಪೂರ್ ದಂಪತಿ ಶ್ರೀಗಳಿಗೆ ಸಮರ್ಪಿಸಿದರು. ಸ್ವಾಮೀಜಿ ಅದನ್ನು ಧರಿಸಿ ಶಾಲಿನ ಸೌಂದರ್ಯ ವನ್ನು ಮತ್ತು ಮಹಮ್ಮದ್ ಅವರ ಕಲೆಯನ್ನು ಶ್ಲಾಘಿಸಿದರು.

ಮೈಸೂರು ಮಿತ್ರ

ಹುಲಿ ದಾಳಿಗೆ ಮಹಿಳೆ ಬಲಿ



ಚಿಕ್ಕಮ್ಮ

> ಇಂತಹ ಅಹಿತಕರ ಘಟನೆ ನಡೆಯಬಾರದಿತ್ತು. ಮುಂಬರುವ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳುತ್ತೇವೆ. ಅಲ್ಲದೇ ಮಹಿಳೆ ಬಲಿ ತೆಗೆದುಕೊಂಡಿರುವ ಹುಲಿ ಸೆರೆಗೆ ಕ್ಯಾಮರಾ ಅಳವಡಿಸಿ ಅದರ ಚಲನವಲನಗಳನ್ನು ಪತ್ತೆ ಹಚ್ಚಿ ಸೆರೆ ಹಿಡಿಯುತ್ತೇವೆ.
>
> - ಪ್ರಭಾಕರನ್, ಡಿಸಿಎಫ್



ಮೃತರ ಕುಟುಂಬಕ್ಕೆ ಅರಣ್ಯ ಅಧಿಕಾರಿಗಳು ಪರಿಹಾರದ ಚೆಕ್ ನೀಡಿದರು.

ಹೆಚ್.ಡಿ.ಕೋಟೆ, ಮೇ 26– ಹುಲಿ ದಾಳಿಗೆ ಮಹಿಳೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಎನ್.ಬೇಗೂರು ಅರಣ್ಯ ವ್ಯಾಪ್ತಿಯ ಮೂರ್ಬಾಂಡ್ ಬೆಟ್ಟದ ಸಮೀಪ ನಡೆದಿದೆ.

ತಾಲೂಕಿನ ಎನ್.ಬೇಗೂರು ಗ್ರಾಪಂ ವ್ಯಾಪ್ತಿಯ ಮಾಳದ ಹಾಡಿ ನಿವಾಸಿ ಕರಿಯ ಅವರ ಪತ್ನಿ, ಚಿಕ್ಕಮ್ಮ (48) ಸಾವನ್ನಪ್ಪಿದವರು. ಈಕೆ ಎಂದಿನಂತೆ ಶನಿವಾರ ಬೆಳಗ್ಗೆ ಮೇಕೆಗಳನ್ನು ಮೇಯಿಸಲು ಮೂರ್ಬಾಂಡ್ ಬೆಟ್ಟಕ್ಕೆ ತೆರಳಿದ್ದರು. ಆದರೆ ಮಧ್ಯಾಹ್ನದ ವೇಳೆಗೆ ಚಿಕ್ಕಮ್ಮ ಅವರ ಮೇಲೆ ಹುಲಿ ದಾಳಿ ನಡೆಸಿ ಕಾಡಿನತ್ತ ಹೊತ್ತೊಯ್ದಿದೆ. ಇದನ್ನು ಕಂಡ ಸ್ಥಳದಲ್ಲಿದ್ದವರು ಗಾಬರಿಗೊಂಡು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು, ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿದರು. ಅಲ್ಲದೇ ಚಿಕ್ಕಮ್ಮ ಅವರ ಶವಕ್ಕಾಗಿ ಗ್ರಾಮಸ್ಥರೊಂದಿಗೆ ಹುಡುಕಾಟ ಆರಂಭಿಸಿದಾಗ ಆಕೆಯ ಕಾಲು ಮಾತ್ರ ಪತ್ತೆಯಾಗಿತ್ತು. ಅಲ್ಲದೇ ಕತ್ತಲು ಆವರಿಸಿದ್ದರಿಂದ ಶೋಧ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು. ಭಾನುವಾರ ಬೆಳಗ್ಗೆ ಅರಣ್ಯಾಧಿಕಾರಿಗಳು ಮಹಿಳೆ ಶವ ಪತ್ತೆ ಹಚ್ಚಿದ್ದಾರೆ. ಈ ವೇಳೆ ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿತ್ತು.

ಇದೇ ವೇಳೆ ಮೃತರ ಕುಟುಂಬದ ಸದಸ್ಯರಿಗೆ ಡಿಸಿಎಫ್ ಪ್ರಭಾಕರನ್ 3 ಲಕ್ಷದ ಪರಿಹಾರದ ಚೆಕ್ ವಿತರಿಸಿದರು. ನಂತರ ಮಾತನಾಡಿದ ಅವರು ಸರ್ಕಾರದಿಂದ ನೀಡುವ 15 ಲಕ್ಷ ರೂ. ಪರಿಹಾರದ ಪೈಕಿ 3 ಲಕ್ಷ ರೂ. ವಿತರಿಸಲಾಗಿದ್ದು, ಉಳಿದ ಹಣವನ್ನು ಶೀಘ್ರದಲ್ಲೇ ನೀಡಲಾಗುವುದು. ಅಲ್ಲದೇ ಸದಸ್ಯರಿಗೆ ಉದ್ಯೋಗ ನೀಡುವ ಭರವಸೆ ನೀಡಿದರು.

ಚೆಕ್ ಸ್ವೀಕರಿಸಿ ಮಾತನಾಡಿದ ಮೃತಳ ಪತಿ ಕರಿಯ, ಮಕ್ಕಳಾದ ಮಾದೇವ, ಭಾರತಿ, ರಾಧಾ ನಮ್ಮ ಕುಟುಂಬದ ಆಧಾರ ಸ್ತಂಭವನ್ನೇ ಕಳೆದುಕೊಂಡಿದ್ದೇವೆ. ಹೀಗಾಗಿ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸುವ ಜೊತೆಗೆ ಉದ್ಯೋಗ ನೀಡುವಂತೆ ಮನವಿ ಮಾಡಿದರು. ಎನ್.ಬೇಗೂರು ಗ್ರಾಪಂ ಅಧ್ಯಕ್ಷ ಶೈಲೇಂದ್ರ ಮಾತನಾಡಿ, ಕಾಡಂಚಿನ ಗ್ರಾಮಗಳಲ್ಲಿ ಅರಣ್ಯಾಧಿಕಾರಿಗಳ ನಿರ್ಲಕ್ಷದಿಂದ ಇಂತಹ ಅಹಿತಕರ ಘಟನೆಗಳು ನಡೆಯುತ್ತಿವೆ. ಎನ್.ಬೇಗೂರು ಅರಣ್ಯ ವ್ಯಾಪ್ತಿಯಲ್ಲಿ ಹಲವು ಬಾರಿ ಹುಲಿ ಕಾಣಿಸಿಕೊಂಡಿದ್ದು, ಸೆರೆ ಹಿಡಿಯುವಂತೆ ಅರಣ್ಯ ಇಲಾಖೆಗೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಈ ಘಟನೆಗೆ ಅರಣ್ಯ ಇಲಾಖೆ ಅಧಿಕಾರಗಳ ನಿರ್ಲಕ್ಷವೇ ಕಾರಣ ಎಂದು ಆರೋಪಿಸಿದರು.

ಇದೇ ವೇಳೆ ಶವವನ್ನು ಹೆಚ್.ಡಿ.ಕೋಟೆ ಸರ್ಕಾರಿ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಅಂತರಸಂತೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಈ ವೇಳೆ ಆರ್‌ಎಫ್‌ಓ ಮಂಜುನಾಥ್, ಡಿವೈಎಸ್ಪಿ ಗೋಪಾಲಕೃಷ್ಣ, ಅಡಿಷನಲ್ ಎಸ್‌ಪಿ ನಾಗೇಶ್, ಸಿಪಿಐ ಲಕ್ಷ್ಮಿಕಾಂತ್, ಶಬೀರ್ ಹುಸೇನ್, ಎಸ್‌ಸಿ ಎಸ್‌ಟಿ ಜಿಲ್ಲಾ ಸಮಿತಿ ಸದಸ್ಯ ವೇಣುಗೋಪಾಲ್, ಜಿಲ್ಲಾ ಸಮನ್ವಯ ಯೋಜನಾ ಅಧಿಕಾರಿ ಎಂ.ಕೆ. ಮಲ್ಲೇಶ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಜಿ.ಆರ್. ಮಹೇಶ್, ಕಚೇರಿ ಅಧೀಕ್ಷಕ ನಾಗರಾಜು, ಗ್ರಾಪಂ ಸದಸ್ಯರಾದ ಕುಮಾರ್, ಮಂಜುನಾಥ, ಮಾಜಿ ಉಪಾಧ್ಯಕ್ಷ ಸತೀಶ್ ಕುಮಾರ್, ಗ್ರಾಮದ ಮುಖಂಡ ಹನುಮಂತಯ್ಯ, ಅರಣ್ಯ ಇಲಾಖೆ ಸಿಬ್ಬಂದಿ ವರ್ಗ ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಲಿಯೋ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಟರ್ಬೋ (ಮ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕ್ರೂ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮ್ಯಾಟ್ನಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ಫ್ಯೂರಿಯೋಸ ಎ ಮ್ಯಾಡ್ ಮ್ಯಾಕ್ಸ್ ಸಾಗಾ (ಇಂ)	4 ಪ್ರದರ್ಶನಗಳು
ಸಂಗಂ	
3ನೇ ಕೃಷ್ಣಪ್ಪ (ಕ)	4 ಪ್ರದರ್ಶನಗಳು
ಲಿಡೋ	
ಅಂಜನೀಪುತ್ರ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ತ್ರಿಭುಜ (ಕ)	ಬೆಳಗಿನ ಪ್ರದರ್ಶನ
ಕೃಷ್ಣ ನೀ ಬೇಗನೆ ಬಾರೋ (ಕ)	3 ಪ್ರದರ್ಶನಗಳು
ಪ್ರಭಾ	
ಕೃಷ್ಣಾ ನೀ ಬೇಗನೆ ಬಾರೋ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಫ್ಯೂರಿಯೋಸ ಎ ಮ್ಯಾಡ್ ಮ್ಯಾಕ್ಸ್ ಸಾಗಾ (ಇಂ): ಬೆ.10.15ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.9.55ಕ್ಕೆ, 3ನೇ ಕೃಷ್ಣಪ್ಪ (ಕ): ಮ.1.10ಕ್ಕೆ.
ಸ್ಕ್ರೀನ್ 2	ರಾಮನ ಅವತಾರ (ಕ): ಬೆ.10.30ಕ್ಕೆ, ಬಯ್ಯಾ ಜಿ (ಹಿಂ): ಮ.1.35ಕ್ಕೆ, ಸಂ.4.25ಕ್ಕೆ, ಥಾಲವನ್ (ಮ): ರಾ.7.15ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ದಿ ಜಡ್ಜ್‌ಮೆಂಟ್ (ಕ): ಬೆ.10.20ಕ್ಕೆ, ಸಂ.4.05ಕ್ಕೆ, ರಾ.7.05ಕ್ಕೆ, ಪಿಟಿ ಸರ್ (ತ): ಮ.1.20ಕ್ಕೆ, ಗುರುವಾಯೂರ್ ಅಂಬಲನಾಡಿಯಿಲ್ (ಮ): ರಾ.10.05ಕ್ಕೆ.
ಸ್ಕ್ರೀನ್ 4	ಟರ್ಬೋ (ಮ): ಬೆ.10.10ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಗಾರ್ಫೀಲ್ಡ್ ಮೂವಿ (3ಡಿ)(ಇಂ): ಮ.1.50ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಗಾರ್ಫೀಲ್ಡ್ ಮೂವಿ (3ಡಿ)(ಇಂ): ಬೆ.10.40ಕ್ಕೆ, ಮ.1ಕ್ಕೆ, ಸಂ.6.10ಕ್ಕೆ, ರಾ.8.30ಕ್ಕೆ, ಇಂಗ ನಾನ್ ಥಾನ್ ಕಿಂಗು (ತ): ಮ.3.20ಕ್ಕೆ.
ಸ್ಕ್ರೀನ್ 2	ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ರಾ.7.05ಕ್ಕೆ, ಶ್ರೀಕಾಂತ್ (ಹಿಂ): ಮ.1.05ಕ್ಕೆ, ರಾ.10.10ಕ್ಕೆ,
ಸ್ಕ್ರೀನ್ 3	ಇಂಗ ನಾನ್ ಥಾನ್ ಕಿಂಗು (ತ): ಬೆ.11.05ಕ್ಕೆ, ಇಫ್ 2024 (ಇಂ): ಮ.1.55ಕ್ಕೆ, ರಾ.7.35ಕ್ಕೆ, A (ಕ): ಸಂ.4.20ಕ್ಕೆ, ಗುರುವಾಯೂರ್ ಅಂಬಲನಾಡಿಯಿಲ್ (ಮ): ರಾ.10ಕ್ಕೆ.
ಸ್ಕ್ರೀನ್ 4	ರಾಮನ ಅವತಾರ (ಕ): ಮ.12.45ಕ್ಕೆ, ಕೃಷ್ಣ ನೀ ಬೇಗನೇ ಬಾರೋ (ಕ): ಮ.3.40ಕ್ಕೆ, ಇಂಗ ನಾನ್ ಥಾನ್ ಕಿಂಗು (ತ): ಸಂ.6.55ಕ್ಕೆ, ಅರಮನೈ 4 (ತ): ರಾ.9.45ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಎವಿಡೆನ್ಸ್ (ಕ): ಬೆ.11.15ಕ್ಕೆ, ಅರನ್‌ಮನೈ 4 (ತ): ಮ.1.15ಕ್ಕೆ, ಟರ್ಬೋ (ಮ): ಸಂ.4ಕ್ಕೆ, ಮೂರನೇ ಕೃಷ್ಣಪ್ಪ (ಕ): ಸಂ.6.40ಕ್ಕೆ, ದಿ ಜಡ್ಜ್‌ಮೆಂಟ್ (ಕ): ರಾ.9.30ಕ್ಕೆ.
ಸ್ಕ್ರೀನ್ 2	ಫ್ಯೂರಿಯೋಸ ಎ ಮ್ಯಾಡ್ ಮ್ಯಾಕ್ಸ್ ಸಾಗಾ (ಇಂ): ಬೆ.10.20ಕ್ಕೆ, ಸಂ.4.05ಕ್ಕೆ, ಟರ್ಬೋ (ಮ): ಮ.1.05ಕ್ಕೆ, ಸಂ.6.50ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ದಿ ಜಡ್ಜ್‌ಮೆಂಟ್ (ಕ): ಬೆ.10.40ಕ್ಕೆ, ಮ.3.55ಕ್ಕೆ, 3ದೇವಿ (ಕ): ಮ.1.30ಕ್ಕೆ, ಫ್ಯೂರಿಯೋಸ ಎ ಮ್ಯಾಡ್ ಮ್ಯಾಕ್ಸ್ ಸಾಗಾ (ಇಂ): ಸಂ.6.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಗರುಡ ಮಾಲ್,
1ನೇ ಮಹಡಿ, ಮೊ.ನಂ: 9901373210

ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1.15ಕ್ಕೆ, ಮ.3.40ಕ್ಕೆ, ರಾ.7.15ಕ್ಕೆ, ರಾ.10ಕ್ಕೆ, ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10.05ಕ್ಕೆ, ಮ.12ಕ್ಕೆ, ಮ.3.10ಕ್ಕೆ, ಸಂ.6.20ಕ್ಕೆ, ರಾ.9.30ಕ್ಕೆ, ಸ್ಟಾರ್ (ತ): ಮ.1ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, 4N6 (ಕ): ಮ.1.05ಕ್ಕೆ, ಅಂಜನೀಪುತ್ರ (ಕ): ಸಂ.4.15ಕ್ಕೆ, ಕೃಷ್ಣಮ್ಮ (ತೆ): ಸಂ.4.20ಕ್ಕೆ, ರಾ.10.15ಕ್ಕೆ, ಪವರ್ (ಕ): ಸಂ.6.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವಿದ್ಯಾರ್ಥಿಗಳ ಬೌದ್ಧಿಕ ವಿಕಾಸಕ್ಕೆ ಎನ್‌ಎಸ್‌ಎಸ್ ಸಹಕಾರಿ

ಎಪಿಎಂಸಿ ಮಾಜಿ ನಿರ್ದೇಶಕ ಎಲ್.ಪಿ.ರವಿಕುಮಾರ್



ಎನ್‌ಎಸ್‌ಎಸ್ ಶಿಬಿರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು.

ಕೆ.ಆರ್.ನಗರ, ಮೇ 26– ರಾಷ್ಟ್ರೀಯ ಸೇವಾ ಯೋಜನೆ ಶಿಬಿರಗಳಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವುದರಿಂದ ಶಿಸ್ತಿನ ಜೊತೆಗೆ ಅನುಭವ ಪಡೆಯಬಹುದು ಎಂದು ಎಪಿಎಂಸಿ ಮಾಜಿ ನಿರ್ದೇಶಕ ಎಲ್.ಪಿ.ರವಿಕುಮಾರ್ ತಿಳಿಸಿದರು.

ತಾಲೂಕಿನ ಲಾಲನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ಶಿಬಿರದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಓದಿನ ಜೊತೆಗೆ ಇಂತಹ ಶಿಬಿರಗಳಲ್ಲಿ ಪಾಲ್ಗೊಳ್ಳುವುದು ಅವರ ಬೌದ್ಧಿಕ ವಿಕಾಸಕ್ಕೆ ಕಾರಣವಾಗಲಿದೆ ಎಂದರು.

ಕಾಲೇಜಿನಿಂದ 7 ದಿನಗಳ ಕಾಲ ಗ್ರಾಮದಲ್ಲಿ ಎನ್‌ಎಸ್‌ಎಸ್ ಶಿಬಿರ ಹಮ್ಮಿಕೊಂಡಿದ್ದು, ಇಲ್ಲಿ ಭಾಗವಹಿಸಿರುವ ಪ್ರತಿಯೊಬ್ಬರಿಗೂ ಗ್ರಾಮೀಣ ಜನ ಜೀವನದ ಅನುಭವವಾಗುವ ಜೊತೆಗೆ ಅವರ ಸಂಕಷ್ಟವು ಅರ್ಥವಾಗಲಿದ್ದು ಇದನ್ನು ತಮ್ಮ ಜೀವನದಲ್ಲಿ ಅಳವಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಕೆಂಪರಾಜು ಮಾತನಾಡಿ, ಕೆ.ಆರ್.ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ನಮ್ಮ ಗ್ರಾಮದಲ್ಲಿ ಎನ್‌ಎಸ್‌ಎಸ್ ಶಿಬಿರ ಆಯೋಜಿಸಿರುವುದು ಸಂತಸದ ವಿಚಾರವಾಗಿದ್ದು, ಶಿಬಿರ ನಡೆಯುವ ದಿನಗಳಲ್ಲಿ ಎಲ್ಲಾ ಸಹಕಾರ ನೀಡುವುದಾಗಿ ಘೋಷಿಸಿದರು.

ಪ್ರಾಂಶುಪಾಲ ಡಾ.ಬಿ.ಎಸ್.ಜಯ ಮಾತನಾಡಿದರು. ಗ್ರಾಪಂ ಸದಸ್ಯರಾದ ಉಮೇಶ್, ಗುರು, ಎಸ್‌ಡಿಎಂಸಿ ಅಧ್ಯಕ್ಷ ಮಹದೇವಪ್ಪ, ಶಾಲಾ ಮುಖ್ಯ ಶಿಕ್ಷಕ ರೇವಣ್ಣ, ಶಿಬಿರಾಧಿಕಾರಿಗಳಾದ ಎಂ.ವಿ. ರಾಘವೇಂದ್ರ, ಎಂ.ಮಮತ, ಪ್ರದೀಪ್, ಎಂ.ವಂದನ, ಉಪನ್ಯಾಸಕರಾದ ಬಿ.ಪಿ. ದಯಾನಂದ್, ತಿಪ್ಪೇಸ್ವಾಮಿ, ಮಂಜುನಾಥ್, ಕೃಷ್ಣಮೂರ್ತಿ, ಸಾಗರ್ ಸೇರಿದಂತೆ ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು ಇದ್ದರು.

ಭುವನಹಳ್ಳಿ: ಸಾಮಾಜಿಕ ಲೆಕ್ಕಪರಿಶೋಧನಾ ಸಭೆ



ಬೆಟ್ಟದಪುರ, ಮೇ 26– ಅಂತರ್ಜಲ ವೃದ್ಧಿ ಹಾಗೂ ಜನ ಜಾನುವಾರುಗಳ ಅನುಕೂಲಕ್ಕಾಗಿ ಕೆರೆಗಳ ಹೂಳೆತ್ತಲು ಕ್ರಮ ಕೈಗೊಳ್ಳಲಾಗುವುದು ಎಂದು ಭುವನಹಳ್ಳಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ದೇವರಾಜೇಗೌಡ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಭುವನಹಳ್ಳಿ ಗ್ರಾಪಂ ಕಚೇರಿ ಆವರಣದಲ್ಲಿ ನಡೆದ 2023–24ನೇ ಸಾಲಿನ ಸಾಮಾಜಿಕ ಲೆಕ್ಕ ಪರಿಶೋಧನಾ ಸಭೆಯಲ್ಲಿ ಮಾತನಾಡಿದರು.

ತಾಲೂಕು ಸಾಮಾಜಿಕ ಪರಿಶೋಧನಾ ವ್ಯವಸ್ಥಾಪಕ ಎಸ್.ಮಂಜುನಾಥ್ ಮಾತನಾಡಿ, ನರೇಗಾ ಯೋಜನೆಯಡಿ 212 ಕಾಮಗಾರಿಗಳು ಅನುಷ್ಠಾನಗೊಂಡಿದ್ದು, 1 ಕೋಟಿ 65 ಲಕ್ಷದ 2276 ರೂ. ಬಳಕೆ ಮಾಡಲಾಗಿದೆ. 15ನೇ ಹಣಕಾಸು ಯೋಜನೆಯಡಿ 48 ಕಾಮಗಾರಿಗಳು ಅನುಷ್ಠಾನಗೊಂಡಿದ್ದು, 51 ಲಕ್ಷದ 31 ಸಾವಿರದ 920 ರೂ.ಗಳನ್ನು ಅಭಿವೃದ್ಧಿ ಕಾರ್ಯಗಳಿಗೆ ಸದ್ಬಳಕೆ ಮಾಡಲಾಗಿದೆ ಎಂದರು.

ತೋಟಗಾರಿಕೆ ಇಲಾಖೆ ಬೆಟ್ಟದಪುರ ಹೋಬಳಿಯ ಅಧಿಕಾರಿ ಕರಿಗೌಡ ಮಾತನಾಡಿ, ಗ್ರಾಪಂನಲ್ಲಿ ಜಾಬ್‌ಕಾರ್ಡ್ ಹೊಂದಿರುವ ರೈತರಿಗೆ ತೆಂಗು ಬೆಳೆಯಲು ಎಕರೆಗೆ 40 ಗಿಡ, ಸಪೋಟ ಬೆಳೆ ಬೆಳೆಯಲು 200 ಗಿಡ ಹಾಗೂ ಮಾವು ಬೆಳೆಯುವ ರೈತರಿಗೆ 50 ಗಿಡಗಳನ್ನು ಉಚಿತವಾಗಿ ನೀಡುವುದಾಗಿ ತಿಳಿಸಿದರು. ಇವುಗಳನ್ನು ಪಡೆಯಲು ಕಡ್ಡಾಯವಾಗಿ ಗ್ರಾಪಂನ ಗ್ರಾಮಸಭೆಗಳಲ್ಲಿ ನೋಂದಣಿ ಅಗತ್ಯ ಎಂದರು.

ಈ ವೇಳೆ ಗ್ರಾಪಂ ಅಧ್ಯಕ್ಷ ಜೋಗನಹಳ್ಳಿ ದೇವರಾಜ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೇಲ್ವಿಚಾರಕಿ ಸವಿತಾ, ಉಪಾಧ್ಯಕ್ಷೆ ಮಮತ, ಲೆಕ್ಕ ಸಹಾಯಕ ಹೆಚ್.ಆರ್ ಸೀನಾ, ಗ್ರಾಪಂ ಸದಸ್ಯರಾದ ರುಕ್ಮಿಣಿ, ಮಂಜುನಾಥ, ಸಾರ್ವಜನಿಕರು ಹಾಜರಿದ್ದರು.

ಡಾ.ಯತೀಂದ್ರಗೆ ಎಂಎಲ್‌ಸಿ ಟಿಕೆಟ್ ನೀಡಲು ಒತ್ತಾಯ



ನಂಜನಗೂಡು, ಮೇ 26– ಮುಂಬರುವ ಜೂನ್‌ನಲ್ಲಿ ನಡೆಯುವ ವಿಧಾನ ಪರಿಷತ್ ಚುನಾವಣೆಯಲ್ಲಿ ಮಾಜಿ ಶಾಸಕ ಡಾ.ಯತೀಂದ್ರ ಅವರಿಗೆ ಟಿಕೆಟ್ ನೀಡುವ ಮೂಲಕ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವಂತೆ ತಾಲೂಕು ಕುರುಬರ ಸಂಘದ ಅಧ್ಯಕ್ಷ ಕೆಂಪಣ್ಣ ಕಾಂಗ್ರೆಸ್ ವರಿಷ್ಠರನ್ನು ಒತ್ತಾಯಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕರಾಗಿ ವರುಣ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸುವ ಮೂಲಕ ಮಾದರಿ ಕ್ಷೇತ್ರವನ್ನಾಗಿಸಲು ಸಾಕಷ್ಟು ಶ್ರಮಿಸಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹೈಕಮಾಂಡ್ ಮಾತಿಗೆ ತಲೆಬಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಷೇತ್ರ ಬಿಟ್ಟುಕೊಟ್ಟಿದ್ದಾರೆ. ಜೊತೆಗೆ ಅವರ ಗೆಲುವಿಗಾಗಿ ಹಗಲಿರುಳು ಶ್ರಮಿಸಿದ್ದಲ್ಲದೆ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಕಾಂಗ್ರೆಸ್ ಶಾಸಕರು ಆಯ್ಕೆಯಾಗಲು ಪ್ರಮುಖ ಪಾತ್ರವಹಿಸಿದ್ದಾರೆ. ಆದ್ದರಿಂದ ಎಲ್ಲಾ ಸಮಾಜವನ್ನು ಒಟ್ಟಾಗಿ ತೆಗೆದುಕೊಂಡು ಹೋಗುವ ಸಾಮರ್ಥ್ಯವಿರುವ ಯತೀಂದ್ರ ಅವರಿಗೆ ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಮೂಲಕ ಈ ಭಾಗದ ಜನರ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ವರಿಷ್ಠರಲ್ಲಿ ಮನವಿ ಮಾಡುತ್ತೇನೆ ಎಂದರು.

ಕುರುಬರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕುರಿಹುಂಡಿ ರಾಜು ಮಾತನಾಡಿ, ಮುಖ್ಯಮಂತ್ರಿಗಳು ರಾಜ್ಯಾದ್ಯಂತ ಸುತ್ತಾಟ ನಡೆಸಬೇಕಾದ ಕಾರಣ ಅವರಿಗೆ ಜಿಲ್ಲೆಯ ಸಾರ್ವಜನಿಕರ ಸಮಸ್ಯೆಗಳಿಗೆ ನೇರವಾಗಿ ಸ್ಪಂದಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಮೈಸೂರು ಮತ್ತು ಚಾಮರಾಜನಗರ ಎರಡು ಜಿಲ್ಲೆಗಳಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಸದಾ ಕಾಲ ಸ್ಪಂದಿಸುತ್ತಿರುವ ಮಾಜಿ ಶಾಸಕ ಡಾ.ಯತೀಂದ್ರ ಅವರಿಗೆ ಸಂವಿಧಾನಿಕ ಹುದ್ದೆಯಾದ ವಿಧಾನ ಪರಿಷತ್ ಸ್ಥಾನ ನೀಡುವುದರಿಂದ ಹಳೇ ಮೈಸೂರು ಭಾಗವಾದ ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು ಜಿಲ್ಲೆ ಸಾರ್ವಜನಿಕರಿಗೆ ಸೇವೆ ಒದಗಿಸಲು ಅನುಕೂಲವಾಗಲಿದೆ. ಆದ್ದರಿಂದ ಅವರಿಗೆ ವಿಧಾನ ಪರಿಷತ್ ಟಿಕೆಟ್ ನೀಡಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಶಿವಸ್ವಾಮಿ, ಗುರುಪಾದು, ಸಂದೀಪ್, ಎಚ್.ಎಂ.ಕೃಷ್ಣ, ಆರ್.ಮಹದೇವ್, ಒಬೇದುಲ್ಲಾ, ರಾಜಣ್ಣ ಇದ್ದರು.

ನಿಯಮ ಪಾಲಿಸದ ಚಾಲಕರ ಮನೆಗೆ ನೋಟಿಸ್ ಬರಲಿದೆ

ಸರ್ಕಲ್ ಇನ್‌ಸ್ಪೆಕ್ಟರ್ ಮೇದಪ್ಪ



ತಿ.ನರಸೀಪುರ, ಮೇ 26– ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸದ ವಾಹನ ಚಾಲಕರ ಮನೆ ಬಾಗಿಲಿಗೆ ನೋಟಿಸ್ ಬರಲಿದೆ ಎಂದು ಸರ್ಕಲ್ ಇನ್ಸ್‌ಪೆಕ್ಟರ್ ಮೇದಪ್ಪ ತಿಳಿಸಿದರು.

ಪಟ್ಟಣದ ವಿದ್ಯೋದಯ ಕಾಲೇಜು ವೃತ್ತದಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಮೂಲಕ ವಾಹನ ಸವಾರರಿಗೆ ತಿಳುವಳಿಕೆ ನೀಡಿ ವಾಹನ ಸವಾರರು ಈಗ ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿದ್ದೀರಾ ಎಚ್ಚರಿಕೆಯಿಂದ ಹೆಲ್ಮೆಟ್ ಧರಿಸಿ, ಡಿಎಲ್ ಇಟ್ಟುಕೊಂಡು ವಾಹನ ಚಾಲನೆ ಮಾಡಿ. ಜನರ ಸುರಕ್ಷತೆ ದೃಷ್ಟಿಯಿಂದ ಹಾಗೂ ರಸ್ತೆ ನಿಯಮಗಳನ್ನು ಪಾಲಿಸದ ವಾಹನ ಸವಾರರ ವಿರುದ್ಧ ಕ್ರಮ ವಹಿಸಲು ಈ ಕ್ಯಾಮರಾಗಳು ಕೆಲಸ ಮಾಡಲಿದೆ ಎಂದರು.

ಹೆಲ್ಮೆಟ್ ಧರಿಸದೆ ವಾಹನ ಚಾಲನೆ ಮಾಡುವವರು, ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರು, ಕಾರುಗಳಲ್ಲಿ ಸೀಟ್ ಬೆಲ್ಟ್ ಹಾಕದಿರುವುದು ಮತ್ತು ನಿಗದಿತ ಸಾಮರ್ಥ್ಯಕ್ಕಿಂತ ಅಧಿಕ ಪ್ರಯಾಣಿಕರನ್ನು ಹೊತ್ತೊಯ್ಯುವುದು, ಅತೀ ವೇಗದ ಚಾಲನೆ, ಸರಕು ಸಾಗಾಟದ ವಾಹನದಲ್ಲಿ ಜನರ ಸಾಗಾಟ, ವಾಹನ ಚಾಲನೆ ಸಂದರ್ಭ ಮೊಬೈಲ್‌ನಲ್ಲಿ ಮಾತನಾಡುವುದು, ಮೊದಲಾದ ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸುವವರಿಗೆ ದಂಡದ ನೋಟಿಸ್ ವಾಹನ ಮಾಲೀಕರ ಮನೆ ಬಾಗಿಲಿಗೆ ಬರಲಿದೆ ಎಂದರು.

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಅಪ್ರಾಪ್ತರು ಡಿಎಲ್ ಇಲ್ಲದೆ ವಾಹನಗಳನ್ನು ಓಡಿಸುವ ಬಗ್ಗೆ ಪೋಷಕರು ಗಮನ ಹರಿಸಬೇಕು. ಅಪ್ರಾಪ್ತರು ವಾಹನ ಚಲಾಯಿಸುವುದು ಕಂಡು ಬಂದಲ್ಲಿ ಪೊಲೀಸರು ದಂಡ ಹಾಕುವ ಜೊತೆಗೆ ವಾಹನ ವಶಕ್ಕೆ ಪಡೆಯಲಿದ್ದಾರೆ. ಆದ್ದರಿಂದ ವಾಹನ ಸವಾರರು ತಮ್ಮ ಜೀವದ ಉಳಿವಿಗೆ ಹಾಗೂ ಅವರ ಕುಟುಂಬದ ಉಳಿವಿಗೆ ರಸ್ತೆ ಸುರಕ್ಷತೆ ನಿಯಮ ಪಾಲಿಸಬೇಕು ಎಂದರು. ವಿದ್ಯೋದಯ ಕಾಲೇಜು ವೃತ್ತ ನಂಜನಗೂಡು ಮುಖ್ಯ ರಸ್ತೆಯಲ್ಲಿ 2 ಕ್ಯಾಮರಾ ಹಾಗೂ ಹಳೇ ಸಂತೆ ಮಾಳದ ಅಂಬೇಡ್ಕರ್ ವೃತ್ತ, ಮೂಗೂರು ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕ್ಯಾಮರಾ ಅಳವಡಿಸಲಾಗಿದೆ. ಮುಂದಿನ ದಿನಗಳಲ್ಲಿ ಪಟ್ಟಣದ ಇನ್ನೂ ಕೆಲವೆಡೆ ಸಿಸಿ ಕ್ಯಾಮರಾ ಅಳವಡಿಸಲಾಗುವುದು ಎಂದರು.

6 ಕೊಠಡಿಗಳ ನಿರ್ಮಾಣ ಒಪ್ಪಂದಕ್ಕೆ ಸಹಿ



ಹುಣಸೂರು, ಮೇ 26– ಒಸಾಟ್ ಸಂಸ್ಥೆ (ಒನ್ ಸ್ಕೂಲ್ ಅಟ್ ಎ ಟೈಮ್) ಮತ್ತು ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಗರದ 11ನೇ ವಾರ್ಡ್ ಸ್ಟೋರ್ ಬೀದಿ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಗೆ 1 ಕೋಟಿ ವೆಚ್ಚದಲ್ಲಿ ಸುಸಜ್ಜಿತ ನೂತನ 6 ಕೊಠಡಿಗಳ ನಿರ್ಮಾಣ ಸಂಬಂಧ ಒಪ್ಪಂದ ಪತ್ರಕ್ಕೆ ಸಹಿ ಹಾಕುವ ಮೂಲಕ ಪತ್ರವನ್ನು ಶಿಕ್ಷಣಾಧಿಕಾರಿ ಬಿ.ಒ. ರೇವಣ್ಣ ಶಾಲಾ ಸಮಿತಿಗೆ ವಿತರಿಸಿದರು.

ಬಿಇಓ ಎ.ಎಸ್.ರೇವಣ್ಣ ಮಾತನಾಡಿ, ಒಸಾಟ್ ಸಂಸ್ಥೆ ಬಹಳಷ್ಟು ಕಾಳಜಿಯಿಂದ ತಾಲೂಕಿನ ವಿವಿಧ ಸರ್ಕಾರಿ ಶಾಲೆಗಳಿಗೆ ದಾಸೋಹ, ಗ್ರಂಥಾಲಯ, ಕೊಠಡಿಗಳು ಮುಂತಾದ ಸೌಲಭ್ಯ ದೊರಕಿದೆ ಎಂದರು. ನಂತರ ಒಸಾಟ್ ಸಂಸ್ಥೆ ಸಂಸ್ಥಾಪಕ ಸುಬ್ರಹ್ಮಣ್ಯ ಮಾತನಾಡಿ, 2005ರಲ್ಲಿ ಪ್ರಾರಂಭಗೊಂಡ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಹತ್ತು ಹಲವು ಯೋಜನೆಗಳನ್ನು ರೂಪಿಸಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ಪುರುಷೋತ್ತಮ್, ಶಾಲೆಯ ಮುಖ್ಯ ಶಿಕ್ಷಕ ಡಾ, ಸಾಹಿತಿ ಮಾಧುಪ್ರಸಾದ್, ಶಿಕ್ಷಕಿ ಪದ್ಮಾವತಿ, ಎಸ್.ಡಿ.ಎಂ.ಸಿ. ಅಧ್ಯಕ್ಷ ರಮೇಶ್, ಉಪಾಧ್ಯಕ್ಷ ನಂದಿನಿ, ಪೋಷಕರ ಸಮಿತಿ ಅಧ್ಯಕ್ಷ ಮಹಮ್ಮದ್ ರಫೀಕ್, ಉಪಾಧ್ಯಕ್ಷ ಪುಷ್ಪಾಂಜಲಿ, ಹಳೇ ವಿದ್ಯಾರ್ಥಿ ಸಂಘದ ಅಧ್ಯಕ್ಷ ಅಶೋಕ್, ಪೂರ್ಣಿಮಾ, ಶಿವರಾಮ್, ಹರೀಶ್ ಹಾಜರಿದ್ದರು.

ಮೈನವಿರೇಳಿಸಿದ ಎತ್ತಿನಗಾಡಿ ಓಟದ ಸ್ಪರ್ಧೆ



ತಿ.ನರಸೀಪುರ, ಮೇ 26– ಎತ್ತಿನಗಾಡಿ ಓಟದ ಸ್ಪರ್ಧೆ ಗ್ರಾಮೀಣ ಸೊಗಡಿನ ಸಂಸ್ಕೃತಿ ಬಿಂಬಿಸುತ್ತದೆ ಎಂದು ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ತಿಳಿಸಿದರು.

ತಾಲೂಕಿನ ತುರುಗನೂರು ಗ್ರಾಮದಲ್ಲಿ ನಾಡಪ್ರಭು ಕೆಂಪೇಗೌಡ ಗೆಳೆಯರ ಬಳಗ ಆಯೋಜಿಸಿದ್ದ 9ನೇ ವರ್ಷದ ಎತ್ತಿನಗಾಡಿ ಓಟದ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳು ಸೋಲು, ಗೆಲುವನ್ನು ಸಮನಾಗಿ ಸ್ವೀಕರಿಸಬೇಕು ಎಂದು ಸಲಹೆ ನೀಡಿದರು.

ರೈತನ ಜೀವನಾಡಿಗಳಾಗಿರುವ ಹಸು, ಎತ್ತುಗಳಿಲ್ಲದೇ ಆತನ ಜೀವನ ಪರಿಪೂರ್ಣವಾಗುವುದಿಲ್ಲ. ರೈತನ ಬದುಕಿನ ಪ್ರತಿಯೊಂದು ಕ್ಷಣಗಳಲ್ಲೂ ಜಾನುವಾರುಗಳು ಬೆಸೆದುಕೊಂಡಿವೆ. ಯುವಜನತೆ ಎತ್ತಿನಗಾಡಿ ಓಟದ ಮೂಲಕ ಸಾಹಸ ಕ್ರೀಡೆಯಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದರು.

ಮೊದಲೆಲ್ಲಾ ನಾವು ಹಸುಗಳನ್ನು ನಮ್ಮ ಮನೆ ದೇವರೆಂದು ಪೂಜಿಸುತ್ತಿದ್ದೆವು. ಇದೀಗ ಕಾಲಕ್ಕೆ ಅನುಗುಣವಾಗಿ ಅವುಗಳನ್ನು ಸ್ಪರ್ಧೆಗೆ ಬಳಸಿಕೊಳ್ಳಲಾಗುತ್ತಿದೆ. ಯುವಕರು ಪ್ರತಿವರ್ಷ ಎತ್ತಿನಗಾಡಿ ಓಟದ ಸ್ಪರ್ಧೆ ಏರ್ಪಡಿಸುವ ಮೂಲಕ ಗ್ರಾಮೀಣ ಕ್ರೀಡೆ ಜೀವಂತವಾಗಿಸಲು ಮುಂದಾಗಬೇಕು. ಹಾಗೆಯೇ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಕ್ರೀಡಾಸ್ಫೂರ್ತಿ ಮೆರೆಯಬೇಕೆಂದು ತಿಳಿಸಿದರು.

ಪೀಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಮಾತನಾಡಿ, ರಾಸುಗಳು ಮತ್ತು ರೈತರ ನಡುವೆ ಅವಿನಾಭಾವ ಸಂಬಂಧವಿದೆ. ಎತ್ತಿನಗಾಡಿ ಓಟದ ಸ್ಪರ್ಧೆ ರೈತರಿಗೆ ಮನರಂಜನೆ ನೀಡುವ ಜೊತೆಗೆ ಕ್ರೀಡಾಸ್ಫೂರ್ತಿ ನೀಡುತ್ತದೆ. ಹಾಗಾಗಿ ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಗೆಳೆಯರ ಬಳಗ ಕಾರ್ಯ ನಿರತವಾಗಬೇಕಿದೆ ಎಂದರು.

ಇದೇ ವೇಳೆ ಮೈಮುಲ್ ನಿರ್ದೇಶಕ ಆರ್.ಚೆಲುವರಾಜು, ಪೀಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಹಾಗೂ ಕಾಂಗ್ರೆಸ್ ಮುಖಂಡ ಟಿ.ಎಸ್.ಲೋಕೇಶ್ ಅವರನ್ನು ಕೆಂಪೇಗೌಡ ಗೆಳೆಯರ ಬಳಗದಿಂದ ಸನ್ಮಾನಿಸಲಾಯಿತು.

ಮೈ ನವಿರೇಳಿಸಿದ ಸ್ಪರ್ಧೆ: ಪ್ರಸ್ತುತ ಕಾರು, ಬೈಕ್ ರೇಸ್‌ಗಳು ಜನಪ್ರಿಯವಾಗುತ್ತಿರುವ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ನಡೆದ ಜೋಡೆತ್ತಿನ ಸ್ಪರ್ಧೆ ಪ್ರೇಕ್ಷಕರಿಗೆ ಮುದ ನೀಡುವುದರೊಂದಿಗೆ ಮೈನವಿರೇಳಿಸುವಂತೆ ಮಾಡಿತು. ಗ್ರಾಮಗಳಲ್ಲದೆ, ಸುತ್ತಮುತ್ತಲಿನ ಊರುಗಳ ಕ್ರೀಡಾಪ್ರೇಮಿಗಳು ನೆರೆಯುವುದರೊಂದಿಗೆ ಸ್ಪರ್ಧೆಗೆ ಕಳೆಕಟ್ಟಿದರು.

ಸಾಮಾನ್ಯವಾಗಿ ಸದಾ ಜಮೀನಿನ ಕೆಲಸ ಕಾರ್ಯಗಳಲ್ಲಿ ತೊಡಗಿದ್ದ ಮಂದಿ ಈ ಸ್ಪರ್ಧೆ ವೀಕ್ಷಿಸುವ ಸಲುವಾಗಿಯೇ ಬಂದಿದ್ದರು. ಮತ್ತೊಂದೆಡೆ ತಮ್ಮ ಎತ್ತಿನ ಗಾಡಿಯೊಂದಿಗೆ ಬಂದ ಸ್ಪರ್ಧಿಗಳು ತಾವೇ ಗೆಲ್ಲಬೇಕೆಂದು ಪಣತೊಟ್ಟು ನಿಂತು, ಸ್ಪರ್ಧೆ ಆರಂಭವಾಗುತ್ತಿದ್ದಂತೆಯೇ ಅಖಾಡಕ್ಕಿಳಿದು ಎತ್ತಿನಗಾಡಿ ಓಡಿಸಿದರು. ಈ ವೇಳೆ ನೆರೆ ನೆರೆದಿದ್ದವರು ಶಿಳ್ಳೆ, ಚಪ್ಪಾಳೆಯೊಂದಿಗೆ ಕೇಕೆ ಹಾಕುತ್ತಾ ಸ್ಪರ್ಧಿಗಳನ್ನು ಹುರಿದುಂಬಿಸಿದರು. ಕೆಲವು ಜೋಡಿ ಹಸುಗಳು ತಮ್ಮ ಮಾಲೀಕರ ಹಿಡಿತಕ್ಕೂ ಸಿಗದೇ ಹಗ್ಗ ಕಿತ್ತು ಓಡುತ್ತಿದ್ದವು. ಅವುಗಳನ್ನು ಹಿಡಿದು ಮತ್ತೆ ಸ್ಪರ್ಧೆಗೆ ಅಣಿಗೊಳಿಸುವಲ್ಲಿ ಮಾಲೀಕರು ಸಾಕು ಸಾಕಾಗಿದ್ದರು. ಈ ನಡುವೆ ಓಟದಲ್ಲಿ ಭಾಗವಹಿಸಿದ್ದ ರಾಸು ದಿಕ್ಕು ತಪ್ಪಿ ಓಡಿದ ಪರಿಣಾಮ ಸ್ಪರ್ಧೆ ವೀಕ್ಷಿಸಲು ಬರುತ್ತಿದ್ದ ವ್ಯಕ್ತಿಯೊಬ್ಬರು ಗಾಯಗೊಂಡರು.

ಅಪರಿಚಿತ ಕಾರು ಡಿಕ್ಕಿ: ಮಹಿಳೆ ಸಾವು

ಹುಣಸೂರು, ಮೇ 26– ಅಪರಿಚಿತ ಕಾರು ಡಿಕ್ಕಿ ಹೊಡೆದ ಪರಿಣಾಮ ಮಹಿಳೆಯೊಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಮೈಸೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ತಾಲೂಕಿನ ಜಡಗನಕೊಪ್ಪಲು ಬಳಿ ಶುಕ್ರವಾರ ರಾತ್ರಿ ನಡೆದಿದೆ.

ತಾಲೂಕಿನ ಕಟ್ಟೆಮಳಲವಾಡಿ ಗ್ರಾಮದ ನಿವಾಸಿ ರಮೇಶ್ ಅವರ ಪತ್ನಿ ವರಲಕ್ಷ್ಮಿ(27) ಸಾವನ್ನಪ್ಪಿದವರು. ಶುಕ್ರವಾರ ಮಧ್ಯಾಹ್ನ ತನ್ನ ಪತಿಯೊಂದಿಗೆ ಜಗಳ ಮಾಡಿಕೊಂಡು ಮನೆಯಿಂದ ಹೊರ ಬಂದಿದ್ದ ವರಲಕ್ಷ್ಮಿ ಅವರು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಅಪರಿಚಿತ ಕಾರು ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡಿದ್ದ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಬಿಳಿಕೆರೆ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಲೋಲಾಕ್ಷಿ ತಿಳಿಸಿದ್ದಾರೆ. ಈ ಸಂಬಂಧ ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಶವವನ್ನು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

ಭರಣಿ ಆರ್ಟ್ ಗ್ಯಾಲರಿಯಲ್ಲಿ ಹಾ.ಪು.ರಂಗಸ್ವಾಮಿ ಅವರ

ಜಲವರ್ಣ ಕಲಾಕೃತಿಗಳ ಪ್ರದರ್ಶನ



ಮೈಸೂರು, ಮೇ 26(ಆರ್‌ಕೆ)– ಮೈಸೂರಿನ ವಿವೇಕಾನಂದನಗರ 3ನೇ ಮೇನ್, 6ನೇ ಕ್ರಾಸ್ (ವಿವೇಕಾನಂದ ಸರ್ಕಲ್ ಬಳಿ)ನಲ್ಲಿರುವ ಭರಣಿ ಆರ್ಟ್ ಗ್ಯಾಲರಿಯಲ್ಲಿ ಇಂದಿನಿಂದ ಮೇ 28ರವರೆಗೆ ಮೂರು ದಿನಗಳ ಕಾಲ ಖ್ಯಾತ ನಿಸರ್ಗ ಚಿತ್ರಕಲಾವಿದ ಹಾ.ಪು.ರಂಗಸ್ವಾಮಿ ಅವರ ಜಲವರ್ಣ ಕಲಾಕೃತಿಗಳ ಪ್ರದರ್ಶನ ಆರಂಭವಾಯಿತು.

ಭರಣಿ ಆರ್ಟ್ ಗ್ಯಾಲರಿಯ 30ನೇ ವಾರ್ಷಿಕೋತ್ಸವದ ಅಂಗವಾಗಿ ಏರ್ಪಡಿಸಿರುವ 'ನಿಸರ್ಗ ಲಾಲಿತ್ಯ' ದೃಶ್ಯಕಲಾ ಪ್ರದರ್ಶನ ಹಾಗೂ ಜಲವರ್ಣ ಕಲಾಕೃತಿಗಳ ಪ್ರದರ್ಶನವನ್ನು ಮೈಸೂರು ಕೊಡವ ಸಮಾಜದ ಅಧ್ಯಕ್ಷ ಪಿ.ಎ. ಗಣಪತಿ ಅವರು ಉದ್ಘಾಟಿಸಿದರು.

ಈ ಸಂದರ್ಭ ನಿಸರ್ಗ ಕಲಾಸಕ್ತರನ್ನುದ್ದೇಶಿಸಿ ಮಾತನಾಡಿದ ಅವರು, ರಂಗಸ್ವಾಮಿ ಅವರ ಕಲಾಕೃತಿಗಳನ್ನು ನೋಡುತ್ತಿದ್ದರೆ ನನ್ನ ಬಾಲ್ಯದ ದಿನಗಳು ನೆನಪಾಗುತ್ತಿವೆ. ಏಕೆಂದರೆ, ಕೊಡಗಿನಲ್ಲಿ ಹುಟ್ಟಿ–ಬೆಳೆದ ನಾವು, ಅಲ್ಲಿನ ಪ್ರಕೃತಿ ಸೌಂದರ್ಯ, ಅರಣ್ಯ ಪ್ರದೇಶ, ಕಾಡು ಪ್ರಾಣಿಗಳನ್ನು ನೋಡುತ್ತಾ ಜೀವಿಸುತ್ತಿದ್ದೇವೆ. ಹಾಗಾಗಿ ಕಲಾವಿದ ರಂಗಸ್ವಾಮಿ ಅವರ ಈ ನಿಸರ್ಗ ಕಲಾಕೃತಿಗಳು ನನ್ನ ಬಾಲ್ಯವನ್ನು ಕಣ್ಣಿಗೆ ಕಟ್ಟಿಕೊಟ್ಟಿವೆ ಎಂದರು.

ಕಾರ್ಯಕ್ರಮದ ವಿಶೇಷ ಅತಿಥಿಯಾಗಿ ಪಾಲ್ಗೊಂಡಿದ್ದ ಖ್ಯಾತ ಕಲಾವಿದ ಗಂಜೀಫ ರಘುಪತಿ ಭಟ್ ಮಾತನಾಡಿ, ರಂಗಸ್ವಾಮಿ ಅವರು ರಚಿಸಿರುವ ಜಲವರ್ಣ ಚಿತ್ರಗಳು ಸುಂದರವಾಗಿದ್ದು, ಈ ಕಲಾಕೃತಿಗಳು ತಿಪ್ಪೇಸ್ವಾಮಿ ಅವರ ಛಾಪನ್ನು ಮೂಡಿಸುತ್ತಿವೆ. ಕಣ್ಣಿಗೆ ಕಂಡಿದ್ದನ್ನು ಕಲಾವಿದರು ತಮ್ಮ ಜಲವರ್ಣದ ಮೂಲಕ ನಿಸರ್ಗ, ಇತಿಹಾಸ, ಪುರಾತನ ಮಾಹಿತಿಗಳನ್ನು ಕಣ್ಮುಂದೆ ತಂದಿದ್ದಾರೆ ಎಂದರು.

> ಮೈಸೂರು ಅರಸರ ಪ್ರತಿಮೆಗಳು, ನದಿ, ತೊರೆ, ಬೆಟ್ಟ–ಗುಡ್ಡಗಳು ಸೇರಿದಂತೆ ರಂಗಸ್ವಾಮಿ ಅವರ ಕಲಾಕೃತಿಗಳ ಪ್ರದರ್ಶನಕ್ಕೆ ಮೇ 28ರವರೆಗೆ ಪ್ರತೀದಿನ ಬೆಳಗ್ಗೆ 11ರಿಂದ ಸಂಜೆ 7 ಗಂಟೆವರೆಗೆ ಉಚಿತ ಪ್ರವೇಶವಿದೆ.

ಸುಂದರ ನೈಸರ್ಗಿಕ ಚಿತ್ರಗಳು, ರಾಜ ಮಹಾರಾಜರು ಆಳಿದ ಕೋಟೆ–ಕೊತ್ತಲೆಗಳ ಚಿತ್ರಪಟಗಳು, ಗ್ರಾಮೀಣ ಭಾಗದ ಜನ–ಜೀವನ, ರೈತರು ಆಶ್ರಯಕ್ಕಾಗಿ ಸೂರು ಕಟ್ಟಿಕೊಳ್ಳುವ ದೃಶ್ಯಗಳು ಕಲಾಸಕ್ತರನ್ನು ಸೆಳೆಯುತ್ತಿರುವ 50ಕ್ಕೂ ಹೆಚ್ಚು ಕಲಾಕೃತಿಗಳನ್ನು ಪ್ರದರ್ಶಿಸಲಾಗಿದೆ.

ಭರಣಿ ಆರ್ಟ್ ಗ್ಯಾಲರಿಯ ಸಂಸ್ಥಾಪಕ ಎನ್.ಬಿ.ಕಾವೇರಪ್ಪ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಾಹಿತಿ ಡಾ.ಮಜ್ಜಿಗೆಪುರ ಕೆ.ಶಿವರಾಮು, ಇ–ಬಂಯೋಟೋರಿಯಂ ನೆಟ್‌ವರ್ಕ್ ಪ್ರೈವೇಟ್ ಲಿಮಿಟೆಡ್ ಮುಖ್ಯಸ್ಥ ನಂಜುಂಡಸ್ವಾಮಿ, ಕಲಾವಿದ ಹಾ.ಪು. ರಂಗಸ್ವಾಮಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮಾವು ಮೇಳಕ್ಕೆ ತೆರೆ; ಭರ್ಜರಿ ವ್ಯಾಪಾರ





ಇಮಾಮ್ ಪಸಂದ್ ಮಾವಿನೊಂದಿಗೆ ರೈತ ಚಿಕ್ಕಣ್ಣ

ಮೈಸೂರು, ಮೇ 26(ಎಂಕೆ)– ರಸಭರಿತ ಬಗೆ ಬಗೆಯ ಮಾವಿನ ಹಣ್ಣುಗಳ ಭರ್ಜರಿ ವ್ಯಾಪಾರದೊಂದಿಗೆ ಮೂರು ದಿನಗಳ 'ಮಾವು ಮೇಳ' ಭಾನುವಾರ ಯಶಸ್ವಿ ತೆರೆಕಂಡಿತು.

ತೋಟಗಾರಿಕೆ ಇಲಾಖೆ ವತಿಯಿಂದ ನಗರದ ಕುಪ್ಪಣ್ಣ ಪಾರ್ಕ್‌ನಲ್ಲಿ ಮೇ 24ರಿಂದ ಮೈಸೂರಿಗರು ಹಾಗೂ ಪ್ರವಾಸಿಗರ ಗಮನಸೆಳೆದ 'ಮಾವು ಮೇಳ'ಕ್ಕೆ ಈ ವರ್ಷ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಬಿಡುವು ನೀಡಿದ ಮಳೆ, ಹರಿದು ಬಂದ ಪ್ರವಾಸಿಗರ ದಂಡಿನ ನಡುವೆ ಮಾವು ಮೇಳ ಯಶಸ್ವಿಯಾಯಿತು.

ತೋಟಗಾರಿಕೆ ಇಲಾಖೆಯ ಹಾಪ್‌ಕಾಮ್ಸ್ ಮಳಿಗೆಯೊಂದು ಸೇರಿ 39 ಮಳಿಗೆಗಳಿದ್ದ ಮಾವು ಮೇಳದಲ್ಲಿ ಆಲ್ಫೋನ್ಸೋ ಮಾವಿನ ಹಣ್ಣು ಕೆಜಿಗೆ 150–200 ರೂ., ಮಲ್ಲಿಕಾ 100 ರೂ., ರಸಪುರಿ 120 ರೂ., ಸಿಂಧೂರ 70 ರೂ., ಸಿರಿ 70 ರೂ., ತೋತಾಪುರಿ 40 ರೂ.ಗೆ ಮಾರಾಟವಾದರೆ, ಇನ್ನಿತರೆ ಬಗೆ ಬಗೆಯ ಮಾವಿನ ಹಣ್ಣುಗಳ ಜೊತೆಗೆ ಹಲಸಿನ ಹಣ್ಣಿಗೂ ಡಿಮ್ಯಾಂಡ್ ಜಾಸ್ತಿ ಇತ್ತು.

ಈ ವರ್ಷದ ಮಾವು ಮೇಳ ತುಂಬಾ ಅಚ್ಚುಕಟ್ಟಾಗಿ ನಡೆದಿದೆ. ಒಳ್ಳೆಯ ವ್ಯಾಪಾರವಾಗಿದೆ ಎಂದು ಮಂಡ್ಯದ ರಕ್ಷಿತ್, ತಿಳಿಸಿದರೆ, ಈ ವರ್ಷ ಬಾರೀ ಜನ. ನಿನ್ನೆಯಂತೂ(ಶನಿವಾರ) ಕಾಲಿಡಲೂ ಸಹ ಜಾಗವಿರಲಿಲ್ಲ ಎಂದು ರಾಮನಗರದ ಸಿದ್ದರಾಜು ಬಸವಪಾಳ್ಯ ಸಂತಸ ವ್ಯಕ್ತಪಡಿಸಿದರು. ಹಾಗೆಯೇ ನಮ್ಮದೇ ತೋಟದಲ್ಲಿ ಬೆಳೆದು, ನೈಸರ್ಗಿಕವಾಗಿ ಮಾಗಿಸಿದ ಹಣ್ಣುಗಳನ್ನು ತಂದು ಮಾರಾಟ ಮಾಡಿದ್ದೇವೆ. ಒಂದು ವಾರ ಮನೆಲ್ಲಿಟ್ಟುಕೊಂಡರೂ ಹಣ್ಣಿಗಳು ಹಾಳಾಗುವುದಿಲ್ಲ. ಸಾವಯವ ಗೊಬ್ಬರ ಬಳಕೆ ಮಾಡಿ ಮಾವು ಬೆಳೆದಿದ್ದೇವೆ ಎಂದು ಶ್ರೀರಂಗಪಟ್ಟಣದ ರೈತರಾದ ವಿವೇಕ್ ಸೋಮಶೇಖರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

> **ಉತ್ತಮ ಪ್ರತಿಕ್ರಿಯೆ...**
> ನೈಸರ್ಗಿಕವಾಗಿ ಮಾಗಿಸಿದ ಮಾವಿನ ಹಣ್ಣುಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಿಸಿಲಿನ ತಾಪಕ್ಕೆ ಇಳುವರಿ ಕಡಿಮೆಯಾದರೂ ಬೇಡಿಕೆ ಮಾತ್ರ ಕಡಿಮೆಯಾಗಿಲ್ಲ. ಮಾವು ಪ್ರಿಯರು ಈ ವರ್ಷ ಹೆಚ್ಚಿನ ಸಂಖ್ಯೆಯಲ್ಲಿ ಮೇಳಕ್ಕೆ ಭೇಟಿ ನೀಡಿ ಇಷ್ಟ ತಳಿಯ ಮಾವಿನ ಹಣ್ಣುಗಳನ್ನು ಕೊಂಡ್ಯೊಯ್ದಿದ್ದಾರೆ.
> – ಎಸ್.ಮಂಜುನಾಥ್ ಅಂಗಡಿ, ಉಪ ನಿರ್ದೇಶಕ, ತೋಟಗಾರಿಕೆ ಇಲಾಖೆ

ಇಮಾಮ್ ಪಸಂದ್ ಆಕರ್ಷಣೆ: ಮಾವು ಮೇಳಕ್ಕೆ ಮೊದಲ ಬಾರಿ ಎಂಟ್ರಿ ಕೊಟ್ಟಿದ್ದ ಇಮಾಮ್ ಪಂಸದ್ ಮಾವಿನ ಹಣ್ಣು ಆಕರ್ಷಣೆಯಾಗಿತ್ತು. ಅಷ್ಟಾಗಿ ಬಣ್ಣ ಕಾಣದ ಗಾತ್ರದಲ್ಲಿ ದಪ್ಪಗಿರುವ ಇಮಾಮ್ ಪಂಸದ್ ತಳಿ ಬಗ್ಗೆ ಮಾಹಿತಿ ಪಡೆಯುವವರ ಸಂಖ್ಯೆಯೂ ಹೆಚ್ಚಾಗಿತ್ತು. ವರಕೋಡುನಿಂದ ಗಿಡ ತಂದು ಬೆಳೆದಿದ್ದೇವೆ ಎಂದು ಇಮಾಮ್ ಪಸಂದ್ ಮಾವಿನ ಹಣ್ಣುಗಳನ್ನು ತೋರಿಸುವ ಮೂಲಕ ರೈತರಾದ ಚಿಕ್ಕಣ್ಣ ಹರ್ಷವ್ಯಕ್ತಪಡಿಸಿದರು.

ಮಾವು ಎಲ್ಲರಿಗೂ ಇಷ್ಟ: ಮಾವಿನ ಹಣ್ಣು ಎಲ್ಲರಿಗೂ ಇಷ್ಟ. ಈ ಹಣ್ಣು ವರ್ಷಕ್ಕೊಮ್ಮೆ ಬರುವ ಸಿಸನ್ ಹಣ್ಣಾಗಿರುವುದರಿಂದ ಬೇಡಿಕೆ ಜಾಸ್ತಿ. ಹಾಗೆಯೇ ಹಲಸಿನ ಹಣ್ಣೆಂದರೂ ಇಷ್ಟವೇ ಎಂದು ನೋಡ ನೋಡುತ್ತಲೇ ಮೂರ್‍ನಾಲ್ಕು ಕೆಜಿ ಮಾವಿನ ಹಣ್ಣು ಖರೀದಿಸಿದ ಮೈಸೂರಿನ ದಟ್ಟಗಳ್ಳಿಯ ನಾಗೇಶ್‌ರಾವ್ ಮತ್ತು ಅನಿತಾ ಮಾವಿನ ಹಣ್ಣಿನ ಮೇಲಿರುವ ಇಷ್ಟವನ್ನು ತಿಳಿಸಿದರು.



ಅರ್ಜಿ ಆಹ್ವಾನ

ಮೈಸೂರು, ಮೇ 26–ರಂಗಸಮುದ್ರ ತೋಟಗಾರಿಕೆ ತರಬೇತಿ ಕೇಂದ್ರಕ್ಕೆ ಮೇ 2ರಿಂದ 28ರವರೆಗೆ ಆಯೋಜಿಸುವ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ವೇಳಾಪಟ್ಟಿ ನೀಡಲಾಗಿದ್ದು, 2024ರ ಲೋಕಸಭಾ ಚುನಾವಣೆ ಹಿನ್ನೆಲೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಸದರಿ 10 ತಿಂಗಳ ತರಬೇತಿ ಕಾರ್ಯಕ್ರಮದ ಅವಧಿಯನ್ನು ಜೂ.15ರಿಂದ 31ರಂತೆ (ಒಟ್ಟು 9.5 ತಿಂಗಳು) ಪರಿಷ್ಕರಿಸಲಾಗಿದೆ.

ಹಾಗಾಗಿ ರೈತರ ಮಕ್ಕಳ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತೀರ್ಣರಾದ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 18ರಿಂದ 30 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 18ರಿಂದ 33 ವರ್ಷ ಹಾಗೂ ಮಾಜಿ ಸೈನಿಕರಿಗೆ 33ರಿಂದ 65 ವಯಸ್ಸಿನ ಒಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಜಿಲ್ಲಾ ಪಂಚಾಯತ್‌ನಲ್ಲಿರುವ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ಪಡೆದು ಅಥವಾ https://horticulturedir.karna taka.gov.in ಮೂಲಕ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಜೂ.3ರೊಳಗಾಗಿ ಸಲ್ಲಿಸಬೇಕು. ವಿವರಗಳಿಗೆ ಜಿಪಂನಲ್ಲಿರುವ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗಳನ್ನು ಭೇಟಿ ಮಾಡಬಹುದು. ಅಥವಾ ದೂ.ಸಂ: 0821–2977572 ಸಂಪರ್ಕಿಸಬಹುದು.

ಗೋಕುಲಂ ಪಾರ್ಕ್‌ನಲ್ಲಿ ಶ್ರೀಗಂಧದ ಮರ ಕಳವು



ಮೈಸೂರು, ಮೇ 26 (ಆರ್‌ಕೆ)– ಮೈಸೂರಿನ ಗೋಕುಲಂ ಬಡಾವಣೆಯ ಪಾರ್ಕ್‌ನಲ್ಲಿ ಬೆಳೆದಿದ್ದ ಶ್ರೀಗಂಧದ ಮರವನ್ನು ಕಳ್ಳರು ಕತ್ತರಿಸಿ ಹೊತ್ತೊಯ್ದಿರುವ ಘಟನೆ ಶನಿವಾರ ರಾತ್ರಿ ನಡೆದಿದೆ.


ಇಂದು ಬೆಳಗ್ಗೆ ವಾಯುವಿಹಾರ ಮಾಡುತ್ತಿದ್ದವರಿಗೆ ಶ್ರೀಗಂಧದ ಮರ ಕಳವು ಮಾಡಿರುವುದು ಕಂಡು ಬಂದಿತು. ವಿಷಯ ತಿಳಿಯುತ್ತಿದ್ದಂತೆಯೇ ಅಲ್ಲಿನ ಬಿಸಿ. ಲಿಂಗಯ್ಯ ಉದ್ಯಾನವನಕ್ಕೆ ಭೇಟಿ ನೀಡಿದ ವಿವಿಪುರಂ ಠಾಣೆ ಇನ್ಸ್‌ಪೆಕ್ಟರ್ ವಿವೇಕಾನಂದ ಡೆಪ್ಯೂಟಿ ರೇಂಜ್ ಆಫೀಸರ್ ಚಂದ್ರಶೇಖರ್ ಮಹಜರು ನಡೆಸಿದರು. ಬುಡಮಟ್ಟಕ್ಕೆ ಮರ ಕಡಿದು ರೆಂಬೆಯನ್ನು ಅಲ್ಲಿಯೇ ಬಿಟ್ಟು ಕಾಂಡವನ್ನು ಮಾತ್ರ ಖದೀಮರು ಹೊತ್ತೊಯ್ದಿದ್ದಾರೆ. ಪಾರ್ಕ್ ಸುತ್ತ ವಸತಿ ಗೃಹಗಳಿವೆ ಯಾದರೂ ಎಲ್ಲಿಯೂ ಸಿಸಿ ಕ್ಯಾಮೆರಾಗಳನ್ನು ಹಾಕಿಲ್ಲದಿರುವುದನ್ನು ಖಾತರಿಪಡಿಸಿಕೊಂಡು ಕಳೆದ ಮಧ್ಯರಾತ್ರಿ ಮರ ಕಳವು ಮಾಡಿದ್ದಾರೆ ಎಂಬುದು ತಿಳಿದು ಬಂದಿದೆ. ಪ್ರಕರಣ ದಾಖಲಿಸಿಕೊಂಡಿರುವ ಅರಣ್ಯ ಇಲಾಖೆ ಅಧಿಕಾರಿಗಳು, ತನಿಖೆ ಕೈಗೊಂಡಿದ್ದಾರೆ. ಪಾರ್ಕ್ ಸುತ್ತಲಿನ ನಿವಾಸಿಗಳಿಗೆ ರಾತ್ರಿ ನಡೆದ ಕಳವು ಪ್ರಕರಣ ತಿಳಿದೇ ಇರಲಿಲ್ಲ

ಮೈಸೂರಿನ ಇಎಸ್‌ಐ ಆಸ್ಪತ್ರೆಯಲ್ಲಿ ಅಂತರರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ



ಮೈಸೂರಿನ ಇಎಸ್‌ಐ ಆಸ್ಪತ್ರೆಯಲ್ಲಿ ಅಂತರರಾಷ್ಟ್ರೀಯ ಶುಶ್ರೂಷಕರ ದಿನ ಆಚರಿಸಲಾಯಿತು. ಈ ವೇಳೆ ಡಾ.ವಿ.ವರದರಾಜು, ಡಾ.ಡಿ.ಇ.ನಾರಾಯಣಸ್ವಾಮಿ, ಡಾ.ಸುನಿತಾ, ಡಾ.ಮಂಜುಳಾದೇವಿ, ಡಾ.ಮಾಲೇಗೌಡ ಹಾಗೂ ಆಸ್ಪತ್ರೆ ಸಿಬ್ಬಂದಿ ಉಪಸ್ಥಿತರಿದ್ದರು.

ನಾಳೆ ವೀರ ಸಾವರ್ಕರ್ ಸಮ್ಮಾನ್ ಪ್ರಶಸ್ತಿ ಪ್ರದಾನ



ಮೈಸೂರು, ಮೇ 26(ಎಂಟಿವೈ)– ಮೈಸೂರಿನ ಕಲಾಮಂದಿರದಲ್ಲಿ ಮೇ 28ರಂದು ಸಂಜೆ 5.30ಕ್ಕೆ ಸಾವರ್ಕರ್ ಪ್ರತಿಷ್ಠಾನದ ವತಿಯಿಂದ ವೀರ ಸಾವರ್ಕರ್ ಸಮ್ಮಾನ್–2024 ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಸದಸ್ಯ ರಾಕೇಶ್ ಭಟ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿನಾಯಕ ದಾಮೋದರ ಸಾವರ್ಕರ್ ಅವರ 141ನೇ ಜಯಂತಿ ಪ್ರಯುಕ್ತ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಯುವ ಬ್ರಿಗೇಡ್ ಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಅವರಿಗೆ ಈ ಬಾರಿ ವೀರ ಸಾವರ್ಕರ್ ಸಮ್ಮಾನ್ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಪ್ರಶಸ್ತಿಯು 1 ಲಕ್ಷ ರೂ. ನಗದು, ಸಾವರ್ಕರ್ ಪುತ್ಥಳಿ, ಫಲಕ ಹೊಂದಿದೆ ಎಂದರು.

ಕಾದಂಬರಿಕಾರ ಡಾ.ಎಸ್.ಎಲ್. ಭೈರಪ್ಪ ಅವರ ಉಪಸ್ಥಿತಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪತ್ರಕರ್ತ ಅಜಿತ್ ಹನುಮಕ್ಕನವರ್ ಮುಖ್ಯ ಭಾಷಣಕಾರರಾಗಿ ಮಾತನಾಡಲಿದ್ದಾರೆ. ಕಾರ್ಯಕ್ರಮದ ಅಂಗವಾಗಿ ಅಂದು ಮಧ್ಯಾಹ್ನ 2ರಿಂದ ಸಂಜೆ 5ರವರೆಗೆ ಸಾರ್ವಜನಿಕರಿಗೆ ಸಾವರ್ಕರ್ ವೇಷಭೂಷಣ, ಚಿತ್ರಕಲೆ, ರಂಗೋಲಿ, ರೀಲ್ಸ್ ಸ್ಪರ್ಧೆ ಆಯೋಜಿಸಿದ್ದು, ವಿಜೇತರಿಗೆ ನಗದು ಬಹುಮಾನ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ.99162–21184 ಸಂಪರ್ಕಿಸುವಂತೆ ಕೋರಿದರು. ಸುದ್ದಿಗೋಷ್ಠಿಯಲ್ಲಿ ಪ್ರತಿಷ್ಠಾನದ ಸದಸ್ಯರಾದ ಶಿವಕುಮಾರ್ ಚಿಕ್ಕಕಾನ್ಯ, ಕೆ.ಎಂ.ನಿಶಾಂತ್, ಬಿಜೆಪಿ ಮುಖಂಡರಾದ ಟಿ.ಪಿ.ಮಧುಸೂದನ್, ಟಿ.ಎಸ್.ಅರುಣ್ ಇದ್ದರು.

ಡೆಂಗ್ಯೂ, ಕೀಟವಾಹಕ ರೋಗ ನಿಯಂತ್ರಣಕ್ಕೆ ಮಾರ್ಗಸೂಚಿ

ಮೈಸೂರು, ಮೇ 26(ಎಂಕೆ)–ಸೊಳ್ಳೆ ಉತ್ಪತ್ತಿ ನಿಯಂತ್ರಣ ಕ್ರಮಗಳು, ಡೆಂಗ್ಯೂ, ಕೀಟವಾಹಕ ರೋಗ ನಿಯಂತ್ರಣ ಹಾಗೂ ವೈಯಕ್ತಿಕ ರಕ್ಷಣಾ ಮುಂಜಾಗ್ರತಾ ಕ್ರಮಗಳ ಮಾರ್ಗಸೂಚಿಯನ್ನು ಆರೋಗ್ಯ–ಕುಟುಂಬ ಕಲ್ಯಾಣ ಇಲಾಖೆ ಬಿಡುಗಡೆ ಮಾಡಿದೆ.

ಮುಂಜಾಗ್ರತಾ ಕ್ರಮಗಳು: ಎಲ್ಲಾ ನೀರಿನ ತೊಟ್ಟಿಗಳು, ಡ್ರಮ್‌ಗಳು, ಬ್ಯಾರೆಲ್‌ಗಳು, ಏರ್‌ಕೂಲರ್, ತೊಟ್ಟಿ ಇತ್ಯಾದಿಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಉಜ್ಜಿ ತೊಳೆದು, ಒಣಗಿಸಿ ಮತ್ತೆ ಭರ್ತಿ ಮಾಡಿ ಕೊಳ್ಳುವುದು. ನೀರನ್ನು ಖಾಲಿ ಮಾಡಲು ಸಾಧ್ಯವಿಲ್ಲದ ತೊಟ್ಟಿ ಡ್ರಮ್ ಮುಂತಾದವುಗಳಲ್ಲಿ ಸೊಳ್ಳೆಗಳು ಒಳಗೆ ನುಸುಳದಂತೆ ಮುಚ್ಚಳದಿಂದ ಮುಚ್ಚುವುದು. ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಟೈರ್, ಎಳನೀರು ಚಿಪ್ಪು, ಮರದ ಪೊಟರೆಗಳಲ್ಲಿ, ಹೂವಿನ ಕುಂಡಗಳಲ್ಲಿ, ಒಡೆದ ಬಾಟಲಿ, ಕುಡಿದು ಬಿಸಾಡಿದ ಪ್ಲಾಸ್ಟಿಕ್ ಲೋಟ, ಬಾಟಲ್ ಮುಂತಾದವುಗಳಲ್ಲಿ ಮಳೆ ನೀರು ಸಂಗ್ರಹವಾಗದಂತೆ ಎಚ್ಚರ ವಹಿಸುವುದು ಮತ್ತು ಸೂಕ್ತ ವಿಲೇವಾರಿ ಮಾಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಔಷಧ ಲೇಪಿತ ಸೊಳ್ಳೆ ಪರದೆಗಳನ್ನು ಬಳಸುವುದು. ಮೈ ತುಂಬಾ ಬಟ್ಟೆ ಧರಿಸುವುದು, ಸೊಳ್ಳೆಗಳ ಕಚ್ಚುವಿಕೆಯಿಂದ ರಕ್ಷಣೆ ಪಡೆಯುವಂತೆ ತಿಳಿಸಲಾಗಿದೆ. ಹಾಗೆಯೇ ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವಂತೆ ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಪಂಚದ ಎಲ್ಲಾ ಮೌಲ್ಯ ಸಾಹಿತ್ಯಗಳ ಮೂಲ ಬೇರು ಸಂಸ್ಕೃತದ ಸುಭಾಷಿತಗಳು

ತಿಂಗಳ ತಿಳಿವು ಕಾರ್ಯಕ್ರಮದಲ್ಲಿ ಇತಿಹಾಸ ತಜ್ಞ ಶೆಲ್ವ ಪಿಳ್ಳಯ್ ಅಯ್ಯಂಗಾರ್ ಅಭಿಮತ



ಮೈಸೂರು, ಮೇ 26– ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನದ ವತಿಯಿಂದ ಮೂರನೆಯ ತಿಂಗಳ ತಿಳಿವು ಕಾರ್ಯಕ್ರಮವನ್ನು ಮೇ 23ರ ಸಂಜೆ ಶ್ರೀ ರಾಮಕೃಷ್ಣ ಪರಮಹಂಸರ ವೃತ್ತದ ಶ್ರೀ ರಾಮಕೃಷ್ಣರ ಪುತ್ಥಳಿ ಬಳಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಇತಿಹಾಸ ತಜ್ಞ ಶೆಲ್ವ ಪಿಳ್ಳೆ ಅಯ್ಯಂಗಾರ್ ಸಂಸ್ಕೃತ ಭಾಷೆಯ ಇತಿಹಾಸ ಹಾಗೂ ಸುಭಾಷಿತಗಳಲ್ಲಿ ಜೀವನ ಮೌಲ್ಯಗಳು ಮತ್ತು ಅಧ್ಯಾತ್ಮ ವಿಚಾರವಾಗಿ ಮಾತನಾಡಿ, ಇಡೀ ಪ್ರಪಂಚದಲ್ಲಿಯೇ ಅತ್ಯಂತ ಪ್ರಾಚೀನವಾದ ಭಾಷೆ ಸಂಸ್ಕೃತ ಎಂಬುದನ್ನು ಉದಾಹರಣೆಗಳ ಸಹಿತ ವಿವರಿಸಿದರು. ಲ್ಯಾಟಿನ್ ಇಂಗ್ಲಿಷ್ ಸೇರಿದಂತೆ ನಮ್ಮ ಭಾರತೀಯ ಭಾಷೆಗಳನ್ನು ಒಳಗೊಂಡಂತೆ ಎಲ್ಲಾ ಭಾಷೆಗಳು ಶೇ.50ರಷ್ಟು ಸಂಸ್ಕೃತ ಮೂಲದವು ಎಂಬುದನ್ನು ಉದಾಹರಣೆ ಸಹಿತ ವಿವರಿಸಿ ಸಂಸ್ಕೃತ ಭಾಷೆಯನ್ನು ಉಳಿಸಿ ಬೆಳೆಸಬೇಕೆಂದು ಕರೆಯಿತ್ತರು.

ಸಂಸ್ಕೃತದಲ್ಲಿನ ಸುಭಾಷಿತಗಳ ಬಗ್ಗೆ ಹಲವಾರು ಉಲ್ಲೇಖಗಳ ಮೂಲಕ ಸುಭಾಷಿತಗಳಲ್ಲಿರುವ ಆಧ್ಯಾತ್ಮ ಮತ್ತು ಜೀವನ ಮೌಲ್ಯಗಳನ್ನು ವಿವರಿಸಿದ ಅವರು ಸುಭಾಷಿತವೆಂದರೆ ಒಳ್ಳೆಯ ವಿಚಾರಗಳನ್ನು ಒಳಗೊಂಡ ಸಂಸ್ಕೃತ ಕಾವ್ಯಗಳೆಂದರು. ರಾಮಾಯಣ, ಮಹಾಭಾರತ, ವೇದ, ಉಪನಿಷತ್ತುಗಳಲ್ಲಿ ವ್ಯಕ್ತಿತ್ವವನ್ನು ರೂಪಿಸುವ ಸುಭಾಷಿತಗಳಿವೆ ಎಂಬುದನ್ನು ನಿದರ್ಶನ ಸಹಿತ ವಿವರಿಸಿ ಮನುಷ್ಯನಿಗೆ ಅವಶ್ಯಕತೆ ಇರುವ ಆಹಾರ, ನೀರು ಮತ್ತು ಒಳ್ಳೆಯ ಮಾತುಗಳು ಇವುಗಳ ಬಗೆಗಿನ ಜ್ಞಾನ ಕೋಶ ಸುಭಾಷಿತಗಳಲ್ಲಿ ಅಡಗಿವೆ ಎಂದರು.

ಪ್ರತಿಷ್ಠಾನದ ಕಾರ್ಯಾಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ಮಾತನಾಡಿ, ಸುಭಾಷಿತಗಳಲ್ಲಿರುವ ಆಧ್ಯಾತ್ಮ ಮತ್ತು ಜೀವನ ಮೌಲ್ಯಗಳು ಇಡೀ ಪ್ರಪಂಚದ ಸಾಹಿತ್ಯದಲ್ಲೇ ಪ್ರಪ್ರಥಮವಾಗಿದ್ದು ಇವು ಅಂತಾರಾಷ್ಟ್ರೀಯ ಮಟ್ಟದಲ್ಲಿ ವರ್ಡ್ಸ್‌ವರ್ತ್, ಶೇಕ್ಸ್‌ಪಿಯರ್, ಬಸವಣ್ಣ ದಾಸರು ಮತ್ತು ಆಧುನಿಕ ಕವಿಗಳ ಮೇಲು ಪ್ರಭಾವ ಬೀರುವುದನ್ನು ಗುರುತಿಸಬಹುದೆಂದು ತಿಳಿಸಿ ಸುಭಾಷಿತಗಳು ಪ್ರಪಂಚದಲ್ಲಿಯೇ ಜೀವನ ಮೌಲ್ಯಗಳ ಪ್ರಥಮ ಜೀವ ಕೋಶಗಳೆಂದರು. ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಮಾದೇಗೌಡರು, ಕಾರ್ಯದರ್ಶಿ ಕೆಂಪ ಲಿಂಗರಾಜು, ಅರವಿಂದ ಶರ್ಮ ಉಪಸ್ಥಿತರಿದ್ದರು. ಪುರುಷೋತ್ತಮ್ ಸ್ವಾಗತಿಸಿದರೆ, ಗೋಪಿನಾಥ್ ನಿರೂಪಿಸಿದರು. ಪ್ರೊ.ಚಂದ್ರಶೇಖರ್ ವಂದಿಸಿದರು.